ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 30 ಗುರುವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 282 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಹರಿಹಾಯ್ದ ಸಂಸದ ಡಾ. ಸುಧಾಕರ್

- ಸರ್ವಾಧಿಕಾರಿ ಧೋರಣೆ ಮುಂದುವರೆದರೆ ನಮ್ಮ ದಾರಿ ನಮಗೆ!
- ಚಿಕ್ಕಬಳ್ಳಾಪುರ ಬಿಜೆಪಿ ಜಿಲ್ಲಾಧ್ಯಕ್ಷರ ನೇಮಕಾತಿ ಸಂಬಂಧ ಆಕ್ರೋಶ


ಡಾ. ಸುಧಾಕರ್


ವಿಜಯೇಂದ್ರ

ಬೆಂಗಳೂರು, ಜ.29(ಕೆಎಂಶಿ)– ಸಂಸದ ಡಾ. ಕೆ.ಸುಧಾಕರ್ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಬಹಿರಂಗವಾಗಿಯೇ ಟೀಕಾ ಪ್ರಹಾರ ಮಾಡಿರುವುದಲ್ಲದೆ, ಅವರು ಇದೇ ಧೋರಣೆ ಮುಂದುವರೆಸಿದರೆ ನನ್ನ ರಾಜಕೀಯ ದಾರಿ ನೋಡಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಆಡಳಿತ ಪಕ್ಷದ ಪ್ರಭಾವೀ ರಾಜಕಾರಣಿ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿ ಸಲಹೆಯಂತೆ ನಡೆದುಕೊಂಡರೆ ಕರ್ನಾಟಕದಲ್ಲಿ ಪಕ್ಷ ನುಚ್ಚು ನೂರಾಗುತ್ತದೆ ಎಂದಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷರ ನೇಮಕಾತಿಗೆ ಸಂಬಂಧಿಸಿದಂತೆ ತುರ್ತು ಸುದ್ದಿಗೋಷ್ಠಿ ನಡೆಸಿದ ಡಾ. ಸುಧಾಕರ್ ಅವರು, ವಿಜಯೇಂದ್ರ ವಿರುದ್ಧ ಹರಿಹಾಯ್ದರು.

ಬಿ.ಎಸ್.ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಮಾಡುವ ಉದ್ದೇಶದಿಂದ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ರಮೇಶ್ ಜಾರಕಿಹೊಳಿ, ನಾನೂ ಸೇರಿದಂತೆ ಹಲವರನ್ನು ತುಳಿಯುವ ಪ್ರಯತ್ನ ನಡೆದಿದೆ.

ಕೋಲಾರ, ಚಿಕ್ಕಬಳ್ಳಾಪುರದಲ್ಲಿ ಪಕ್ಷಕ್ಕೆ ನೆಲೆ ಇಲ್ಲದ ಸನ್ನಿವೇಶದಲ್ಲಿ ಸಂಘಟನೆ ಮಾಡಿ, ಬರಡು ಭೂಮಿಯಲ್ಲಿ ಗಿಡ–ಮರ ಬೆಳೆಸಿದ್ದೇನೆ. ಅಲ್ಲಿ ನಿಮ್ಮ ವರ್ಚಸ್ಸಿನಿಂದ ಒಂದು ಸ್ಥಳೀಯ ಸಂಸ್ಥೆಯಲ್ಲಿ ಗೆದ್ದು ತೋರಿಸಿ ಎಂದು ಸವಾಲು ಹಾಕಿದ್ದಾರೆ.

ಪಕ್ಷದ ಕಾರ್ಯಕರ್ತರು, ಮುಖಂಡರಿಗೆ ಬೆಲೆ ಕೊಡದೆ, ನಿಮ್ಮ ಮೂಗಿನ ನೇರಕ್ಕೆ ಜಿಲ್ಲಾಧ್ಯಕ್ಷರು, ರಾಜ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ, ಉಪಾಧ್ಯಕ್ಷ ಸ್ಥಾನಗಳಿಗೆ ನೇಮಕ ಮಾಡಿಕೊಳ್ಳುತ್ತಿದ್ದೀರಿ, ನಿಮ್ಮ ಧೋರಣೆ, ನಾನೂ ಸೇರಿದಂತೆ ಹಲವು ಮುಖಂಡರಿಗೆ ಬೇಸರ ತಂದಿದೆ.

ಬಿಜೆಪಿಯಲ್ಲಿ ಆಂತರಿಕ ಪ್ರಜಾಪ್ರಭುತ್ವ, ಆರ್‌ಎಸ್‌ಎಸ್ ಆದರ್ಶ ಇದೆ ಎಂಬುದಾಗಿ ನಂಬಿಕೊಂಡು, ಕಾಂಗ್ರೆಸ್ ತ್ಯಜಿಸಿ ಪಕ್ಷಕ್ಕೆ ಸೇರ್ಪಡೆಗೊಂಡವರನ್ನು ನೋಡಿಕೊಳ್ಳುವ ರೀತಿಯೇ ಇದು ಎಂದು ಪ್ರಶ್ನಿಸಿದ್ದಾರೆ. ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಸರ್ಕಾರದಲ್ಲಿ ಒಳ್ಳೆ ಬಾಂಧವ್ಯ ಇಟ್ಟುಕೊಂಡು ಸಚಿವನಾಗಿ ಕೆಲಸ ಮಾಡಿದ್ದೇನೆ ಅವರೂ ಕೂಡ ನನ್ನನ್ನು ಅಷ್ಟೇ ಪ್ರೀತಿ ಆದರದಿಂದ ನೋಡಿಕೊಂಡಿದ್ದಾರೆ.

ಆದರೆ, ನೀವು ರಾಜ್ಯಾಧ್ಯಕ್ಷರಾದ ನಂತರ ಎಲ್ಲಾ ಮುಖಂಡರನ್ನು ಕಡೆಗಣಿಸಿ, ಸರ್ವಾಧಿಕಾರಿಯಂತೆ ಮೆರೆಯುತ್ತಿದ್ದೀರಿ. ವಿಜಯೇಂದ್ರ ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವ ಜಾಯಮಾನ ಹೊಂದಿಲ್ಲ. ದರ್ಪ, ಅಹಂಕಾರ ಮತ್ತು ಸಾವಿರಾರು ಕೋಟಿ ರೂ. ಇರಬಹುದು. ಇದರಿಂದ ಸಂಘಟನೆ ಮಾಡಲು ಆಗುವುದಿಲ್ಲ.

ಲೋಕಸಭಾ ಚುನಾವಣೆಯಲ್ಲಿ ನಿಮ್ಮ ಹಿಂಬಾಲಕರ ಮೂಲಕ ನನ್ನನ್ನು ಸೋಲಿಸುವ ಪ್ರಯತ್ನ ಮಾಡಿದ್ದೀರಿ. ಇದೀಗ ಸೌಜನ್ಯಕ್ಕೂ ನನ್ನ ಜೊತೆ ಚರ್ಚಿಸದೆ ಜಿಲ್ಲಾಧ್ಯಕ್ಷರ ನೇಮಕ ಮಾಡಿದ್ದೀರಿ ಎಂದು ಖಾರವಾಗಿ ಪ್ರಶ್ನಿಸಿದರು.

ಇನ್ನು ನಿಮ್ಮ ಬಳಿ ಸೌಜನ್ಯದ ಮಾತೇ ಇಲ್ಲ, ಇನ್ನೇನಿದ್ದರೂ ಯುದ್ಧ. ಪ್ರಧಾನಿ, ಕೇಂದ್ರ ಗೃಹ ಸಚಿವರು ಮತ್ತು ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿ ಮಾಡಿ ನಿಮ್ಮ ನೀತಿ, ನಿಲುವುಗಳನ್ನು ಬಹಿರಂಗಪಡಿಸುವುದಾಗಿ ಎಚ್ಚರಿಸಿದ್ದಾರೆ. ದ್ವೇಷದ ರಾಜಕಾರಣ ಹೀಗೇ ಮುಂದುವರೆಸಿದರೆ, ನಮ್ಮ ರಾಜಕೀಯ ಅಳಿವು–ಉಳಿವಿನ ದೃಷ್ಟಿಯಿಂದ ನಾವೂ ತೀರ್ಮಾನ ಕೈಗೊಳ್ಳುತ್ತೇವೆ ಎಂದು ಹೇಳಿದ್ದಾರೆ.

23 ಜಿಲ್ಲೆಗಳಿಗೆ ಬಿಜೆಪಿ ನೂತನ ಅಧ್ಯಕ್ಷರ ಘೋಷಣೆ

ಮೈಸೂರು ನಗರಕ್ಕೆ ಎಲ್.ನಾಗೇಂದ್ರ, ಚಾ.ನಗರಕ್ಕೆ ಸಿ.ಎಸ್.ನಿರಂಜನ ಕುಮಾರ್ ಮರು ನೇಮಕ


ಎಲ್.ನಾಗೇಂದ್ರ


ನಿರಂಜನ್‌ಕುಮಾರ್

ಬೆಂಗಳೂರು, ಜ.29– ಬಿಜೆಪಿಯು ದೇಶಾದ್ಯಂತ ಪಕ್ಷದ ಸಂಘಟನಾ ಪರ್ವ ಹೆಸರಿನಲ್ಲಿ ಜಿಲ್ಲಾಧ್ಯಕ್ಷರೂ ಹಾಗೂ ರಾಜ್ಯಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸುತ್ತಿದ್ದು, ಸಂಘಟನಾ ಪರ್ವದ ರಾಜ್ಯ ಚುನಾವಣಾಧಿಕಾರಿಗಳಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರು ಇಂದು ಮೊದಲ ಹಂತದಲ್ಲಿ 23 ಜಿಲ್ಲೆಗಳಿಗೆ ನೂತನ ಅಧ್ಯಕ್ಷರನ್ನು ಪ್ರಕಟಿಸಿದ್ದಾರೆ.

ಮೈಸೂರು ನಗರಾಧ್ಯಕ್ಷರಾಗಿ ಮಾಜಿ ಶಾಸಕ ಎಲ್.ನಾಗೇಂದ್ರ ಅವರನ್ನೇ ಮುಂದುವರೆಸಲಾಗಿದೆ. ಅದೇ ರೀತಿ ಚಾಮರಾಜನಗರ ಜಿಲ್ಲಾಧ್ಯಕ್ಷರಾಗಿ ಹಾಲಿ ಅಧ್ಯಕ್ಷರಾಗಿದ್ದ ಮಾಜಿ ಶಾಸಕ ಸಿ.ಎಸ್.ನಿರಂಜನ ಕುಮಾರ್ ಅವರನ್ನೇ ಮುಂದುವರೆಸಲಾಗಿದೆ. ಆದರೆ ಮೈಸೂರು ಗ್ರಾಮಾಂತರ ಜಿಲ್ಲಾಧ್ಯಕ್ಷರ ಆಯ್ಕೆ ಇನ್ನೂ ಪ್ರಕಟವಾಗಿಲ್ಲ. ಈ ಸ್ಥಾನದಲ್ಲಿ ಹಾಲಿ ಎಲ್.ಆರ್.ಮಹದೇವಸ್ವಾಮಿ ಅವರು ಕಾರ್ಯ ನಿರ್ವಹಿಸುತ್ತಿದ್ದಾರೆ.

ಇನ್ನುಳಿದಂತೆ ದಕ್ಷಿಣ ಕನ್ನಡಕ್ಕೆ ಸತೀಶ್ ಕುಂಪಲ, ಚಿಕ್ಕಮಗಳೂರಿಗೆ ದೇವರಾಜ ಶೆಟ್ಟಿ, ಶಿವಮೊಗ್ಗಕ್ಕೆ ಎನ್.ಕೆ.ಜಗದೀಶ್, ಉತ್ತರ ಕನ್ನಡಕ್ಕೆ ನಾರಾಯಣ್ ಶ್ರೀನಿವಾಸ್ ಹೆಗಡೆ, ಹುಬ್ಬಳ್ಳಿ–ಧಾರವಾಡಕ್ಕೆ ತಿಪ್ಪಣ್ಣ ಮಜ್ಜಗಿ, ಧಾರವಾಡ ಗ್ರಾಮಾಂತರಕ್ಕೆ ನಿಂಗಪ್ಪ ಡಿ. ಸುತಗಟ್ಟಿ, ಬೆಳಗಾವಿ ನಗರಕ್ಕೆ ಶ್ರೀಮತಿ ಗೀತಾ ಸುತಾರ್, ಬೆಳಗಾವಿ ಗ್ರಾಮಾಂತರಕ್ಕೆ ಸುಭಾಷ್ ದುಂಡಪ್ಪ ಪಾಟೀಲ್, ಚಿಕ್ಕೋಡಿಗೆ ಸತೀಶ್ ಅಪ್ಪಾಜಿ ಗೋಲ್ಡ್, ಬೀದರ್‌ಗೆ ಸೋಮನಾಥ್ ಪಾಟೀಲ್, ಕಲಬುರಗಿ ನಗರಕ್ಕೆ ಚಂದ್ರಕಾಂತ್ ಬಿ.ಪಾಟೀಲ್, ಕಲಬುರಗಿ ಗ್ರಾಮಾಂತರಕ್ಕೆ ಅಶೋಕ್ ಬಗಲಿ, ಯಾದಗಿರಿಗೆ ವಿ.ಬಸವರಾಜಪ್ಪ ಗೌಡ, ಕೊಪ್ಪಳಕ್ಕೆ ದಡೇಸಗೂರು ಬಸವರಾಜ್, ಬಳ್ಳಾರಿಗೆ ಅನಿಲ್ ಕುಮಾರ್ ಮೋಕಾ, ವಿಜಯನಗರಕ್ಕೆ ಸಂಜೀವ್ ರೆಡ್ಡಿ, ಚಿಕ್ಕಬಳ್ಳಾಪುರಕ್ಕೆ ಬಿ.ಸಂದೀಪ್, ಕೋಲಾರಕ್ಕೆ ಓಂ ಶಕ್ತಿ ಚಲಪತಿ, ಬೆಂಗಳೂರು ಉತ್ತರಕ್ಕೆ ಎಸ್.ಹರೀಶ್, ಬೆಂಗಳೂರು ಕೇಂದ್ರಕ್ಕೆ ಎ.ಆರ್.ಸಪ್ತಗಿರಿಗೌಡ ಮತ್ತು ಬೆಂಗಳೂರು ದಕ್ಷಿಣಕ್ಕೆ ಸಿ.ಕೆ. ರಾಮಮೂರ್ತಿ ಅವರನ್ನು ಜಿಲ್ಲಾಧ್ಯಕ್ಷರನ್ನಾಗಿ ಪ್ರಕಟಿಸಲಾಗಿದೆ.

ಫೆ.1, ನುಡಿ ನಾದ ಕನ್ನಡ ನುಡಿ ವೈಭವ ಕಾರ್ಯಕ್ರಮ


ಮೈಸೂರು, ಜ.29(ಜಿಎ)–ಮೈಸೂರು ರೋಟರ್ಯಾಕ್ಟ್ ಈಸ್ಟ್ ಕ್ಲಬ್ ವತಿಯಿಂದ ಫೆ.1ರಂದು ನಗರದ ಕಲಾಮಂದಿರದ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ನುಡಿ ನಾದ ಕನ್ನಡ ನುಡಿ ವೈಭವ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕ್ಲಬ್‌ನ ಅಧ್ಯಕ್ಷೆ ಪಿ.ಪೊ.ಶ್ರೀರಕ್ಷಾ ಈ ವಿಷಯ ತಿಳಿಸಿ, ಟಿ.ನರಸೀಪುರ ತಾಲೂಕಿನ ಕನ್ನಹಳ್ಳಿಯಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಯ ಅಭಿವೃದ್ಧಿಗಾಗಿ ನಿಧಿ ಸಂಗ್ರಹಿಸಲೆಂದು ಕಾರ್ಯಕ್ರಮ ಆಯೋಜಿಸಿದ್ದು, ಕನ್ನಡ ಪೂಜಾರಿ ಹಿರೇಮಗಳೂರು ಕಣ್ಣನ್ ಪಾಲ್ಗೊಳ್ಳುವರು. ನಮ್ಮ ನಡೆ ಕನ್ನಡ ಶಾಲೆಯ ಅಭಿವೃದ್ಧಿಯ ಕಡೆ ಎಂಬುದು ಘೋಷವಾಕ್ಯವಾಗಿದೆ. ಆರ್.ಸಂಜಯ್, ಎಸ್.ರವಿಶಂಕರ್, ಎಂ.ಚಂದು ಇನ್ನಿತರರು ವೇದಿಕೆಯಲ್ಲಿರುವರು. ಶುಭಾ ರಾಘವೇಂದ್ರ, ರಾಜಶೇಖರ ಕದಂಬ, ಚೌಡಯ್ಯ ಮತ್ತು ಡಾ.ಎಂ.ಶಿವನಂಜು ಅವರನ್ನು ಈ ವೇಳೆ ಅಭಿನಂದಿಸಲಾಗುವುದು ಎಂದರು.

ಇಂದು ಸ್ಪರ್ಶ್ ಕುಷ್ಠರೋಗ ಅರಿವು ಜಾಥಾ

ಮೈಸೂರು,ಜ.29– ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜ.30ರಂದು ಬೆಳಗ್ಗೆ 9ಕ್ಕೆ 'ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ–2025'ರ ಪ್ರಯುಕ್ತ ಸಮುದಾಯದಲ್ಲಿ ಅರಿವು ಮೂಡಿಸಲು ಜಾಗೃತಿ ಜಾಥಾ ಏರ್ಪಡಿಸಲಾಗಿದೆ. ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಅರಮನೆ ಆವರಣದಿಂದ ಹೊರಟು ಆಲ್ಬರ್ಟ್ ವಿಕ್ಟರ್ ರಸ್ತೆ ಮಾರ್ಗವಾಗಿ, ಹಾರ್ಡಿಂಗ್ ವೃತ್ತದಿಂದ ಸಿದ್ದಾರ್ಥ ಹೋಟೆಲ್ ಮಾರ್ಗವಾಗಿ ಹೊರಟು ಕ್ರಿಸ್ಟಲ್ ಪಾರ್ಕ್ ಥಿಯೋಬಾಲ್ಡ್ ರಸ್ತೆ ಮಾರ್ಗವಾಗಿ ಎಸ್‌ಪಿ ಕಚೇರಿ ವೃತ್ತ ಜಿಲ್ಲಾ ಆರೋಗ್ಯ–ಕುಟುಂಬ ಕಲ್ಯಾಣ ಕಚೇರಿಯಲ್ಲಿ ಕೊನೆಗೊಳ್ಳುವುದು.

ನಿಧನ



ಷೇಕ್ ಮಕ್ಸೂದ್ ಹುಸೇನ್ ರಜ್ವಿ

ಮೈಸೂರು, ಜ. 29– ಮೈಸೂರಿನ ಸಾತಗಳ್ಳಿ ನಿವಾಸಿ ಹಾಗೂ ರಾಜೀವ್‌ನಗರದ ಮಸೀದಿ ಮೆಕ್ಕಾ ವ್ಯವಸ್ಥಾಪಕ ಸಮಿತಿ ಅಧ್ಯಕ್ಷರು, ಶಾಂತಿನಗರದ ಷೇಕ್ ಪಬ್ಲಿಕ್ ಸ್ಕೂಲ್ ಅಧ್ಯಕ್ಷರಾದ ಷೇಕ್ ಮಕ್ಸೂದ್ ಹುಸೇನ್ ರಜ್ವಿ (59) ಮಂಗಳವಾರ (ಜ.28) ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು, ಇಬ್ಬರು ಸಹೋದರರು, ಮೂವರು ಸಹೋದರಿಯರು ಹಾಗೂ ಅಪಾರ ಬಂಧುವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ಸ್ಮಶಾನದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾಳೆಯಿಂದ ಐತಿಹಾಸಿಕ ಮುಡುಕುತೊರೆ ಜಾತ್ರಾ ಮಹೋತ್ಸವ

- ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಸಿದ್ಧತೆ ಕೈಗೊಳ್ಳಲು ಡಿಸಿ ಸಲಹೆ
- ಫೆ.7 ರಥೋತ್ಸವ, ಫೆ.10 ತೆಪ್ಪೋತ್ಸವ, ಫೆ.5 ಉತ್ತಮ ರಾಸುಗಳ ಆಯ್ಕೆ

ಮೈಸೂರು,ಜ.29(ಜಿಎ)–ಐತಿಹಾಸಿಕ ಮುಡುಕುತೊರೆ ಜಾತ್ರಾ ಮಹೋತ್ಸವ ಜ.31ರಿಂದ ಫೆ.16ರವರೆಗೆ ನಡೆಯಲಿದ್ದು, ಭಕ್ತರಿಗೆ ಯಾವುದೇ ತೊಂದರೆ ಆಗದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಮೈಸೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಡುಕುತೊರೆ ಜಾತ್ರಾ ಮಹೋತ್ಸವ ಪ್ರಯುಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ಫೆ.7ರಂದು ರಥೋತ್ಸವ, ಫೆ.10ಕ್ಕೆ ತೆಪ್ಪೋತ್ಸವ ಸಮಾರಂಭ ಸೇರಿದಂತೆ 17 ದಿನಗಳ ಕಾಲ ಜಾತ್ರಾ ಮಹೋತ್ಸವ ನಡೆಯಲಿದ್ದು, ಈ ಸಂಬಂಧ ಅಧಿಕಾರಿಗಳು ಯಾವುದೇ ತೊಂದರೆ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.


ಮೈಸೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಡುಕುತೊರೆ ಜಾತ್ರಾ ಮಹೋತ್ಸವ ಪ್ರಯುಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಬುಧವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಉತ್ತಮ ರಾಸುಗಳಿಗೆ ಆಯ್ಕೆ ಸಂಬಂಧ ಜ.31ರಿಂದ ಫೆ.3ರವರೆಗೆ ರಾಸುಗಳ ರೈತರು ಸ್ಥಳದಲ್ಲಿದ್ದು ಆಯ್ಕೆ ಸಂಬಂಧ ನೋಂದಣಿ ಮಾಡಿಕೊಳ್ಳಬೇಕು. ಫೆ.5ರಂದು ಉತ್ತಮ ರಾಸುಗಳ ಆಯ್ಕೆ ನಡೆಯುತ್ತದೆ. ಆದರೆ ಕೊನೆಯ ಎರಡು ದಿನ ಅಥವಾ ಆಯ್ಕೆಯ ದಿನ ನೇರವಾಗಿ ಭಾಗವಹಿಸಲು ಅವಕಾಶ ಇರುವುದಿಲ್ಲ ಎಂದು ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಲಿಂಗರಾಜು ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಟಿ ನರಸೀಪುರ ತಹಶೀಲ್ದಾರ್ ಸುರೇಶ್ ಆಚಾರ್, ಮುಜರಾಯಿ ಇಲಾಖೆಯ ತಹಶೀಲ್ದಾರ್ ಲತಾ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

> ಆರೋಗ್ಯ ಇಲಾಖೆಯಿಂದ ಆಂಬುಲೆನ್ಸ್ ಹಾಗೂ ವೈದ್ಯರ ತಂಡ ಜಾತ್ರಾ ಮಹೋತ್ಸವದಲ್ಲಿ ಇರಬೇಕು. ಚೆಸ್ಕಾಂ ಇಲಾಖೆಯಿಂದ ವಿದ್ಯುತ್ ದೀಪಾಲಂಕಾರ ಮಾಡಬೇಕು. ತಾತ್ಕಾಲಿಕ ಶೌಚಾಲಯ, ಮೊಬೈಲ್ ಶೌಚಾಲಯ ಹಾಗೂ ಬಟ್ಟೆ ಬದಲಿಸುವ ಕೊಠಡಿ ನಿರ್ಮಿಸಿ, ಸ್ವಚ್ಛತೆಗೆ ಆದ್ಯತೆ ನೀಡಬೇಕು. ಪೊಲೀಸ್ ಇಲಾಖೆಯಿಂದ ಬ್ಯಾರಿಕೇಡ್, ಧ್ವನಿವರ್ಧಕ, ಸಿಸಿ ಕ್ಯಾಮೆರಾ ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಹಾಗೂ ಜಾತ್ರಾಮಾಳದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಜಾತ್ರಾ ಪ್ರದೇಶದಲ್ಲಿ ಸ್ವಚ್ಛತೆ ಹಾಗೂ ನೈರ್ಮಲೀಕರಣಕ್ಕೆ ಹೆಚ್ಚು ಒತ್ತು ನೀಡಬೇಕು. ಹಾಗೆಯೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ಅಗತ್ಯ ಕ್ರಮ ಕೈಗೊಳ್ಳಬೇಕು.
>
> –ಜಿ.ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾಧಿಕಾರಿ

ಮಲ್ಲಿಕಾರ್ಜುನ ಖರ್ಗೆ ಹಿಂದೂ ವಿರೋಧಿ ಹೇಳಿಕೆ; ಸೋನಿಯಾ, ರಾಹುಲ್ ಪ್ರೇರಣೆ

ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆರೋಪ

- ದೆಹಲಿಗೆ ಹೋದ ಮೇಲೆ ಖರ್ಗೆ ಬದಲಾಗಿದ್ದಾರೆ
- ಖರ್ಗೆ ಹೇಳಿಕೆಯಿಂದ ಹಿಂದೂಗಳ ಭಾವನೆಗೆ ಘಾಸಿ
- ಕುಂಭಮೇಳದಿಂದ ಆ ಭಾಗದ ಬಡತನ ನಿರ್ಮೂಲನೆ

ಮೈಸೂರು, ಜ.29(ಬಿಎಲ್‌ಯು)– ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯಿಂದ ಹಿಂದೂಗಳಿಗೆ ಅವಮಾನ ಆಗುವ ಹೇಳಿಕೆ ಕೊಡಿಸುತ್ತಿದ್ದಾರೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆರೋಪಿಸಿದರು.

ಮೈಸೂರಿನಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ ಖರ್ಗೆ ಕರ್ನಾಟಕದಲ್ಲಿ ಇರುವಾಗ ಇಂತಹ ಹೇಳಿಕೆ ನೀಡುತ್ತಿರಲಿಲ್ಲ. ಆದರೆ ದೆಹಲಿಗೆ ಹೋದ ನಂತರ ಅಲ್ಲಿನ ನಾಯಕರ ಮಾತು ಕೇಳಿ ಅಸಂಬದ್ಧ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳದ ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡುವುದರಿಂದ ಬಡತನ ನಿರ್ಮೂಲನೆ ಆಗುವುದಿಲ್ಲ ಎಂಬ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ತಿರುಗೇಟು ನೀಡಿದ ಸಿ.ಟಿ.ರವಿ, ಸರ್ಕಾರ ಜನರ ತೆರಿಗೆ ಹಣವನ್ನು ಯಾತ್ರೆವೊಂದಕ್ಕೆ ನೀಡಿ ಒಂದು ವರ್ಗದ ತುಷ್ಟೀಕರಣ ಮಾಡುತ್ತಿರುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು. ಕುಂಭಮೇಳದಿಂದ ಬಡತನ ನಿರ್ಮೂಲನೆ ಆಗುವುದೇ ಎಂದು ಮಲ್ಲಿಕಾರ್ಜುನ ಖರ್ಗೆ ಪ್ರಶ್ನಿಸಿದ್ದಾರೆ. ಹೌದು, ಕುಂಭಮೇಳ ನಡೆಯುತ್ತಿರುವ ಪ್ರಯಾಗ್‌ರಾಜ್ ಸೇರಿದಂತೆ ಸುತ್ತಮುತ್ತಲಿನ ಸ್ಥಳದಲ್ಲಿ ಭರ್ಜರಿ ವ್ಯಾಪಾರ–ವಹಿವಾಟು ನಡೆಯುತ್ತಿದೆ. ಇದರಿಂದ ಆ ಭಾಗದ ಜನರ ಬಡತನ ನಿವಾರಣೆಯಾಗುತ್ತಿದೆ ಎಂದು ಕಾಂಗ್ರೆಸ್ ನಾಯಕರಿಗೆ ಟಾಂಗ್ ನೀಡಿದರು.


ಸಿ.ಟಿ.ರವಿ

ಮಲ್ಲಿಕಾರ್ಜುನ ಖರ್ಗೆ ಅವರಿಗೆ 80 ವರ್ಷ ವಯಸ್ಸಾಗಿದೆ. ಆದರೆ ಇತ್ತೀಚೆಗೆ ಹಿರಿತನ ಹಾಗೂ ಘನತೆಗೆ ವ್ಯತಿರಿಕ್ತವಾದ ಹೇಳಿಕೆ ನೀಡುತ್ತಿದ್ದಾರೆ ಎಂದು ಟೀಕಿಸಿದರು.

ಕುಂಭಮೇಳದಲ್ಲಿ ಮಿಂದೇಳುವುದು ಅವರ ನಂಬಿಕೆಗೆ ಬಿಟ್ಟ ವಿಚಾರ. ಕಾಂಗ್ರೆಸ್ ನಾಯಕರ ಇಂತಹ ಹೇಳಿಕೆಗಳಿಂದ ಹಿಂದೂಗಳ ನಂಬಿಕೆಯನ್ನು ಘಾಸಿಗೊಳಿಸಿದಂತಾಗಿದೆ ಎಂದು ಸಿ.ಟಿ.ರವಿ ಅಭಿಪ್ರಾಯಪಟ್ಟರು.

ಪ್ರಯಾಗ್‌ರಾಜ್‌ನಲ್ಲಿ ಅಲ್ಲಿನ ಸರ್ಕಾರ ಅಚ್ಚುಕಟ್ಟಾದ ವ್ಯವಸ್ಥೆ ಮಾಡಿದೆ. ಆದರೂ ಕಾಲ್ತುಳಿತವಾಗಿದೆ. ಕೋಟ್ಯಾಂತರ ಜನರು ಒಂದೇ ಬಾರಿ ಸೇರುವುದರಿಂದ ನಿಯಂತ್ರಣ ಮಾಡುವುದು ಸುಲಭದ ಕೆಲಸವಲ್ಲ. ಆದರೂ ನಿಯಂತ್ರಣ ಮಾಡಲಾಗಿದ್ದು, ದೊಡ್ಡ ಅನಾಹುತ ತಪ್ಪಿಸಲಾಗಿದೆ. ಇದಕ್ಕೆ ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದು ಸಿ.ಟಿ.ರವಿ ತಿಳಿಸಿದರು.

ಮತ್ತೊಬ್ಬರ ಬಾಳಿಗೆ ಕಣ್ಣಾದ ಮೃತರು!

ಅಪಘಾತದಲ್ಲಿ ಸಾವನ್ನಪ್ಪಿದ್ದ ಒಂದೇ ಕುಟುಂಬ ಮೂವರ ಕಣ್ಣುಗಳ ದಾನ ; ಸಾರ್ಥಕತೆ ಮೆರೆದ ಮೃತರ ಕುಟುಂಬ

ಮೈಸೂರು,ಜ.29(ಪಿಎಂ)– ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಹಿರೀಕಾಟಿ ಬಳಿ ಮಂಗಳವಾರ ರಾತ್ರಿ ಸಂಭವಿಸಿದ ಅಪಘಾತದಿಂದ ಸ್ಥಳದಲ್ಲೇ ಮೃತಪಟ್ಟ ಒಂದೇ ಕುಟುಂಬದ ಮೂವರ ಕಣ್ಣುಗಳನ್ನು ದಾನ ಮಾಡಿದ್ದು, ಆ ಮೂಲಕ ಈ ಮೂವರು ಮತ್ತೊಬ್ಬರ ಬಾಳಿಗೆ ಕಣ್ಣಾಗಲಿದ್ದಾರೆ.

ಮೃತ ಕುಟುಂಬವು ಕೆಆರ್ ಆಸ್ಪತ್ರೆಯ ನೇತ್ರದಾನ ಕೇಂದ್ರಕ್ಕೆ ನೇತ್ರದಾನ ಮಾಡುವ ಮೂಲಕ ಸಾರ್ಥಕತೆ ಮೆರೆದಿದ್ದು, ಆ ಮೂಲಕ ತಮ್ಮವರನ್ನು ಮತ್ತೊಬ್ಬರ ಬಾಳಿಗೆ ಕಣ್ಣಾಗಿಸಿದ್ದಾರೆ. ನಂಜನಗೂಡು ತಾಲೂಕಿನ ಕುಡ್ಲಾಪುರ ಗ್ರಾಮದ ಮೂವರು ಹೆಚ್.ಡಿ.ಕೋಟೆ ತಾಲೂಕಿನ ಚಿಕ್ಕದೇವಮ್ಮನ ಬೆಟ್ಟಕ್ಕೆ ಹೋಗಿ ತಮ್ಮ ಸ್ವಗ್ರಾಮಕ್ಕೆ ಹಿಂತಿರುಗುವಾಗ ಅಪಘಾತ ನಡೆದಿತ್ತು. ಈ ಮೂವರು ಸಾಗುತ್ತಿದ್ದ ಬೈಕಿಗೆ ಕಾರೊಂದು ಡಿಕ್ಕಿ ಹೊಡೆದಿತ್ತು.

ಪರಿಣಾಮ ಬೈಕ್‌ನಲ್ಲಿದ್ದ ಶಾಲಿನಿ ಮತ್ತು ಶಶಿಧರ್ ನವದಂಪತಿ ಹಾಗೂ ಶಶಿಧರ್ ತಾಯಿ ಭಾಗ್ಯಮ್ಮ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಕಳೆದ 9 ತಿಂಗಳ ಹಿಂದೆಯಷ್ಟೇ ಶಾಲಿನಿ ಮತ್ತು ಶಶಿಧರ್ ವಿವಾಹವಾಗಿತ್ತು ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶವಾಗಾರದಲ್ಲಿ ಬುಧವಾರ ಮೃತರ ಮರಣೋತ್ತರ ಪರೀಕ್ಷೆ ನಡೆಸಲಾಯಿತು.


ಮಂಗಳವಾರ ರಾತ್ರಿ ಅಪಘಾತದಲ್ಲಿ ಮೃತಪಟ್ಟ ಒಂದೇ ಕುಟುಂಬದ ಮೂವರನ್ನು ಚಿತ್ರದಲ್ಲಿ ಕಾಣಬಹುದು.

ಕುಟುಂಬದವರು ಮೂವರ ಕಣ್ಣುಗಳನ್ನು ಕೆಆರ್ ಆಸ್ಪತ್ರೆಯ ನೇತ್ರದಾನ ಕೇಂದ್ರಕ್ಕೆ ದಾನ ಮಾಡಿದ್ದು, ಇವರ ಕಣ್ಣುಗಳು 6 ಜನರ ಬಾಳಿಗೆ ಬೆಳಕು ನೀಡಲಿವೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮೃತ ಶಶಿಧರ್ ದೊಡ್ಡಪ್ಪ ಸಿ.ಗುರುಸಿದ್ದಯ್ಯ, ಕೆಆರ್ ಆಸ್ಪತ್ರೆ ನೇತ್ರದಾನ ಕೇಂದ್ರಕ್ಕೆ ಮೃತಪಟ್ಟ ನಮ್ಮ ಕುಟುಂಬದ ಮೂವರ ಕಣ್ಣುಗಳನ್ನು ದಾನ ಮಾಡಿದ್ದೇವೆ. ನಮ್ಮ ಕುಟುಂಬದಲ್ಲಿ ಅವರನ್ನು ಕಳೆದುಕೊಂಡಿದ್ದೇವೆ. ಆದರೆ ಅವರು ತಮ್ಮ ಕಣ್ಣುಗಳ ಮೂಲಕ ದೃಷ್ಟಿ ಇಲ್ಲದವರ ಬಾಳಿಗೆ ಬೆಳಕಾಗಲಿದ್ದಾರೆ. ಇವರ ಕಣ್ಣುಗಳಿಂದ 12 ಮಂದಿಗೆ ದೃಷ್ಟಿ ದೊರೆಯಲಿದೆ ಎಂದು ತಿಳಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

30.01.2025 ಗುರುವಾರ, ಮಳೆ ನಕ್ಷತ್ರ: ಶ್ರವಣ 24.01.2025 ರಿಂದ 05.02.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಹೇಮಂತ ಋತು, ಪುಷ್ಯ ಮಾಸ, ಶುಕ್ಲ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಶ್ರವಣ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಹಿಮ್ಮಡಿ ಮುಳ್ಳು, ಪಿತ್ತಗಂಧೆ (ಶೀತ ಪಿತ್ತ), ಉಸಿರಾಟದ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಶ್ವಾಸ (ಉಬ್ಬಸ, ದಮ್ಮು ಕಾಯಿಲೆ) ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್, ಬೆಳಗ್ಗೆ 10ರಿಂದ.

■ **ಪ್ರೀತಿ ಕ್ಯಾನ್ಸರ್ ಸೆಂಟರ್ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.

■ **ಪ್ರಾದೇಶಿಕ ಶಿಕ್ಷಣ ಸಂಸ್ಥೆ:** ಇನ್ನೋವೇಟಿವ್ ಪ್ರಾಕ್ಟೀಸಸ್ ಅಂಡ್ ಎಕ್ಸ್‌ಪೀರಿಯೆನ್ಸ್ ಇನ್ ಸ್ಕೂಲ್ ಬೇಸ್ಡ್ ಕೇರಿಯರ್ ಡೆವಲಪ್‌ಮೆಂಟ್ ಪ್ರೋಗ್ರಾಮ್ಸ್ ಫಾರ್ ಸ್ಟೂಡೆಂಟ್ಸ್ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಮುಖ್ಯ ಅತಿಥಿಗಳು: ಬೆಂಗಳೂರು ವಿವಿ ಕುಲಪತಿ ಪ್ರೊ.ಲಿಂಗರಾಜ ಗಾಂಧಿ, ಅಧ್ಯಕ್ಷತೆ: ಆರ್‌ಐಇ ಪ್ರಿನ್ಸಿಪಾಲ್ ಪ್ರೊ.ಯಜ್ಞಮೂರ್ತಿ ಶ್ರೀಕಾಂತ್, ಸ್ಥಳ:ಎ.ವಿ.ಹಾಲ್ ಟೆಕ್ನಾಲಜಿ ಬ್ಲಾಕ್, ಬೆಳಗ್ಗೆ 10ಕ್ಕೆ

■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ಸಾಮಾಜಿಕ ಪರಿವರ್ತನೆಗಾಗಿ ಆರೋಗ್ಯ ವಿಜ್ಞಾನಗಳಲ್ಲಿ ಮೌಲ್ಯ ಶಿಕ್ಷಣ ಮತ್ತು ನಾವೀನ್ಯತೆಗಳ ಅನುವಾದನ ಕುರಿತು ಅಂತರರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಡಾ. ಸುಬರ್ಣಾ ರಾಯ್, ಮುಖ್ಯ ಅತಿಥಿಗಳು : ಚಾಮರಾಜನಗರ ವಿವಿ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್, ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಬಿ.ಎಂ. ಸುಬ್ರಾಯ, ಡಾ. ಮಿಲಿಂದ್ ಪಾರ್ಲೆ, ಕಾರ್ಯದರ್ಶಿ ಆರ್. ದಿನೇಶ್, ಅಧ್ಯಕ್ಷತೆ : ಫಾರ್ಮಸಿ ಕಾಲೇಜು ಪ್ರಿನ್ಸಿಪಾಲ್ ಡಾ. ಹನುಮಂತಾಚಾರ್ ಜೋಶಿ, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ :** ಡಾ.ಬಿ.ಆರ್.ಅಂಬೇಡ್ಕರ್ ಅವರ ಮಾನವ ಅಭಿವೃದ್ಧಿಯ ಗ್ರಹಿಕೆ ಕುರಿತು ಕಾರ್ಯಾಗಾರ, ಸ್ಥಳ: ಪ್ರೊ. ಬೆಟ್ರಿಕ್ಸ್ ಡಿಸೋಜ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30 ರಿಂದ.

■ **ನ್ಯೂ ಕ್ರಾಫ್ಟ್ ಇಂಡಿಯಾ :** ಹತ್ತಿ ಕೈಮಗ್ಗದ ಸಾಂಪ್ರದಾಯಿಕ ರೇಷ್ಮೆ, ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಸ್ಥಳ: ನಂಜರಾಜ ಬಹದ್ದೂರ್ ಛತ್ರ, ವಿನೋಬಾ ರಸ್ತೆ, ಬೆಳಗ್ಗೆ 10.30 ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ಗಾಂಧಿ ಅಧ್ಯಯನ ಕೇಂದ್ರ, ಗಾಂಧಿ ಭವನ, ಶೇಷಾದ್ರಿಪುರಂ ಪದವಿ ಕಾಲೇಜು :** 77ನೇ ಸರ್ವೋದಯ ದಿನಾಚರಣೆ ಅಂಗವಾಗಿ ಇಂದಿನ ಬದುಕಿಗೆ ಗಾಂಧೀಜಿ ಪ್ರಸ್ತುತತೆ ಕುರಿತು ವಿಶೇಷ ಉಪನ್ಯಾಸ, ಉದ್ಘಾಟನೆ : ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ. ಎಸ್.ಆರ್. ನಿರಂಜನ, ವಿಶೇಷ ಉಪನ್ಯಾಸ : ನಿವೃತ್ತ ಕನ್ನಡ ಪ್ರಾಧ್ಯಾಪಕರಾದ ಪ್ರೊ. ಎಚ್.ಜೆ. ಸರಸ್ವತಿ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ ಎನ್.ಕೆ. ಲೋಕನಾಥ್, ಉಪಸ್ಥಿತರು : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಸ್ಥಳ: ಗಾಂಧಿ ಭವನ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಮಾತೃ ಮಂಡಲಿ ಬಾಲಕಿಯರ ಪದವಿಪೂರ್ವ ಕಾಲೇಜು :** ಕಾಲೇಜು ವಾರ್ಷಿಕೋತ್ಸವ, ಅಧ್ಯಕ್ಷತೆ: ಮಾತೃ ಮಂಡಲಿ ವಿದ್ಯಾಸಂಸ್ಥೆ ಅಧ್ಯಕ್ಷೆ ಶ್ರೀಮತಿ ವಿಜಯಲಕ್ಷ್ಮೀ ಅರಸ್, ಮುಖ್ಯ ಅತಿಥಿಗಳು : ಕಾರ್ಯದರ್ಶಿ ಶ್ರೀಮತಿ ವಾಣಿ ಪ್ರಸಾದ್, ಸಹ ಕಾರ್ಯದರ್ಶಿ ಶ್ರೀಮತಿ ಹೇಮಬಾಲಚಂದ್ರನ್, ಡಾ. ಯಮುನಾ, ಸ್ಥಳ: ವಜ್ರ ಮಹೋತ್ಸವ ಸಭಾಂಗಣ, ಮಾತೃ ಮಂಡಲಿ ವಿದ್ಯಾಸಂಸ್ಥೆ, ಬೆಳಗ್ಗೆ 11ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಶರಣ ಸಾಹಿತ್ಯ ಪರಿಷತ್ತು, ಯುವ ಘಟಕ :** ದತ್ತಿ ಕಾರ್ಯಕ್ರಮ, ವಚನ ಗಾಯನ ಮತ್ತು ಉಪನ್ಯಾಸ, ಉದ್ಘಾಟನೆ : ಸಾಹಿತಿ ಡಾ. ಹೆಚ್.ಟಿ. ಶೈಲಜಾ, ಪ್ರಶಸ್ತಿ ಪತ್ರ ವಿತರಣೆ : ಮರಿಮಲ್ಲಪ್ಪ ಪ್ರೌಢಶಾಲೆ ಮುಖ್ಯೋಪಾಧ್ಯಾಯರಾದ ಶ್ರೀಮತಿ ಎಸ್. ಮಮತ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಮರಿಮಲ್ಲಪ್ಪ ಪ್ರೌಢಶಾಲೆ ಸಭಾಂಗಣ, ಮಧ್ಯಾಹ್ನ 2.30ಕ್ಕೆ.

■ **ಶಾಂತಲಾ ಪಬ್ಲಿಕೇಷನ್, ಶೃಂಗೇರಿ ಶಂಕರ ಮಠ :** ಲೋಕಶಂಕರ, ಆದಿ ಶಂಕರಾಚಾರ್ಯರ ಜೀವನ –ದರ್ಶನ–ಸಿದ್ಧಾಂತ ಒಂದು ಕಿರುಪರಿಚಯ ಗ್ರಂಥ ಲೋಕಾರ್ಪಣೆ ಸಮಾರಂಭ, ಮುಖ್ಯ ಅಭ್ಯಾಗತರು : ಮೇಘಾಲಯ ರಾಜ್ಯಪಾಲ ಸಿ.ಎಚ್.ವಿಜಯಶಂಕರ್, ಕೃತಿ ಬಿಡುಗಡೆ : ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್, ಕೃತಿ ಪರಿಚಯ : ಡಾ. ವಿದ್ವಾನ್ ಶೆಲ್ವಪಿಳ್ಳೈ ಐಯ್ಯಂಗಾರ್, ಅಧ್ಯಕ್ಷತೆ : ವಿಶ್ರಾಂತ ಸಂಶೋಧಕರಾದ ಡಾ.ಹೆಚ್.ವಿ. ನಾಗರಾಜರಾವ್, ಉಪಸ್ಥಿತರು : ಶಾಸಕ ಟಿ.ಎಸ್. ಶ್ರೀವತ್ಸ, ಸ್ಥಳ: ಗುರುಭವನ, ಶಂಕರ ಮಠದ ಆವರಣ, ಸಂಜೆ 5ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ಗಾನಭಾರತೀ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ವಿದ್ವಾನ್ ಬಿ.ಕೆ. ಪದ್ಮನಾಭರಾವ್ ಅವರ ರಚನೆಗಳು, ಸಂಜೆ 6 ರಿಂದ ಪ್ರಸ್ತುತಪಡಿಸುವವರು : ವಿದ್ವಾನ್ ಹಿರಣ್ಮಯಿ ಶ್ರೀನಿಧಿ, ಸಂಜೆ 7ಕ್ಕೆ ವಿದ್ವಾನ್ ಎನ್.ಚೆನ್ನಕೇಶವಯ್ಯ ಅವರ ರಚನೆಗಳು, ಪ್ರಸ್ತುತಪಡಿಸುವವರು : ವಿದುಷಿ ಎಂ.ಎ. ಜ್ಯೋತಿ, ಸ್ಥಳ : ವೀಣೆಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

ಸುತ್ತೂರಿನಲ್ಲಿಂದು, ನಂಜನಗೂಡು ತಾ., ಸುತ್ತೂರು ಜಾತ್ರಾ ಮಹೋತ್ಸವ

■ **ಬೆಳಗ್ಗೆ 10ಕ್ಕೆ ಭಜನಾ ಮೇಳ ಸಮಾರೋಪ :** ಸಮ್ಮುಖ : ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಸ್ವಾಮಿ ಮುಕ್ತಿದಾನಂದಜಿ, ಶ್ರೀ ಅಭಿನವ ಮೃತ್ಯುಂಜಯ ಸ್ವಾಮೀಜಿ, ಅಧ್ಯಕ್ಷತೆ : ಮೇಘಾಲಯ ರಾಜ್ಯಪಾಲ ಸಿ.ಹೆಚ್. ವಿಜಯಶಂಕರ್, ಸಮಾರೋಪ ಭಾಷಣ : ಆರ್‌ಎಸ್‌ಎಸ್ ಸರಕಾರ್ಯವಾಹರು ದತ್ತಾತ್ರೇಯ ಹೊಸಬಾಳೆ, ಬಹುಮಾನ ವಿತರಣೆ : ಏಕತಾರಿ ತಂಡ : ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜ್, ಪುರುಷರ ತಂಡ : ಶಾಸಕ ಆರ್.ವಿ. ದೇಶಪಾಂಡೆ, ಮಹಿಳೆಯರ ತಂಡ : ಕರ್ನಾಟಕ ಮಹಿಳಾ ಕಾಂಗ್ರೆಸ್ ಸಮಿತಿ ಅಧ್ಯಕ್ಷೆ ಶ್ರೀಮತಿ ಸೌಮ್ಯಾ ರೆಡ್ಡಿ, ಮಕ್ಕಳ ತಂಡ : ವಿ. ಸೋಮಣ್ಣ ಪ್ರತಿಷ್ಠಾನ ಅಧ್ಯಕ್ಷೆ ಶ್ರೀಮತಿ ಶೈಲಜಾ ವಿ. ಸೋಮಣ್ಣ, ಮುಖ್ಯ ಅತಿಥಿಗಳು : ಶಾಸಕ ಡಿ.ಜಿ. ಶಾಂತನಗೌಡ, ಮಾಜಿ ಸಂಸದ ಪ್ರತಾಪ್ ಸಿಂಹ, ಶಾಸಕ ದರ್ಶನ್ ಪುಟ್ಟಣ್ಣಯ್ಯ, ಸಂಜಯ್ ಪಾಟೀಲ್, ಜಿಲ್ಲಾಧಿಕಾರಿ ಶ್ರೀಮತಿ ಸಿ.ಟಿ. ಶಿಲ್ಪಾನಾಗ್, ಸೆಲ್ವ ಜಯರಾಮನ್.

■ **ಮಧ್ಯಾಹ್ನ 2ಕ್ಕೆ ಕುಸ್ತಿ ಪಂದ್ಯಾವಳಿ :** ಸಮ್ಮುಖ : ಶ್ರೀ ಗುರು ಕಂಬಳೀಶ್ವರ ಮಠದ ಶ್ರೀ ಚನ್ನಬಸವ ಸ್ವಾಮೀಜಿ, ಶ್ರೀ ಸಾಲೂರು ಬೃಹನ್ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಅಧ್ಯಕ್ಷತೆ : ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಉದ್ಘಾಟನೆ : ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ, ಸುತ್ತೂರು ಕುಮಾರ ಪ್ರಶಸ್ತಿ ವಿತರಣೆ : ಶಾಸಕ ಅನಿಲ್‌ಕುಮಾರ್ ಚಿಕ್ಕಮಾದು, ಸುತ್ತೂರು ಕೇಸರಿ ಪ್ರಶಸ್ತಿ ವಿತರಣೆ : ಸಂಸದ ಸುನೀಲ್ ಬೋಸ್, ಬಹುಮಾನ ವಿತರಣೆ : ಶಾಸಕ ಸಿ. ಪುಟ್ಟರಂಗಶೆಟ್ಟಿ, ಮುಖ್ಯ ಅತಿಥಿಗಳು : ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ಡಾ.ಡಿ.ತಿಮ್ಮಯ್ಯ, ಮಧು ಜಿ. ಮಾದೇಗೌಡ, ಶಾಸಕರಾದ ಶರಣಗೌಡ ಕಂದಕೂರ, ಕೆ. ಹರೀಶ್‌ಗೌಡ, ಚಾಮುಲ್ ಅಧ್ಯಕ್ಷ ವೈ.ಸಿ. ನಾಗೇಂದ್ರ, ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಸ್.ಗುರುಸ್ವಾಮಿ.

■ **ಸಂಜೆ 5ಕ್ಕೆ ಕೃಷಿ ಮೇಳ ಮತ್ತು ದನಗಳ ಜಾತ್ರೆ :** ಸಮ್ಮುಖ: ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿ, ಶ್ರೀ ಬಸವರಾಜ ಪಟ್ಟದಾರ್ಯ ಸ್ವಾಮೀಜಿ, ಅಧ್ಯಕ್ಷತೆ: ಸಂಸದ ಜಗದೀಶ್ ಎಸ್. ಶೆಟ್ಟರ್, ಸಮಾರೋಪ ಭಾಷಣ: ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯ್ಲಿ, ಬಹುಮಾನ ವಿತರಣೆ : ಕೃಷಿ ಮೇಳ : ಸಂಸದ ಕೋಟ ಶ್ರೀನಿವಾಸ ಪೂಜಾರಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮುಖ್ಯ ಅತಿಥಿಗಳು: ವಿಧಾನಪರಿಷತ್ ಸದಸ್ಯ ಡಾ.ಧನಂಜಯ ಸರ್ಜಿ, ಕೆ.ಎಸ್. ನವೀನ್, ಶಾಸಕರಾದ ಹೆಚ್.ಕೆ. ಸುರೇಶ್, ಕೃಷ್ಣನಾಯಕ, ಎ.ಬಣ್ಣಾರಿ, ಕೆ.ಎಂ. ಉದಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಶಿವನಗೌಡ ಆರ್. ಪಾಟೀಲ್, ಡಾ. ಪುಷ್ಪ ಅಮರನಾಥ್.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸೀರೆಯ ಸೊಬಗು –ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ : ಜಯಶ್ರೀ ಹೆಗಡೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎನ್.ಹೇಮಾ, ವ್ಯಾಖ್ಯಾನ–ಡಾ.ಲತಾ, ಮೈಸೂರು, 6.50 ರೈತರಿಗೆ ಸಲಹೆ, 7.15 ಹಸಿರು ಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 9.05 ಗರ್ಭಕಂಠದ ಕ್ಯಾನ್ಸರ್ ಕುರಿತು ಮಾಹಿತಿ, ಪ್ರಾಯೋಜಕರು: ಇಂಡಿಯನ್ ಕ್ಯಾನ್ಸರ್ ಸೊಸೈಟಿ, 9.10–ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಎಲ್.ಅರ್ಚನಾ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಾಡಿನಲ್ಲಿನ ಕಥೆಗಳು. ಭಾಗವಹಿಸುತ್ತಾರೆ : ಜೀವ ಪರಿಸರ ತಜ್ಞ ಸಂಜಯ್ ಗುಬ್ಬಿ, ಪ್ರಸ್ತುತಿ: ಜಿ.ಶಾಂತಕುಮಾರ್

ಮಧ್ಯಾಹ್ನ: 12.35 ದೇವರನಾಮ, 12.45 ಚಿತ್ರಗೀತೆಗಳು, 1.00 ಪ್ರಗತಿಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಕನ್ನಡ ಚಿತ್ರಗೀತೆಗಳು, 4.00 ಜನಪದ ಸಂಗೀತ, 4.30 ಚರ್ಚೆ, 6.10 ಸೀರೆಯ ಸೊಬಗು–ವೈವಿಧ್ಯಮಯ ಸೀರೆಗಳ ಪರಿಚಯ, ಪ್ರಸ್ತುತಿ: ಜಯಶ್ರೀ ಹೆಗಡೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ತೋಟದ ಬೆಳೆಗಳು ಹಾಗೂ ಸಂಬಾರು ಬೆಳೆಗಳ ಮೌಲ್ಯವರ್ಧನಾ ತಾಂತ್ರಿಕತೆಗಳು ಈ ಕುರಿತು ಮೈಸೂರಿನ ಕೇಂದ್ರ ಆಹಾರ ತಂತ್ರಜ್ಞಾನ ಸಂಶೋಧನಾಲಯದ ವಿಜ್ಞಾನಿ ಡಾ.ಪುಷ್ಪಾಮೂರ್ತಿ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್.ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ–ಮೈಸೂರಿನ ಸರ್ಕಾರಿ ಶಿಕ್ಷಕರ ಶಿಕ್ಷಣ ಕಾಲೇಜಿನ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ವೈವಿಧ್ಯ, 9.30 ಕನ್ನಡ ಭಾರತಿ, 10.00 ನಾಟಕ 'ಹೂ ಕಚ್ಚಿದ ತರುಣ', ಮೂಲಕಥೆ –ಪಿರಾಂಡೆಲೊ, ಕನ್ನಡಾನುವಾದ–ವಿ.ಬಸವರಾಜ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 10.30–ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜನವರಿ 30 ಗುರುವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 282 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮಹಾ ಕುಂಭಮೇಳದಲ್ಲಿ ಮೌನಿ ಅಮಾವಾಸ್ಯೆ ಪವಿತ್ರ ಸ್ನಾನಕ್ಕೆ ಒಮ್ಮೆಲೆ ನುಗ್ಗಿದಾಗ ನಡೆದೇ ಹೋಯ್ತು ಘೋರ ದುರಂತ; ತ್ರಿವೇಣಿ ಸಂಗಮದ ಬಳಿ ಕಾಲ್ತುಳಿತ

ಕರ್ನಾಟಕದ ನಾಲ್ವರು ಸೇರಿ 30 ಮಂದಿ ಸಾವು

● 90 ಮಂದಿಗೆ ಗಾಯ ● 25 ಜನರ ಗುರುತು ಪತ್ತೆ ● ಸತ್ತವರ ಕುಟುಂಬಕ್ಕೆ 25 ಲಕ್ಷ ಪರಿಹಾರ ● ಘಟನೆ ಸಂಬಂಧ ನ್ಯಾಯಾಂಗ ತನಿಖೆ ● ನೆರವಿಗೆ 1920 ಸಹಾಯವಾಣಿ





ಪ್ರಯಾಗ್‌ರಾಜ್‌ನ ಕಾಲ್ತುಳಿತ ಪ್ರದೇಶದಲ್ಲಿ ರಣರಂಗದೋಪಾದಿಯ ದೃಶ್ಯ. ಮತ್ತೊಂದು ಚಿತ್ರದಲ್ಲಿ ಗಾಯಾಳುಗಳ ಆಸ್ಪತ್ರೆಗೆ ಕೊಂಡೊಯ್ಯುತ್ತಿರುವುದು.

ಪ್ರಯಾಗ್‌ರಾಜ್, ಜ.29– ಬುಧವಾರ ಮೌನಿ ಅಮಾವಾಸ್ಯೆ. ಈ ದಿನ ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಲು ಲಕ್ಷಾಂತರ ಜನರು ಮಹಾ ಕುಂಭಮೇಳಕ್ಕೆ ಧಾವಿಸಿದ್ದರು. ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಈ ಧಾರ್ಮಿಕ ಸಮ್ಮೇಳನದಲ್ಲಿ ಸಕಲ ವ್ಯವಸ್ಥೆ ಹಾಗೂ ಸೂಕ್ತ ಭದ್ರತೆಗಳನ್ನು ಸರ್ಕಾರ ಮಾಡಿದ್ದರೂ ಆ ಎಲ್ಲವನ್ನೂ ದಾಟಿ ನಿಯಂತ್ರಣಕ್ಕೆ ಸಿಗದಷ್ಟು ಭಕ್ತರ ದಂಡು ಸಂಗಮದ ಕಡೆಗೆ ಸಾಗಿದ ಪರಿಣಾಮ ಕಾಲ್ತುಳಿತ ಉಂಟಾಗಿದೆ. ಏನಾಗುತ್ತಿದೆ ಎಂಬುದು ಗೊತ್ತಾಗುವುದರೊಳಗೆ ಒಬ್ಬರ ಮೇಲೆ ಒಬ್ಬರು ತುಳಿದು ಮುಂದೆ ಸಾಗಿದ್ದಾರೆ. ಈ ಘಟನೆಯಲ್ಲಿ ಕರ್ನಾಟಕದ ನಾಲ್ವರು ಸೇರಿ 30 ಮಂದಿ ಸಾವನ್ನಪ್ಪಿದ್ದು, 90 ಮಂದಿ ಗಾಯಗೊಂಡಿದ್ದಾರೆ.

ಕರ್ನಾಟಕದವರಿಗೆ ಸಹಾಯವಾಣಿ: 080–22340676

ದುರಂತದಲ್ಲಿ ಸಾವಿಗೀಡಾದವರಲ್ಲಿ 25 ಮಂದಿಯ ಗುರುತು ಪತ್ತೆ ಹಚ್ಚಲಾಗಿದೆ. ಸತ್ತವರ ಕುಟುಂಬಕ್ಕೆ 25 ಲಕ್ಷ ಪರಿಹಾರವನ್ನು ■ 6ನೇ ಪುಟಕ್ಕೆ

ಮಹಾ ಕುಂಭಮೇಳಕ್ಕೆ ತೆರಳಿದ ಕೆಆರ್‌ಎಸ್ ವೇಣುಗೋಪಾಲಸ್ವಾಮಿ ದೇವಸ್ಥಾನದ ಅರ್ಚಕ, ಅವರ ಸ್ನೇಹಿತ ಅಪಘಾತದಲ್ಲಿ ಸಾವು



ರಾಮಕೃಷ್ಣ ಶರ್ಮಾ ಅರುಣ್ ಶಾಸ್ತ್ರಿ

ಮೈಸೂರು, ಜ.29–ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ತೆರಳಿ ಹಿಂತಿರುಗುತ್ತಿದ್ದಾಗ ಅಪಘಾತದಲ್ಲಿ ಕೆಆರ್‌ಎಸ್ ಹಿನ್ನೀರಿನಲ್ಲಿರುವ ವೇಣುಗೋಪಾಲಸ್ವಾಮಿ ದೇವಸ್ಥಾನದ ಸಹಾಯಕ ಅರ್ಚಕ ಮತ್ತು ಅವರ ಸ್ನೇಹಿತ ಸಾವನ್ನಪ್ಪಿದ್ದಾರೆ.

ವೇಣುಗೋಪಾಲಸ್ವಾಮಿ ದೇವಸ್ಥಾನದ ಸಹಾಯಕ ಅರ್ಚಕ ಎಸ್.ಪಿ.ರಾಮಕೃಷ್ಣ ಶರ್ಮಾ(31) ಮತ್ತು ಅವರ ಸ್ನೇಹಿತ ಅರುಣ್ ಶಾಸ್ತ್ರಿ(38) ಅಪಘಾತದಲ್ಲಿ ಮೃತಪಟ್ಟವರಾಗಿದ್ದು, ಇವರಿಬ್ಬರೂ ಅವಿವಾಹಿತರು. ಕುಂಭಮೇಳಕ್ಕಾಗಿ ಪ್ರಯಾಗ್‌ರಾಜ್‌ಗೆ ಸ್ನೇಹಿತನೊಂದಿಗೆ ಕಾರಿನಲ್ಲಿ ತೆರಳಿದ್ದ ಇವರು, ಜ.26ರಂದು ಪ್ರಯಾಗ್‌ರಾಜ್‌ನಿಂದ ವಾರಣಾಸಿಗೆ ತೆರಳುತ್ತಿದ್ದ ವೇಳೆ ಮಿರ್ಜಾಪುರ ಎಂಬಲ್ಲಿ ಇವರ ಕಾರಿಗೆ ಲಾರಿ ■ 6ನೇ ಪುಟಕ್ಕೆ

ಕಾಲ್ತುಳಿತದಲ್ಲಿ ತಾಯಿ, ಮಗಳು ಸೇರಿ ಬೆಳಗಾವಿಯ ನಾಲ್ವರ ದುರ್ಮರಣ



ಜ್ಯೋತಿ ಮೇಘಾ ಅರುಣ್ ಕೋಪರ್ಡೆ ಮಹಾದೇವಿ

ಬೆಳಗಾವಿ: ಮಹಾ ಕುಂಭಮೇಳದಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಬೆಳಗಾವಿಯ ತಾಯಿ–ಮಗಳು ಸೇರಿದಂತೆ ನಾಲ್ವರು ಸಾವಿಗೀಡಾಗಿದ್ದಾರೆ. ಮೃತರನ್ನು ವಡಗಾವಿ ನಿವಾಸಿ ಜ್ಯೋತಿ ಹತ್ತರವಾಠ್ (50), ಮೇಘಾ ಹತ್ತರವಾಠ್, ಅರುಣ್ ಕೋಪರ್ಡೆ ಹಾಗೂ ಮಹಾದೇವಿ ಎಂದು ಗುರುತಿಸಲಾಗಿದೆ. ಕುಂಭಮೇಳದಲ್ಲಿ ಕಾಲ್ತುಳಿತದ ಬಳಿಕ ಇಬ್ಬರನ್ನೂ ಪ್ರಯಾಗ್‌ರಾಜ್‌ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಇಬ್ಬರೂ ಸಾವಿಗೀಡಾಗಿದ್ದಾರೆ. ಬೆಳಗಾವಿಯಲ್ಲಿರುವ ಕುಟುಂಬಸ್ಥರಿಗೆ ಇಂದು (ಬುಧವಾರ) ಬೆಳಗ್ಗೆಯಿಂದ ಇಬ್ಬರು ಸಂಪರ್ಕಕ್ಕೆ ಸಿಕ್ಕಿರಲಿಲ್ಲ. ಫೋನ್ ರಿಂಗ್ ಆಗುತ್ತಿದ್ದರೂ, ರಿಸೀವ್ ಮಾಡದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಆತಂಕದಲ್ಲಿದ್ದರು. ಮೂರು ದಿನಗಳ ಹಿಂದೆ ಸಾಯಿರಥ ಟ್ರಾವೆಲ್ ಏಜೆನ್ಸಿ ಮೂಲಕ 13 ಜನರ ತಂಡದಲ್ಲಿ ಅವರು ತೆರಳಿದ್ದರು ಎಂದು ತಿಳಿದು ಬಂದಿದೆ. ಕಾಲ್ತುಳಿತದಲ್ಲಿ ಸರೋಜಿನಿ ನಡುವಿನಹಳ್ಳಿ, ಕಾಂಚನ್ ಕೋಪಾರ್ಡೆ ಸೇರಿದಂತೆ ಇನ್ನೂ ಕೆಲವರು ಗಾಯಗೊಂಡಿದ್ದಾರೆ ಎಂದು ತಿಳಿದುಬಂದಿದೆ.

ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ

ಬೆಂಗಳೂರು ಅರಮನೆ ಸರ್ಕಾರದ ಸ್ವಾಧೀನಕ್ಕೆ

ಬೆಂಗಳೂರು, ಜ.29–ಮೈಸೂರು ರಾಜಮನೆತನಕ್ಕೆ ಸೇರಿದ ಬೆಂಗಳೂರು ಅರಮನೆ ಭೂ ಬಳಕೆ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕಳೆದ ಸಂಪುಟ ಸಭೆಯಲ್ಲಿ ರಾಜ್ಯ ಸರ್ಕಾರ ಕೈಗೊಂಡಿದ್ದ ನಿರ್ಣಯಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಇಂದು (ಜ.29) ಅಂಕಿತ ಹಾಕಿದ್ದಾರೆ. ಈ ಮೂಲಕ ಬೆಂಗಳೂರು ಅರಮನೆಯ 472 ಎಕರೆ 16 ಗುಂಟೆ ಭೂಮಿ ಬಳಕೆ ಹಾಗೂ ನಿಯಂತ್ರಿಸುವ ಅಧಿಕಾರವನ್ನು ರಾಜ್ಯ ಸರ್ಕಾರ ತನ್ನದಾಗಿಸಿಕೊಂಡಿದೆ. ಅರಮನೆಗೆ ಹೊಂದಿಕೊಂಡಂತೆ ರಸ್ತೆ ಅಗಲೀಕರಣಕ್ಕಾಗಿ ಗುರುತಿಸಿದ್ದ ಭೂಮಿಗೆ ಸುಪ್ರೀಂಕೋರ್ಟ್ ■ 6ನೇ ಪುಟಕ್ಕೆ

ಮೈಸೂರು ಪಾಲಿಕೆ ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ

ಯಾವುದೇ ದಾಖಲೆಗಳಿಲ್ಲದ ನಿವೇಶನಗಳಿಗೆ 'ಬಿ' ಖಾತಾ

● ಒಮ್ಮೆಗೆ ಅನ್ವಯವಾಗುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ● ಅಂತೂ ಅಕ್ರಮ ನಿವೇಶನಗಳಿಗೆ ಸಕ್ರಮ ಭಾಗ್ಯ ● ಏಪ್ರಿಲ್ ಅಂತ್ಯಕ್ಕೆ ಈ ಪ್ರಕ್ರಿಯೆ ಪೂರ್ಣಗೊಳಿಸಲು ಸೂಚನೆ ● ಇನ್ನು ಮುಂದೆ ಅಕ್ರಮ ಬಡಾವಣೆಗಳು ತಲೆ ಎತ್ತದಂತೆ ಕಡಿವಾಣಕ್ಕೆ ತಾಕೀತು

ಬೆಂಗಳೂರು, ಜ.29(ಕೆಎಂಶಿ)– ಬೆಂಗಳೂರು ಮಹಾ ನಗರಪಾಲಿಕೆ ಹೊರತುಪಡಿಸಿ ರಾಜ್ಯದ ಉಳಿದ ನಗರಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳ ಪ್ರದೇಶ ವ್ಯಾಪ್ತಿಯಲ್ಲಿ ಯಾವುದೇ ದಾಖಲೆಗಳಿಲ್ಲದ ನಿವೇಶನಗಳಿಗೆ 'ಬಿ' ಖಾತಾ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಮಾಡಿದ್ದಾರೆ.

ಒಂದು ಬಾರಿಗೆ ಅನ್ವಯವಾಗುವಂತೆ ಈ ಆದೇಶ ಹೊರಡಿಸಿ, ಎಲ್ಲ ಅಕ್ರಮ ನಿವೇಶನಗಳನ್ನು ಸಕ್ರಮಗೊಳಿಸಿ ಇನ್ನು ಮುಂದೆ ರಾಜ್ಯದ ಯಾವುದೇ ಭಾಗದಲ್ಲಿ ಅನಧಿಕೃತ ಬಡಾವಣೆ ತಲೆ ಎತ್ತದಂತೆ ನೋಡಿಕೊಳ್ಳಿ ಎಂದು ಮುಖ್ಯಕಾರ್ಯದರ್ಶಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ಸಭೆಯಲ್ಲೇ ಈ ಆದೇಶ ಮಾಡಿದ ಮುಖ್ಯಮಂತ್ರಿ ಅವರು, ಬರುವ ಏಪ್ರಿಲ್ ಅಂತ್ಯದ ವೇಳೆಗೆ ಎಲ್ಲಾ ಅನಧಿಕೃತ ನಿವೇಶನಗಳಿಗೂ ದಾಖಲೆ ನೀಡಿ ಎಂದಿದ್ದಾರೆ. ಬೆಂಗಳೂರು ನಗರ ಹೊರತುಪಡಿಸಿ ಮೈಸೂರು, ಶಿವಮೊಗ್ಗ, ದಾವಣಗೆರೆ, ಮಂಗಳೂರು, ಹುಬ್ಬಳ್ಳಿ–ಧಾರವಾಡ ಸೇರಿದಂತೆ ರಾಜ್ಯದ ಎಲ್ಲಾ ನಗರಪಾಲಿಕೆಗಳು ಹಾಗೂ ನಗರಸಭೆ ವ್ಯಾಪ್ತಿಯಲ್ಲಿನ ನಿವೇಶನಗಳಿಗೆ ■ 6ನೇ ಪುಟಕ್ಕೆ



ಮೈಕ್ರೋ ಫೈನಾನ್ಸ್ ಕಿರುಕುಳ; ಮಂಡ್ಯದಲ್ಲಿ ಇಬ್ಬರು ಆತ್ಮಹತ್ಯೆ



ಪ್ರೇಮಾ ಸಂಜಯ್

ಮಂಡ್ಯ: ಮುಖ್ಯಮಂತ್ರಿ ಸಿದ್ದರಾಮಯ್ಯ ಗುಡುಗಿದರೂ, ರಾಜ್ಯದಲ್ಲಿ ದಿನದಿಂದ ದಿನಕ್ಕೆ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ತಪ್ಪಿಲ್ಲ. ಮಂಡ್ಯ ಜಿಲ್ಲೆಯಲ್ಲಿ ಯುವ ರೈತ ಸೇರಿದಂತೆ ಇಬ್ಬರು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಮಳವಳ್ಳಿ ತಾಲೂಕು ದುಗ್ಗನಹಳ್ಳಿ ನಿವಾಸಿ ಸಂಜಯ್ (34) ಮತ್ತು ಹಲಗೂರು ಸಮೀಪದ ಹೊನ್ನಾಪುರ ಗ್ರಾಮದ ಪ್ರೇಮಾ(52) ಮೈಕ್ರೋ ಫೈನಾನ್ಸ್‌ನವರ ಕಿರುಕುಳ ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಯುವ ರೈತ ಆತ್ಮಹತ್ಯೆ: ಮೈಕ್ರೋ ಫೈನಾನ್ಸ್ ಹಾಗೂ ಸಾಲಕೊಟ್ಟ ಖಾಸಗಿ ವ್ಯಕ್ತಿಗಳ ಕಿರುಕುಳ ತಾಳಲಾರದೆ ಯುವ ರೈತ ಮಳವಳ್ಳಿ ತಾಲೂಕು ದುಗ್ಗನಹಳ್ಳಿ ಗ್ರಾಮದ ಸಂಜಯ್(34) ಆತ್ಮಹತ್ಯೆಗೆ ಶರಣಾಗಿದ್ದಾರೆ. ಕೃಷಿಗೆ ಇತ್ತೀಚೆಗೆ ಎರಡು ಬೋರ್‌ವೆಲ್ ಕೊರೆಸಿದ್ದ ಸಂಜಯ್, ಅವು ವಿಫಲವಾಗಿದ್ದವು. ಅದಕ್ಕಾಗಿ ಮೈಕ್ರೋ ಫೈನಾನ್ಸ್‌ನಲ್ಲಿ ಲಕ್ಷ ರೂ. ಸಾಲ ಪಡೆದಿದ್ದ. ಇದಲ್ಲದೇ ಸೊಸೈಟಿಯಲ್ಲಿ 50 ಸಾವಿರ ರೂ. ಸೇರಿದಂತೆ ಖಾಸಗಿ ವ್ಯಕ್ತಿಗಳಿಂದ 10 ಲಕ್ಷ ರೂ. ಸಾಲ ಮಾಡಿಕೊಂಡಿದ್ದ.

ಮೃತ ಸಂಜಯ್‌ಗೆ ಖಾಸಗಿ ವ್ಯಕ್ತಿಗಳ ಜೊತೆಗೆ ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳಿಂದಲೂ ಸಾಲ ಮರುಪಾವತಿಗೆ ಕಿರುಕುಳ ಹೆಚ್ಚಾದ ಹಿನ್ನೆಲೆಯಲ್ಲಿ ಮನನೊಂದು ನೇಣಿಗೆ ಶರಣಾಗಿದ್ದಾರೆ. ಘಟನೆ ಸಂಬಂಧ ಮಳವಳ್ಳಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಹಿಳೆ ಆತ್ಮಹತ್ಯೆ: ಮತ್ತೊಂದು ಪ್ರಕರಣದಲ್ಲಿ ಮೈಕ್ರೋಫೈನಾನ್ಸ್ ■ 6ನೇ ಪುಟಕ್ಕೆ

ಮೈಸೂರು ನಗರದ ಸಮಗ್ರ ಅಭಿವೃದ್ಧಿಗೆ ಕಾರ್ಯತಂತ್ರ

ಮುಡಾದಿಂದ 1688 ಕೋಟಿ ಅಂದಾಜು ವೆಚ್ಚದ ಯೋಜನೆ ರೂಪಿಸಲು ಸೂಚನೆ

ಪ್ರಸ್ತಾವನೆ ಸಲ್ಲಿಸುವಂತೆ ಮೈಸೂರು ಜಿಲ್ಲಾಧಿಕಾರಿಗಳಿಗೆ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಪತ್ರ

■ ಪುಟ–11

ಮಹಾರಾಣಿ ವಿಜ್ಞಾನ ಕಾಲೇಜು ಕಟ್ಟಡ ಕುಸಿತ: ಅವಶೇಷದಡಿ ಸಿಲುಕಿದ್ದ ಕಾರ್ಮಿಕ ಸಾವು

ಸತತ ಕಾರ್ಯಾಚರಣೆಯಲ್ಲಿ ಮುಂಜಾನೆ ವೇಳೆಗೆ ಶವ ಹೊರತೆಗೆದ ರಕ್ಷಣಾ ತಂಡ





ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಪಾರಂಪರಿಕ ಕಟ್ಟಡ ಕುಸಿದು ಅವಶೇಷಗಳಡಿಯಿಂದ ಕಾರ್ಮಿಕನ ಶವ ಹೊರತರುತ್ತಿರುವುದು.

ಸಿಎಂ ಪರಿಹಾರ ನಿಧಿಯಿಂದ 5 ಲಕ್ಷ ರೂ.



ಲಕ್ಷ್ಮೀಕಾಂತರೆಡ್ಡಿ

ಮೈಸೂರು,ಜ.29(ಆರ್‌ಕೆ)–ಮಹಾರಾಣಿ ವಿಜ್ಞಾನ ಕಾಲೇಜು ಕಟ್ಟಡ ಕುಸಿತದಿಂದಾಗಿ ಅವಶೇಷಗಳಡಿ ಸಿಲುಕಿ ಸಾವನ್ನಪ್ಪಿರುವ ಕಾರ್ಮಿಕ ಸದ್ದಾಂ ಹುಸೇನ್ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 5 ಲಕ್ಷ ರೂ. ಕೊಡಿಸುವುದಾಗಿ ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ. ಈ ಕುರಿತು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಜಿಲ್ಲಾಧಿಕಾರಿಗಳು, ಘಟನೆಯಲ್ಲಿ ಅವಶೇಷಗಳಡಿ ಕಾರ್ಮಿಕ ಸಾವನ್ನಪ್ಪಿದ್ದಾರೆಂಬುದು ತಿಳಿದ ತಕ್ಷಣ ನಾವು ಮುಖ್ಯಮಂತ್ರಿಗಳಿಗೆ ವಿಷಯ ತಿಳಿಸುತ್ತಿದ್ದಂತೆಯೇ ಸಿಎಂ ಪರಿಹಾರ ನಿಧಿಯಿಂದ 5 ಲಕ್ಷ ರೂ. ಕೊಡುವುದಾಗಿ ಭರವಸೆ ನೀಡಿದ್ದಾರೆ ಎಂದರು. ಸಿಎಂ ಕಚೇರಿಗೆ ಪ್ರಸ್ತಾವನೆ ಸಲ್ಲಿಸಿ ಮೃತ ಕಾರ್ಮಿಕರ ಕುಟುಂಬಕ್ಕೆ ಪರಿಹಾರದ ಹಣ ಕೊಡಿಸುತ್ತೇವೆ ಎಂದ ಲಕ್ಷ್ಮೀಕಾಂತ ರೆಡ್ಡಿ, ಜೊತೆಗೆ ಕಟ್ಟಡ ನೆಲಸಮ ಮಾಡುತ್ತಿರುವ ಗುತ್ತಿಗೆದಾರನಿಂದಲೂ ಪರಿಹಾರ ಕೊಡಿಸಲಾಗಿದೆ. ಅವರ ಕುಟುಂಬಕ್ಕೆ ಮಾನವೀಯತೆ ದೃಷ್ಟಿಯಿಂದ ಜಿಲ್ಲಾಡಳಿತವು ನೆರವಾಗಲಿದೆ ಎಂದರು. ಕುಸಿತವಾಗಿರುವುದರಿಂದ ಕಾಲೇಜು ಕಟ್ಟಡದ ನೆಲಸಮ ಕಾಮಗಾರಿ ಸದ್ಯಕ್ಕೆ ಸ್ಥಗಿತವಾಗಿದ್ದು, ಮುಂದೆ ಏನು ಮಾಡಬೇಕೆಂಬುದನ್ನು ತಜ್ಞರು, ಅಧಿಕಾರಿಗಳೊಂದಿಗೆ ಚರ್ಚಿಸಿದ ಬಳಿಕ ನಿರ್ಧರಿಸಲಾಗುವುದು ಎಂದರು.



ಸದ್ದಾಂ ಹುಸೇನ್

ಮೈಸೂರು, ಜ.29 (ಆರ್‌ಕೆ)– ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ಪಾರಂಪರಿಕ ಕಟ್ಟಡ ಕುಸಿದು ಅವಶೇಷಗಳಡಿ ಸಿಲುಕಿದ್ದ ಕಾರ್ಮಿಕ ಅಸುನೀಗಿದ್ದಾರೆ. ಇಂದು ಮುಂಜಾನೆ 2.30 ರಲ್ಲಿ ಶವವನ್ನು ಹೊರತೆಗೆಯಲಾಗಿದೆ.

ಮೈಸೂರಿನ ತನ್ವೀರ್ ಸೇಠ್‌ನಗರದ ನಿವಾಸಿ ಸದ್ದಾಂ ಹುಸೇನ್ (31) ದುರಂತ ಸಾವಿಗೀಡಾದ ಕಟ್ಟಡ ಕಾರ್ಮಿಕ. ಎರಡು ಹೆಣ್ಣು ಮಕ್ಕಳ ತಂದೆಯಾದ ಸದ್ದಾಂ, ನಿತ್ಯವೂ ಒಂದಲ್ಲ ಒಂದು ಕಡೆ ಕೂಲಿ ಮಾಡುತ್ತಿದ್ದರು. ಕಳೆದ ಎರಡು ದಿನದಿಂದ ಮಹಾರಾಣಿ ವಿಜ್ಞಾನ ಕಾಲೇಜು ಕಟ್ಟಡ ನೆಲಸಮ ಕೆಲಸದಲ್ಲಿ ನಿರತನಾಗಿದ್ದ ಅವರು ಮಂಗಳವಾರ ಸಂಜೆ ಇತರೆ ಕಾರ್ಮಿಕರು ಟೀ ಕುಡಿಯಲೆಂದು ಹೊರಗೆ ಬಂದ ವೇಳೆ, ಕಟ್ಟಡದ ಕಿಟಕಿಯೊಂದನ್ನು ತೆರವುಗೊಳಿಸುತ್ತಿದ್ದಾಗ ಕಟ್ಟಡದ ಗೋಡೆ ಹಾಗೂ ತಾರಸಿ ಕುಸಿದು ಬಿದ್ದಿತ್ತು. ಪರಿಣಾಮ, ಸದ್ದಾಂ ಅವಶೇಷದಡಿ ಸಿಲುಕಿಕೊಂಡಿದ್ದರು. ವಿಷಯ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಪೊಲೀಸರು ಕಾರ್ಯಾಚರಣೆ ಆರಂಭಿಸಿ, ನಿರಂತರ ಶೋಧನೆ ನಂತರ ಇಂದು ಮುಂಜಾನೆ ಸದ್ದಾಂ ಶವ ಅವಶೇಷಗಳಡಿ ದೊರೆತಿದೆ. ದೇಹ ಸಂಪೂರ್ಣ ನಜ್ಜುಗುಜ್ಜಾಗಿತ್ತು. ಪ್ರಕರಣ ದಾಖಲಿಸಿಕೊಂಡಿರುವ ಲಕ್ಷ್ಮೀಪುರಂ ಠಾಣೆ ಇನ್‌ಸ್ಪೆಕ್ಟರ್ ರವಿಶಂಕರ್ ಹಾಗೂ ಸಿಬ್ಬಂದಿ ಮಹಜರು ನಡೆಸಿ, ಶವವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸಾಗಿಸಿ, ಮರಣೋತ್ತರ ಪರೀಕ್ಷೆ ಬಳಿಕ ಮಧ್ಯಾಹ್ನ ವಾರಸುದಾರರಿಗೆ ದೇಹವನ್ನು ಒಪ್ಪಿಸಿದರು. ಈ ವೇಳೆ ಶವಾಗಾರದ ಬಳಿ ನೆರೆದಿದ್ದ ಸುಮಾರು 50ಕ್ಕೂ ಹೆಚ್ಚು ಕಾರ್ಮಿಕರು ಹಾಗೂ ಸದ್ದಾಂ ಹುಸೇನ್ ಸಂಬಂಧಿಕರು ಕುಟುಂಬಕ್ಕೆ ಮೂಲಾಧಾರವಾಗಿದ್ದ ಸದ್ದಾಂ ಸಾವಿನಿಂದ ಪತ್ನಿ, ಇಬ್ಬರು ಪುತ್ರಿಯರು ಬೀದಿ ಪಾಲಾದಂತಾಗಿದ್ದು, ■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗುಂಡ : ಸರ್, ನನ್ನ ಫೇಲ್ ಮಾಡಿ, ನಿಮ್ಮ ಕಾಲು ಹಿಡಿತೀನಿ...
ಮೇಷ್ಟ್ರು : ಯಾಕೋ? ಎಲ್ರು ಪಾಸ್ ಮಾಡಿ ಅಂದ್ರೆ, ನೀನು ಫೇಲ್ ಮಾಡಿ ಅಂತೀಯಾ?
ಗುಂಡ : ನಮ್ಮಪ್ಪ ಪಾಸ್ ಆದ್ರೆ ಕಾಲೇಜಿಗೆ ಹಾಕ್ತೀನಿ, ಫೇಲ್ ಆದ್ರೆ ಮದುವೆ ಮಾಡ್ತೀನಿ ಅಂದಿದ್ದಾರೆ ಸಾರ್...

ಮೈಸೂರು ಮಿತ್ರ

ಗುರುವಾರ, 30 ಜನವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಬಯಸಿದ್ದು ಸಿಗಬೇಕಾದರೆ ಯೋಗವಿರಬೇಕು,
ಸಿಕ್ಕಿದ್ದನ್ನು ಉಳಿಸಿಕೊಳ್ಳಲು ಯೋಗ್ಯತೆ ಇರಬೇಕು. – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು
{ ನಿನ್ನಲ್ಲಿ ನೀ ಹುಡುಕು,
ಅರಿಷಡ್ವರ್ಗಗಳ ಹೊರ ಹಾಕು.

ನಿಮ್ಮ ಪತ್ರಗಳು

■ ಬಸ್ ಟಿಕೆಟ್ ದರ ಏರಿಕೆ ಜನಸಾಮಾನ್ಯರಿಗೆ ತೊಂದರೆ



ಮಾನ್ಯರೆ,

ರಾಜ್ಯ ಸರ್ಕಾರವು ಕೊಟ್ಟ ಮಾತಿನಂತೆ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಅದರಲ್ಲಿ ಶಕ್ತಿ ಯೋಜನೆಯೂ ಒಂದಾಗಿದ್ದು, ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣದ ಯೋಜನೆಯಾಗಿದೆ. ಆದರೆ ಸರ್ಕಾರವು ಯೋಜನೆಗಳಿಗೆ ಹಣಕಾಸು ಸರಿದೂಗಿಸಲು ದಿನ ಕಳೆದಂತೆ ಎಲ್ಲಾ ತರದಲ್ಲೂ ದರ ಏರಿಕೆಯಾಗುತ್ತಿದೆ. ಈಗ ಬಸ್ ಟಿಕೆಟ್ ದರ ಏರಿಕೆಯಿಂದ ಜನಸಾಮಾನ್ಯ ಪುರುಷ ಪ್ರಯಾಣಿಕರು ದಂಡ ತೆರಬೇಕಾಗಿದೆ. ಇದಕ್ಕೆ ರಾಜ್ಯದ ಹಲವೆಡೆ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಮೈಸೂರಿನ ಸುತ್ತಮುತ್ತಲಿನ ಹಳ್ಳಿಗಳಿಗೆ ನಿಗದಿತ ಸಮಯಕ್ಕೆ ಬಸ್ ವ್ಯವಸ್ಥೆ ಇಲ್ಲದೆ ಪರದಾಡಬೇಕಾಗಿದೆ. ಹಲವು ಕಡೆ ಕಾರ್ಮಿಕರು ಹಾಗೂ ವಿದ್ಯಾರ್ಥಿಗಳು ಬಸ್ ಇಲ್ಲದೆ ಸಂಕಷ್ಟಪಡುತ್ತಿದ್ದಾರೆ. ಮತ್ತು ಬಸ್‌ಗಳ ಸಂಖ್ಯೆ ತೀರಾ ವಿರಳ ಇದೆ. ವಿದ್ಯಾರ್ಥಿಗಳಿಗೂ ಮತ್ತು ಕಾರ್ಮಿಕರಿಗೂ ಸಂಜೆ ಸಮಯದಲ್ಲಿ ಹಲವು ಮಾರ್ಗಕ್ಕೆ ಸರಿಯಾದ ಬಸ್ ವ್ಯವಸ್ಥೆ ಇಲ್ಲದಿರುವುದು ಮತ್ತೊಂದು ಸಮಸ್ಯೆಯಾಗಿದೆ. ಬಸ್ ವ್ಯವಸ್ಥೆ ಸಂಚಾರ ಕಡಿಮೆ ಇರುವ ಕಡೆ ಹೆಚ್ಚಿನ ಮಾರ್ಗದ ಬಸ್ ವ್ಯವಸ್ಥೆ ಒದಗಿಸಿ ಜನಸಾಮಾನ್ಯರ ಪ್ರಯಾಣಕ್ಕೆ ಅನುವು ಮಾಡಿಕೊಡಬೇಕು ಜೊತೆಗೆ ಸರ್ಕಾರವು ವಿದ್ಯಾರ್ಥಿಗಳಿಗೆ ಹಾಗೂ ಕಾರ್ಮಿಕರಿಗೆ ಉಪಯೋಗವಾಗುವ ಯೋಜನೆಯನ್ನು ವಿಸ್ತರಿಸಬೇಕು.

–ಕಿಶೋರ್ ಸಿ. ಮೈಸೂರು

■ ಮೊದಲೇ ಗೊತ್ತಿದ್ದರೆ....?

ಮಾನ್ಯರೆ,

'ರಾಬರಿ ಆಗುವ ವಿಷಯ ಮೊದಲೇ ಗೊತ್ತಾಗಿದ್ದರೆ ತಡೆಯಬಹುದು' ಎಂದಿದ್ದಾರೆ ಗೃಹಸಚಿವರು! ರಾಬರಿ ಮಾಡುವ ವಿಷಯ ಪೊಲೀಸರಿಗೆ ಗೊತ್ತಾಗಿದೆ ಎಂದು ಡಕಾಯಿತರಿಗೆ ಗೊತ್ತಾದರೆ ಅವರು ಡಕಾಯಿತಿಯ ಮುಹೂರ್ತವನ್ನು ಬದಲಾಯಿಸುವುದಿಲ್ಲವೇ? ರಾಬರಿ ಮಾಡುವ ವಿಷಯ ಪೊಲೀಸರಿಗೆ ತಿಳಿದಿಲ್ಲ ಎಂದರೆ ಅದು ಪೊಲೀಸರ ವೈಫಲ್ಯವಲ್ಲವೇ? ಡಕಾಯಿತರು ರಾಬರಿ ಮಾಡುವ ವಿಷಯವನ್ನು ಮೊದಲೇ ಪೊಲೀಸರಿಗೆ ತಿಳಿಸುತ್ತಾರೆಯೇ?

ದರೋಡೆ ನಡೆಯುವ ವಿಷಯ ಪೊಲೀಸರಿಗೆ ತಿಳಿಯುವುದೋ ಇಲ್ಲವೋ ಗೊತ್ತಿಲ್ಲ. ಆದರೆ ಪೊಲೀಸರು ದರೋಡೆಕೋರರ ವಿರುದ್ಧ ಕಾರ್ಯಾಚರಣೆ ನಡೆಸುತ್ತಾರೆಂಬ ವಿಷಯ ಮಾತ್ರ ದರೋಡೆಕೋರರಿಗೆ ಮೊದಲೇ ತಿಳಿಯುತ್ತದೆ.

'ಪೊಲೀಸರು ನಮ್ಮನ್ನು ಹಿಡಿಯುತ್ತಾರೆ ಎಂಬ ವಿಷಯ ಮೊದಲೇ ಗೊತ್ತಾಗಿದ್ದರೆ ನಾವು ದರೋಡೆ ಮಾಡುತ್ತಲೇ ಇರಲಿಲ್ಲ' ಎಂದು ದರೋಡೆಕೋರರು ಹೇಳಿದರೆ ಎಷ್ಟು ಹಾಸ್ಯಾಸ್ಪದವೋ..... 'ದರೋಡೆಯ ವಿಷಯ ಮೊದಲೇ ಗೊತ್ತಿದ್ದರೆ ಅದನ್ನು ತಡೆಯಬಹುದಾಗಿತ್ತು' ಎಂಬ ಗೃಹ ಸಚಿವರ ಹೇಳಿಕೆಯೂ ಅಷ್ಟೇ ಹಾಸ್ಯಾಸ್ಪದ!

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

■ ಮಂದಗತಿ ಕಾಮಗಾರಿ : ಸಂಚಾರಕ್ಕೆ ತೊಂದರೆ

ಮಾನ್ಯರೆ,

ಮೈಸೂರಿನ ಚಾಮರಾಜಪುರಂ ದೇವಪಾರ್ಥಿವ ರಸ್ತೆ– ವಿಷ್ಣುವರ್ಧನ ರಸ್ತೆಯ ಮಧ್ಯದಲ್ಲಿರುವ ಬೀದಿಯಲ್ಲಿ ಪಾಲಿಕೆಯು ಒಳಚರಂಡಿಯ ಮ್ಯಾನ್‌ಹೋಲ್ ನಿರ್ಮಾಣ ಮಾಡುತ್ತಿದ್ದು, ಸುಮಾರು ಒಂದು ವಾರದ ಮೇಲಾದರೂ ಕಾಮಗಾರಿ ಮುಗಿಯದೆ ಮಂದಗತಿಯಲ್ಲಿ ಸಾಗುತ್ತಿದೆ. ಇಲ್ಲಿ ಓಡಾಡುವ ಜನ, ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಪಾಲಿಕೆಯ ಅಧಿಕಾರಿಗಳು ಈ ಕಡೆ ಸ್ವಲ್ಪ ಗಮನಹರಿಸಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಮನವಿ.

–ಕೊ.ಸು.ನರಸಿಂಹ ಮೂರ್ತಿ, ಹಿರಿಯ ನಾಗರಿಕ, ಮೈಸೂರು.

■ ರೈಲ್ವೆ ನಿಲ್ದಾಣ ವೃತ್ತದಲ್ಲಿ ಬೈಕ್, ಟ್ಯಾಕ್ಸಿ ಚಾಲಕರ ಮೇಲೆ ಅನುಚಿತ ವರ್ತನೆ

ಮಾನ್ಯರೆ,

ಮೈಸೂರಿನ ರೈಲ್ವೆ ನಿಲ್ದಾಣದ ವೃತ್ತದಲ್ಲಿ ಬೈಕ್, ಟ್ಯಾಕ್ಸಿ ಚಲಾಯಿಸುವವರ ಮೇಲೆ ಗುಂಪೊಂದು ಅನುಚಿತವಾಗಿ ವರ್ತಿಸುತ್ತಿದೆ.

ಬೈಕ್, ಟ್ಯಾಕ್ಸಿ ಚಲಾಯಿಸಿ ಬರುವ ವ್ಯಕ್ತಿಗಳನ್ನು ಗುಂಪಾಗಿ ಅಡ್ಡಗಟ್ಟಿ ಇಲ್ಲಿ ಬೈಕ್, ಟ್ಯಾಕ್ಸಿ ಚಲಾಯಿಸಬಾರದು ಎಂದು ಅವಾಚ್ಯ ಪದಗಳಿಂದ ನಿಂದಿಸುವುದು, ಹಲ್ಲೆ ಮಾಡುವುದು ಹಾಗೂ ಬೆದರಿಕೆ ಹಾಕುವುದು ಮಾಡುತ್ತಾರೆ. ಈ ಗುಂಪಿನ ಗೂಂಡಾ ವರ್ತನೆ ವಿರುದ್ಧ ಪೊಲೀಸರಿಗೆ ದೂರು ನೀಡಲು ಮುಂದಾದರೆ ಆ ಗುಂಪು ಬೈಕ್, ಟ್ಯಾಕ್ಸಿ ಚಾಲಕರ ವಿರುದ್ಧವಾಗಿಯೇ ಸುಳ್ಳು ಆರೋಪಗಳ ದೂರು ನೀಡುತ್ತದೆ. ಬೈಕ್, ಟ್ಯಾಕ್ಸಿ ಚಾಲಕರನ್ನು ಅಡ್ಡಗಟ್ಟಿ ಅವರಲ್ಲಿ ಭಯದ ಭೀತಿ ಸೃಷ್ಟಿಸಿ ಅಲ್ಲಿಂದ ಬೈಕ್, ಟ್ಯಾಕ್ಸಿ ಚಾಲಕರು ಹೋಗಲು ಬಿಡದೆ ಸುಮಾರು ಅರ್ಧ ತಾಸಿನವರೆಗೂ ಮಾನಸಿಕ ಹಾಗೂ ದೈಹಿಕವಾಗಿ ಹಿಂಸಿಸುತ್ತಾರೆ. ಬೈಕ್, ಟ್ಯಾಕ್ಸಿ ಚಾಲಕರನ್ನು ಬಿಡಬೇಕಾದರೆ ಅಲ್ಲಿ ಗುಂಪಾಗಿ ಇರುವ ಎಲ್ಲರಿಗೂ ಟೀ, ಸಿಗರೇಟ್ ಅಥವಾ ಮದ್ಯ ಕೊಡಿಸಬೇಕೆಂದು ದುಂಬಾಲು ಬೀಳುತ್ತಾರೆ.

ನಮ್ಮ ಪ್ರಜಾಪ್ರಭುತ್ವ ಸಮಾಜದಲ್ಲಿ ಎಲ್ಲರಿಗೂ ನ್ಯಾಯವಾಗಿ ದುಡಿದು ಬದುಕುವ ಹಕ್ಕಿದೆ. ನಮ್ಮ ಸಮಾಜದ ಕಾನೂನನ್ನು ಎಲ್ಲರೂ ಗೌರವಿಸಬೇಕು ಹಾಗೂ ಪಾಲಿಸಬೇಕಾದದ್ದು ನಮ್ಮ ಕರ್ತವ್ಯ. ಬೈಕ್, ಟ್ಯಾಕ್ಸಿ ಚಾಲಕರು ಕಾನೂನುಬಾಹಿರವಾಗಿ ಏನಾದರೂ ಬೈಕ್, ಟ್ಯಾಕ್ಸಿ ಚಲಾಯಿಸಿದರೆ ಅದರ ವಿರುದ್ಧ ಕ್ರಮ ಕೈಗೊಳ್ಳಲು ಮೈಸೂರು ನಗರ ಸಂಚಾರಿ ಪೊಲೀಸರಿದ್ದಾರೆ. ಈ ಗುಂಪು ನೈತಿಕ ಪೊಲೀಸ್‌ಗಿರಿ ತೋರುವುದರ ಜೊತೆಗೆ ಗೂಂಡಾ ವರ್ತನೆ ತೋರುತ್ತಿರುವುದು ಸಮಾಜದ ಸ್ವಾಸ್ಥ್ಯವನ್ನು ಹದಗೆಡಿಸುತ್ತಿದೆ. ಇನ್ನಾದರೂ ದುಡಿದು ತಿನ್ನುವ ಬೈಕ್, ಟ್ಯಾಕ್ಸಿ ಚಾಲಕರ ಮೇಲೆ ಹಲ್ಲೆ, ಮಾನಸಿಕ ಹಿಂಸೆ, ಬೆದರಿಕೆ ಹಾಕುವವರ ವಿರುದ್ಧ ಕ್ರಮ ಕೈಗೊಂಡು ನಿಶ್ಚಿಂತೆಯಿಂದ ಬದುಕಲು ಅನುವು ಮಾಡಿಕೊಡಬೇಕೆಂದು ಮೈಸೂರು ಪೊಲೀಸ್ ವರಿಷ್ಠಾಧಿಕಾರಿಗಳಲ್ಲಿ ಕಳಕಳಿಯ ಮನವಿ.


–ನೊಂದ ಬೈಕ್, ಟ್ಯಾಕ್ಸಿ ಸವಾರರು, ಮೈಸೂರು.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಬಹುಮುಖಿ

ವಿಶ್ವಮಾನ್ಯ ಮಹಾತ್ಮ ಗಾಂಧೀಜಿ



ಮಹಾತ್ಮ ಗಾಂಧೀಜಿ

ಜನವರಿ 30, ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹುತಾತ್ಮರಾದ ದಿನ. ತನ್ನಿಮಿತ್ತ ಈ ಲೇಖನ.

ಅಹಿಂಸೆಯ ಅಸ್ತ್ರವಿಡಿದು ಶಾಂತಿಯ ವಸ್ತ್ರ ತೊಟ್ಟು ಮಾನವೀಯ ಉನ್ನತ ಮೌಲ್ಯಗಳನ್ನು ತಮ್ಮ ಜೀವಮಾನದಲ್ಲಿ ಪಾಲಿಸಿದ ಗಾಂಧೀಜಿ ಮಹಾತ್ಮರಾದರು, ರಾಷ್ಟ್ರಪಿತರೂ ಆದರು. ಭಾರತಕ್ಕೆ ಸ್ವಾತಂತ್ರ್ಯ ದೊರಕಿಸಲು ಅಹಿಂಸೆಯ ಹಾದಿಯಲ್ಲಿ ಇಡೀ ರಾಷ್ಟ್ರ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಲು ಪ್ರೇರೇಪಿಸಿ ಯಶಸ್ವಿಯಾದ ಬಳಿಕವೂ ಎಲ್ಲವೂ ಭಗವಂತನ ಕೃಪೆ ಎಂದು ತಮ್ಮ ಸರಳ ಬದುಕನ್ನು ಮುಂದುವರೆಸಿದ್ದ ಆ ಮಹಾನ್ ಚೇತನ ಇಂದಿಗೂ ಯುವ ಪೀಳಿಗೆಗೆ ಮಾದರಿ. ರವೀಂದ್ರನಾಥ ಠಾಗೋರ್ ಅವರು 'ಮಹಾತ್ಮ' ಎಂದು ಸಂಬೋಧಿಸುವವರೆಗೂ ಮೋಹನದಾಸ ಕರಮಚಂದ್ ಗಾಂಧಿ 'ಬಾಪು' ಎಂದೇ ಕರೆಯಲ್ಪಡುತ್ತಿದ್ದರು. ಅಷ್ಟೇ ಅಲ್ಲ, ಮುಂದೆ 'ರಾಷ್ಟ್ರಪಿತ'ರೂ ಆದರು. ಹೀಗೆಂದು ಮಹಾತ್ಮ ಗಾಂಧಿಯನ್ನು ಮೊದಲ ಬಾರಿಗೆ ಕರೆದವರು ನೇತಾಜಿ ಸುಭಾಷ್ ಚಂದ್ರಬೋಸ್.

1945ರಲ್ಲಿ ರಂಗೂನ್‌ನಲ್ಲಿದ್ದ ತಮ್ಮ 'ಇಂಡಿಯನ್ ನ್ಯಾಷನಲ್ ಆರ್ಮಿ' ವತಿಯಿಂದ ಬ್ರಿಟಿಷ್ ಇಂಡಿಯಾದ ಮೇಲೆ ದಾಳಿ ಮಾಡಲು ಮುಂದಾಗಿದ್ದ ಬೋಸ್, ಬಾನುಲಿ ಸಂದೇಶವೊಂದನ್ನು ಗಾಂಧಿಯವರಿಗೆ ಪ್ರಸಾರ ಮಾಡಿದರು. 'ಫಾದರ್ ಆಫ್ ಅವರ್ ನೇಷನ್' ಎಂದು ಗಾಂಧಿಯನ್ನು ಮೊದಲ ಬಾರಿಗೆ ಕರೆದು 'ನಮ್ಮ ಈ ಹೋರಾಟದಲ್ಲಿ ನಿಮ್ಮ ಆಶೀರ್ವಾದ ನಮ್ಮ ಮೇಲಿರಲಿ' ಎಂದು ಕೇಳಿಕೊಂಡಿದ್ದರು. ಭಾರತ ಸ್ವಾತಂತ್ರ್ಯ ಸಂಗ್ರಾಮದ ನೇತೃತ್ವ ವಹಿಸಿದ್ದ ಗಾಂಧೀಜಿ ಅವರು ಇಡೀ ದೇಶವನ್ನು ತನ್ನೊಟ್ಟಿಗೆ ಕರೆದುಕೊಂಡು ಹೋದ ಅಪ್ರತಿಮ ನಾಯಕ. ಸಮಾಜದ ಎಲ್ಲಾ ವರ್ಗದ ಜನರೊಂದಿಗೆ ಅವರು ಮುಕ್ತವಾಗಿ ಬೆರೆಯುತ್ತಿದ್ದರು. ಎಲ್ಲರ ಬಗ್ಗೆ ಕಾಳಜಿ ವಹಿಸುತ್ತಿದ್ದರು. ಇಡೀ ದೇಶಕ್ಕೆ ಅಂತಹ ಮಾದರಿ ಇನ್ನೋರ್ವ ವ್ಯಕ್ತಿಯನ್ನು ಕಾಣುವುದು ಭಾರತದಲ್ಲಿಯೇ ಏಕೆ ಇಡೀ ವಿಶ್ವದಲ್ಲಿಯೇ ಅತೀ ಕಷ್ಟಕರ. ಇಲ್ಲವೆಂದರೂ ಸರಿಯೇ!

ರಾಮರಾಜ್ಯ ಪರಿಕಲ್ಪನೆಯ ಆದರ್ಶ ಪುರುಷ ಗಾಂಧೀಜಿ. ಧರ್ಮಶ್ರದ್ಧೆ ಗಾಂಧೀಜಿ ಅವರ ಪ್ರಮುಖ ಗುಣಗಳಲ್ಲೊಂದು. ಹಾಗೆಯೇ ಕ್ಷಮೆ. ನಿಮ್ಮ ಶತ್ರುಗಳನ್ನು ಕ್ಷಮಿಸಿ ಎಂದು ಹೇಳುವ ಮೂಲಕ ಕ್ಷಮಾದಾನದ ಉನ್ನತ ಗುಣ ಪ್ರತಿಯೊಬ್ಬರಿಗೂ ಸಂದೇಶವೇ ಆಯಿತು. ಗಾಂಧೀಜಿ ಅವರ ಮತ್ತೊಂದು ಗುಣವೆಂದರೆ ನಿರ್ಭೀತಿ. ಅವರ ಮಾನಸಿಕ ಧೈರ್ಯವೂ ಅಭೂತಪೂರ್ವವಾದುದು. ತಮ್ಮನ್ನು ದ್ವೇಷಿಸುವವರ ನಡುವೆಯೂ ಪ್ರೀತಿ, ವಿಶ್ವಾಸದ ಭರವಸೆ ಮೂಡಿಸಿದವರು. ಆ ಮೂಲಕ ದ್ವೇಷವನ್ನು ಸೋಲಿಸಿ ಪ್ರೀತಿಯನ್ನು ಪ್ರೀತಿಯಿಂದಲೇ ಗೆಲ್ಲಿಸಿದ್ದಾರೆ. ಮಾನವೀಯತೆಯನ್ನು ಮೆರೆಸಿದ್ದಾರೆ. ಮನುಷ್ಯತ್ವ ಬಿತ್ತಿದ್ದಾರೆ. ತಮ್ಮ ಸರಳತೆ, ಉನ್ನತ ವಿಚಾರಗಳನ್ನು ಬದುಕಿನಲ್ಲಿ ಅನುಸರಿಸಿದ ರೀತಿಯಿಂದ ಅವರು ಇಂದಿಗೂ, ಎಂದೆಂದಿಗೂ ಪ್ರಸ್ತುತ.

1869 ಅಕ್ಟೋಬರ್ 2ರಂದು ಗುಜರಾತ್‌ನ ಪೋರ್‌ಬಂದರಿನಲ್ಲಿ ಕರಮಚಂದ್ ಗಾಂಧಿ ಹಾಗೂ ಪುತಲೀಬಾಯಿ ಗಾಂಧಿ ದಂಪತಿ ಪುತ್ರನಾಗಿ ಗಾಂಧೀಜಿ ಜನಿಸಿದರು. 'ಗಾಂಧಿ' ಎಂಬುದು ಮನೆತನದ ಹೆಸರು. ಅವರ ಪೂರ್ಣ ಹೆಸರು ಮೋಹನದಾಸ ಕರಮಚಂದ್ ಗಾಂಧಿ. ಪ್ರಾಥಮಿಕ ಶಿಕ್ಷಣವನ್ನು ಪೋರಬಂದರಿನಲ್ಲಿ, ಮಾಧ್ಯಮಿಕ ಹಾಗೂ ಪ್ರೌಢ ಶಿಕ್ಷಣವನ್ನು ರಾಜಕೋಟ್ ಮತ್ತು ಭಾವನಗರದಲ್ಲಿ ಮುಗಿಸಿದರು. 1833ರಲ್ಲಿ ಕಸ್ತೂರ ಬಾ ಅವರೊಂದಿಗೆ ವಿವಾಹವಾಯ್ತು. ಗಾಂಧೀಜಿ 1888ರಲ್ಲಿ ಬ್ಯಾರಿಸ್ಟರ್ ವಿದ್ಯಾಭ್ಯಾಸಕ್ಕಾಗಿ ಇಂಗ್ಲೆಂಡ್‌ಗೆ ತೆರಳಿದರು. ಅಲ್ಲಿ ಪದವಿ ಪಡೆದ ಬಳಿಕ ವಕೀಲಿ ವೃತ್ತಿ ಆರಂಭಿಸಿದರು. ನಂತರ ಪ್ರಕರಣವೊಂದರ ನಿಮಿತ್ತ 1893ರಲ್ಲಿ ದಕ್ಷಿಣ ಆಫ್ರಿಕಾಕ್ಕೆ ತೆರಳಿದರು. ಆದರೆ, ಅಲ್ಲಿನ ವರ್ಣಭೇದ ನೀತಿ ಹೋರಾಟಕ್ಕೆ ಪ್ರೇರೇಪಿಸಿತು. ಅದನ್ನು ತೊಡೆದು ಹಾಕಬೇಕು ಎಂದು ಸಂಕಲ್ಪ ಮಾಡಿ, ಅಹಿಂಸಾ ಮಾರ್ಗದಲ್ಲಿ ವರ್ಣಭೇದ ನೀತಿ ವಿರುದ್ಧ ಹೋರಾಟ ಆರಂಭಿಸಿದರು. ಅದೇ ವೇಳೆಗೆ ಭಾರತದಲ್ಲಿ ಸ್ವಾತಂತ್ರ್ಯ ಹೋರಾಟ ತೀವ್ರಗೊಂಡಿದ್ದರಿಂದ ವರ್ಣಭೇದ ನೀತಿಯ ವಿರುದ್ಧ ತಾತ್ಕಾಲಿಕವಾಗಿ ಹೋರಾಟವನ್ನು ಕೈಬಿಟ್ಟು, ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಮರಳಿದರು. ಭಾರತಕ್ಕೆ ಬಂದ ಕೂಡಲೇ ತಮ್ಮ ವಕೀಲಿ ವೃತ್ತಿಯನ್ನು ತ್ಯಜಿಸಿ, ಸ್ವಾತಂತ್ರ್ಯ ಚಳವಳಿಯಲ್ಲಿ ಧುಮುಕಿ, ಅದರ ನೇತೃತ್ವ ವಹಿಸಿಕೊಂಡು ಸತ್ಯ ಹಾಗೂ ಅಹಿಂಸಾ ಮಾರ್ಗದ ಮೂಲಕ ಬ್ರಿಟಿಷರ ವಿರುದ್ಧ ಹೋರಾಡಿದರು.

1920–22 ಅಸಹಕಾರ ಚಳವಳಿ, 1930ರಲ್ಲಿ ಉಪ್ಪಿನ ಸತ್ಯಾಗ್ರಹ, 1942ರಲ್ಲಿ 'ಬ್ರಿಟೀಷರೇ ಭಾರತ ಬಿಟ್ಟು ತೊಲಗಿ' (ಕ್ವಿಟ್ ಇಂಡಿಯಾ ಚಳವಳಿ) ಎಂಬ ಹೋರಾಟ ನಡೆಸಿದರು. ಭಾರತದ ಸ್ವಾತಂತ್ರ್ಯಕ್ಕಾಗಿ ಹಲವು ಬಾರಿ ಬ್ರಿಟೀಷರಿಂದ ಬಂಧನಕ್ಕೊಳಗಾದರೂ, ಜೈಲುವಾಸ ಅನುಭವಿಸಿದರೂ ಎದೆಗುಂದದೆ ಗಾಂಧೀಜಿ ಸತ್ಯ, ಅಹಿಂಸಾ ಮಾರ್ಗದಲ್ಲಿ 27 ವರ್ಷ ಅವಿಶ್ರಾಂತವಾಗಿ ನಡೆಸಿದ ಸ್ವಾತಂತ್ರ್ಯ ಚಳವಳಿಯ ಪರಿಣಾಮ ಭಾರತಕ್ಕೆ 1947 ಆಗಸ್ಟ್ 15ರ ಮಧ್ಯರಾತ್ರಿ ಸ್ವಾತಂತ್ರ್ಯ ದೊರೆಯಿತು. ತಾಯಿ ಭಾರತಿ ಬ್ರಿಟಿಷರಿಂದ ಬಂಧಮುಕ್ತಗೊಂಡಳು. ಗುಲಾಮಗಿರಿಯಿಂದ ಉಸಿರು ಕಟ್ಟಿಕೊಂಡಿದ್ದ ಇಡೀ ದೇಶ ಸ್ವಾತಂತ್ರ್ಯದ ಗಾಳಿಕುಡಿದು ಸಂಭ್ರಮದಿಂದ ಕುಣಿದಾಡಿತ್ತು. ರಾಷ್ಟ್ರಪಿತ ಗಾಂಧೀಜಿಯ ಅಹಿಂಸಾ ಮಾರ್ಗದಲ್ಲಿ ಇಡೀ ಜಗತ್ತು ಜಯ ಜಯ ಜಯ ಎಂದು ಜೈಕಾರ ಹಾಕಿತ್ತು.

ಗಾಂಧೀಜಿ ಬರೀ ಸ್ವಾತಂತ್ರ್ಯ ಸೇನಾನಿಯಷ್ಟೇ ಆಗಿರಲಿಲ್ಲ. ಸರ್ವೋದಯದ ಕನಸುಗಾರರಾಗಿದ್ದರು. ಸರ್ವರ ಉದ್ಧಾರವೇ ಅವರ ತಾರಕ ಮಂತ್ರವಾಗಿತ್ತು. ಸ್ವಚ್ಛ ಭಾರತ, ಅಭಿವೃದ್ಧಿಯ ಭಾರತ, ಮನುಷ್ಯತ್ವದ ಭಾರತ ಅವರ ತುಡಿತವಾಗಿತ್ತು, ಮಿಡಿತವಾಗಿತ್ತು. ಇನ್ನು ಭ್ರಷ್ಟಾಚಾರ, ಲಂಚಾವತಾರ ಇನ್ನಿತರ ಸಾಮಾಜಿಕ ಅನಿಷ್ಟಗಳ ಕುರಿತಾಗಿ, ಗಾಂಧೀಜಿ ಅವರ ಅಭಿಪ್ರಾಯ ಆದರ್ಶ ಸಮಾಜದ ಪರಿಕಲ್ಪನೆಯ ಭದ್ರ ಬುನಾದಿಗೆ ನಾಂದಿ ಹಾಡಿದೆ. 'ಅನ್ಯಾಯ ಮಾರ್ಗಗಳಿಂದ ಸಂಪಾದಿಸಿ ಧನಿಕನಾದ ಮನುಷ್ಯ ಡಕಾಯಿತರುಗಳಿಗಿಂತ ಕಡಿಮೆ ಇಲ್ಲ. ಮರ್ಯಾದೆಯ ಮುಖವಾಡದಿಂದ ತನ್ನ ಅವಶ್ಯಕತೆಗಿಂತ ಮೀರಿ ಹಣ, ಆಸ್ತಿ ಸಂಪಾದಿಸುವವನು ಸಾಮಾನ್ಯ ಕಳ್ಳನಿಗಿಂತ ಹೆಚ್ಚಿನ ಶಿಕ್ಷೆಗೆ ಅರ್ಹನು. ದೇವರು ಧರ್ಮ ಪ್ರಾರ್ಥನೆಗಳನ್ನು ಕುರಿತು ಅಪಹಾಸ್ಯ ಮಾಡುವವರಿಗೆ ಗಾಂಧೀಜಿಯವರ ಹಿತನುಡಿಯೆಂದರೆ, 'ನಾನೇ ಬುದ್ಧಿವಂತ, ವಿಚಾರವಂತನೆಂಬ ಹಮ್ಮಿನಿಂದ ಇನ್ನೊಬ್ಬರ ಭಾವನೆಗಳ ಜೊತೆ ಆಟ ಆಡಬೇಡಿ. ಜೀವನದ ಆದಿ ಮತ್ತು ಅಂತ್ಯ ಪಾಠಗಳೇ ಪ್ರಾರ್ಥನೆ. ಪ್ರೀತಿ, ದಯೆ, ತ್ಯಾಗವೇ ಧರ್ಮ. ಪ್ರಾರ್ಥನೆಯನ್ನು ಸರಿಯಾಗಿ ತಿಳಿದು ಸಲ್ಲಿಸಿದರೆ ಅದು ಅತ್ಯಂತ ಸಮರ್ಥವಾದ ಕಾರ್ಯೋಪಕರಣವಾಗುತ್ತದೆ'.

ಹೀಗೆ ಗಾಂಧೀಜಿಯವರ ವಿಚಾರಧಾರೆಗಳು, ದೇಶದ ಜನರ ಸಾಮಾಜಿಕ, ಆರ್ಥಿಕ ಹಾಗೂ ಧಾರ್ಮಿಕ ವಿಷಯಗಳ ಕುರಿತು ತನ್ನದೇ ಆದ ಮಹೋನ್ನತ ಹಾಗೂ ಉಜ್ವಲ ಬೆಳಕಿನ ಉನ್ನತ ಭಾವನೆಗಳನ್ನು ಹೊಂದಿದ್ದು, ನಿಜವಾದ ಕಳಕಳಿಯ ಸಂಕೇತವಾಗಿತ್ತು. ಇಂತಹ ಉನ್ನತ ವ್ಯಕ್ತಿತ್ವ ಹೊಂದಿದ್ದುದರಿಂದಲೇ ಗಾಂಧೀಜಿಯವರು ರಾಷ್ಟ್ರಪಿತನಾಗಿ, ದೇಶ ಮಾತ್ರವಲ್ಲ ವಿಶ್ವದಾದ್ಯಂತ ಗುರುತಿಸಲ್ಪಟ್ಟಿದ್ದಾರೆ. ಅವರ ಆದರ್ಶಗಳು ಹಾಗೂ ಉನ್ನತ ವಿಚಾರಗಳು ಇಂದಿಗೂ ಪ್ರಸ್ತುತವೆನಿಸಿವೆ. ಎಂದೆಂದಿಗೂ ಮಾದರಿಯಾಗಿ ಉಳಿದಿವೆ. ಗಾಂಧೀಜಿ ಎಂದರೆ ಭಾರತದ ಹೃದಯ. ಅಷ್ಟೇ ಅಲ್ಲ ವಿಶ್ವದ ಕರುಳು. ಏಕೆಂದರೆ ಇಡೀ ವಿಶ್ವಕ್ಕೆ ಮಿಡಿದ ಮನಸ್ಸು ಮಹಾತ್ಮನದು.

ಅದೊಂದು ದೇಶದ ಪ್ರಾಣವಾಯುವೇ ಒಂದು ಕ್ಷಣ ನಿಂತು ಹೋದ ದಿನ. ಜಗತ್ತು ಎಂದೂ ಮರೆಯದ ಮಹಾ ದುರಂತ ದಿನ. 1948 ಜನವರಿ 30ರಂದು ಶುಕ್ರವಾರ ಗಾಂಧೀಜಿ ಪ್ರಾರ್ಥನಾ ಸಭೆಗೆ ಹೋಗುತ್ತಿದ್ದ ವೇಳೆ ನಾಥೂರಾಂ ವಿನಾಯಕ ಗೋಡ್ಸೆ ಎಂಬಾತ ಗಾಂಧೀಜಿ ಎದೆಗೆ ಗುಂಡು ಹಾರಿಸಿದ. "ಹೇ ರಾಮ್......" ಎನ್ನುತ್ತಾ ಗಾಂಧೀಜಿ ಪ್ರಾಣ ಬಿಟ್ಟರು. ಗಾಂಧೀಜಿ, ಭಾರತೀಯನಿಂದಲೇ ಹತ್ಯೆಗೀಡಾದದ್ದು ನಿಜಕ್ಕೂ ಇತಿಹಾಸದ ವ್ಯಂಗ್ಯವಾಗಿದೆ.

ಮಹಾತ್ಮನ ವಿಶೇಷಗಳು!: ಜಗತ್ತಿನ 100ಕ್ಕೂ ಹೆಚ್ಚು ದೇಶಗಳು ಗಾಂಧೀಜಿ ಭಾವಚಿತ್ರ ಇರುವ ಪೋಸ್ಟಲ್ ಸ್ಟಾಂಪ್‌ಗಳನ್ನು ಬಿಡುಗಡೆ ಮಾಡಿವೆ. ಮೊಟ್ಟ ಮೊದಲು ಬಿಡುಗಡೆಗೊಳಿಸಿದ ದೇಶ ಪೋಲೆಂಡ್. ಭಾರತದ ಅಂಚೆ ಇಲಾಖೆಯು ಇಲ್ಲಿವರೆಗೂ ಗಾಂಧೀಜಿಯ ಭಾವಚಿತ್ರ ಇರುವ ಸುಮಾರು 40ಕ್ಕೂ ಹೆಚ್ಚು ಸ್ಟಾಂಪ್ ಮತ್ತು 200ಕ್ಕೂ ಹೆಚ್ಚು ಪೋಸ್ಟಲ್ ಎನ್ವಲಪ್‌ಗಳನ್ನು ಬಿಡುಗಡೆಗೊಳಿಸಿದೆ. ಸುಮಾರು 40ಕ್ಕೂ ಹೆಚ್ಚು ದೇಶಗಳು ಗಾಂಧೀಜಿ ಭಾವಚಿತ್ರ ಇರುವ ವಿವಿಧ ಬಗೆಯ ನಾಣ್ಯಗಳನ್ನು ಬಿಡುಗಡೆಗೊಳಿಸಿವೆ. ಸುಮಾರು 80ಕ್ಕೂ ಹೆಚ್ಚು ದೇಶಗಳಲ್ಲಿ ಗಾಂಧೀಜಿಯವರ ವಿವಿಧ ರೀತಿಯ ಪ್ರತಿಮೆಗಳಿವೆ. ಗಾಂಧೀಜಿಯವರ ಹೆಸರಿನ ರಸ್ತೆಗಳು ಸುಮಾರು 40ಕ್ಕೂ ಹೆಚ್ಚು ದೇಶಗಳಲ್ಲಿವೆ. ಗಾಂಧೀಜಿ ಮರಣ ಹೊಂದಿದ ದಿನ ಶ್ರೀಲಂಕಾ ಸರಕಾರವು ಶೋಕಾಚರಣೆ ಮಾಡಿ ತನ್ನ ರೇಡಿಯೋ ಪ್ರಸಾರವನ್ನು 24 ಗಂಟೆಗಳ ಕಾಲ ಬಂದ್ ಮಾಡಿತ್ತು.ಗಾಂಧೀಜಿಯವರು ಬದುಕಿದ್ದಾಗಲೇ ಅವರ ಜೀವನ ಚರಿತ್ರೆ ನೊಬೆಲ್ ಸಾಹಿತ್ಯ ಪ್ರಶಸ್ತಿ ಪುರಸ್ಕೃತ ರೋಮನ್ ರೋಲ್ಯಾಂಡ್ ಅವರಿಂದ ಬರೆಯಲ್ಪಟ್ಟಿತ್ತು.

> “ಗಾಂಧೀಜಿಯವರ ವಿಚಾರಧಾರೆಗಳು, ದೇಶದ ಜನರ ಸಾಮಾಜಿಕ, ಆರ್ಥಿಕ ಹಾಗೂ ಧಾರ್ಮಿಕ ವಿಷಯಗಳ ಕುರಿತು ತನ್ನದೇ ಆದ ಮಹೋನ್ನತ ಹಾಗೂ ಉಜ್ವಲ ಬೆಳಕಿನ ಉನ್ನತ ಭಾವನೆಗಳನ್ನು ಹೊಂದಿದ್ದು, ನಿಜವಾದ ಕಳಕಳಿಯ ಸಂಕೇತವಾಗಿತ್ತು. ಇಂತಹ ಉನ್ನತ ವ್ಯಕ್ತಿತ್ವ ಹೊಂದಿದ್ದುದರಿಂದಲೇ ಗಾಂಧೀಜಿಯವರು ರಾಷ್ಟ್ರಪಿತನಾಗಿ, ದೇಶ ಮಾತ್ರವಲ್ಲ ವಿಶ್ವದಾದ್ಯಂತ ಗುರುತಿಸಲ್ಪಟ್ಟಿದ್ದಾರೆ. ಅವರ ಆದರ್ಶಗಳು, ಉನ್ನತ ವಿಚಾರಗಳು ಇಂದಿಗೂ ಪ್ರಸ್ತುತವೆನಿಸಿವೆ. ಎಂದೆಂದಿಗೂ ಮಾದರಿಯಾಗಿ ಉಳಿದಿವೆ. ಗಾಂಧೀಜಿ ಎಂದರೆ ಭಾರತದ ಹೃದಯ. ಅಷ್ಟೇ ಅಲ್ಲ ವಿಶ್ವದ ಕರುಳು. ಏಕೆಂದರೆ ಇಡೀ ವಿಶ್ವಕ್ಕೆ ಮಿಡಿದ ಮನಸ್ಸು ಮಹಾತ್ಮನದು.


ತಮ್ಮ ಎರಡೂ ಕೈಗಳಿಂದ ಬರೆಯುತ್ತಿದ್ದರು. ಹಿಂದ್ ಸ್ವರಾಜ್ ಪುಸ್ತಕದ ಕೆಲವು ಪುಟಗಳನ್ನು ಎಡಗೈಯಿಂದ ಬರೆದಿದ್ದರು. ಗಾಂಧೀಜಿಯವರು ತಮ್ಮ ಜೀವಮಾನದಲ್ಲೇ ವಿಮಾನದಲ್ಲಿ ಒಂದು ಸಾರಿಯೂ ಪ್ರಯಾಣಿಸಲಿಲ್ಲ.

ಗಾಂಧೀಜಿಯವರು ತಮ್ಮ ಸಮಕಾಲೀನ ಜಗತ್ತಿನ ನಾಯಕರಲ್ಲೇ ಅತ್ಯಂತ ಹೆಚ್ಚು ಫೋಟೋಗ್ರಾಫ್‌ಗಳನ್ನು ಹೊಂದಿದ ವ್ಯಕ್ತಿ ಗಾಂಧೀಜಿ. ತಮ್ಮ ಜೀವಮಾನದಲ್ಲೇ ಒಮ್ಮೆಯೂ ಗಾಂಧೀಜಿ ಅಮೇರಿಕಾಕ್ಕೆ ಭೇಟಿ ನೀಡಲಿಲ್ಲ. ಆದರೆ ಅಮೇರಿಕಾ ಒಂದರಲ್ಲೇ ಗಾಂಧೀಜಿಯವರ 30ಕ್ಕೂ ಹೆಚ್ಚು ಪ್ರತಿಮೆಗಳಿವೆ. 1999ರಲ್ಲಿ ಟೈಮ್ಸ್ ಮ್ಯಾಗ್ಜೀನ್ ನಡೆಸಿದ 'ಶತಮಾನದ ವ್ಯಕ್ತಿ' ಸ್ಪರ್ಧೆಯಲ್ಲಿ ಗಾಂಧೀಜಿಗೆ ಎರಡನೇ ಸ್ಥಾನ. ಮೊದಲ ಸ್ಥಾನ ಗಾಂಧೀಜಿಯವರನ್ನು ಬಹುವಾಗಿ ಮೆಚ್ಚಿದ್ದ ಅಲ್ಬರ್ಟ್ ಐನಸ್ಟೀನ್.ಗಾಂಧೀಜಿಯವರಿಗೆ ಮುಂದಿನ ಎರಡು ಹಲ್ಲುಗಳು ಹರೆಯದಲ್ಲೇ ಬಿದ್ದು ಹೋಗಿದ್ದವು. ತಿನ್ನುವುದಕ್ಕಾಗಿ ಎರಡು ಹಲ್ಲುಗಳ ಸೆಟ್ ಒಂದನ್ನು ಮಾಡಿಸಿಕೊಂಡಿದ್ದರು. (ದಕ್ಷಿಣ ಆಫ್ರಿಕಾದಲ್ಲಿ ಬಿಳಿಯರಿಂದ ದಾಳಿಗೊಳಗಾದಾಗ ಎರಡು ಹಲ್ಲುಗಳು ಉದುರಿದ್ದವು). ಅಮೇರಿಕಾದ ಟೈಮ್ ಮ್ಯಾಗ್ಜೀನ್ 1930 ರಲ್ಲಿ 'ವರ್ಷದ ವ್ಯಕ್ತಿ' ಎಂದು ಗಾಂಧೀಜಿಯವರನ್ನು ಘೋಷಿಸಿ ಮುಖಪುಟದಲ್ಲಿ ಅವರ ಭಾವಚಿತ್ರ ಪ್ರಕಟಿಸಿತ್ತು. ಯಾವುದೇ ಅಧಿಕಾರದಲ್ಲಿಲ್ಲದ ಗಾಂಧೀಜಿ ತೀರಿಕೊಂಡಾಗ ವಿಶ್ವಸಂಸ್ಥೆಯು ತನ್ನ ಎಲ್ಲ 55 ಸದಸ್ಯ ರಾಷ್ಟ್ರಗಳ ಧ್ವಜವನ್ನು ಅರ್ಧಕ್ಕೆ ಇಳಿಸಿ ಶೋಕಾಚರಣೆ ಮಾಡಿತ್ತು. ಇದು ಇತಿಹಾಸದಲ್ಲೇ ಮೊದಲ ಬಾರಿ ಮತ್ತು ಕೊನೆಯ ಬಾರಿ ನಡೆದ ಘಟನೆ. ಮತ್ತೊಬ್ಬರಿಗೆ ಈ ರೀತಿ ಗೌರವ ಸಿಕ್ಕಿಲ್ಲ. ಗಾಂಧೀಜಿಯವರು ಯಾವ ದೇಶದ ವಿರುದ್ಧ ಜೀವಮಾನವಿಡೀ ಹೋರಾಡಿದರೋ ಅದೇ ದೇಶದ (ಇಂಗ್ಲೆಂಡಿನ ಲಂಡನ್ ಸ್ಕ್ವೈರ್) ಪಾರ್ಲಿಮೆಂಟ್ ಮುಂದೆ ಗಾಂಧೀಜಿಯ ಪ್ರತಿಮೆ ಸ್ಥಾಪಿಸಲ್ಪಟ್ಟಿದೆ. ಜಗತ್ತಿನಲ್ಲೇ ವಿಶ್ವಸಂಸ್ಥೆಯಿಂದ ಆಚರಿಸಲ್ಪಡುವ ಜನ್ಮದಿನ ಕೇವಲ 'ಗಾಂಧಿ ಜನ್ಮದಿನ' ಮಾತ್ರ. ವಿಶ್ವಸಂಸ್ಥೆಯು ಗಾಂಧೀ ಜನ್ಮದಿನವನ್ನು 'ವಿಶ್ವ ಅಹಿಂಸಾ ದಿನ' ಎಂದು ಘೋಷಿಸಿದೆ. ಗಾಂಧೀಜಿಯವರು ಕುಷ್ಠರೋಗಿಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ತಮ್ಮ ಆಶ್ರಮದಲ್ಲಿ ಪರಚುರೆ ಶಾಸ್ತ್ರಿ ಎಂಬ ವ್ಯಕ್ತಿಯ ಕುಷ್ಠರೋಗವನ್ನು ಶುಶ್ರೂಷೆ ಮಾಡಿದ್ದರು. ಈ ನೆನಪಿಗಾಗಿ ಭಾರತ ಸರ್ಕಾರ 'ಕುಷ್ಠರೋಗ ದಿನ' ಎಂದೂ ಆಚರಿಸುತ್ತದೆ. ಗಾಂಧೀಜಿಯಿಂದ ಪ್ರೇರಣೆಗೊಂಡು ನಾಲ್ಕು ಖಂಡಗಳ ಸುಮಾರು 20ಕ್ಕೂ ಹೆಚ್ಚು ದೇಶಗಳಲ್ಲಿ ಮಾನವ ಹಕ್ಕುಗಳ ಹೋರಾಟಗಳು ನಡೆದಿವೆ. ಸುಮಾರು ಆರು ಬಾರಿ ನೊಬೆಲ್ ನಾಮಿನೇಟ್‌ಗೊಂಡಿರುವ ಗಾಂಧೀಜಿಗೆ ನೊಬೆಲ್ ಸಿಗಲಿಲ್ಲ. ಕೊನೆಗೆ ನೊಬೆಲ್ ಸಂಸ್ಥೆ ಈ ವಿಷಯವಾಗಿ ಕ್ಷಮೆ ಕೇಳಿ 'ಅವರು ನೊಬೆಲ್‌ಗಿಂತ ದೊಡ್ಡವರು' ಎಂದು ಹೇಳಿತು. ಗಾಂಧೀಜಿಯವರನ್ನು ಒಮ್ಮೆಯೂ ಭೇಟಿಯಾಗದ ನೆಲ್ಸನ್ ಮಂಡೇಲಾ (ದ.ಆಫ್ರಿಕಾದ ಗಾಂಧಿ), ಮಾರ್ಟಿನ್ ಲೂಥರ್ ಕಿಂಗ್ ಜ್ಯೂನಿಯರ್ (ಅಮೇರಿಕಾದ ಗಾಂಧಿ) ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿ ಸಿಕ್ಕಿದೆ. ದ.ಆಫ್ರಿಕಾದ ಜೈಲಿನಲ್ಲಿ ನೇಕಾರ ಕೆಲಸ ಆರಿಸಿಕೊಂಡ ಗಾಂಧೀಜಿಯವರು ಎರಡು ತುದಿ ಚೂಪಾಗಿರುವ ಟೋಪಿ ಒಂದನ್ನು ಹೊಲಿದರು. ಅದೇ ಮುಂದೆ ಗಾಂಧಿ ಟೋಪಿ ಎಂದು ಪ್ರಸಿದ್ಧವಾಗಿ ಈಗಲೂ ಚಾಲ್ತಿಯಲ್ಲಿದೆ. ಮಾರ್ಟಿನ್ ಲೂಥರ್ ಕಿಂಗ್ ಜ್ಯೂನಿಯರ್ ಮತ್ತು ಅವರ ಸಾವಿರಾರು ಸಹಚರರು ತಮ್ಮ ಪ್ರಸಿದ್ಧ ವಾಷಿಂಗ್ಟನ್ ಯಾತ್ರೆಯಲ್ಲಿ ಗಾಂಧಿ ಟೋಪಿ ಧರಿಸಿ ಹೋರಾಟಕ್ಕೆ ಇಳಿದಿದ್ದರು. ಇದೇ ಗಾಂಧಿ ಮಹಾತ್ಮೆ!

ಮಂಡ್ಯದ ವಿ.ಸಿ.ಫಾರಂನಲ್ಲಿ ನೂತನ ಕೃಷಿ; ತೋಟಗಾರಿಕೆ ವಿವಿ ಸ್ಥಾಪನೆ

ತಾತ್ವಿಕ ಅನುಮೋದನೆ ನೀಡಿ ಸರ್ಕಾರದಿಂದ ಆದೇಶ

● ಹಳೆ ಮೈಸೂರು ಭಾಗದ ಬಹು ದಿನಗಳ ಕನಸು ನನಸು ● ಶೀಘ್ರವೇ ವಿಶೇಷಾಧಿಕಾರಿ ನೇಮಕ



ಬೆಂಗಳೂರು,ಜ.29 (ಬಿಎಲ್‌ಯು) – ಮಂಡ್ಯ ಜಿಲ್ಲೆಯ ವಿ.ಸಿ.ಫಾರಂನಲ್ಲಿ ನೂತನ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯ ಸ್ಥಾಪನೆಗೆ ರಾಜ್ಯ ಸರ್ಕಾರ ತಾತ್ವಿಕ ಅನುಮೋದನೆ ನೀಡಿ ಆದೇಶ ಹೊರಡಿಸಿದೆ. ಸರ್ಕಾರದ ಈ ನಿರ್ಧಾರದಿಂದ ಮಂಡ್ಯ ಸೇರಿದಂತೆ ಮೈಸೂರು ವಿಭಾಗದ ಜನರ ಬಹುದಿನಗಳ ಕನಸು ಈಡೇರಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ಬಾರಿ ಮಂಡಿಸಿದ 2024–25ನೇ ಸಾಲಿನ ಬಜೆಟ್‌ನಲ್ಲಿ ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾನಿಲಯ ಸ್ಥಾಪನೆಯ ಸಾಧ್ಯತೆ ಕುರಿತು ಪರಿಶೀಲನಾ ಸಮಿತಿ ರಚನೆ ಮಾಡುವುದಾಗಿ ಘೋಷಣೆ ಮಾಡಿದ್ದರು. ವರ್ಷದಲ್ಲಿ ಸಿದ್ದ ರಾಮಯ್ಯ ಕೃಷಿ ವಿಶ್ವವಿದ್ಯಾನಿಲಯ ಸ್ಥಾಪನೆಗೆ ಆದೇಶ ಹೊರಡಿಸಿದ್ದಾರೆ. ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾನಿಲಯ ಸ್ಥಾಪನೆ ಮಾಡುವ ಸಂಬಂಧ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಡಾ.ರಾಜೇಂದ್ರ ಪ್ರಸಾದ್ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚನೆ ಮಾಡಲಾಗಿತ್ತು. ಈ ಸಂಬಂಧ ಸಮಿತಿ ಹಲವು ಬಾರಿ ಸ್ಥಳ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು.

ಸಮಿತಿ ನೀಡಿದ್ದ ವರದಿಯನ್ನು ಕಳೆದ ವಾರ ನಡೆದ ಸಚಿವ ಸಂಪುಟ ಸಭೆಯ ಮುಂದಿಟ್ಟು ಚರ್ಚೆ ಮಾಡಿ ಅನುಮೋದನೆ ಪಡೆಯಲಾಯಿತು. ತರುವಾಯ ಸರ್ಕಾರ ನೂತನ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯ ಸ್ಥಾಪನೆಗೆ ತಾತ್ವಿಕ ಅನುಮೋದನೆ ನೀಡಿದೆ. ವಿ.ಸಿ.ಫಾರಂನಲ್ಲಿ ಲಭ್ಯವಿರುವ ಮೂಲಸೌಕರ್ಯ ಬಳಸಿಕೊಂಡು ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಆರ್ಥಿಕ ಇಲಾಖೆ ಕೂಡ ತಾತ್ವಿಕ ಅನುಮತಿ ನೀಡಿದೆ. ತರುವಾಯ ಹಂತ ಹಂತವಾಗಿ ಅವಶ್ಯವಿರುವ ಮೂಲ ಸೌಕರ್ಯಗಳಿಗೆ ಮಾತ್ರ ವಿಸ್ತೃತ ಅಂದಾಜು ಹಾಗೂ ಆವರ್ತಕ ವೆಚ್ಚದ ಅಂದಾಜು ಸಲ್ಲಿಸಲು ಸೂಚನೆ ನೀಡಿದೆ.

ವಿಶ್ವವಿದ್ಯಾನಿಲಯ ಸ್ಥಾಪನೆ ಸಂಬಂಧ ಷರತ್ತು ನಿಬಂಧನೆಗಳು ಹಾಗೂ ಆಡಳಿತಾತ್ಮಕ ಅನುಮೋದನೆಗಳನ್ನು ಮುಂದಿನ ಆದೇಶದಲ್ಲಿ ಹೊರಡಿಸಲಾಗುವುದು ಎಂದು ತಿಳಿಸಲಾಗಿದೆ.

ಶೀಘ್ರವೇ ವಿಶೇಷಾಧಿಕಾರಿ ನೇಮಿಸಿ ಪ್ರಸಕ್ತ ಸಾಲಿನಲ್ಲೇ ವಿಶ್ವವಿದ್ಯಾನಿಲಯ ಪಾರಂಭಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗುವುದು ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದ್ದಾರೆ.

ಇಂದು ಮೈಸೂರಲ್ಲಿ ಮಹಾತ್ಮ ಗಾಂಧಿ ಸ್ಮರಣಾರ್ಥ ಸತ್ಯ, ಸಹನೆ, ಶಾಂತಿ ಕಾರ್ಯಕ್ರಮ

ಮೈಸೂರು, ಜ.29(ಜಿಎ)–ಜನಾಂದೋಲನ ಮಹಾಮೈತ್ರಿ, ಗಾಂಧಿ ವಿಚಾರ ಪರಿಷತ್, ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಜ.30ರಂದು ಮಹಾತ್ಮ ಗಾಂಧಿ ಸ್ಮರಣಾರ್ಥ ಸತ್ಯ, ಸಹನೆ, ಶಾಂತಿ, ಸಹಬಾಳ್ವೆಯ ಅನಾವರಣದ ಕಾರ್ಯಕ್ರಮ ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸವಿತಾ ಪ.ಮಲ್ಲೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 8.30ಕ್ಕೆ ನ್ಯಾಯಾಲಯದ ಎದುರಿನ ಗಾಂಧಿ ಪುತ್ಥಳಿ ಬಳಿ ಮೆರವಣಿಗೆಗೆ ಚಾಲನೆ ದೊರೆಯಲಿದೆ. ಬಳಿಕ ಅದು ರಂಗಾಯಣದ ಆವರಣಕ್ಕೆ ತಲುಪಲಿದೆ. ಆವರಣ ಹಾಗೂ ವನರಂಗದಲ್ಲಿ ಬೆಳಗ್ಗೆ 11.30ಕ್ಕೆ ಮಕ್ಕಳಿಗಾಗಿ ಚಿತ್ರ ರಚನಾ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ ನಡೆಯಲಿದೆ ಎಂದರು. ಮಧ್ಯಾಹ್ನ 12.30ಕ್ಕೆ ಗಾಂಧಿ ಕಾವ್ಯಾಂಜಲಿ ಕಾರ್ಯಕ್ರಮವಿರಲಿದ್ದು, ಅನೇಕ ಕವಿಗಳು ಪ್ರೊ.ಶಬ್ಬೀರ್ ಮುಸ್ತಫಾ ಅಧ್ಯಕ್ಷತೆಯಲ್ಲಿ ಕವನ ವಾಚಿಸಲಿದ್ದಾರೆ. ಮಧ್ಯಾಹ್ನ 2.30ಕ್ಕೆ ಗಾಂಧಿ ನನ್ನ ಕಣ್ಣಳತೆಯಲ್ಲಿ ಕಾರ್ಯಕ್ರಮ ಪ್ರೊ.ಬಿ.ಎನ್.ಶ್ರೀರಾಮ ಅಧ್ಯಕ್ಷತೆಯಲ್ಲಿ, ಮಧ್ಯಾಹ್ನ 3.30ಕ್ಕೆ ಸಹಬಾಳ್ವೆ, ಸಮಾನತೆ, ಸ್ವಾವಲಂಬನೆ ತತ್ವಗಳ ಗಾಂಧಿ ಕಾರ್ಯಕ್ರಮ ಬಡಗಲಪುರ ನಾಗೇಂದ್ರ ಅಧ್ಯಕ್ಷತೆಯಲ್ಲಿ ನಡೆಯಲಿದೆ. ನಂತರ ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮಾಡಲಾಗುವುದು. ಎಸ್.ಆರ್.ಹಿರೇಮಠ್ ಅಧ್ಯಕ್ಷತೆ ವಹಿಸುವರು. ಸಂಜೆ 6ಕ್ಕೆ ಬಹುಮಾನ ಪಡೆದ ಕಿರುಚಿತ್ರಗಳ ಪ್ರದರ್ಶನವಿರಲಿದೆ ಎಂದರು. ಗೋಷ್ಠಿಯಲ್ಲಿ ಎಸ್.ಆರ್.ಹಿರೇಮಠ್, ಜಿ.ಪಿ.ಬಸವರಾಜು, ಉಗ್ರ ನರಸಿಂಹೇಗೌಡ, ಅಭಿರುಚಿ ಗಣೇಶ್, ಪ್ರೊ.ಶಬ್ಬೀರ್ ಮುಸ್ತಫಾ ಮತ್ತಿತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

'ಕ್ರೀಡಾ ಮಿತ್ರ'

ಅಂತರ ವಿಶ್ವವಿದ್ಯಾನಿಲಯ ಮಹಿಳಾ ಕ್ರಿಕೆಟ್ ಪಂದ್ಯಾವಳಿ

ಮದ್ರಾಸ್ ವಿವಿ ತಂಡ ಚಾಂಪಿಯನ್



ಮೈಸೂರಿನ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆದ ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ ತಮಿಳುನಾಡಿನ ಮದ್ರಾಸ್ ವಿಶ್ವವಿದ್ಯಾಲಯ ತಂಡ ಪ್ರಶಸ್ತಿಯೊಂದಿಗೆ ವಿಜೃಂಭಿಸಿತು.



ರನ್ನರ್ ಅಪ್ ಪ್ರಶಸ್ತಿ ಪಡೆದ ಬೆಂಗಳೂರು ವಿಶ್ವವಿದ್ಯಾನಿಲಯ ತಂಡದ ಸದಸ್ಯರು.



4ನೇ ಸ್ಥಾನ ಪಡೆದ ಮೈಸೂರು ವಿಶ್ವವಿದ್ಯಾನಿಲಯದ ಮಹಿಳಾ ತಂಡ.

ಮೈಸೂರು, ಜ.29(ಎಂಟಿವೈ)– ಮೈಸೂರಿನ ಮಾನಸ ಗಂಗೋತ್ರಿಯಲ್ಲಿರುವ ಶ್ರೀಕಂಠದತ್ತ ನರಸಿಂಹ ರಾಜ ಒಡೆಯರ್ ಮೈದಾನದಲ್ಲಿ ಬುಧವಾರ ನಡೆದ ಅಂತರ ವಿಶ್ವವಿದ್ಯಾನಿಲಯ ಮಹಿಳಾ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ತಮಿಳುನಾಡಿನ ಮದ್ರಾಸ್ ವಿಶ್ವವಿದ್ಯಾಲಯ, ಬೆಂಗಳೂರು ವಿಶ್ವವಿದ್ಯಾನಿಲಯದ ವಿರುದ್ಧ 8 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿತು.

ಮದ್ರಾಸ್ ವಿಶ್ವವಿದ್ಯಾಲಯ ತಂಡದ ಎಂ.ಎಸ್.ಐಶ್ವರ್ಯ(ಅಜೇಯ 42) ಭರ್ಜರಿ ಬ್ಯಾಟಿಂಗ್ ಹಾಗೂ ಶುಭ ಹಾರಿಣಿ(37 ರನ್, 13ಕ್ಕೆ 3) ಅವರ ಆಲ್ರೌಂಡ್ ಆಟದಿಂದಾಗಿ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡಿತು.

ಮೈಸೂರು ವಿಶ್ವವಿದ್ಯಾಲಯದ ವತಿಯಿಂದ ಗಂಗೋತ್ರಿಯ ಶ್ರೀಕಂಠ ದತ್ತ ನರಸಿಂಹರಾಜ ಒಡೆಯರ್ ಮೈದಾನದಲ್ಲಿ ಬುಧವಾರ ನಡೆದ ಫೈನಲ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಬೆಂಗಳೂರು ನಗರ ವಿವಿ ತಂಡ 25 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 104 ರನ್‌ಗಳನ್ನು ಕಲೆ ಹಾಕಿತು. ಪ್ರತಿಯಾಗಿ ಮದ್ರಾಸ್ ವಿವಿ ತಂಡವು 16.2 ಓವರ್‌ಗಳಲ್ಲಿ 2 ವಿಕೆಟ್‌ಗೆ 108ರನ್ ಗಳಿಸುವ ಮೂಲಕ ಜಯ ದಾಖಲಿಸಿತು.

ಮೈಸೂರು ತಂಡಕ್ಕೆ ಸೋಲು: 3ನೇ ಸ್ಥಾನಕ್ಕಾಗಿ ಎಸ್‌ಜೆಸಿಇ ಮೈದಾನದಲ್ಲಿ ಕ್ಯಾಲಿಕಟ್ ವಿವಿ ವಿರುದ್ಧ ನಡೆದ ಪಂದ್ಯದಲ್ಲಿ ಆತಿಥೇಯ ಮೈಸೂರು ವಿಶ್ವವಿದ್ಯಾಲಯ 80 ರನ್‌ಗಳಿಂದ ಸೋಲು ಅನುಭವಿಸಿತು.

ಮೊದಲು ಬ್ಯಾಟಿಂಗ್ ಮಾಡಿದ ಕ್ಯಾಲಿಕಟ್ ವಿವಿಯು ನಿಗದಿತ 25 ಓವರ್‌ಗಳಲ್ಲಿ 3 ವಿಕೆಟ್‌ಗೆ 174 ರನ್ ದಾಖಲಿಸಿತು. ಪ್ರತಿಯಾಗಿ ಸ್ಪರ್ಧಾತ್ಮಕ ಮೊತ್ತ ಬೆನ್ನಟ್ಟಿದ ಮೈಸೂರು ವಿವಿ ತಂಡ 21.5 ಓವರ್‌ಗಳಲ್ಲಿ 94 ರನ್ ಪೇರಿಸಿ ಸರ್ವಪತನ ಕಂಡಿತು.

ಪ್ರಶಸ್ತಿ ಪ್ರದಾನ: ಫೈನಲ್ ಪಂದ್ಯ ಮುಗಿದ ನಂತರ ನಡೆದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಶುಭಕೋರಿದರು.

ವಾಲಿಬಾಲ್ ಪಂದ್ಯಾವಳಿ: ಟ್ರೋಫಿ ವಿತರಣೆ...



ಮೈಸೂರು ತಾಲೂಕು ಜಯಪುರ ಹೋಬಳಿಯ ದೂರ ಗ್ರಾಮದಲ್ಲಿ ದುಗ್ಗಲಮ್ಮ ಜಾತ್ರಾ ಮಹೋತ್ಸವ ಪ್ರಯುಕ್ತ ಸಾಮ್ರಾಟ್ ಅಶೋಕ ಯೂತ್ಸ್ ಬಳಗದಿಂದ ಆಯೋಜಿಸಿರುವ ವಾಲಿಬಾಲ್ ಪಂದ್ಯಾವಳಿಗೆ ಸಮಾಜ ಸೇವಕ ಎಸ್.ಶ್ರೀಕಾಂತ್ ಅವರು ವೈಯಕ್ತಿಕವಾಗಿ ಟ್ರೋಫಿ, ಹತ್ತು ಸಾವಿರ ರೂ.ಗಳ ಬಹುಮಾನ ಮೊತ್ತದ ಹಣವನ್ನು ಆಯೋಜಕರಾದ ರಾಮಮೂರ್ತಿ ಅವರಿಗೆ ನೀಡಿದರು. ಮಾಜಿ ಮೇಯರ್ ಪುರುಷೋತ್ತಮ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗೆಜ್ಜಗಳ್ಳಿ ಲೋಕೇಶ್, ದೂರ ನಂದೀಶ್, ಮುರುಡಗಹಳ್ಳಿ ನಂಜುಂಡಸ್ವಾಮಿ ಮತ್ತು ದೂರ ರಾಮು ಇನ್ನಿತರರು ಉಪಸ್ಥಿತರಿದ್ದರು.

ರಾಷ್ಟ್ರೀಯ ಥ್ರೋಬಾಲ್ ಪಂದ್ಯಾವಳಿಗೆ ಇಂದಿನಿಂದ ಆಟಗಾರರ ಆಯ್ಕೆ

ಮೈಸೂರು, ಜ.29(ಜಿಎ)–ಭಾರತೀಯ ಪ್ಯಾರಾ ಥ್ರೋಬಾಲ್ ಫೆಡರೇಷನ್ ವತಿಯಿಂದ ಜ.30 ಮತ್ತು 31ರಂದು ನಗರದ ನಂಜರಾಜ ಬಹದ್ದೂರ್ ಛತ್ರದಲ್ಲಿ ಮಾರ್ಚ್ 25ರಿಂದ 27ರವರೆಗೆ ನಗರದಲ್ಲಿ ನಡೆಯುವ ರಾಷ್ಟ್ರೀಯ ಥ್ರೋಬಾಲ್ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳುವ ಆಟಗಾರರ ಆಯ್ಕೆ ನಡೆಯಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ರೋಟರಿ ಹೆರಿಟೇಜ್ ಕ್ಲಬ್ ಸಂಸ್ಥೆ ಅಧ್ಯಕ್ಷ ಆರ್. ರಾಜೇಶ್ ಈ ವಿಷಯ ತಿಳಿಸಿ, ಆಯ್ಕೆ



ಪ್ರಕ್ರಿಯೆಯಲ್ಲಿ ಸುಮಾರು 50 ಮಂದಿ ಪಾಲ್ಗೊಳ್ಳಲಿದ್ದಾರೆ. ಇವರಲ್ಲಿ ಮಹಿಳೆಯರು, ಪುರುಷರೂ ಇದ್ದಾರೆ. ಆಯ್ಕೆಯಾದವರು ರಾಷ್ಟ್ರೀಯ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲು ಅರ್ಹತೆ ಪಡೆಯುತ್ತಾರೆ. ಇವರಿಗೆ ರೋಟರಿ ಹೆರಿಟೇಜ್ ಕ್ಲಬ್ ವತಿಯಿಂದ ಊಟ, ತಿಂಡಿ, ಪ್ರಯಾಣದ ವೆಚ್ಚ ನೀಡಲಾಗುತ್ತದೆ. ರಾಷ್ಟ್ರೀಯ ಪಂದ್ಯಾವಳಿಯಲ್ಲಿ ಆಯ್ಕೆಯಾದವರು ಏಪ್ರಿಲ್ 17ರಿಂದ 20 ರವರೆಗೆ ಕಾಂಬೋಡಿಯಾದಲ್ಲಿ ನಡೆಯುವ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲು ಅರ್ಹತೆ ಪಡೆಯುತ್ತಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಜುನಾಥ್ ರಾಚಯ್ಯ, ಗಣೇಶ್, ಈಶ್ವರ್ ಭಟ್, ಪ್ರಭುಸ್ವಾಮಿ ಉಪಸ್ಥಿತರಿದ್ದರು.

ಭದ್ರತಾ ಪಡೆಗಳೊಂದಿಗೆ ಗುಂಡಿನ ಚಕಮಕಿ;
ಮಹಿಳೆ ಸೇರಿ ಇಬ್ಬರು ನಕ್ಸಲರು ಸಾವು

ರಾಂಚಿ: ಜಾರ್ಖಂಡ್‌ನ ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯಲ್ಲಿ ಬುಧವಾರ ಭದ್ರತಾ ಪಡೆಗಳು ಮತ್ತು ಸಿಪಿಐ (ಮಾವೋವಾದಿಗಳು) ನಡುವಿನ ಗುಂಡಿನ ಚಕಮಕಿಯಲ್ಲಿ ಮಹಿಳೆ ಸೇರಿದಂತೆ ಇಬ್ಬರು ನಕ್ಸಲರು ಸಾವನ್ನಪ್ಪಿದ್ದಾರೆ. ಸ್ಥಳದಲ್ಲಿ ಎರಡು ಐಎನ್‌ಎಸ್‌ಎಎಸ್ ರೈಫಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಜಾರ್ಖಂಡ್ ಪೊಲೀಸ್ ಮತ್ತು 209 ಕೋಬ್ರಾ ಬೆಟಾಲಿಯನ್‌ನ ಜಂಟಿ ತಂಡ ಮಾವೋವಾದಿಗಳೊಂದಿಗೆ ನಡೆಸಿದ ಗುಂಡಿನ ಚಕಮಕಿಯಲ್ಲಿ ಒಬ್ಬ ಮಹಿಳೆ ಸೇರಿದಂತೆ ಇಬ್ಬರು ಸಾವನ್ನಪ್ಪಿದ್ದಾರೆ. ಒಬ್ಬ ಭದ್ರತಾ ಸಿಬ್ಬಂದಿ ಕೈಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಚೈಬಾಸಾ ಎಸ್‌ಪಿ ಅಶುತೋಷ್ ಶೇಖರ್ ಹೇಳಿದ್ದಾರೆ.

ಎನ್‌ಕೌಂಟರ್‌ನಲ್ಲಿ ಸಾವನ್ನಪ್ಪಿದ ಮಾವೋವಾದಿಗಳಲ್ಲಿ ಒಬ್ಬನನ್ನು ವಲಯ ಕಮಾಂಡರ್ ಸಂಜಯ್ ಗಂಜು ಎಂದು ಗುರುತಿಸಲಾಗಿದೆ. ಇನ್ನೊಬ್ಬರು ಭಯಾನಕ ಮಾವೋವಾದಿ ಅನಲ್ ದಾ ಅವರ ಮಹಿಳಾ ಸ್ನೇಹಿತೆ ಎಂದು ಹೇಳಲಾಗುತ್ತಿದ್ದು, ಅವರ ತಲೆಗೆ 1 ಕೋಟಿ ರೂ. ಬಹುಮಾನವಿತ್ತು ಎಂದರು. ಇಂದು ಬೆಳಗ್ಗೆ 7.00 ಗಂಟೆ ಸುಮಾರಿಗೆ ಪೊಲೀಸ್ ತಂಡ ಕಾಡಿನೊಳಗೆ ತೆರಳಿದ ತಕ್ಷಣ, ಮಾವೋವಾದಿಗಳು ಹೊಂಚು ಹಾಕಿ ಗುಂಡು ಹಾರಿಸಲು ಪ್ರಾರಂಭಿಸಿದರು. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಗಳು ಗುಂಡು ಹಾರಿಸಿದಾಗ ಒಬ್ಬ ಬಂಡುಕೋರ ಸ್ಥಳದಲ್ಲೇ ಸಾವನ್ನಪ್ಪಿದನು ಎಂದು ಎಸ್‌ಪಿ ತಿಳಿಸಿದ್ದಾರೆ.

ಇಂದು 'ಲೋಕಶಂಕರ' ಕೃತಿ ಲೋಕಾರ್ಪಣೆ

ಮೈಸೂರು, ಜ.29–ಶಾಂತಲಾ ಪಬ್ಲಿಕೇಷನ್ ವತಿಯಿಂದ ಜ.30ರಂದು ಸಂಜೆ 5 ಗಂಟೆಗೆ ಮೈಸೂರಿನ ಶೃಂಗೇರಿ ಶಂಕರ ಮಠದಲ್ಲಿ 'ಲೋಕಶಂಕರ' ಕೃತಿ ಬಿಡುಗಡೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಮುಖ್ಯ ಅತಿಥಿಗಳಾಗಿ ಮೇಘಾಲಯದ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಆಗಮಿಸಲಿದ್ದು, ಕೃತಿಯನ್ನು ಶ್ರೀರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್ ಲೋಕಾರ್ಪಣೆ ಮಾಡಲಿದ್ದಾರೆ. ವಿದ್ವಾನ್ ಡಾ.ಶೆಲ್ವಪಿಳ್ಳೈ ಐಯ್ಯಂಗಾರ್ ಕೃತಿ ಪರಿಚಯ ಮಾಡಿಕೊಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಕೃತ ವಿದ್ವಾಂಸ ಡಾ.ಹೆಚ್.ವಿ.ನಾಗರಾಜರಾವ್ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಕಾಡ್ಗಿಚ್ಚು, ಬೇಸಿಗೆಯಲ್ಲಿ ನೀರು ಅರಸಿ ಅರಣ್ಯದಂಚಿನ ಗ್ರಾಮಗಳಿಗೆ

ಆನೆಗಳು ಬರುವುದನ್ನು ತಡೆಯಲು ಅಗತ್ಯ ಕ್ರಮ ಕೈಗೊಳ್ಳಿ

● ಇಲಾಖಾ ಅಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಕಟ್ಟಾಜ್ಞೆ ● ಅಗತ್ಯವಿರುವ ಸಿಬ್ಬಂದಿ; ಆಧುನಿಕ ಅಗ್ನಿಶಾಮಕ ಉಪಕರಣಗಳ ಸಜ್ಜಾಗಿಸುವಂತೆಯೂ ಸೂಚನೆ

ಮೈಸೂರು,ಜ.29(ಎಂಟಿವೈ)–ಬೇಸಿಗೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕಾಡ್ಗಿಚ್ಚು ತಡೆ ಹಾಗೂ ಅರಣ್ಯದಂಚಿನ ಗ್ರಾಮಗಳಿಗೆ ಕಾಡಾನೆಗಳು ಬರದಂತೆ ನೋಡಿಕೊಳ್ಳಲು ಆನೆ ಕಂದಕ ಹಾಗೂ ಸೋಲಾರ್ ಬೇಲಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಸೂಚನೆ ನೀಡಿದ್ದಾರೆ.

ಮೈಸೂರಿನ ಅರಣ್ಯ ಭವನದಲ್ಲಿ ಮೈಸೂರು ವೃತ್ತದ ಹಿರಿಯ ಅರಣ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದ ಬಳಿಕ ಮಾತನಾಡಿದ ಅವರು, ಬೇಸಿಗೆಯಲ್ಲಿ ಅರಣ್ಯ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕಾಡ್ಗಿಚ್ಚು ಉಂಟಾಗದಂತೆ ಕಟ್ಟೆಚ್ಚರ ವಹಿಸಬೇಕು ಎಂದು ಸಲಹೆ ನೀಡಿದರು.

ಕಾಡ್ಗಿಚ್ಚು ತಡೆಗಾಗಿ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಬೆಂಕಿ ನಂದಿಸಲು ಬಳಸುವ ಅಗ್ನಿಶಾಮಕ ಉಪಕರಣಗಳನ್ನು ಸುಸ್ಥಿತಿಯಲ್ಲಿಟ್ಟುಕೊಂಡಿರಬೇಕು. ಎಲ್ಲಾ ವಲಯಗಳಲ್ಲೂ ಸಿಬ್ಬಂದಿ ಕಟ್ಟೆಚ್ಚರದಿಂದ ನಿಗಾ ಇಡಬೇಕು. ಎಲ್ಲಾದರೂ ಬೆಂಕಿ ಪ್ರಕರಣ ಕಂಡು ಬಂದರೆ ಕೂಡಲೇ ಸ್ಥಳಕ್ಕೆ ಧಾವಿಸಿ, ಬೆಂಕಿ ನಂದಿಸುವ ಮೂಲಕ ಅರಣ್ಯ ನಾಶವಾಗದಂತೆ ನೋಡಿಕೊಳ್ಳಬೇಕು. ಅಲ್ಲದೆ, ಕಾಡಂಚಿನ ಗ್ರಾಮಗಳ ಜನರಲ್ಲಿ ಕಾಡ್ಗಿಚ್ಚು ಕುರಿತು ಜಾಗೃತಿ ಮೂಡಿಸಿ, ಅವರ ವಿಶ್ವಾಸಗಳಿಸಬೇಕು ಎಂದರು.

ಬೇಸಿಗೆಯಲ್ಲಿ ಅರಣ್ಯ ಪ್ರದೇಶದಲ್ಲಿ ವನ್ಯಜೀವಿಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ನೋಡಿಕೊಳ್ಳಬೇಕು. ಅರಣ್ಯ ಪ್ರದೇಶದಲ್ಲಿರುವ ಸೋಲಾರ್ ಬೋರ್‌ವೆಲ್‌ಗಳು ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಆ ಮೂಲಕ ಸೋಲಾರ್ ಬೋರ್‌ವೆಲ್‌ಗಳ ಸಹಾಯದಿಂದ ಕೆರೆಗಳಿಗೆ ನೀರು ತುಂಬಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಸಮರ್ಪಕ ನಿರ್ವಹಣೆ: ಮೈಸೂರು ಅರಣ್ಯ ವೃತ್ತದಲ್ಲಿ ಮಾನವ ಮತ್ತು ವನ್ಯಜೀವಿ ಸಂಘರ್ಷ ಪ್ರಕರಣ ನಿಯಂತ್ರಿಸಬೇಕು. ಕಾಡಂಚಿನ ಗ್ರಾಮಗಳಿಗೆ ಕಾಡಾನೆಗಳು ಬರದಂತೆ ನೋಡಿಕೊಳ್ಳಬೇಕು. ಈಗಾಗಲೆ ಕಾಡಂಚಿನ ಗ್ರಾಮಗಳಿಗೆ ವನ್ಯಜೀವಿಗಳು ಬರದಂತೆ ನೋಡಿಕೊಳ್ಳಲು ಹಾಲಿ ಆನೆ ಕಂದಕ(ಇಪಿಟಿ) ಹಾಗೂ ಸೋಲಾರ್ ಬೇಲಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಆಗ ಮಾತ್ರ ಕಾಡಾನೆಗಳು ಕಾಡಂಚಿನ ಗ್ರಾಮಗಳಿಗೆ ಬರದಂತೆ ನೋಡಿಕೊಳ್ಳಬಹುದು ಎಂದು ತಿಳಿಸಿದರು.

ಏಕ ಬಳಕೆ ಪ್ಲಾಸ್ಟಿಕ್ ನಿಯಂತ್ರಿಸಲು ಸೂಚನೆ: ಮೈಸೂರು ನಗರದ ಪರಿಸರ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಬೇಕು. ಈಗಾಗಲೇ ಮೈಸೂರನ್ನು ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ನಗರ ಎಂದು ಘೋಷಿಸಲಾಗಿದ್ದು, ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಪ್ಲಾಸ್ಟಿಕ್ ಕವರ್, ಬಾಟಲಿ, ತಟ್ಟೆ, ಲೋಟ, ಬ್ಯಾನರ್, ಬಂಟಿಗ್ಸ್ ಸೇರಿದಂತೆ ಯಾವುದೇ ಏಕ ಬಳಕೆ ವಸ್ತು ಮಾರಾಟ, ಸಾಗಾಟ ಹಾಗೂ ದಾಸ್ತಾನಿಗೆ ಅವಕಾಶ ಇಲ್ಲದಂತೆ ಕ್ರಮ ಕೈಗೊಳ್ಳಬೇಕು. ನಿಯಮಿತವಾಗಿ ತಪಾಸಣೆ ನಡೆಸಿ ದಂಡ ವಿಧಿಸಲು ಸೂಚನೆ ನೀಡಿದರು.

ಬಂಡೀಪುರದಲ್ಲಿ ರೈಲ್ವೆ ಬ್ಯಾರಿಕೇಡ್: ಮೈಸೂರು ವೃತ್ತಕ್ಕೆ ಒಳಪಡುವ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆ ಬಗ್ಗೆ ಸಚಿವರು ಮಾಹಿತಿ ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿಎಫ್ ಡಾ.ಮಾಲತಿ ಪ್ರಿಯಾ, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಾಡಂಚಿನ ಗ್ರಾಮಗಳ ವ್ಯಾಪ್ತಿಯಲ್ಲಿ 173 ಕಿ.ಮೀ ಅರಣ್ಯ ಪ್ರದೇಶವಿದ್ದು, ಈಗಾಗಲೇ 73 ಕಿ.ಮೀ. ವಿಸ್ತೀರ್ಣದ ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ. ಈ ವರ್ಷ 15 ಕಿ.ಮಿ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾರ್ಯ ಕೈಗೆತ್ತಿಕೊಳ್ಳಲಾಗುತ್ತಿದೆ. ಉಳಿದಂತೆ 85.22 ಕಿ.ಮಿ ದೂರದ ರೈಲ್ವೆ ಬ್ಯಾರಿಕೇಡ್ ಅಳವಡಿಸಿದರೆ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಾಡಂಚಿನ ಗ್ರಾಮಗಳ ವ್ಯಾಪ್ತಿಯಲ್ಲಿ ಪೂರ್ಣ ಪ್ರಮಾಣದ ರೈಲ್ವೆ ಬ್ಯಾರಿಕೇಡ್ ಅಳವಡಿಸಿದಂತಾಗುತ್ತದೆ ಎಂದು ವಿವರಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಈಶ್ವರ್ ಖಂಡ್ರೆ ಅವರು, 85.22 ಕಿಮಿ ಉದ್ದದ ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಅಂದಾಗ 157 ಕೋಟಿ ಬೇಕಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಕಳುಹಿಸುವಂತೆ ಸಲಹೆ ನೀಡಿದರು.

ಚಿರತೆ ಸಂರಕ್ಷಣಾ ಕೇಂದ್ರ: ಮೈಸೂರಿನ ಇಲವಾಲದ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಚಿರತೆ ಸಂರಕ್ಷಣಾ ಮತ್ತು ಪುನರ್ವಸತಿ ಕೇಂದ್ರದ ಬಗ್ಗೆ ಮಾಹಿತಿ ಪಡೆದರು. ಇಲವಾಲದಲ್ಲಿರುವ ಅರಣ್ಯ ಸಿಬ್ಬಂದಿ ತರಬೇತಿ ಕೇಂದ್ರದ ಬಳಿ 92 ಎಕರೆ ಪ್ರದೇಶದಲ್ಲಿ 70 ಕೋಟಿ ರೂ. ವೆಚ್ಚದಲ್ಲಿ ಚಿರತೆ ಸಂರಕ್ಷಣಾ ಕೇಂದ್ರ ನಿರ್ಮಾಣ ಸಂಬಂಧ ಸಲ್ಲಿಸಿರುವ ಪ್ರಸ್ತಾವನೆ ಸಮಂಜಸವಾಗಿದ್ದು, ಮುಂದಿನ ಕ್ಯಾಬಿನೆಟ್ ಮೀಟಿಂಗ್‌ನಲ್ಲಿ ಅನುಮೋದನೆ ದೊರಕಿಸಿಕೊಡುವ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಮೈಸೂರು ವೃತ್ತದ ಸಿಎಫ್ ಡಾ.ಮಾಲತಿ ಪ್ರಿಯಾ, ಕಾರ್ಯ ಯೋಜನೆ ವಿಭಾಗದ ಸಿಎಫ್ ರವಿಶಂಕರ್, ಡಿಸಿಎಫ್‌ಗಳಾದ ಡಾ.ಕೆ.ಎನ್.ಬಸವರಾಜ್, ಡಾ.ಐ.ಬಿ.ಪ್ರಭುಗೌಡ, ಡಾ.ಚಂದ್ರಶೇಖರ್ ಪಾಟೀಲ್, ಫಯಾಜ್ ಫಾಸಿ, ಪರಿಸರ ಇಲಾಖೆಯ ಹಿರಿಯ ಅಧಿಕಾರಿ ರಾಜಶೇಖರ್ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಅರಣ್ಯ ಭವನದಲ್ಲಿ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಅರಣ್ಯ ಮತ್ತು ಪರಿಸರ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

> “ ಬೇಸಿಗೆ ವೇಳೆ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಜನರಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ನೋಡಿಕೊಳ್ಳಬೇಕು. ಕಲುಷಿತ ನೀರು ಸೇವನೆ ಪ್ರಕರಣ ವರದಿಯಾಗಬಾರದು. ಈ ಹಿನ್ನೆಲೆಯಲ್ಲಿ ನಿಯಮಿತವಾಗಿ ಕುಡಿಯುವ ನೀರು ಪೂರೈಕೆ ಮಾಡುವ ಟ್ಯಾಂಕ್‌ಗಳ ನೀರಿನ ಗುಣಮಟ್ಟ ಪರೀಕ್ಷಿಸಬೇಕು. ಕೆರೆಗಳಿಗೆ ಕಲುಷಿತ ಹಾಗೂ ಒಳಚರಂಡಿ ನೀರು ಸೇರುತ್ತಿರುವ ಬಗ್ಗೆ ದೂರು ಬಂದಿದೆ. ಒಳಚರಂಡಿ ನೀರು ಶುದ್ಧೀಕರಣ ಘಟಕಕ್ಕೆ ಹೋಗದೇ ರಾಜಕಾಲುವೆ ಮೂಲಕ ಕೆರೆಗೆ ಸೇರುತ್ತಿರುವುದನ್ನು ಪತ್ತೆ ಮಾಡಬೇಕು. **–ಈಶ್ವರ್ ಖಂಡ್ರೆ**

ಮುಡಾ ಮಾಜಿ ಆಯುಕ್ತ ಡಿ.ಬಿ.ನಟೇಶ್ ವಿರುದ್ಧ ಕ್ರಮ ಕಾನೂನುಬಾಹಿರ

ಇಡಿಗೆ ಹೈಕೋರ್ಟ್ ತೀವ್ರ ತರಾಟೆ

ಬೆಂಗಳೂರು, ಜ.29– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ(ಮುಡಾ) ಮಾಜಿ ಆಯುಕ್ತ ಡಾ. ಡಿ.ಬಿ.ನಟೇಶ್ ನಿವಾಸದಲ್ಲಿ ನಡೆಸಲಾದ ಶೋಧ ಮತ್ತು ವಶಪಡಿಸಿಕೊಳ್ಳುವಿಕೆಯನ್ನು ಕರ್ನಾಟಕ ಹೈಕೋರ್ಟ್ ಕಾನೂನುಬಾಹಿರ, ಅನಗತ್ಯ ಮತ್ತು ಕಾನೂನು ಪ್ರಕ್ರಿಯೆಯ ದುರುಪಯೋಗ ಎಂದು ಜಾರಿ ನಿರ್ದೇಶನಾಲಯ(ಇಡಿ)ವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ. ಪಾರ್ವತಿ ಅವರಿಗೆ ಅಕ್ರಮವಾಗಿ ನಿವೇಶನಗಳನ್ನು ಮಂಜೂರು ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಇಡಿ ನಟೇಶ್ ವಿರುದ್ಧ ಪ್ರಕರಣ ದಾಖಲಿಸಿಕೊಂಡಿತ್ತು. ಅಲ್ಲದೆ ಅವರ ಮನೆ ಮೇಲೆ ದಾಳಿ ನಡೆಸಿ ಶೋಧ ನಡೆಸಿತ್ತು.

ಮುಡಾ ಹಗರಣ ಸಂಬಂಧ ಜಾರಿ ನಿರ್ದೇಶನಾಲಯ ತನ್ನ ಮನೆಯಲ್ಲಿ ನಡೆಸಿರುವ ಶೋಧ ಕಾರ್ಯ ಹಾಗೂ ಇದಕ್ಕೆ ಸಂಬಂಧಿಸಿದಂತೆ ಸಮನ್ಸ್ ನೀಡಿ, ದಾಖಲು ಮಾಡಿಕೊಂಡಿರುವ ತಮ್ಮ ಪ್ರಮಾಣಿತ ಹೇಳಿಕೆ ಪ್ರಶ್ನಿಸಿ ನಟೇಶ್ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.



ಡಾ. ಡಿ.ಬಿ.ನಟೇಶ್

ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಹೇಮಂತ್ ಚಂದನ ಗೌಡರ್ ಅವರ ಏಕಸದಸ್ಯ ಪೀಠ, ಇಡಿ, ಹಣ ವರ್ಗಾವಣೆ ಮತ್ತು ಅಪರಾಧದ ಆದಾಯವನ್ನು ಮುಟ್ಟುಗೋಲು ಹಾಕಿಕೊಳ್ಳುವ ಗಂಭೀರ ಅಪರಾಧವನ್ನು ತಡೆಗಟ್ಟಲು ಸ್ಥಾಪಿಸಲಾದ ಪ್ರಮುಖ ತನಿಖಾ ಸಂಸ್ಥೆಯಾಗಿದೆ ಮತ್ತು ಅದು ತನ್ನ ಕರ್ತವ್ಯಗಳನ್ನು ನ್ಯಾಯಯುತವಾಗಿ ನಿರ್ವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಇಡಿ ದಾಖಲಿಸಿಕೊಂಡಿರುವ ನಟೇಶ್ ಹೇಳಿಕೆಗಳನ್ನು ರದ್ದುಗೊಳಿಸಿದ ಹೈಕೋರ್ಟ್, ಸಂವಿಧಾನದ 21ನೇ ವಿಧಿಯ ಅಡಿಯಲ್ಲಿ ಸ್ವಾತಂತ್ರ್ಯ ಮತ್ತು ಗೌಪ್ಯತೆಯ ಹಕ್ಕು ಅನಿಯಂತ್ರಿತ ಶೋಧಗಳ ವಿರುದ್ಧದ ಹಕ್ಕನ್ನು ಸಹ ಹೊಂದಿದೆ ಎಂದು ಹೇಳಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ ಸೆಕ್ಷನ್ 3 ರ ಅಡಿಯಲ್ಲಿ ಅಪರಾಧವನ್ನು ದಾಖಲಿಸಲು ಯಾವುದೇ ಪ್ರಾಥಮಿಕ ಪುರಾವೆಗಳಿಲ್ಲದಿದ್ದಾಗ, ತನಿಖೆಯ ನೆಪದಲ್ಲಿ ಅರ್ಜಿದಾರರಾದ ನಟೇಶ್ ಅವರ ಆವರಣದಲ್ಲಿ ನಡೆಸಿದ ಶೋಧವು ಕಾನೂನು ಪ್ರಕ್ರಿಯೆಯ ಸಂಪೂರ್ಣ ದುರುಪಯೋಗವಾಗಿದೆ ಎಂದು ಹೈಕೋರ್ಟ್ ಹೇಳಿದೆ.

2024ರ ಅಕ್ಟೋಬರ್ 28ರಿಂದ 29ರವರೆಗೆ ಅರ್ಜಿದಾರ ನಟೇಶ್ ಅವರ ನಿವಾಸದಲ್ಲಿ ನಡೆಸಲಾದ ಆಕ್ಷೇಪಾರ್ಹ ಶೋಧ, ವಶಪಡಿಸಿಕೊಳ್ಳುವಿಕೆ ಮತ್ತು ನಂತರದ PMLA, 2002 ರ ಸೆಕ್ಷನ್ 17(1)(ಜಿ) ಅಡಿಯಲ್ಲಿ ದಾಖಲಿಸಲಾದ ಹೇಳಿಕೆ ಅಮಾನ್ಯ ಮತ್ತು ಕಾನೂನುಬಾಹಿರ ಎಂದು ಹೈಕೋರ್ಟ್ ಘೋಷಿಸಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ಹಂಚಿಕೆ ಮಾಡಲಾಗಿದ್ದ 14 ನಿವೇಶನಗಳನ್ನು ಒಳಗೊಂಡ ಮುಡಾ ಪ್ರಕರಣವನ್ನು ಜಾರಿ ನಿರ್ದೇಶನಾಲಯ ತನಿಖೆ ನಡೆಸಲು ಯತ್ನಿಸುತ್ತಿದೆ. ಆದರೆ ಇದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ. ಎರಡನೆಯದಾಗಿ ಜಾರಿ ನಿರ್ದೇಶನಾಲಯ ನಿರ್ದೇಶಕರು ಅಥವಾ ಅವರು ಸೂಚಿಸುವ ಅಧಿಕಾರಿಗಳು ಇದು ಶೋಧ ಮತ್ತು ಜಪ್ತಿ ನಡೆಸಲು ಸೂಕ್ತ ಪ್ರಕರಣ ಎಂದು ಹೇಳಬೇಕು. ಹಾಲಿ ಪ್ರಕರಣದಲ್ಲಿ ಜಂಟಿ ನಿರ್ದೇಶಕರು, ಸಹಾಯಕ ನಿರ್ದೇಶಕರಿಗೆ ತನಿಖೆಗೆ ಅನುಮತಿಸಿದ್ದಾರೆ. ಇದಕ್ಕೆ ಹಣ ಅಕ್ರಮ ವರ್ಗಾವಣೆ ಕಾಯಿದೆ ಸೆಕ್ಷನ್ 17(1)ರಲ್ಲಿ ಅವಕಾಶವಿಲ್ಲ. ಈ ನೆಲೆಯಲ್ಲಿ ಇಡೀ ಶೋಧ ಮತ್ತು ಜಪ್ತಿ ಕಾರ್ಯಾಚರಣೆ ಕಾನೂನುಬಾಹಿರವಾಗಿದೆ ಎಂದು ಪೀಠಕ್ಕೆ ತಿಳಿಸಿದ್ದರು.

ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಜನ್ಮದಿನ ಆಚರಣೆ

ಸೂರ್ಯ, ಚಂದ್ರ ಇರುವವರೆಗೂ ಕಾರ್ಯಪ್ಪರನ್ನು ಸ್ಮರಿಸಬೇಕು: ಶಾಸಕ ಕೆ.ಹರೀಶ್‌ಗೌಡ

ಮೈಸೂರು, ಜ.29(ಜಿಎ)–ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರ ಸೇವೆ ಸ್ಮರಿಸುವ ಮೂಲಕ ಮೈಸೂರಿನಲ್ಲಿ ಕಾರ್ಯಪ್ಪ ಅವರ 126ನೇ ಜನ್ಮದಿನವನ್ನು ಆಚರಿಸಲಾಯಿತು.

ಮೈಸೂರಿನ ಕೊಡವ ಸಮಾಜ, ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅಭಿಮಾನಿ ಬಳಗದ ವತಿಯಿಂದ ಮೈಸೂರಿನ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತದಲ್ಲಿರುವ ಅವರ ಪ್ರತಿಮೆ ಮುಂಭಾಗ ಆಯೋಜಿಸಿದ್ದ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡುವ ಮೂಲಕ ಅವರನ್ನು ಸ್ಮರಿಸಲಾಯಿತು.

ಈ ವೇಳೆ ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ಕಾರ್ಯಪ್ಪ ಅವರು ದೇಶಕ್ಕೆ ಅನನ್ಯವಾದ ಕೊಡುಗೆ ನೀಡಿದ್ದು, ಅವರನ್ನು ನಾವು ಸೂರ್ಯ, ಚಂದ್ರ ಇರುವವರೆಗೂ ಸ್ಮರಿಸಬೇಕು. ಭಾರತೀಯ ಸೇನೆಯಲ್ಲಿ ಶಿಸ್ತು ಮೂಡಲು ಕಾರ್ಯಪ್ಪ ಪ್ರಮುಖ ಪಾತ್ರ ವಹಿಸಿದ್ದಾರೆ. ಈಗಲೂ ಕೊಡಗಿನವರು ಶಿಸ್ತಿನ ಜೀವನ ನಡೆಸುತ್ತಿದ್ದಾರೆ ಎಂದರು.

ಮೈಸೂರಿನ ಕೊಡವ ನಿವಾಸಿಗಳು ವಿಜಯನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದು, ಕೊಡವ ಸಮಾಜದ ಆವರಣದಲ್ಲಿ ಕೊಡಗಿನ ಮತ್ತೊಬ್ಬ ಯೋಧರಾದ ಜನರಲ್ ಕೆ.ಎಸ್.ತಿಮ್ಮಯ್ಯ ಅವರ ಪ್ರತಿಮೆ ನಿರ್ಮಾಣ ಮಾಡಲು ಮನವಿ ಮಾಡಿದ್ದಾರೆ. ಅದರಂತೆ ನನ್ನ ಸ್ವಂತ ಖರ್ಚಿನಿಂದ ಪ್ರತಿಮೆ ನಿರ್ಮಾಣ ಮಾಡಿಸುತ್ತಿದ್ದೇನೆ. ಈಗಾಗಲೇ ಕಾರ್ಯ ಆರಂಭವಾಗಿದೆ. ಪ್ರತಿಮೆ ಅನಾವರಣಗೊಳ್ಳುವ ದಿನ ಅದ್ದೂರಿ ಕಾರ್ಯಕ್ರಮ ಆಯೋಜಿಸಿ ಮೈಸೂರಿನಲ್ಲಿ ನೆಲೆಸಿರುವ ಎಲ್ಲಾ ಕೊಡಗಿನವರನ್ನು ಆಹ್ವಾನಿಸೋಣ ಎಂದು ತಿಳಿಸಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಕೊಡವರ ಪ್ರತಿ ಮನೆ ಮನೆಯಿಂದ ಭಾರತೀಯ ಸೇನೆಯಲ್ಲಿ ಸೈನಿಕರು ಸೇವೆ ಸಲ್ಲಿಸುತ್ತಿದ್ದಾರೆ. ಕಾರ್ಯಪ್ಪ 1993ರಲ್ಲಿ ನಾಡನ್ನು ಅಗಲಿದರು. ಅವರ ಆರಂಭದ ದಿನದಲ್ಲಿ ಸೇನೆಯ ಅತ್ಯುತ್ತಮ ಸೇನೆ ನಿರ್ಮಾಣ ಮಾಡಿದ್ದರು. ಇರಾನ್ ಸೇನೆಯನ್ನು ನಿರ್ವಹಣೆ ಮಾಡಿದ್ದರು. ಇದರೊಟ್ಟಿಗೆ ಅವರಿಗೆ ಕ್ರೀಡೆ, ಸಂಗೀತದ ಬಗ್ಗೆ ಸಾಕಷ್ಟು ಒಲವು ಮೂಡಿಸಿಕೊಂಡಿದ್ದರು ಎಂದು ಸ್ಮರಿಸಿದರು.

ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಕಾರ್ಯಪ್ಪ ಅವರ ಕಾರ್ಯಕ್ರಮ ಮಾಡುವುದು ಬಹಳ ಮುಖ್ಯ. ಯುವಕರು ಸೇನೆಗೆ ಬರಬೇಕು. ಈ ರೀತಿ ಕಾರ್ಯಕ್ರಮಗಳಿಂದ ಪ್ರೇರಣೆಯಾಗಲಿದೆ. ಸರ್ಕಾರ ಸಾಧು ಸಂತರ ಜನ್ಮ ದಿನಾಚರಣೆ ಮಾಡುತ್ತೇವೆ. ಅದರಂತೆ ಸರ್ಕಾರದ ವತಿಯಿಂದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ದಿನಾಚರಣೆ ಮಾಡಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ಎಲ್.ನಾಗೇಂದ್ರ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿ ವರ್ಷ ದೀಪಾವಳಿಯನ್ನು ಸೈನಿಕರೊಂದಿಗೆ ಆಚರಿಸುವ ಮೂಲಕ ದೇಶಕ್ಕೆ ಉತ್ತಮ ಸಂದೇಶ ನೀಡಿದ್ದಾರೆ. ಅದರಂತೆ ದೇಶದ ಎಲ್ಲಾ ಸರ್ಕಾರಿ ಕಚೇರಿಯಲ್ಲಿ ಅಧಿಕಾರಿ ಸೇರಿದಂತೆ ಎಲ್ಲಾ ಸ್ಥಳದಲ್ಲಿ ಅವರಿಗೆ ಗೌರವ ನೀಡಬೇಕು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ಈ ವೃತ್ತಕ್ಕೆ ಮೆಟ್ರೋಪೋಲ್ ಸರ್ಕಲ್ ಎಂದು ಹೇಳುತ್ತಾರೆ. ಅದರ ಬದಲು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತ ಎಂದು ಕರೆಯಬೇಕು ಎಂದರು.

ಮಾಜಿ ಮೇಯರ್ ಎಂ.ಜೆ.ರವಿಕುಮಾರ್ ಮಾತನಾಡಿ, ಫೀಲ್ಡ್ ಮಾರ್ಷಲ್ ವೃತ್ತದಲ್ಲಿ ಸಿಗ್ನಲ್ ಲೈಟುಗಳು ಕಾರ್ಯನಿರ್ವಹಿಸದಿದ್ದರೆ, ಬಸ್‌ಗಳು ವೇಗವಾಗಿ ಸಂಚರಿಸುತ್ತವೆ. ಅದರಲೂ ಕೊಡಗು, ಹುಣಸೂರು ಭಾಗದಿಂದ ಬರುವ ಬಸ್‌ಗಳ ಸಂಖ್ಯೆ ಹೆಚ್ಚಿದೆ. ಈ ಹಿನ್ನೆಲೆಯಲ್ಲಿ ಪ್ರತಿಮೆಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಪ್ರತಿಮೆ ಸುತ್ತಲೂ ಅಭಿವೃದ್ಧಿ ಮಾಡಬೇಕು. ಅದಕ್ಕಾಗಿ ಶಾಸಕರು, ಸಂಸದರು ಅನುದಾನ ನೀಡಿ ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಶ್ರೀಕಂಠಯ್ಯ, ಪಾಲಿಕೆ ಮಾಜಿ ಸದಸ್ಯರಾದ ಮಾಳೇಟಿರ ಸುಬ್ಬಯ್ಯ, ಪ್ರಮಿಳಾ ಭರತ್, ಕೊಡವ ಸಮಾಜದ ಅಧ್ಯಕ್ಷ ಪೊಂಜಾಂಡ ಎ.ಗಣಪತಿ, ಕೊಡವ ಸಮಾಜ ಸಾಂಸ್ಕೃತಿಕ ಮತ್ತು ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ಮುಕ್ಕಾಟಿರ ಅಶೋಕ್, ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅಭಿಮಾನಿ ಬಳಗದ ಅಧ್ಯಕ್ಷ ನಾಯಕಂಡ ತಿಮ್ಮಯ್ಯ, ಕುಟ್ಟಿಮಾಂಡ ಮುತ್ತಪ್ಪ, ಮೇರಿಯಂಡ ನವೀನ್ ಚೆಂಗಪ್ಪ, ರವಿ ಉತ್ತಪ್ಪ ನಾಯಕಂಡ, ಅಂಜಂಡ ಪಿ.ಕಾವೇರಿಯಪ್ಪ ಉಪಸ್ಥಿತರಿದ್ದರು.



ಮೈಸೂರಿನ ಕೊಡವ ಸಮಾಜ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅಭಿಮಾನಿ ಬಳಗದಿಂದ ಮೈಸೂರಿನ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ವೃತ್ತದಲ್ಲಿರುವ ಅವರ ಪ್ರತಿಮೆ ಮುಂಭಾಗ ನಡೆದ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡುವ ಮೂಲಕ ಅವರನ್ನು ಸ್ಮರಿಸಲಾಯಿತು.

ಮೈಕ್ರೋ ಫೈನಾನ್ಸ್‌ಗಳ ಶೋಷಣೆ ವಿರುದ್ಧ ರೈತರ ಪ್ರತಿಭಟನೆ

ಮಂಡ್ಯ,ಜ.29– ರಾಷ್ಟ್ರೀಕೃತ ಬ್ಯಾಂಕ್‌ಗಳ ಸಾಲ ನೀತಿ ಹಾಗೂ ಮೈಕ್ರೋ ಫೈನಾನ್ಸ್‌ಗಳ ಶೋಷಣೆ ವಿರುದ್ಧ ರೈತರು ಮಂಡ್ಯದಲ್ಲಿ ಪ್ರತಿಭಟನೆ ನಡೆಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಏಕೀಕರಣ ಸಮಿತಿ ನೇತೃತ್ವದಲ್ಲಿ ರೈತಸಂಘ ನೇಣು ಕುಣಿಕೆಗೆ ಕೊರಳೊಡ್ಡಿದ ಅಣಕು ಶವಯಾತ್ರೆಯೊಂದಿಗೆ ಸರ್‌ಎಂವಿ ಪ್ರತಿಮೆ ಬಳಿಯಿಂದ ಮೆರವಣಿಗೆ ಹೊರಟ ರೈತರು, ಮಹಿಳೆಯರು, ಬಡ ಜನರ ಬದುಕಿಗೆ ಮಾರಕವಾಗಿರುವ ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ರವಾನಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯಿಂದ ರೈತರ ಮೇಲಿನ ಸಾಲದ ಪ್ರಮಾಣ ಹೆಚ್ಚಾಗುತ್ತಿದೆ, ರೈತರನ್ನು ಸಾಲ ಮುಕ್ತಗೊಳಿಸುವ ಯೋಜನೆ ರೂಪಿಸದ ಆಳುವ ಸರ್ಕಾರಗಳು ವಿಜ್ಞಾನ, ತಂತ್ರಜ್ಞಾನ, ಯಾಂತ್ರಿಕತೆ ಬಗ್ಗೆ ಮಾತನಾಡುತ್ತಾ ರೈತರ ಸ್ವಾವಲಂಬನೆಗೆ ಒತ್ತು ನೀಡದೆ ಉದ್ಯಮಿಗಳಿಗೆ ಕಾರ್ಪೊರೇಟ್ ಕುಳಗಳು ಹಾಗೂ ಶ್ರೀಮಂತರಿಗೆ ಉದಾರ ಸಾಲ ನೀಡುತ್ತಿವೆ. ಆದರೆ, ರೈತರಿಗೆ ಸಾಲ ಸಿಗುತ್ತಿಲ್ಲ, ಬೆಳೆಯ ಉತ್ಪಾದನಾ ವೆಚ್ಚ ಹೆಚ್ಚಾಗಿದೆ. ಕನಿಷ್ಠ ಬೆಂಬಲ ಬೆಲೆ ಖಾತರಿಯಾಗದೆ ಕೃಷಿ ಕ್ಷೇತ್ರ ಕಡೆಗಣನೆಯಾಗುತ್ತಿದ್ದು, ಕೃಷಿ ಕಾಯ್ದೆಗಳು ಮಾರಕವಾಗಿ ಪರಿಣಮಿಸಿದ್ದು ಇಂತಹ ಒತ್ತಡದ ಜೀವನದಲ್ಲಿ ರೈತರು ಮಹಿಳೆಯರು ಮತ್ತು ಬಡವರು ಜೀವನೋಪಾಯಕ್ಕಾಗಿ ಖಾಸಗಿ ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಪಡೆಯುತ್ತಿದ್ದು. ಬಡ್ಡಿ ಚಕ್ರಬಡ್ಡಿಯಿಂದ ಸಾಲ ಮರುಪಾವತಿಸಲು ಸಾಧ್ಯವಾಗದೆ ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳ ಕಿರುಕುಳದಿಂದ ಊರು ತೊರೆಯುವ ಹಾಗೂ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಎದುರಾಗಿದೆ ಎಂದು ತಿಳಿಸಿದರು.

ಮೈಕ್ರೋ ಫೈನಾನ್ಸ್ ತಂದೊಡ್ಡಿರುವ ಕಠಿಣ ಪರಿಸ್ಥಿತಿಯಲ್ಲಿ ಸಾಲಗಾರರ ಮೇಲಿನ ಶೋಷಣೆ ತಡೆಯಲು ರಾಷ್ಟ್ರೀಕೃತ ಬ್ಯಾಂಕ್ ಸಹಕಾರಿ ಸಂಘಗಳಲ್ಲಿ ಸುಲಭ ಮಾರ್ಗವಾಗಿ ಸಾಲ ದೊರಕಲು ಸಾಲ ನೀತಿ ರೂಪಿಸಬೇಕು, ರಾಷ್ಟ್ರೀಕೃತ ಬ್ಯಾಂಕ್‌ಗಳು ಪ್ರತೀ ಎಕರೆಗೆ 5 ಲಕ್ಷ ರೂ. ದೀರ್ಘಾವಧಿ ಸಾಲವನ್ನು ಸರಳ ದಾಖಲಾತಿಯಲ್ಲಿ ನೀಡಬೇಕು, ಕೃಷಿ ಸಾಲದ ಬಡ್ಡಿದರವನ್ನು ಕಡಿತ ಮಾಡಬೇಕು. ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಶೂನ್ಯ ದರದಲ್ಲಿ ಬೆಳೆ ವಿಮೆ ಸೌಲಭ್ಯ ಕಲ್ಪಿಸಬೇಕು, ಕೃಷಿ ಉಪಕರಣ, ರಸಗೊಬ್ಬರ, ಬಿತ್ತನೆ ಬೀಜ, ಔಷಧಿಗಳ ಮೇಲಿನ ಜಿಎಸ್‌ಟಿ ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಪಚ್ಚೆ ನಂಜುಂಡಸ್ವಾಮಿ, ಇಂಡವಾಳು ಚಂದ್ರಶೇಖರ್, ಕೆ.ನಾಗೇಂದ್ರಸ್ವಾಮಿ, ಎಸ್.ಮಂಜೇಶ್‌ಗೌಡ, ಅಣ್ಣೂರು ಮಹೇಂದ್ರ, ಶಿವಳ್ಳಿ ಚಂದ್ರಶೇಖರ್, ರಾಮಕೃಷ್ಣಯ್ಯ, ಸೀತಾರಾಮಯ್ಯ, ಕೆ.ಜಿ.ಉಮೇಶ್, ಕೀಳಘಟ್ಟ ನಂಜುಂಡಯ್ಯ, ಸೋ.ಶಿ.ಪ್ರಕಾಶ್, ಪ್ರಭುಲಿಂಗು, ಕೆ.ಪಿ.ಪುಟ್ಟಸ್ವಾಮಿ, ಗುಡಿದೊಡ್ಡಿ ಶಿವಲಿಂಗಯ್ಯ, ಕುದರಗುಂಡಿ ನಾಗರಾಜು, ಹಳುವಾಡಿ ಶ್ರೀನಿವಾಸ್ ಭಾಗವಹಿಸಿದ್ದರು.



ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ಖಂಡಿಸಿ ಬುಧವಾರ ರೈತರು ಮಂಡ್ಯದಲ್ಲಿ ಅಣಕು ಶವಯಾತ್ರೆ ಮೂಲಕ ಪ್ರತಿಭಟಿಸಿದರು.

ನಾಲೆಗೆ ಬಿದ್ದು ಸಾವನ್ನಪ್ಪಿದ್ದ ಮಕ್ಕಳ ಅಂತ್ಯಕ್ರಿಯೆ

ಮಕ್ಕಳನ್ನು ಕಾಪಾಡಲು ನಾಲೆಗೆ ಜಿಗಿದಿದ್ದ ತಾಯಿಯನ್ನು ರಕ್ಷಿಸಿದ್ದ ಸ್ಥಳೀಯರು, ಮಕ್ಕಳ ಸಾವು



ಹಾರೋಹಳ್ಳಿ ಗ್ರಾಮದ ಹೊರವಲಯದಲ್ಲಿ ನಾಲೆಯಲ್ಲಿ ಮೃತಪಟ್ಟ ಮಕ್ಕಳ ಅಂತ್ಯಕ್ರಿಯೆ ಬುಧವಾರ ನಡೆಯಿತು

ಪಾಂಡವಪುರ: ಸೆಲ್ಫಿ ತೆಗೆದುಕೊಳ್ಳುವ ವೇಳೆ ನಾಲೆಗೆ ಬಿದ್ದ ಮಕ್ಕಳ ಅಂತ್ಯಕ್ರಿಯೆಯನ್ನು ಬುಧವಾರ ನೆರವೇರಿಸಲಾಯಿತು.

ಮೃತ ಮಕ್ಕಳ ತಾತ ಲಕ್ಷ್ಮೀಗೌಡರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡ ಪೊಲೀಸರ ಸಮ್ಮುಖದಲ್ಲಿ ಈ ಅಂತ್ಯಕ್ರಿಯೆ ನೆರವೇರಿಸಲಾಯಿತು. ನನ್ನ ಸೊಸೆ ವಿದ್ಯಾ, ಮಕ್ಕಳಾದ ಲಿತಿಷ, ಕಿಶನ್ ವಿಸಿ ನಾಲೆಯ ಪಕ್ಕದಲ್ಲಿ ಸೆಲ್ಫಿ ತೆಗೆದುಕೊಳ್ಳಲು ಹೋಗಿ ಆಕಸ್ಮಿಕವಾಗಿ ಕಾಲು ಜಾರಿ ಮೊಮ್ಮಕ್ಕಳು ನಾಲೆಗೆ ಬಿದ್ದಿದ್ದಾರೆ.

ಈ ವೇಳೆ ಮಕ್ಕಳನ್ನು ಕಾಪಾಡಲು ಸೊಸೆ ವಿದ್ಯಾ ಸಹ ನಾಲೆಗೆ ಹಾರಿದ್ದಾಳೆ. ಈ ಸಂದರ್ಭದಲ್ಲಿ ಸ್ಥಳೀಯರು ನಾಲೆಗೆ ಬಿದ್ದ ಸೊಸೆಯನ್ನು ರಕ್ಷಣೆ ಮಾಡಿದ್ದಾರೆ. ಘಟನೆಯಲ್ಲಿ ಮೊಮ್ಮಕ್ಕಳಾದ ಲಿತಿಷ ಹಾಗೂ ಕಿಶನ್ ಮೃತಪಟ್ಟಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪಾಂಡವಪುರ ಪೊಲೀಸರು ಯುಡಿಆರ್ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಭಾನುವಾರ ಸಂಜೆ ಬನಘಟ್ಟದ ಬಳಿಯ ವಿಸಿ ನಾಲೆಯ ಹಾರೋಹಳ್ಳಿ ಗ್ರಾಮದ ಧನಂಜಯ್ ಅವರ ಪತ್ನಿ ವಿದ್ಯಾ, ಮಕ್ಕಳಾದ ಲಿತಿಷ, ಕಿಶನ್ ನಾಲೆಗೆ ಬಿದ್ದಿದ್ದರು, ಘಟನೆಯಲ್ಲಿ ಸ್ಥಳೀಯರ ಮಕ್ಕಳ ತಾಯಿ ವಿದ್ಯಾಳನ್ನು ರಕ್ಷಣೆ ಮಾಡಿದ್ದರು. ಮಕ್ಕಳು ಘಟನೆಯಲ್ಲಿ ಸಾವನ್ನಪ್ಪಿದ್ದರು. ನಾಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಯುತ್ತಿದ್ದ ಹಿನ್ನೆಲೆಯಲ್ಲಿ ಮಕ್ಕಳ ಮೃತದೇಹವನ್ನು ಹುಡುಕಾಟ ನಡೆಸಲಾಗಿ, ಬುಧವಾರ ಬೆಳಿಗ್ಗೆ ಇಬ್ಬರು ಮಕ್ಕಳ ಮೃತದೇಹ ವಿಸಿ ನಾಲೆಯಲ್ಲಿ ದೊರೆಕಿತು.

ಪೋಷಕರು ಯಾವುದೇ ದೂರು ನೀಡದೆ ಮಕ್ಕಳ ಅಂತ್ಯಕ್ರಿಯೆಗೆ ಮುಂದಾಗಿದ್ದರು. ಈ ವೇಳೆ ಪೊಲೀಸರು ಮಧ್ಯಪ್ರವೇಶಿಸಿ ಘಟನೆಗೆ ಸಂಬಂಧಿಸಿದಂತೆ ದೂರು ನೀಡುವಂತೆ ಮನವೊಲಿಸಿದರು. ಬಳಿಕ ಮೃತ ಮಕ್ಕಳ ತಾತ ಲಕ್ಷ್ಮೀಗೌಡರು ದೂರು ನೀಡಿದರು. ನಂತರ ಸ್ಥಳದಲ್ಲಿಯೇ ಇಬ್ಬರು ಮಕ್ಕಳ ಶವ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿದರು. ನಂತರ ಪೊಲೀಸರು ಹಾರೋಹಳ್ಳಿ ಹೊರವಲಯದಲ್ಲಿ ಬುಧವಾರ ಸಂಜೆ ಮಕ್ಕಳ ಅಂತ್ಯ ಸಂಸ್ಕಾರ ನಡೆಸಿದರು.

ಕೆರಗೋಡಿನಲ್ಲಿ ಕರಾಳ ದಿನ ಆಚರಣೆಗೆ ಯತ್ನ

ಹಿಂದೂ ಕಾರ್ಯಕರ್ತರ ಮೆರವಣಿಗೆ, ಪುನೀತ್ ಕೆರೆಹಳ್ಳಿಗೆ ಕೆರಗೋಡು ಪ್ರವೇಶಕ್ಕೆ ನಿರ್ಬಂಧ, ಮತ್ತೆ ಮುನ್ನಲೆಗೆ ಬಂದ ಹನುಮ ಧ್ವಜ ವಿವಾದ



ಮಂಡ್ಯ,ಜ.29– ಕೆರಗೋಡು ಹನುಮಧ್ವಜ ವಿವಾದ ಮತ್ತೆ ಮುನ್ನೆಲೆಗೆ ಬಂದಿದ್ದು, ಹನುಮ ಧ್ವಜ ಇಳಿಸಿ ಒಂದು ವರ್ಷವಾಗಿರುವ ಹಿನ್ನೆಲೆಯಲ್ಲಿ ಹನುಮ ಧ್ವಜ ಸಮಿತಿಯಿಂದ ಕೆರಗೋಡಿನಲ್ಲಿ ಕರಾಳ ದಿನ ಆಚರಿಸಲು ಬೃಹತ್ ಪಂಜಿನ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು ಮೆರವಣಿಗೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿಗೆ ಪೊಲೀಸರು ಅಡ್ಡಿಪಡಿಸಿದ ಘಟನೆ ನಡೆಯಿತು.

ಕೆರಗೋಡಿನ ಪೆಟ್ರೋಲ್ ಬಂಕ್‌ನಿಂದ ಅರ್ಜುನ ಧ್ವಜ ಸ್ತಂಭದವರೆಗೆ ಬೃಹತ್ ಪಂಜಿನ ಮೆರವಣಿಗೆ ನಡೆಸಿ ಕೆರಗೋಡಿನ ಕರಾಳ ದಿನ ಆಚರಿಸಲಾಯಿತು. ಹನುಮ ಭಕ್ತರು, ಹಿಂದೂ ಕಾರ್ಯಕರ್ತರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಪೊಲೀಸರ ಅಡ್ಡಿ: ಪಂಜಿನ ಮೆರವಣಿಗೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿಗೆ ಪೊಲೀಸರು ಅಡ್ಡಿಪಡಿಸಿದರು. ಮೆರವಣಿಗೆಯಲ್ಲಿ ಭಾಗವಹಿಸಲು ಅಂಕಣದೊಡ್ಡಿ ಗ್ರಾಮದ ಹಿಂದೂ ಕಾರ್ಯಕರ್ತರ ಮನೆಗೆ ಪುನೀತ್ ಆಗಮಿಸಿದ್ದರು. ಆಗ ಪೊಲೀಸರು ಪುನೀತ್ ಬಂಧಿಸಲು ಮನೆಯ ಸುತ್ತ ಪೊಲೀಸರನ್ನು ನಿಯೋಜಿಸಲಾಗಿತ್ತು. ಪುನೀತ್ ಅಲ್ಲಿಂದ ಕೆರಗೋಡಿಗೆ ಹೋಗಲು ಮುಂದಾಗುತ್ತಿದ್ದಂತೆ ಪೊಲೀಸರು ಸುತ್ತುವರೆದು ಹೋಗದಂತೆ ತಡೆದರು.

ಪೊಲೀಸರೊಂದಿಗೆ ವಾಗ್ವಾದ: ಪುನೀತ್ ಕೆರೆಹಳ್ಳಿ ಬಂಧಿಸುವ ವಿಚಾರ ತಿಳಿಯುತ್ತಿದ್ದಂತೆ ನೂರಾರು ಹಿಂದೂ ಕಾರ್ಯಕರ್ತರು ಪುನೀತ್ ಉಳಿದುಕೊಂಡಿದ್ದ ಮನೆಯತ್ತ ಧಾವಿಸಿದರು. ಜೈ ಶ್ರೀರಾಮ್ ಘೋಷಣೆ ಕೂಗಿದರು. ಆಗ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಯಿತು. ಹಿಂದೂ ಕಾರ್ಯಕರ್ತರು ಪುನೀತ್ ಅವರನ್ನು ನಮ್ಮ ಜೊತೆ ಕಳುಹಿಸಿಕೊಡಿ ಎಂದು ಪೊಲೀಸರೊಂದಿಗೆ ವಾಗ್ವಾದಕ್ಕಿಳಿದರು.

ನನಗೆ ಧಾರ್ಮಿಕ ಹಕ್ಕಿಲ್ಲವೇ?: ಕೆರಗೋಡು ಗ್ರಾಮಕ್ಕೆ ಹೋಗದಂತೆ ಎಎಸ್ಪಿ ತಿಮ್ಮಯ್ಯ ಪುನೀತ್ ಕೆರೆಹಳ್ಳಿಗೆ ಸೂಚನೆ ನೀಡುವ ಮೂಲಕ ತಡೆಯೊಡ್ಡಿದರು. ನಿಮಗೆ ನಿರ್ಬಂಧವಿದೆ ಎಂದು ತಿಳಿಸಿದರು. ಇದಕ್ಕೆ ಪುನೀತ್ ಕೆರೆಹಳ್ಳಿ ನಾನು ಹಿಂದೂ, ನನಗೆ ಧಾರ್ಮಿಕ ಹಕ್ಕಿಲ್ಲವೇ?. ನನ್ನ ತಡೆಯೋಕೆ ನಿಮಗೆ ಹಕ್ಕಿದೆಯಾ?. ನಾನು ಕೆರಗೋಡಿಗೆ ಹೋಗಬಾರದು ಎಂದರೆ ಆದೇಶ ಪ್ರತಿ ಕೊಡಿ. ಇಲ್ಲ ನಿಮ್ಮ ಜೊತೆ ನಾನು ಬರಲ್ಲ ಎಂದು ಪಟ್ಟು ಹಿಡಿದರು.

ನಾವು ಭಾರತದಲ್ಲಿ ಇದ್ದೀವಾ?, ಇಲ್ಲ ಪಾಕಿಸ್ತಾನದಲ್ಲಿ ಇದ್ದೇವಾ?. ಶಾಂತಿಯುತವಾಗಿ ನಡೆಯುವ ಕಾರ್ಯಕ್ರಮಕ್ಕೆ ಯಾಕೆ ಅಡ್ಡಿ ಮಾಡುತ್ತೀರಾ ಎಂದು ಪ್ರಶ್ನಿಸಿದರು. ನಾವು ಯಾವುದೇ ಬಾಂಬ್ ತಂದಿಲ್ಲ. ಶಾಂತಿಯುತವಾಗಿ ನಾವು ಮೆರವಣಿಗೆ ಮಾಡುತ್ತಿದ್ದೇವೆ. ಹಿಂದೂ ವಿರೋಧಿ ಸರ್ಕಾರದ ಸೂಚನೆಯಂತೆ ಪೊಲೀಸರು ನಡೆದುಕೊಳ್ಳುತ್ತಿದ್ದೀರಾ ಎಂದು ಪೊಲೀಸರೊಂದಿಗೆ ವಾಗ್ವಾದ ನಡೆಸಿದರು. ನಂತರ ಪೊಲೀಸರು ಕೆರಗೋಡಿಗೆ ಅವಕಾಶ ನೀಡದ ಹಿನ್ನೆಲೆ ಪುನೀತ್ ವಾಪಸ್ ತೆರಳಿದರು.

ಪಿಎಲ್‌ಡಿ ಬ್ಯಾಂಕ್ ಚುನಾವಣೆ: ಪಾಪಣ್ಣ(ಅಂಜನೀಗೌಡ) ಸ್ಪರ್ಧೆ

ಕೆ.ಆರ್.ಪೇಟೆ, ಜ.29– ಫೆ.8ರಂದು ನಡೆಯುವ ತಾಲೂಕು ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಿಂದ ಬಿಜೆಪಿ–ಜೆಡಿಎಸ್ ಮೈತ್ರಿ ಪಕ್ಷದ ಅಭ್ಯರ್ಥಿಯಾಗಿ ಪಿಎಲ್‌ಡಿ ಬ್ಯಾಂಕ್ ಹಾಗೂ ಸೋಮನಹಳ್ಳಿ ಗ್ರಾಪಂ ಮಾಜಿ ಅಧ್ಯಕ್ಷರು ಹಾಗೂ ಮಾಂಬಹಳ್ಳಿ ಸೊಸೈಟಿ ನಿರ್ದೇಶಕ ಕಟ್ಟೆಕ್ಯಾತನಹಳ್ಳಿ ಪಾಪಣ್ಣ



(ಅಂಜನೀಗೌಡ) ಜ.30ರಂದು ನಾಮಪತ್ರ ಸಲ್ಲಿಸುತ್ತಿದ್ದಾರೆ.

ಮೈಕ್ರೋ ಫೈನಾನ್ಸ್ ಸಾಲ ವಸೂಲಾತಿಗೆ ಕಿರುಕುಳ ನೀಡಿದರೆ ದೂರು ಸಲ್ಲಿಸಿ: ಡಾ.ಕುಮಾರ



ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ತಡೆ ಸಂಬಂಧ ಡಿಸಿ ಡಾ.ಕುಮಾರ್ ಸಭೆ ನಡೆಸಿದರು.

ಮಂಡ್ಯ: ಮೈಕ್ರೋ ಫೈನಾನ್ಸ್‌ಗಳು ಸಾಲ ವಸೂಲಾತಿ ಸಂದರ್ಭದಲ್ಲಿ ಕಿರುಕುಳ ನೀಡಿದರೆ 08232–224655 ಸಹಾಯವಾಣಿಗೆ ಕರೆ ಮಾಡಿ ದೂರು ಸಲ್ಲಿಸಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಸಭೆ ನಡೆಸಿ ಮಾತನಾಡಿದ ಅವರು, ಯಾವುದೇ ವ್ಯಕ್ತಿಯನ್ನು ನಿಂದನೆ ಮಾಡಲು ಸಮಾಜದಲ್ಲಿ ಅವಕಾಶವಿಲ್ಲ. ಸಾಲ ಮರುಪಾವತಿ ಮಾಡದೆ ಇರುವವರನ್ನು ಅವಾಚ್ಯ ಪದಗಳಿಂದ ನಿಂದಿಸುವುದು, ಮನೆಯ ಮೇಲೆ ಅವಮಾನವಾಗುವ ರೀತಿ ಮನೆ ಅಡಮಾನ ಮಾಡಿಕೊಳ್ಳಲಾಗಿದೆ ಎಂದು ಬರೆಯುವ ಪ್ರಕರಣಗಳು ಕಂಡು ಬಂದಲ್ಲಿ ಪೊಲೀಸ್ ಇಲಾಖೆ ನೇರವಾಗಿ ಸ್ವಯಂ ಹಿತಾಸಕ್ತಿಯಿಂದ ಎಫ್‌ಐಆರ್ ದಾಖಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು. ಮೈಕ್ರೋ ಫೈನಾನ್ಸ್ ಬಗ್ಗೆ ಬರುವ ದೂರುಗಳನ್ನು ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ. ತಾಲೂಕು ಮಟ್ಟದಲ್ಲಿ ಸಹ ತಾಲೂಕು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗುವುದು ಎಂದರು.

ಸಾಲ ವಸೂಲಾತಿ ಮಾಡಲು ಆರ್‌ಬಿಐ ನಿಯಮಗಳಿವೆ. ನಿಯಮ ಉಲ್ಲಂಘಿಸಿದರೆ ಮೈಕ್ರೋ ಫೈನಾನ್ಸ್ ವಿರುದ್ಧ ಸ್ಥಳೀಯವಾಗಿ ದೂರು ದಾಖಲಿಸುವುದರ ಜೊತೆಗೆ ಕ್ರಮ ಕೈಗೊಳ್ಳುವಂತೆ ಆರ್‌ಬಿಐಗೆ ಪತ್ರ ಬರೆಯಲಾಗುವುದು. ತಾಲೂಕು ಮಟ್ಟದಲ್ಲಿ ತಹಸೀಲ್ದಾರ್ ಹಾಗೂ ಪೊಲೀಸರು ಸಭೆ ನಡೆಸಿ ಸ್ಥಳೀಯವಾಗಿ ಮೈಕ್ರೋ ಫೈನಾನ್ಸ್ ಹಾಗೂ ಸಾಲ ಪಡೆದವರ ನಡುವೆ ಯಾವುದಾದರೂ ದೂರು ಬಂದಲ್ಲಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಮೂರನೇ ಪುಟದಿಂದ

ರಾಜ್ಯದವರಿಗೆ ಸಹಾಯವಾಣಿ: 080–22340676

ಬೆಂಗಳೂರು: ಕುಂಭಮೇಳ ಕಾಲ್ತುಳಿತ ದುರಂತ ಸಂಬಂಧ ಸಹಾಯವಾಣಿಯನ್ನೂ ತೆರೆದಿದ್ದು, ಕುಂಭಮೇಳಕ್ಕೆ ಹೊರಟು ಕುಟುಂಬಸ್ಥರ ಸಂಪರ್ಕಕ್ಕೆ ಸಿಗದವರ ಬಗ್ಗೆ ಮಾಹಿತಿ ನೀಡಲು ಸರ್ಕಾರ ಕೋರಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಕುಂಭಮೇಳಕ್ಕೆ ಹೊರಟು ಕುಟುಂಬಸ್ಥರ ಸಂಪರ್ಕಕ್ಕೆ ಸಿಗದವರ ಬಗ್ಗೆ ಮಾಹಿತಿ ನೀಡಲು ಕೋರಿದೆ. ಈ ಸಹಾಯವಾಣಿಯನ್ನು ಸಂಪರ್ಕ ಮಾಡಬಹುದು:–080–22340676

ಬಿಜೆಪಿ ನಾಯಕರ ಸಹಾಯದಿಂದ ಬೆಳಗಾವಿ ಜಿಲ್ಲೆಯಲ್ಲಿ 300ಕ್ಕಿಂತ ಹೆಚ್ಚು ಜನ ಕುಂಭಮೇಳಕ್ಕೆ ಪ್ರಯಾಣ ಮಾಡಿದ್ದಾರೆ ಎಂಬ ಮಾಹಿತಿ ಇದೆ. ಈ ನಡುವೆ ಉತ್ತರ ಪ್ರದೇಶ ಸರ್ಕಾರ ಯಾವುದೇ ಮಾಹಿತಿ ನೀಡದ ಹಿನ್ನೆಲೆ ಕನ್ನಡಿಗರ ಹಿತರಕ್ಷಣೆಗಾಗಿ ಓರ್ವ ಐಎಎಸ್ ಅಧಿಕಾರಿ, ಬೆಳಗಾವಿ ಜಿಲ್ಲೆಯ ಹೆಚ್ಚುವರಿ ಜಿಲ್ಲಾಧಿಕಾರಿ (ಎಡಿಸಿ) ಹಾಗೂ ಪೊಲೀಸ್ ಅಧಿಕಾರಿಯೊಬ್ಬರನ್ನೊಳಗೊಂಡ ಮೂರು ಜನರ ತಂಡವನ್ನು ಈಗಾಗಲೇ ಅಲ್ಲಿಗೆ ಕಳುಹಿಸಲಾಗಿದೆ ಎಂದರು. ರಾಜ್ಯದ ವಿಪತ್ತು ನಿರ್ವಹಣಾ ತಂಡ ಉತ್ತರಪ್ರದೇಶ ಸರ್ಕಾರದ ಜೊತೆ ನಿರಂತರ ಸಂಪರ್ಕದಲ್ಲಿದೆ. ಆದರೆ, ಉತ್ತರಪ್ರದೇಶ ಸರ್ಕಾರ ಪ್ರಯಾಗ್ರಾಜ್ ಕುಂಭಮೇಳ ದುರಂತದಲ್ಲಿ ರಾಜ್ಯದ ಎಷ್ಟು ಜನ ಮೃತಪಟ್ಟಿದ್ದಾರೆ, ಎಷ್ಟು ಜನ ಗಾಯಾಳುಗಳಾಗಿದ್ದಾರೆ ಎಂಬ ಕುರಿತು ಯಾವುದೇ ಮಾಹಿತಿ ನೀಡುತ್ತಿಲ್ಲ. ಬೆಳಗಾವಿ ಜಿಲ್ಲಾಧಿಕಾರಿ ಸ್ವತಃ ಕುಂಭಮೇಳಕ್ಕೆ ತೆರಳಿದವರ ಕುಟುಂಬದವರನ್ನು ಸಂಪರ್ಕಿಸಿ ನಾಲ್ಕು ಜನ ಮೃತಪಟ್ಟಿರುವ ಸಾಧ್ಯತೆ ಇದೆ ಎಂದು ಮಾಹಿತಿ ನೀಡಿದರು.

ಕುಂಭಮೇಳ ಕಾಲ್ತುಳಿತ; ಸದ್ಯ ಮೈಸೂರಿನವರು ಸಿಲುಕಿಲ್ಲ

ಮೈಸೂರು,ಜ.29(ಪಿಎಂ)– ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ಸಂಭವಿಸಿರುವ ಕಾಲ್ತುಳಿತದ ದುರ್ಘಟನೆಯಲ್ಲಿ ಉಂಟಾಗಿರುವ ಸಾವು–ನೋವು ಆಘಾತಕಾರಿಯಾಗಿದ್ದು, ಅದೃಷ್ಟವಶಾತ್ ಮೈಸೂರು ಜಿಲ್ಲೆಯ ಯಾರು ಈ ದುರಂತದಲ್ಲಿ ಸದ್ಯ ಸಿಲುಕಿಲ್ಲ. 'ಮೈಸೂರು ಮಿತ್ರ' ನೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಮೈಸೂರು ಜಿಲ್ಲೆಯವರು ಈ ದುರಂತದಲ್ಲಿ ಸಿಲುಕಿರುವ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಈವರೆಗೆ ಬಂದಿಲ್ಲ. ಅದಾಗ್ಯೂ ಜಿಲ್ಲಾಡಳಿತ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಮಹಾ ಕುಂಭಮೇಳದಲ್ಲಿ ಮನ ಕರಗುವ ಚಿತ್ರಣ ವಯಸ್ಸಾದ ತಂದೆ–ತಾಯಿ ಕರೆತಂದು ಬಿಟ್ಟು ಹೋದ ಮಕ್ಕಳು!

ಪ್ರಯಾಗ್‌ರಾಜ್, ಜ.29–ಪೋಷಕರು ಮಕ್ಕಳನ್ನು ತಮ್ಮ ಪ್ರಾಣಕ್ಕಿಂತ ಹೆಚ್ಚಾಗಿ ಪ್ರೀತಿಸುತ್ತಾರೆ. ಅವರಿಗೆ ಯಾವುದೇ ಕೊರತೆ ಇಲ್ಲದಂತೆ ಪ್ರೀತಿಯಿಂದ ಸಾಕುತ್ತಾರೆ. ಅದೇ ವಯಸ್ಸಾದ ಹೆತ್ತವರನ್ನು ಕೆಲವು ಮಕ್ಕಳು ನಿರ್ಲಕ್ಷಿಸುತ್ತಿದ್ದಾರೆ. ವೃದ್ಧಾಪ್ಯದಲ್ಲಿರುವ ತಂದೆ–ತಾಯಿಗಳು ಕಷ್ಟಗಳನ್ನು ಅನುಭವಿಸುವಂತೆ ಮಾಡುತ್ತಾರೆ ಮತ್ತು ಅನಾಥಾಶ್ರಮಗಳಲ್ಲಿ ಮತ್ತು ಬೀದಿಗಳಲ್ಲಿ ಬಿಡುತ್ತಾರೆ. ಇದೀಗ ಇದೇ ಕುಂಭಮೇಳದ ಜನಸಾಗರದಲ್ಲಿ ಮಕ್ಕಳು ತಮ್ಮ ವೃದ್ಧ ಪೋಷಕರನ್ನು ಬಿಟ್ಟು ಹೋಗಿದ್ದಾರೆ. ವೃದ್ಧ ಪೋಷಕರ ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ.

ವೈರಲ್ ಆಗಿರುವ ವಿಡಿಯೋದಲ್ಲಿ ವ್ಯಕ್ತಿಯೋರ್ವ, ವೃದ್ಧ ದಂಪತಿಗೆ ಹಣ ಸಹಾಯ ಮಾಡುತ್ತಿದ್ದಾನೆ. ಆತನ ಪ್ರಶ್ನೆಗಳಿಗೆ ಉತ್ತರಿಸಿದ ವೃದ್ಧ 'ನಮಗೆ ಮೂವರು ಗಂಡು ಮಕ್ಕಳು ಮತ್ತು ಮೂವರು ಸೊಸೆಯರಿದ್ದಾರೆ. ನಮ್ಮ ಮೂವರೂ ನಮ್ಮ ಸೊಸೆಯರು ದುಷ್ಟರು. ನಮ್ಮ ಮಕ್ಕಳು ಈ ರೀತಿಯಾಗಿ ನಮ್ಮನ್ನು ಇಲ್ಲಿ ಬಿಟ್ಟು ಹೋಗಿದ್ದಾರೆ ಎಂದು ವೃದ್ಧ ಹೇಳುತ್ತಿದ್ದರೆ, ಗಂಡನ ಮಾತು ಕೇಳಿ ಹೆಂಡತಿ ಕಣ್ಣೀರು ಹಾಕಿದ್ದಾರೆ. ವಿಡಿಯೋ ಮಾಡಿರುವ ವ್ಯಕ್ತಿ, ನಿಮ್ಮಿಬ್ಬರನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತೇನೆ ಎಂದು ಭರವಸೆ ನೀಡಿದ್ದಾನೆ. ವೃದ್ಧ ದಂಪತಿ ಸಹ ಆಶ್ರಮಕ್ಕೆ ಹೋಗಲು ಒಪ್ಪಿಕೊಂಡಿದ್ದಾರೆ. ಆ ವ್ಯಕ್ತಿ ವೃದ್ಧ ದಂಪತಿಗೆ ಒಂದಿಷ್ಟು ಹಣ ನೀಡಿದ್ದಾನೆ. ನಾನು ಇಲ್ಲಿಂದ 4 ಕಿಮೀ ದೂರದಲ್ಲಿರುತ್ತೇನೆ. ಬೇಕಿದ್ದರೆ ಈಗಲೇ ನನ್ನೊಂದಿಗೆ ಬರಬಹುದು. ಸದ್ಯಕ್ಕೆ ನನ್ನ ಬಳಿಯಲ್ಲಿರುವ ಹಣ ಇಷ್ಟೆ. ಈ ಹಣ ಇಟ್ಟುಕೊಳ್ಳಿ. ಬೆಳಗ್ಗೆ ಬಂದು ನಿಮ್ಮನ್ನು ಕರೆದುಕೊಂಡು ಹೋಗುತ್ತೇನೆ ಎಂದು ವ್ಯಕ್ತಿ ತಿಳಿಸಿದ್ದಾನೆ. ಆಗ ವೃದ್ಧ, ನಾವಿಬ್ಬರು ಬೆಳಗ್ಗಿನವರೆಗೂ ಇಲ್ಲಿಯೇ ಇರುತ್ತೇವೆ ಎಂದಿದ್ದಾರೆ.

ವೈರಲ್ ಆಗಿರುವ ವಿಡಿಯೋವನ್ನು ಶಿವಂ ಬಿಕಾನೇರಿ (shivam_bikaneri_official) ಎಂಬ ಇನ್‌ಸ್ಟಾಗ್ರಾಂನಲ್ಲಿ ಶೇರ್ ಮಾಡಿಕೊಳ್ಳಲಾಗಿದೆ. ಈ ವಿಡಿಯೋ 1.6 ಲಕ್ಷಕ್ಕೂ ಅಧಿಕ ವ್ಯೂವ್ ಬಂದಿದ್ದು, 1 ಸಾವಿರಕ್ಕೂ ಹೆಚ್ಚು ಕಮೆಂಟ್‌ಗಳು ಬಂದಿವೆ. ವಿಡಿಯೋ ನೋಡಿದ ನೆಟ್ಟಿಗರು, 'ಓ ದೇವರೇ ಇಂಥ ಮಕ್ಕಳನ್ನು ಯಾರಿಗೂ ಕೊಡಬೇಡ. ಈ ವೃದ್ಧರ ಕಷ್ಟ ನೋಡಲು ಆಗುತ್ತಿಲ್ಲ. ಆ ಪಾಪಿ ಮಕ್ಕಳು ಯಾರೆಂದು ಕಂಡು ಹಿಡಿದು ಛೀಮಾರಿ ಹಾಕಬೇಕು' ಎಂದು ಆಕ್ರೋಶ ಹೊರಹಾಕಿದ್ದಾರೆ. ಆ ವೃದ್ಧರಿಗೆ ಊಟಕ್ಕಾಗಿ ಹಣ ನೀಡಿರುವುದು ತುಂಬಾ ಸಂತೋಷ. ನಿಮ್ಮ ಲೈಕ್ಸ್ ಮತ್ತು ವ್ಯೂವ್‌ಗಾಗಿ ಅವರಿಬ್ಬರ ವಿಡಿಯೋ ಮಾಡಿಕೊಂಡು ಅಲ್ಲಿಯೇ ಅದೇ ಸ್ಥಿತಿಯಲ್ಲಿ ಬಿಟ್ಟು ಬಂದಿರುವುದು ತಪ್ಪು ಎಂದು ವ್ಲಾಗರ್ ಶಿವಂ ಬಿಕಾನೇರಿ ಅವರನ್ನು ಸಹ ಕೆಲ ನೆಟ್ಟಿಗರು ತರಾಟೆಗೆ ತೆಗೆದುಕೊಂಡಿದ್ದಾರೆ.

ನಾಲ್ವರು ಸೇರಿ 30 ಮಂದಿ ಸಾವು

ಮುಖ್ಯಮಂತ್ರಿ ಆದಿತ್ಯನಾಥ್ ಯೋಗಿ ಘೋಷಿಸಿದ್ದಾರೆ. ಅಲ್ಲದೆ ಘಟನೆ ಸಂಬಂಧ ನ್ಯಾಯಮೂರ್ತಿ ಹರ್ಷಕುಮಾರ್, ಡಿಜಿ ಮತ್ತು ಐಜಿಪಿ ವಿ.ಕೆ.ಗುಪ್ತಾ ಸೇರಿದಂತೆ ಮೂವರನ್ನೊಳಗೊಂಡ ನ್ಯಾಯಾಂಗ ತನಿಖೆಗೂ ಆದೇಶಿಸಿ ದ್ದಾರೆ. ಜೊತೆಗೆ ಸಂತ್ರಸ್ತರ ಮಾಹಿತಿಗಾಗಿ 1920 ಸಹಾಯವಾಣಿ ಘೋಷಿಸಲಾಗಿದೆ. ಬುಧವಾರ ಬೆಳಕು ಹರಿಯುವುದಕ್ಕೂ ಮುಂಚೆಯೇ ಪುಣ್ಯ ಸ್ನಾನ ಮಾಡಿಬಿಡಬೇಕು ಎಂಬ ಆತುರದಲ್ಲಿ ಸಾವಿರಾರು ಜನರು ತ್ರಿವೇಣಿ ಸಂಗಮದ ತುದಿಯತ್ತ ಹೊರಟಿದ್ದಾರೆ. ಮಧ್ಯರಾತ್ರಿಯಿಂದಲೇ ಜನರ ಸಂದಣಿ ಹೆಚ್ಚಾಗಿದ್ದು, ಆ ಮೇಳೆ ಸಂಗಮಕ್ಕೆ ಸಾಗುವ ದಾರಿಯಲ್ಲಿ ನೂಕುನುಗ್ಗಲು ಉಂಟಾಗಿ ಕಾಲ್ತುಳಿತ ಸಂಭವಿಸಿದೆ. ಈ ವೇಳೆ ಸಂಗಮದ ಸುತ್ತಮುತ್ತಲೂ ಗೊಂದಲದ ವಾತಾವರಣ ಸೃಷ್ಟಿಯಾಗಿತ್ತು.

ಸಂಗಮದಿಂದ ಕಿಲೋ ಮೀಟರ್ ದೂರದಲ್ಲೇ ಜನ ದಟ್ಟಣೆ ಹೆಚ್ಚಳವಾಗಿ ಸರಾಗ ಸಂಚಾರಕ್ಕೆ ತೊಡಕಾಗಿದೆ. ಸಾಗುವ ಹಾದಿಯಲ್ಲಿ ಬ್ಯಾರಿಕೇಡ್‌ಗಳು ಮುರಿದು ಬಿದ್ದಿದ್ದು, ನೂಕುನುಗ್ಗಲು ಉಂಟಾಗಿ ಕೆಲವು ಮಹಿಳೆಯರು ಪ್ರಜ್ಞೆ ಕಳೆದುಕೊಂಡು ಬಿದ್ದಿದ್ದಾರೆ. ಅದೇ ವೇಳೆ ಕಾಲ್ತುಳಿತ ಸಂಭವಿಸಿದೆ. ಗಾಯಗೊಂಡವರನ್ನು ಮಹಾ ಕುಂಭಮೇಳದಲ್ಲಿನ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಗಂಭೀರವಾಗಿ ಗಾಯಗೊಂಡಿರುವವರನ್ನು ಬೆಲಿ ಆಸ್ಪತ್ರೆ ಹಾಗೂ ಸ್ವರೂಪ್ ರಾಣಿ ಮೆಡಿಕಲ್ ಕಾಲೇಜಿಗೆ ದಾಖಲಿಸಲಾಗಿದೆ.

ಕಾಲ್ತುಳಿತ ಘಟನೆಯ ಬೆನ್ನಲ್ಲೇ ಸಾಧು ಸಂತರನ್ನು ಒಳಗೊಂಡಿರುವ ಅಖಿಲ ಭಾರತೀಯ ಅಖಾಡ ಪರಿಷತ್, ಮೌನಿ ಅಮಾವಾಸ್ಯೆ ಸ್ನಾನ ಮಾಡುವುದನ್ನು ಮುಂದೂಡಿದೆ. ಅಪಾರ ಸಂಖ್ಯೆಯಲ್ಲಿ ಭಕ್ತಾದಿಗಳು ಸೇರಿರುವುದರಿಂದ ಸಾಧು–ಸಂತರೂ ಪುಣ್ಯ ಸ್ನಾನಕ್ಕೆ ಮುಂದಾದರೆ ಮತ್ತಷ್ಟು ಗೊಂದಲ ಹಾಗೂ ನೂಕುನುಗ್ಗಲು ಉಂಟಾಗುವ ಸಾಧ್ಯತೆ ಇರುವುದರಿಂದ ಈ ಕ್ರಮಕ್ಕೆ ಮುಂದಾಗಿದೆ. ಹಾಗೇ ಜನರು ಗಂಗಾ ನದಿಯಲ್ಲಿ ಸ್ನಾನ ಮಾಡಿ, ತಮ್ಮ ಮನೆಗಳಿಗೆ ತೆರಳುವಂತೆ ಅಖಾಡ ಪರಿಷತ್ ಸಲಹೆ ಮಾಡಿದೆ. ವಿಷಯ ತಿಳಿಯುತ್ತಿದ್ದಂತೆ ಬೆಳಿಗ್ಗೆಯೇ ಪ್ರಧಾನಿ ನರೇಂದ್ರ ಮೋದಿಯವರು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ. ಶೀಘ್ರ ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಸೂಚಿಸಿದ್ದಾರೆ. ನದಿಯ ನೀರಿನ ಮೇಲೆ ಸೇತುವೆಗಳನ್ನು ನಿರ್ಮಾಣ ಮಾಡಲಾಗಿದ್ದು, ಅಲ್ಲಿ ಈ ದುರ್ಘಟನೆ ಸಂಭವಿಸಿದೆ. ಮುಂಜಾಗ್ರತಾ ಕ್ರಮವಾಗಿ ಆಡಳಿತವು ಅಂಥ ಸೇತುವೆಗಳ ಮೇಲೆ ಸಂಚಾರವನ್ನು ನಿರ್ಬಂಧಿಸಿದ್ದಾರೆ. ತ್ರಿವೇಣಿ ಸಂಗಮಕ್ಕೆ ದೂರದವರೆಗೂ ಹೋಗಿಯೇ ಸ್ನಾನ ಮಾಡಬೇಕು ಎಂಬುದನ್ನು ತಪ್ಪಿಸುವಂತೆ ಭಕ್ತರಿಗೆ ಸೂಚನೆ ಕೊಡಲಾಗಿದೆ. ಹತ್ತಿರದ ನದಿ ತಟಗಳಲ್ಲಿಯೇ ಪುಣ್ಯ ಸ್ನಾನ ಮಾಡುವಂತೆ ತಿಳಿಸಲಾಗುತ್ತಿದೆ. ಒಂದು ಅಂದಾಜಿನ ಪ್ರಕಾರ, ಸುಮಾರು ಐದು ಕೋಟಿಗೂ ಅಧಿಕ ಜನರು ಈಗಾಗಲೇ ಪ್ರಯಾಗ್‌ರಾಜ್‌ನಲ್ಲಿ ಸೇರಿದ್ದಾರೆ.

ಎಲ್ಲರೂ ಸಂಗಮ ಸ್ಥಳಕ್ಕೇ ಹೋಗಿ ಸ್ನಾನ ಮಾಡುವ ಪ್ರಯತ್ನದಿಂದಾಗಿ ಕಾಲ್ತುಳಿತ ಉಂಟಾಗಿದೆ. ಗಂಗಾ ನದಿಯು ಎಲ್ಲ ಕಡೆಯೂ ಒಂದೆಯೇ. ಯಾವುದೇ ಘಾಟ್‌ನಲ್ಲಿ ಸ್ನಾನ ಮಾಡುವಂತೆ ಭಕ್ತಾದಿಗಳಿಗೆ ತಿಳಿಸಲಾಗುತ್ತಿದೆ. ಇನ್ನು ಫೆಬ್ರವರಿ 3ರಂದು ಮತ್ತೊಂದು ಅಮೃತ ಸ್ನಾನದ ಅವಕಾಶ ಸಿಗಲಿದ್ದು, ಆಗ ಎಲ್ಲ ಸಾಧು ಸಂತರು ಸಂಗಮದಲ್ಲಿ ಇಳಿಯಲು ನಿರ್ಧರಿಸಿರುವುದಾಗಿ ಅಖಾಡ ತಿಳಿಸಿದೆ. ಸಂಗಮದ ಸ್ಥಳದಲ್ಲಿ ಪೊಲೀಸರು ಹಾಗೂ ಪ್ಯಾರಾ ಮಿಲಿಟರಿ ಪಡೆಯ ಭದ್ರತೆಯನ್ನು ಹೆಚ್ಚಿಸಲಾಗಿದೆ.

ಪ್ರಯಾಗ್ ರಾಜ್‌ನ ತ್ರಿವೇಣಿ ಸಂಗಮದಲ್ಲಿ ನಡೆದ ಕಾಲ್ತುಳಿತದಲ್ಲಿ 30 ಮಂದಿ ಮೃತದೇಹಗಳು ಪತ್ತೆಯಾಗಿವೆ. ಅವರಲ್ಲಿ ಕರ್ನಾಟಕದ ನಾಲ್ವರು, ಗುಜರಾತ್ ಮತ್ತು ಅಸ್ಸಾಂನ ತಲಾ ಒಬ್ಬರು ಸೇರಿದಂತೆ 25 ಮಂದಿಯ ಗುರುತು ಪತ್ತೆ ಹಚ್ಚಲಾಗಿದೆ. ಇನ್ನೂ ಐವರ ಗುರುತು ಪತ್ತೆಯಾಗಿಲ್ಲ. ಈ ಕಾಲ್ತುಳಿತದಲ್ಲಿ 90 ಮಂದಿ ಭಕ್ತರು ಗಾಯಗೊಂಡಿದ್ದು, ಅವರೆಲ್ಲರೂ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸದ್ಯಕ್ಕೆ ಪರಿಸ್ಥಿತಿ ತಿಳಿಗೊಂಡಿದ್ದು, ಅಮೃತ ಸ್ನಾನ ಮುಂದುವರೆದಿದೆ. ಪೊಲೀಸ್ ಇಲಾಖೆ ಎಲ್ಲಾ ಅಗತ್ಯ ರಕ್ಷಣಾ ಕಾರ್ಯವನ್ನು ಕೈಗೊಂಡಿದೆ. –ವೈಭವ್ ಕೃಷ್ಣ, ಡಿಐಜಿ, ಉತ್ತರಪ್ರದೇಶ

ಅಪಘಾತದಲ್ಲಿ ಸಾವು

ಡಿಕ್ಕಿ ಹೊಡೆದ ಪರಿಣಾಮ ಇವರಿಬ್ಬರೂ ತೀವ್ರವಾಗಿ ಗಾಯಗೊಂಡಿದ್ದರು. ಜ.27ರಂದು ಚಿಕಿತ್ಸೆ ಫಲಕಾರಿಯಾಗದೆ ಇವರು ಸಾವನ್ನಪ್ಪಿದ್ದು, ನಿನ್ನೆ (ಜ.28) ಸಂಜೆ ಕುಟುಂಬಸ್ಥರು ಕಾಶಿಗೆ ತೆರಳಿ ಇವರ ಅಂತ್ಯಕ್ರಿಯೆ ನೆರವೇರಿಸಿದರು ಎಂದು ಮೂಲಗಳು ತಿಳಿಸಿವೆ. ಇವರೊಂದಿಗೆ ಕಾರಿನಲ್ಲಿದ್ದವರು ಗಾಯಗೊಂಡಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎನ್ನಲಾಗಿದ್ದು, ಅವರ ವಿವರಗಳು ಲಭ್ಯವಾಗಿಲ್ಲ.

ಸರ್ಕಾರದ ಸ್ವಾಧೀನಕ್ಕೆ

3 ಸಾವಿರ ಕೋಟಿಗೂ ಹೆಚ್ಚು ಮೌಲ್ಯದ ಟಿಡಿಆರ್ ನೀಡಬೇಕೆಂದು 2024ರ ಡಿ.10ರಂದು ಆದೇಶ ನೀಡಿದ್ದ ಹಿನ್ನೆಲೆಯಲ್ಲಿ ಅದರಿಂದ ತಪ್ಪಿಸಿಕೊಳ್ಳುವ ಸಲುವಾಗಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ತಂದಿದೆ. ಬೆಂಗಳೂರು ಅರಮನೆಯ ಒಟ್ಟಾರೆ ವ್ಯಾಪ್ತಿಯ 472 ಎಕರೆ 16 ಗುಂಟೆ ಭೂಮಿಗೆ ಬೆಂಗಳೂರು ಅರಮನೆ (ಆರ್ಜನೆ ಮತ್ತು ವರ್ಗಾವಣೆ) ಅಧಿ ನಿಯಮ–1996ರ 8 ಮತ್ತು 9ನೇ ಪ್ರಕರಣಗಳ ಅನುಸಾರ 11 ಕೋಟಿ ರೂ. ಎಂದು ನಿರ್ಧರಿಸ ಲಾಗಿತ್ತು. ಅದರ ವಿರುದ್ಧ ರಾಜಮನೆತನದವರು ಹೈಕೋರ್ಟ್ ಮೊರೆ ಹೋಗಿದ್ದು, ಸರ್ಕಾರದ ನಿರ್ಧಾರವನ್ನು ಹೈಕೋರ್ಟ್ ಎತ್ತಿ ಹಿಡಿದಿತ್ತು. ಈ ಸಂಬಂಧ ರಾಜಮನೆತನದವರು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ. ಆದರೆ 1996ರ ಅಧಿನಿಯಮಕ್ಕೆ ಯಾವುದೇ ರೀತಿಯ ತಡೆಯಾಜ್ಞೆ ಇಲ್ಲದಿರುವುದರಿಂದ ಹಾಗೂ ಸುಪ್ರೀಂಕೋರ್ಟ್‌ನ ತೀರ್ಪಿನಿಂದ ಸರ್ಕಾರದ ಬೊಕ್ಕಸದ ಮೇಲೆ ಹಾಗೂ ಮೈಸೂರು ನಗರ ಯೋಜನೆಯ ಮೇಲೆ ಗಂಭೀರ ಪರಿಣಾಮ ಬೀರುವುದರಿಂದ 1996ರ ಅಧಿನಿಯಮದ ಅನುಸಾರ ಸುಪ್ರೀಂಕೋರ್ಟ್ ನಿರ್ಧರಿಸಿರುವ ನಷ್ಟ ಪರಿಹಾರ ಸುಸಂಗತವಾಗಿರುವುದರಿಂದ ಈ ಸುಗ್ರೀವಾಜ್ಞೆ ತಂದಿರುವುದಾಗಿ ಸರ್ಕಾರ ಪ್ರಸ್ತಾವನೆಯಲ್ಲಿ ತಿಳಿಸಿದೆ. ಯಾವುದೇ ಮೂಲ ಸೌಕರ್ಯ ಯೋಜನೆ ಉದ್ದೇಶಕ್ಕಾಗಿ ಬೆಂಗಳೂರು ಅರಮನೆಯ ಯಾವುದೇ ಭಾಗವನ್ನು ಬಳಸಿಕೊಳ್ಳಲು ರಾಜ್ಯ ಸರ್ಕಾರ ಅಧಿಕಾರ ಹೊಂದಿ ರುತ್ತದೆ. ಯಾವುದೇ ನ್ಯಾಯಾಲಯ ಯಾವುದೇ ತೀರ್ಪು ಅಥವಾ ಆದೇಶ ಅಥವಾ ರಾಜ್ಯ ಸರ್ಕಾರ ಈ ಮೊದಲು ತೆಗೆದುಕೊಂಡ ಯಾವುದೇ ತೀರ್ಮಾನ ಏನೇ ಆಗಿದ್ದರೂ ರಾಜ್ಯ ಸರ್ಕಾರವು 1996ರ ಅಧಿನಿಯಮದಂತೆ ಮೂಲ ಸೌಕರ್ಯ ಯೋಜನೆಗೆ ಸಂಪೂರ್ಣವಾಗಿ ಹಾಗೂ ಭಾಗಶಃವಾಗಿ ಮುಂದುವರಿಯಲು ಅಧಿಕಾರ ಹೊಂದಿರುತ್ತದೆ.

ಬೆಂಗಳೂರು ಅರಮನೆಯ ಯಾವುದೇ ಭಾಗಕ್ಕಾಗಿನ ನಷ್ಟ ಪರಿಹಾರವನ್ನು 1996ರ ಅಧಿನಿಯಮದಲ್ಲಿ ತಿಳಿಸಿರುವಂತೆ ನೀಡುವುದು (ಅಂದರೆ 1 ಎಕರೆಗೆ ಸುಮಾರು 2.30 ಲಕ್ಷ ಆಧಾರದಲ್ಲಿ 427.16 ಎಕರೆಗೆ 11 ಕೋಟಿ) ಹಾಗೂ ಯಾವುದೇ ನ್ಯಾಯಾಲಯ ಏನೇ ತೀರ್ಪು ನೀಡಿದ್ದರೂ ಕ್ಲೈಮುದಾರರು 1996ರ ಅಧಿನಿಯಮದಲ್ಲಿ ತಿಳಿಸಿರುವುದನ್ನು ಹೊರತುಪಡಿಸಿ ಇತರೆ ನಷ್ಟ ಪರಿಹಾರದ ಹಕ್ಕನ್ನು ಹೊಂದಿರುವುದಿಲ್ಲ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ನಷ್ಟ ಪರಿಹಾರ ವಿಚಾರವಾಗಿ ವಿವಾದ ಉಂಟಾದಲ್ಲಿ 1996ರ ಅಧಿನಿಯಮದಲ್ಲಿ ತಿಳಿಸಿರುವ ಮೌಲ್ಯದಂತೆ ನಷ್ಟ ಪರಿಹಾರವನ್ನು ಸರ್ಕಾರ ಕಮಿಷ್ನರ್ ಮುಂದೆ ಠೇವಣಿ ಇಡತಕ್ಕದ್ದು. ಸಕ್ಷಮ ಸಿವಿಲ್ ನ್ಯಾಯಾಲಯದ ಅಂತಿಮ ಡಿಕ್ರಿಯ ದೃಢೀಕೃತ ಪ್ರತಿಯನ್ನು ಕಮಿಷ್ನರ್‌ಗೆ ಒದಗಿಸದೇ ಕ್ಲೈಮುದಾರರು ನಷ್ಟ ಪರಿಹಾರವನ್ನು ಹಿಂಪಡೆ ಯಲು ಹಕ್ಕು ಇರುವುದಿಲ್ಲ. ನ್ಯಾಯಾಲಯದ ಅಂತಿಮ ಡಿಕ್ರಿ ಮೇಲೆ ತಡೆಯಾಜ್ಞೆ ಇದ್ದಲ್ಲಿ ಕಮಿಷ್ನರ್ ನಷ್ಟ ಪರಿಹಾರವನ್ನು ಬಿಡುಗಡೆಗೊಳಿಸುವಂತಿಲ್ಲ ಎಂದು ಸುಗ್ರೀವಾಜ್ಞೆಯಲ್ಲಿ ತಿಳಿಸಲಾಗಿದೆ. ಈ ಸುಗ್ರೀವಾಜ್ಞೆಯನ್ನು ಸದ್ಭಾವನೆಯಿಂದ ಮಾಡಲಾಗಿದೆ. ಹೀಗಾಗಿ ರಾಜ್ಯ ಸರ್ಕಾರದ ಯಾರೇ ಅಧಿಕಾರಿ ಅಥವಾ ಅದರ ಅಂಗ ಮಾಧ್ಯಮಗಳ ವಿರುದ್ಧ ಯಾವುದೇ ಸಿವಿಲ್ ಅಥವಾ ಕ್ರಿಮಿನಲ್ ಪ್ರಕರಣಗಳನ್ನು ಹೂಡುವಂತಿಲ್ಲ. ಯಾವುದೇ ನ್ಯಾಯಾಲಯ ಏನೇ ತೀರ್ಪು ನೀಡಿದ್ದರೂ ಸುಗ್ರೀವಾಜ್ಞೆಯನ್ನು ಸದ್ಭಾವನೆಯಿಂದ ಮಾಡಿ ರುವುದರಿಂದಾಗಿ ರಾಜ್ಯ ಸರ್ಕಾರದ ಯಾವುದೇ ಅಧಿಕಾರಿ ಅಥವಾ ಅಂಗ ಮಾಧ್ಯಮಗಳು ಯಾವುದೇ ಶಿಕ್ಷೆಗೆ ಹೊಣೆಯಾಗತಕ್ಕದ್ದಲ್ಲ ಎಂದು ಸುಗ್ರೀವಾಜ್ಞೆಯಲ್ಲಿ ತಿಳಿಸಲಾಗಿದೆ.

ನಿವೇಶನಗಳಿಗೆ 'ಬಿ' ಖಾತಾ

'ಬಿ' ಖಾತಾ ನೀಡಿ. ಮೂರು ತಿಂಗಳ ಅವಧಿಯೊಳಗೆ ಸ್ಥಳೀಯ ಸಂಸ್ಥೆಗಳ ಆಸ್ತಿಗಳಿಗೆ ದಾಖಲೆ ನೀಡಿದ ನಂತರ ಪಂಚಾಯತ್ ವ್ಯಾಪ್ತಿಯಲ್ಲಿನ ನಿವೇಶನಗಳಿಗೂ ದಾಖಲೆ ನೀಡಿ ಎಂದು ಆದೇಶಿಸಿದರು. ಬೆಂಗಳೂರು ಹೊರತುಪಡಿಸಿ ಉಳಿದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 55 ಲಕ್ಷ ನಿವೇಶನಗಳಿದ್ದು, ಇವುಗಳಲ್ಲಿ 22 ನಿವೇಶನಗಳಿಗೆ 'ಇ' ಖಾತಾ ಪಡೆದಿದ್ದಾರೆ. ಉಳಿದ ನಿವೇಶನಗಳಿಗೆ ಯಾವುದೇ ರೀತಿಯ ದಾಖಲೆಗಳಿಲ್ಲ. ಆದ್ದರಿಂದ ಅವುಗಳನ್ನೂ ಸಕ್ರಮಗೊಳಿಸಿ, ತೆರಿಗೆ ವ್ಯಾಪ್ತಿಗೆ ತನ್ನಿ ಎಂದಿದ್ದಾರೆ. ಇಂತಹ ನಿವೇಶನಗಳನ್ನು ಜಿಲ್ಲಾಡಳಿತವೇ ಗುರುತಿಸಿ ದಾಖಲೆ ನೀಡಬೇಕು, ಏಪ್ರಿಲ್ ನಂತರ ಯಾವೊಂದು ನಿವೇಶನವೂ ಅನಧಿಕೃತವಾಗಿರಬಾರದು ಎಂದು ಕಟ್ಟಾದೇಶ ಮಾಡಿದ್ದಾರೆ. ಭೂ ದಾಖಲೆಗಳ ರಕ್ಷಣೆ ಹಾಗೂ ದುರುಪಯೋಗ ಆಗದಂತೆ, ದಾಖಲೆ ತಿದ್ದಲು ಅವಕಾಶ ಇಲ್ಲದಂತೆ "ಭೂ ಸುರಕ್ಷಾ" ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದು ಸೂಚಿಸಿದರು.

ಮಂಡ್ಯದಲ್ಲಿ ಇಬ್ಬರು ಆತ್ಮಹತ್ಯೆ

ಸಿಬ್ಬಂದಿಯ ಕಿರುಕುಳದಿಂದ ಮನನೊಂದು ನಿನ್ನೆ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದ ಮಹಿಳೆ ಪ್ರೇಮಾ(52) ಬುಧವಾರ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.

ಮಳವಳ್ಳಿ ತಾಲೂಕಿನ ಹಲಗೂರು ಸಮೀಪದ ಕೊನ್ನಾಪುರ ಗ್ರಾಮದ ಅಂದಾನಯ್ಯನವರ ಪತ್ನಿ ಪ್ರೇಮಾ ಪಕ್ಕದ ಚನ್ನಪಟ್ಟಣ ತಾಲೂಕಿನ ಖಾಸಗಿ ಫೈನಾನ್ಸ್‌ನಲ್ಲಿ ಸಾಲ ಪಡೆದಿದ್ದರು. ಆದರೆ ಸಾಲ ಕಟ್ಟಲಿಲ್ಲ ಎಂಬ ಕಾರಣಕ್ಕೆ ಮನೆ ಜಪ್ತಿ ಮಾಡಿದಾಗ ಮನನೊಂದು ವಿಷ ಸೇವಿಸಿದ್ದರು. ಮಂಗಳವಾರ ಬೆಳಿಗ್ಗೆ 11.30ರ ಸಮಯದಲ್ಲಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದ ಪ್ರೇಮಾ ಅವರಿಗೆ ಹಲಗೂರು ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯ ಜಿಲ್ಲಾಸ್ಪತ್ರೆಗೆ ದಾಖಲಿಸಿ, ತೀವ್ರ ನಿಗಾ ಘಟಕದಲ್ಲಿ ಇವರಿಗೆ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ವಿಧಿವಶರಾದರು. ಖಾಸಗಿ ಫೈನಾನ್ಸ್‌ನಲ್ಲಿ 6 ಲಕ್ಷ ರೂ. ಸಾಲ ಪಡೆದಿದ್ದ ಪ್ರೇಮಾ ಅವರು ಕಳೆದ 5–6 ವರ್ಷಗಳಿಂದ ಸಾಲದ ಕಂತಿನ ಹಣ ಕಟ್ಟುತ್ತ ಬಂದಿದ್ದರು. ಸಹ ಇದು ಬಡ್ಡಿಗೆ ಜಮಾ ಆಗಿದೆ ಎಂದು ಹೇಳಿ 6 ಲಕ್ಷ ಹೊಸ ಸಾಲ ಎಂದು ನವೀಕರಿಸಿಕೊಂಡು ಉಳಿಕೆ ಬಡ್ಡಿ ಸೇರಿ 8 ಲಕ್ಷ ಕಟ್ಟಬೇಕೆಂದು ಪಟ್ಟು ಹಿಡಿದಿದ್ದ ಕಂಪನಿ ಯವರು, ಈ ಕುರಿತು ನೋಟಿಸ್ ನೀಡಿದ್ದರು. ಹಣ ಕಟ್ಟಲು ವಿಳಂಬವಾದ ಕಾರಣಕ್ಕೆ ಒಂದು ವಾರದ ಹಿಂದೆ ಕಂಪನಿಯ ವರು ಈ ಕುಟುಂಬ ವಾಸವಿದ್ದ ಮನೆಯನ್ನು ಜಪ್ತಿ ಮಾಡಿದ್ದರು. ಕಳೆದ ಒಂದು ವಾರದಿಂದ ಪ್ರೇಮಾ ಹಾಗೂ ಕುಟುಂಬದವರು ತಮ್ಮ ಸಂಬಂಧಿಕರ ಮನೆಯಲ್ಲಿ ವಾಸವಿದ್ದರು. ಇದರಿಂದ ಮನನೊಂದ ಪ್ರೇಮ ಅವರು ಮಂಗಳವಾರ ಬೆಳಿಗ್ಗೆ 11.30 ರ ಸಮಯದಲ್ಲಿ ವಿಷ ಸೇವಿಸಿದ್ದು ಮಂಡ್ಯ ಮಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು.

ಕಾರ್ಮಿಕ ಸಾವು

ಅವರ ಜೀವನ ಭದ್ರತೆಗೆ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು. ಈ ಕಾಮಗಾರಿ ಗುತ್ತಿಗೆದಾರ ದಿನೇಶ್, ಶವಾಗಾರದ ಬಳಿ ಬಂದು ಮೃತರ ಕುಟುಂಬಕ್ಕೆ 2 ಲಕ್ಷ ರೂ. ನಗದು ಹಾಗೂ 10 ಲಕ್ಷ ರೂ.ಗಳನ್ನು ಬ್ಯಾಂಕ್ ಖಾತೆಗೆ ಪರಿಹಾರವಾಗಿ ವರ್ಗಾವಣೆ ಮಾಡುವುದಾಗಿ ಭರವಸೆ ನೀಡಿದ ನಂತರ ಸಂಬಂಧಿಕರು ದೇಹವನ್ನು ಕೊಂಡೊಯ್ದರು. ಸಂಜೆ ವೇಳೆಗೆ ಅಂತ್ಯಕ್ರಿಯೆ ನೆರವೇರಿಸಿದರು. ಈ ನಡುವೆ ಕುಸಿದು ಬಿದ್ದಿದ್ದ ಮಹಾರಾಣಿ ವಿಜ್ಞಾನ ಕಾಲೇಜು ಪಾರಂಪರಿಕ ಕಟ್ಟಡದ ಬಳಿ ಯಾರೂ ಸುಳಿಯದಂತೆ ಪೊಲೀಸರು ಎಚ್ಚರಿಕಾ ಕ್ರಮ ಕೈಗೊಂಡಿದ್ದಾರೆ. ಇಂದು ಕಟ್ಟಡ ನೆಲಸಮ ಕಾಮಗಾರಿ ಸ್ಥಗಿತಗೊಂಡಿದ್ದು, ಸಂಬಂಧಪಟ್ಟ ಇಂಜಿನಿಯರ್‌ಗಳು, ಅಧಿಕಾರಿಗಳು ಪರಿಶೀಲಿಸಿ ಸಲಹೆ ನೀಡಿದ ನಂತರ ಕಾಮಗಾರಿ ಆರಂಭಿಸುವಂತೆ ಪೊಲೀಸರು ಗುತ್ತಿಗೆದಾರರಿಗೆ ಸೂಚನೆ ನೀಡಿದ್ದಾರೆ. ದುರಂತದ ಹಿನ್ನೆಲೆಯಲ್ಲಿ ಇಂದು ಲೋಕೋಪಯೋಗಿ ಇಲಾಖೆ, ಪಾರಂಪರಿಕ ಇಲಾಖೆ, ಮೈಸೂರು ವಿಶ್ವ ವಿದ್ಯಾನಿಲಯದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ವಿದ್ಯಾರ್ಥಿನಿಯರು ಅತ್ತ ಸುಳಿಯ ದಂತೆ ಸುರಕ್ಷಾ ಕ್ರಮ ವಹಿಸಬೇಕೆಂದು ಕಾಲೇಜು ಪ್ರಾಂಶುಪಾಲರಿಗೆ ತಿಳಿಸಿದರು.

ಮೈಸೂರು ಮಿತ್ರ

ಶಿವರಾಜ್‌ಕುಮಾರ್ ಆರೋಗ್ಯ ವಿಚಾರಿಸಿದ ಸಂದೇಶ್ ನಾಗರಾಜ್



ಅಮೆರಿಕಾದಲ್ಲಿ ಶಸ್ತ್ರಚಿಕಿತ್ಸೆಗೊಳಗಾಗಿ, ಸಂಪೂರ್ಣ ಗುಣಮುಖರಾಗಿ ಮರಳಿರುವ ಹಿರಿಯ ನಟ ಶಿವರಾಜ್‌ಕುಮಾರ್ ಅವರನ್ನು ಬುಧವಾರ ಬೆಂಗಳೂರಿನಲ್ಲಿ ಭೇಟಿಯಾದ ಮಾಜಿ ಎಂಎಲ್‌ಸಿ ಹಾಗೂ ಹಿರಿಯ ಚಿತ್ರ ನಿರ್ಮಾಪಕ ಸಂದೇಶ್ ನಾಗರಾಜ್ ಮತ್ತು ಅವರ ಪುತ್ರ ಉದ್ಯಮಿ ಎನ್.ಸಂದೇಶ್ ಆರೋಗ್ಯ ವಿಚಾರಿಸಿದರು.

ಹೊಸ ಕೃಷಿ ಆರ್ಥಿಕ ನೀತಿಯಿಂದ ಕೃಷಿ ಸ್ಥಿರತೆ ತರಲು ಸಾಧ್ಯ

ಸುತ್ತೂರಿನ ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವದ ಕೃಷಿ ವಿಚಾರ ಸಂಕಿರಣದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸಲಹೆ

ನಂಜನಗೂಡು, ಜ.29– ಭಾರತ ದೇಶದಲ್ಲಿ ಕೃಷಿ ಅನಿಶ್ಚಿತತೆಯಿಂದ ಕೂಡಿದ್ದು, ಕೃಷಿಯಲ್ಲಿ ಸ್ಥಿರತೆ ತರಬೇಕಾದರೆ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹೊಸ ಕೃಷಿ ಆರ್ಥಿಕ ನೀತಿಯನ್ನು ಜಾರಿಗೆ ತಂದು ಮೂಲ ಬಂಡವಾಳವನ್ನು ಹೆಚ್ಚಿಸಿ, ಅಗತ್ಯ ಸೌಕರ್ಯ ಕಲ್ಪಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ತಾಲೂಕಿನ ಶ್ರೀ ಕ್ಷೇತ್ರ ಸುತ್ತೂರಿನಲ್ಲಿ ನಡೆಯುತ್ತಿರುವ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವದ ಕೃಷಿ ವಿಚಾರ ಸಂಕೀರ್ಣ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ದೇಶ ಆಹಾರ ಉತ್ಪಾದನೆಯಲ್ಲಿ ಹಿಂದುಳಿದಿತ್ತು. ಈಗ ಸ್ವಾವಲಂಬನೆ ಸಾಧಿಸಿದೆ, ಕೃಷಿ ಉತ್ಪನ್ನ ಹೆಚ್ಚಾಗಿದೆ. ಆದರೆ ರೈತನಿಗೆ ವೈಜ್ಞಾನಿಕ ಬೆಂಬಲ ಬೆಲೆ ಇಲ್ಲದೆ ಅಲ್ಲೇ ಇದ್ದಾನೆ. ರೈತನನ್ನು ಗಟ್ಟಿಗೊಳಿಸುವ ಸಲುವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹೊಸ ಕೃಷಿ ಆರ್ಥಿಕ ನೀತಿಯನ್ನು ಜಾರಿಗೆ ತಂದು ಬೆಳೆಗಳಿಗೆ ವೈಜ್ಞಾನಿಕ ಬೆಲೆಯನ್ನು ಕಲ್ಪಿಸಬೇಕು ಎಂದರು.

ಕೃಷಿ ವಿಶ್ವವಿದ್ಯಾನಿಲಯಗಳು ತಮ್ಮ ಆವರಣಗಳಲ್ಲಿ ಕೃಷಿ ಪ್ರಯೋಗ ಮಾಡಿ ಬೆಳೆಗಳನ್ನು ಬೆಳೆಯದೆ, ರೈತರ ಕೃಷಿ ಭೂಮಿಯನ್ನೇ ಪ್ರಯೋಗ ಶಾಲೆಯನ್ನಾಗಿ ಮಾಡಿ ಯಶಸ್ವಿಗೊಳಿಸಬೇಕು, ಮಣ್ಣಿನ ಸಂರಕ್ಷಣೆಗಾಗಿ ಎಲ್ಲರೂ ನೈಸರ್ಗಿಕ ಕೃಷಿಯನ್ನು ಅನುಸರಿಸಬೇಕು, ಕೃಷಿಯಲ್ಲಿ ಆಧುನಿಕತೆಯನ್ನು ಅಳವಡಿಸಿಕೊಂಡಲ್ಲಿ ಲಾಭದಾಯಕಗೊಳಿಸಬಹುದು ಎಂದರಲ್ಲದೆ ಸರ್ಕಾರಗಳು ಬರಗಾಲದಂತಹ, ರೈತರ ಸಮಸ್ಯೆಯನ್ನು ಎಸಿ ಕೊಠಡಿಯಲ್ಲಿ ಕುಳಿತು ಚರ್ಚಿಸುತ್ತವೆ. ಅದನ್ನು ಬಿಟ್ಟು ಸಮಸ್ಯೆಗಳ ಜೊತೆಗೆ ಜೀವಿಸುವ ಜನರ ಬಳಿಗೆ ಹೋಗಿ ಸಮಸ್ಯೆ ಪರಿಹರಿಸಲು ಮುಂದಾಗಬೇಕಿದೆ ಎಂದರು.



ಸುತ್ತೂರಿನ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವದ ಕೃಷಿ ವಿಚಾರ ಸಂಕೀರ್ಣದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿದರು.

ರೈತರ ಯೋಜನೆ ಪೇಪರ್‌ನಲ್ಲಿದೆ: ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಈಶ್ವರ ಬಿ.ಖಂಡ್ರೆ ಮಾತನಾಡಿ, ಅನೇಕ ರೈತಪರ ಯೋಜನೆಗಳು ಇನ್ನು ಕಾರ್ಯಗತವಾಗದೆ ಬರೀ ಪೇಪರ್ ಮೇಲೆ ಮಾತ್ರ ಇವೆ. ಬೆಲೆ ಹೆಚ್ಚಾದಲ್ಲಿ ಆಮದು ಮಾಡಿಕೊಳ್ಳುವ ಮೂಲಕ ಬೆಲೆಗಳನ್ನು ನಿಯಂತ್ರಣ ಮಾಡುತ್ತಿದ್ದೇವೆ. ಸರ್ಕಾರಗಳು ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಗುಣಮಟ್ಟದ ವಿದ್ಯುತ್ ನೀಡಿ, ಸ್ವಾಮಿನಾಥನ್ ಆಯೋಗದ ವರದಿ ಜಾರಿಗೊಳಿಸಿ, ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಂಬಲ ಬೆಲೆ ಜಾರಿಗೊಳಿಸುವ ಕಾಯ್ದೆ ರೂಪಿಸಿದಲ್ಲಿ ರೈತರು ಉಚಿತ ನೀಡಿ, ಸಬ್ಸಿಡಿ ನೀಡಿ ಎಂದು ಕೇಳುವುದಿಲ್ಲ. ಸ್ವಾವಲಂಬಿಯಾಗಿ ಉದ್ಯಮಿಗಳಂತಾಗಲಿದ್ದಾರೆ ಎಂದರು.

ಶಾಸಕರಾದ ಸಿ.ಟಿ.ರವಿ, ಬಿ.ಸಿ.ಪಾಟೀಲ್, ಅಯೋಧ್ಯ ಕ್ರಾಪ್ ಅಕಾಡೆಮಿಯ ಡಾ.ಮಹಾಂತೇಶ್ ಬಿ.ಪಾಟೀಲ್ ಮಾತನಾಡಿದರು.

ಸಮಾರಂಭದಲ್ಲಿ ಪ್ರಗತಿಪರ ರೈತ ವಿನೋದ್ ಸುಂದರಂ ನಿಖರ ಕೃಷಿಯಲ್ಲಿ ಹಣ್ಣು ಬೆಳೆಗಳು ಎಂಬ ವಿಷಯ ಮಂಡನೆ ಮಾಡಿದರು. ಕಾರ್ಯಕ್ರಮದಲ್ಲಿ ಮಾದಾಪುರ ಕೆಂದಾವರೆ ಪದ್ಮಭೂಷಣ ಮಹದೇವಪ್ಪ ಸೇವಾ ಟ್ರಸ್ಟ್ ವತಿಯಿಂದ ಭತ್ತದ ಬೆಳೆಯಲ್ಲಿ ಹೆಚ್ಚು ಅತ್ಯುತ್ತಮ ಸಾಧನೆಗೈದ ರೈತರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಬತ್ತದ ಬೆಳೆಗೆ ಹುಣಸೂರು ತಾಲೂಕಿನ ಬೀರನಹಳ್ಳಿ ಶಿವಮ್ಮ, ಪ್ರಥಮ ಬಹುಮಾನ, ನಂಜನಗೂಡು ತಾಲೂಕಿನ ಗೋಣಹಳ್ಳಿ ಕೆಂಪಮ್ಮ ದ್ವಿತೀಯ ಬಹುಮಾನ ಪಡೆದರೆ, ಬಾಳೆ ಬೆಳೆಯಲ್ಲಿ ಚಾಮರಾಜನಗರ ಜಿಲ್ಲೆಯ ಮಲ್ಲಹಳ್ಳಿ ಪುಟ್ಟತಾಯಮ್ಮ, ರೇಷ್ಮೆ ಬೆಳೆಯಲ್ಲಿ ಮುಕ್ಕಡ ಹಳ್ಳಿಯ ಭ್ರಮರಾಂಬಿಕೆ, ಉದ್ಯಮಶೀಲತಾ ವಿಭಾಗದಲ್ಲಿ ಗುಂಡ್ಲುಪೇಟೆಯ ಪಡಗೂರಿನ ಉಷಾರಾಘವೇಂದ್ರ ಬಹುಮಾನವನ್ನು ಪಡೆದರು.

ಬಹುಮಾನ ವಿತರಣೆ: ದುಡ್ಡುಹಟ್ಟಿ ಗ್ರಾಮದ ಶ್ರೀಮತಿ ಸುಂದರಮ್ಮ ವೀರಭದ್ರ ಪ್ರತಿಷ್ಠಾನ ವತಿಯಿಂದ ಬಾಳೆ ಬೆಳೆಗೆ ಸುಧಾಮಣಿ ಪ್ರಥಮ ಬಹುಮಾನ, ಪ್ರಭುಸ್ವಾಮಿ ದ್ವಿತೀಯ ಬಹುಮಾನ, ಮುಸುಕಿನ ಜೋಳ ಬೆಳೆಗೆ ಹನೂರು ತಾಲೂಕಿನ ಮಂಗಳ ಗ್ರಾಮದ ಮಂಗಳಮ್ಮ ಪ್ರಥಮ ಬಹುಮಾನ, ಗೋವಿಂದೇಗೌಡ ದ್ವಿತೀಯ, ಕಬ್ಬು ಬೆಳೆಯಲ್ಲಿ ಬಾಬು ಪಾಷಾ ಪ್ರಥಮ, ರಾಜೇಂದ್ರ ಪ್ರಸಾದ್ ದ್ವಿತೀಯ, ಟೊಮೊಟೊ ಬೆಳೆಯಲ್ಲಿ ಬಸವ ನಾಯಕ ಪ್ರಥಮ ರೇವಣ್ಣ ದ್ವಿತೀಯ, ಪೋಲ್ ಬೀನ್ಸ್ ಬೆಳೆಯಲ್ಲಿ ಪ್ರಕಾಶ ಪ್ರಥಮ ಕಾಳಸ್ವಾಮಿ ದ್ವಿತೀಯ ಬಹುಮಾನವನ್ನು ಪಡೆದರು.

ಸಮಾರಂಭದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಾರಣಾಸಿಯ ಜ್ಞಾನಸಿಂಹಾಸನ ಮಹಾಪೀಠದ ಮಲ್ಲಿಕಾರ್ಜುನ ಶಿವರಾಧ್ಯ ಶಿವಾಚಾರ್ಯ ಸ್ವಾಮೀಜಿ, ಪುಷ್ಪಗಿರಿ ಮಠದ ಸೋಮಶೇಖರ ಶಿವಾಚಾರ್ಯ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಸಮಾರಂಭದಲ್ಲಿ ಸಮಾರಂಭದಲ್ಲಿ, ಶಾಸಕ ಸಿ.ಸಿಪಾಟೀಲ್, ಶಾಸಕ ಅರವಿಂದ್ ಬೆಲ್ಲದ್, ಹಾಸನ ಸಂಸದ ಶ್ರೇಯಸ್ ಎಂ.ಪಟೇಲ್, ಮಾದಯ್ಯ ಪುಟ್ಟರಾಜು, ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್ ಉಪಸ್ಥಿತರಿದ್ದರು.

ಭಾರತದ ಇತಿಹಾಸದಲ್ಲಿ ಜನವರಿ 26 ಐತಿಹಾಸಿಕ ದಿನ

ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ



ಶ್ರೀರಾಂಪುರ 2ನೇ ಹಂತದಲ್ಲಿರುವ ಬಿಇಎಂಎಲ್ ನಗರ ನಿವಾಸಿಗಳ ಸಂಘದ ವತಿಯಿಂದ ನಡೆದ 76ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿತು.

ಮೈಸೂರು, ಜ.29– ಭಾರತದ ಇತಿಹಾಸದಲ್ಲಿ ಜನವರಿ 26 ಐತಿಹಾಸಿಕ ದಿನವಾಗಿದೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ತಿಳಿಸಿದರು

ಶ್ರೀರಾಂಪುರ 2ನೇ ಹಂತದಲ್ಲಿರುವ ಬಿ.ಇ.ಎಂ.ಎಲ್ ನಗರ ನಿವಾಸಿಗಳ ಸಂಘದ ವತಿಯಿಂದ ನಡೆದ 76ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಭಾರತ ಸಂವಿಧಾನವು 1949ನೇ ನವೆಂಬರ್ 26ರಂದು ಅಂಗೀಕಾರವಾಗಿ 1950ರ ಜನವರಿ 26ರಂದು ಭಾರತದಲ್ಲಿ ಸಂವಿಧಾನ ಜಾರಿಗೆ ಬಂದಿತು. ಈ ದಿನದ ಗೌರವಾರ್ಥವಾಗಿ ಪ್ರತಿ ವರ್ಷ ಗಣರಾಜ್ಯೋತ್ಸವವನ್ನು ಆಚರಿಸಿಕೊಂಡು ಬರುತ್ತಿದ್ದೇವೆ. ಭಾರತ ಗಣರಾಜ್ಯ ರಾಷ್ಟ್ರವಾಗಲು, ಸಂವಿಧಾನ ಜಾರಿಗೆ ತರಲು ಶ್ರಮಿಸಿದ ಮಹನೀಯರನ್ನು ಸ್ಮರಿಸಬೇಕಾದುದು ನಮ್ಮೆಲ್ಲರ ಕರ್ತವ್ಯವಾಗಿದೆ. ಭಾರತದಲ್ಲಿ ಸಂವಿಧಾನ ಜಾರಿಗೆ ಬಂದ ಕಾರಣದಿಂದಲೇ ನಾವೆಲ್ಲರೂ ನೆಮ್ಮದಿಯಿಂದ ಬದುಕುತ್ತಿದ್ದೇವೆ. ಸಂವಿಧಾನದಲ್ಲಿ ಡಾ.ಅಂಬೇಡ್ಕರ್‌ರವರ ಸಂವಿಧಾನದಿಂದ ಪ್ರತೀ ಪ್ರಜೆಯೂ ಶಿಕ್ಷಣದ ಹಕ್ಕು, ಸ್ವಾತಂತ್ರ್ಯದ ಹಕ್ಕು, ಸಮಾನತೆಯ ಹಕ್ಕು ಮೂಲಭೂತ ಹಕ್ಕು, ಧಾರ್ಮಿಕ ಹಕ್ಕುಗಳನ್ನು ಪಡೆದು ಸರ್ವ ಸ್ವತಂತ್ರವಾಗಿ ಸಹೋದರರಂತೆ ಸಹಬಾಳ್ವೆಯಿಂದ ಬದುಕುತ್ತಿದ್ದೇವೆ. ಆದ್ದರಿಂದ ಸಂವಿಧಾನವನ್ನು ಪ್ರತಿಯೊಬ್ಬರೂ ಗೌರವಿಸಬೇಕು. ಅದರಲ್ಲಿರುವ ನಿಯಮಗಳನ್ನು ಪಾಲಿಸಬೇಕು ಎಂದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ದೇವರಾಜ್, ಉಪಾಧ್ಯಕ್ಷ ಮುಜುಂದಾರ್, ಕಾರ್ಯದರ್ಶಿ ಚನ್ನವೀರಪ್ಪ, ದೇವಸ್ಥಾನ ಸಮಿತಿ ಅಧ್ಯಕ್ಷ ಶಿವಪ್ಪ ಸಲಹಾ ಸಮಿತಿ ನಿರ್ದೇಶಕ ತಮ್ಮಣ್ಣ ಸಿ.ಎಸ್.ಪುರುಷೋತ್ತಮ್, ಸೀತಾರಾಮ ಶಾಸ್ತ್ರಿ ಹಾಗೂ ಹಿರಿಯರು ಹಾಜರಿದ್ದರು.

76ನೇ ಗಣರಾಜ್ಯೋತ್ಸವ



ಮೈಸೂರು ದಿ ಗ್ರಾಜ್ಯುಯೇಟ್ ಕೋ-ಆಪರೇಟಿವ್ ಬ್ಯಾಂಕ್‌ನಲ್ಲಿ 76ನೇ ಗಣರಾಜ್ಯೋತ್ಸವ ಆಚರಿಸಲಾಯಿತು. ಬ್ಯಾಂಕಿನ ಅಧ್ಯಕ್ಷ ಎನ್.ಶ್ರೀನಿವಾಸ್ ಧ್ವಜಾರೋಹಣ ನೆರವೇರಿಸಿದರು. ಬ್ಯಾಂಕ್ ಉಪಾಧ್ಯಕ್ಷೆ ಸುಜಾತ ವೆಂಕಟರಾಜು, ನಿರ್ದೇಶಕರಾದ ಆರ್.ಅನಂತರಾಮು, ಪ್ರೊ.ಪಿ.ವಿ.ನರಹರಿ, ಟಿಎಸ್.ರವಿಶಂಕರ್, ಎಂ.ಎ.ಹೇಮಲತಾ, ಕೆ.ಜಿ.ಸತೀಶ್, ಎಸ್.ಎನ್.ಜಗದೀಶ್, ಡಾ.ಕೆ.ವಿ.ಲಕ್ಷ್ಮಿದೇವಿ, ಸಿ.ಕಮಲಮ್ಮ, ಡಾ.ಸುಜಾತ ಎಸ್.ರಾವ್, ಎಲ್.ಸೋಮಣ್ಣ, ವರಲಕ್ಷ್ಮಿ ಅಜಯ್, ವ್ಯವಸ್ಥಾಪಕರಾದ ಟಿವಿ.ಮಹೇಶ, ಎಸ್.ಗಾಯತ್ರಿ, ನಾಗರಾಜ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಫೆ.3ರಿಂದ ನಿಷೇಧಾಜ್ಞೆ ಜಾರಿ

ಮೈಸೂರು,ಜ.29–ಫೆ.3ರಿಂದ 10ರವರೆಗೆ ಗಣಕಯಂತ್ರ ಶಿಕ್ಷಣ ಪರೀಕ್ಷೆ ನಡೆಯಲಿದ್ದು ಸದರಿ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಭಾರತೀಯ ಸುರಕ್ಷಾ ಸಂಹಿತೆ 2023 ಸೆಕ್ಷನ್ 163 ರೀತ್ಯ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ. ಫೆ.3ರಂದು ಆದರ್ಶ ವಿದ್ಯಾಲಯ, ಜಾಕಿ ಕ್ವಾರ್ಟರ್ಸ್‌ನಲ್ಲಿ ಹಾಗೂ ಫೆ.4ರಿಂದ 10ರವರೆಗೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಡಯಟ್, ವಸಂತ ಮಹಲ್‌ನಲ್ಲಿ ಪರೀಕ್ಷೆ ನಡೆಯುವುದು ಎಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಶೀಘ್ರ ಜಾರಿಗೆ ದಸಂಸ ಆಗ್ರಹ



ಸುಪ್ರೀಂಕೋರ್ಟ್ ಆದೇಶದಂತೆ ಪರಿಶಿಷ್ಟ ಜಾತಿಯ ಒಳ ಮೀಸಲಾತಿಯನ್ನು ಶೀಘ್ರ ಜಾರಿ ಮಾಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯವರು ಎಡಿಸಿ ಡಾ.ಶಿವರಾಜ್ ಅವರಿಗೆ ಮನವಿ ಸಲ್ಲಿಸಿದರು.

ಎಡಿಸಿ ಡಾ.ಶಿವರಾಜ್ ಅವರಿಗೆ ಮನವಿ ಸಲ್ಲಿಕೆ

ಮೈಸೂರು, ಜ.29(ಬಿಎಲ್‌ಯು)– ಸುಪ್ರೀಂಕೋರ್ಟ್ ಆದೇಶದಂತೆ ಪರಿಶಿಷ್ಟ ಜಾತಿಯ ಒಳ ಮೀಸಲಾತಿಯನ್ನು ಶೀಘ್ರವೇ ಜಾರಿ ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಸರ್ಕಾರವನ್ನು ಆಗ್ರಹಿಸಿದೆ.

ಈ ಸಂಬಂಧ ಮೈಸೂರು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಬುಧವಾರ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಅವರಿಗೆ ಸಮಿತಿ ಮನವಿ ಸಲ್ಲಿಸಿತು.

ಪರಿಶಿಷ್ಟ ಜಾತಿಯ ಮೀಸಲಾತಿಯಡಿ ಸಂವಿಧಾನಬದ್ಧವಾಗಿ ಒಳ ಮೀಸಲಾತಿಯನ್ನು ದೇಶದ ಆಯಾ ರಾಜ್ಯಗಳೆ ನೀಡಬೇಕು. ಈ ಸಂಬಂಧ ದತ್ತಾಂಶ ಪಡೆದು ಒಳಮೀಸಲಾತಿ ವರ್ಗೀಕರಣ ಮಾಡಿ ಜಾರಿ ಮಾಡುವಂತೆ ಸುಪ್ರೀಂಕೋರ್ಟ್ 7 ನ್ಯಾಯಾಧೀಶರ ಪೀಠ ಆದೇಶ ನೀಡಿದೆ.

ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಒಳ ಮೀಸಲಾತಿ ಜಾರಿ ಮಾಡುವುದಾಗಿ ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದವು. ಆದರೆ ಈಗ ಒಳ ಮೀಸಲಾತಿ ಜಾರಿ ಮಾಡಲು ರಾಜ್ಯ ಕಾಂಗ್ರೆಸ್ ಸರ್ಕಾರ ಈಗ ವಿಳಂಬ ಧೋರಣೆ ತಳೆಯುತ್ತಿದೆ ಎಂದು ಆರೋಪಿಸಿದ್ದಾರೆ.

ಕಳೆದ ಏಳು ವರ್ಷಗಳ ಹಿಂದೆ ಒಳ ಮೀಸಲಾತಿ ಸಂಬಂಧ ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿರುವ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿಯ ದತ್ತಾಂಶವನ್ನು ಈಗ ನೇಮಕವಾಗಿರುವ ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿ ಪಡೆದು ವರದಿ ತಯಾರಿಸಬೇಕು ಎಂದು ಆಗ್ರಹಿಸಿದ್ದಾರೆ.

ಒಳ ಮೀಸಲಾತಿ ಜಾರಿಯಾಗುವ ತನಕ ಸರ್ಕಾರಿ ಉದ್ಯೋಗದ ನೇಮಕಾತಿ ತಡೆ ಹಿಡಿಯಬೇಕು. ನಿಜವಾದ 49 ಅಲೆಮಾರಿ ಸಮುದಾಯಗಳ ಪ್ರತ್ಯೇಕವಾಗಿ ಗುರುತಿಸಿ ಶೇಕಡ 1 ಕ್ಕಿಂತ ಹೆಚ್ಚು ಒಳ ಮೀಸಲಾತಿ ನೀಡಬೇಕು. ಜೊತೆಗೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಬೇಕು ಎಂದು ಒತ್ತಾಯಿಸಿದೆ

ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನದಲ್ಲಿ ಮಾದಿಗ, ಸಮಗಾರ, ಡೋಹರ, ಮಚಿಗಾರ, ಜಾತಿಗಳ ಜನಸಂಖ್ಯೆಗೆ ಆಧಾರದ ಮೇಲೆ ಪ್ರತ್ಯೇಕ ಅನುದಾನ ಮೀಸಲಿಡಬೇಕು ಎಂದು ಸಮಿತಿ ಒತ್ತಾಯಿಸಿದೆ. ಸಮಿತಿ ಜಿಲ್ಲಾಧ್ಯಕ್ಷ ಶಂಕರ್, ವಿ.ನಾಗರಾಜು, ರಾಚಯ್ಯ, ಸಿದ್ದರಾಜು, ಶೇಖರ್ ಇದ್ದರು.

ಪಾಲಿಕೆ ನೂತನ ಆಯುಕ್ತರಿಗೆ ಅಭಿನಂದನೆ...



ಮೈಸೂರು ಮಹಾನಗರಪಾಲಿಕೆ ನೂತನ ಆಯುಕ್ತ ಶೇಖ್ ತನ್ವೀರ್ ಆಸೀಫ್ ಅವರನ್ನು ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರಕಾರ್ಮಿಕರ ಮಹಾ ಸಂಘದ ಪದಾಧಿಕಾರಿಗಳು ಅಭಿನಂದಿಸಿದರು. ಈ ವೇಳೆ ಪೌರಕಾರ್ಮಿಕರ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಿದರು. ಸಂಘದ ಗೌರವ ಅಧ್ಯಕ್ಷ ಎಂ.ವಡಿವೇಲು, ಉನ್ನತ ಸಮಿತಿ ಅಧ್ಯಕ್ಷ ಎನ್.ಮಾರ, ಕಾರ್ಯದರ್ಶಿ ಟಿ.ಶ್ರೀನಿವಾಸ್, ಕಾರ್ಯಾಧ್ಯಕ್ಷ ಮಂಚಯ್ಯ, ಅಧ್ಯಕ್ಷ .ನರಸಿಂಹ, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಮಹಿಳಾ ಘಟಕದ ಅಧ್ಯಕ್ಷೆ ಮಾದೇವಿ, ಪ್ರಧಾನ ಕಾರ್ಯದರ್ಶಿ ನರಸಮ್ಮ, ಉಮಾ, ಸಂಘದ ಪದಾಧಿಕಾರಿಗಳು, ಸಾಗರ್ ಆಫೀಸ್ ಬಾಯ್ ಉಪಸ್ಥಿತರಿದ್ದರು.

ಹಳೆ ವಿದ್ಯಾರ್ಥಿಗಳ ಸಂಘಟನೆ ರಚನೆ

ಮೈಸೂರು: ಮೈಸೂರಿನ ಶ್ರೀರಾಂಪುರದಲ್ಲಿರುವ ಶ್ರೀ ಜೈನ್ ಎಜುಕೇಶನ್ ಸೊಸೈಟಿ ಮಹಾವೀರ ವಿದ್ಯಾ ಮಂದಿರದಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘಟನೆಯನ್ನು ಅಸ್ತಿತ್ವಕ್ಕೆ ತರಲು ನಿರ್ಧರಿಸಲಾಗಿದ್ದು, 1992 ರಿಂದ ಈ ಶಾಲೆಯಲ್ಲಿ ವ್ಯಾಸಂಗ ಮಾಡಿದವರು ಈ ಸಂಘಟನೆ ಸೇರ್ಪಡೆಗೊಳ್ಳಬಹುದು. ಹಳೆಯ ವಿದ್ಯಾರ್ಥಿಗಳ ಸಂಘಟನೆಯ ಸಂಚಾಲಕರಾದ ಆಶಾ.ಎಸ್ (ಮೊ 9731311974), ಆಶಾ ಎನ್ (ಮೊ.8147471375) ಅವರನ್ನು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದು.

ಇಂದಿನಿಂದಲೇ ಗುರಿ ಇಟ್ಟುಕೊಂಡು ನಿಮ್ಮ ಸಾಧನೆ ಸ್ಪಷ್ಟಪಡಿಸಿಕೊಳ್ಳಿ

ಪರೀಕ್ಷಾ ತರಬೇತಿ ಶಿಬಿರ ಉದ್ಘಾಟಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ ಶಿಬಿರಾರ್ಥಿಗಳಿಗೆ ಸಲಹೆ

ಮೈಸೂರು,ಜ.29(ಎಂಟಿವೈ)– ಸಾಧನೆಗೆ ಗುರಿ ಮುಖ್ಯ, ಹೀಗಾಗಿ ಇಂದಿನಿಂದಲೇ ಗುರಿ ಇಟ್ಟುಕೊಂಡು ನಿಮ್ಮ ದಾರಿ ಸ್ಪಷ್ಟಪಡಿಸಿಕೊಳ್ಳಿ. ಬಳಿಕ ಗುರಿಯ ಕಡೆ ನಿರಂತರ ಗಮನಹರಿಸಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದಿಂದ ಏರ್ಪಡಿಸಲಾಗಿದ್ದ ಬ್ಯಾಂಕಿಂಗ್ ಹುದ್ದೆಗಳ ನೇಮಕಾತಿ ಪರೀಕ್ಷಾ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಹುದ್ದೆಗಿಂತಲೂ ಮಾನವೀಯ ಮೌಲ್ಯ ಮುಖ್ಯ ಹೀಗಾಗಿ ಜೀವನದಲ್ಲಿ ಮಾನವೀಯ ಮೌಲ್ಯ ಅಳವಡಿಸಿಕೊಳ್ಳಿ. ಜೊತೆಗೆ ಶಿಸ್ತು, ಹಿರಿಯರ ಮೇಲೆ ಗೌರವ, ಪ್ರೀತಿ ಇಟ್ಟುಕೊಳ್ಳಬೇಕು. ಆಗಲೇ ಜೀವನದಲ್ಲಿ ಏನಾದರೂ ಸಾಧಿಸಲು ಸಾಧ್ಯವಾಗುತ್ತದೆ ಎಂದರು.

ಬ್ಯಾಂಕಿಂಗ್, ಯುಪಿಎಸ್‌ಸಿ, ಐಎಎಸ್ ಐಎಫ್‌ಎಸ್, ಕೆಎಎಸ್ ಸೇರಿದಂತೆ ಎಲ್ಲಾ ಪರೀಕ್ಷೆ ತೆಗೆದುಕೊಳ್ಳಿ. ಪ್ರಯತ್ನಂ ಸರ್ವ ಸಾಧನಂ ಎನ್ನುವಂತೆ ಎಂದಾದರೂ ಪ್ರಯತ್ನಕ್ಕೆ ಫಲ ಸಿಕ್ಕೆ ಸಿಗುತ್ತದೆ ಎಂದು ಕಿವಿಮಾತು ಹೇಳಿದರು.

ಶಾಲೆಯಿಂದಲೇ ನಾನು ಗುರಿ ನಿಗದಿಪಡಿಸಿಕೊಂಡಿದ್ದೆ. ಅಂದಿನಿಂದಲೇ ಸತತ ಪ್ರಯತ್ನಿಸಿದೆ. ನಮ್ಮ ತಂದೆ ಕೂಡ ಪೊಲೀಸ್ ಇಲಾಖೆಯ ಅಧಿಕಾರಿಗಳಾಗಿದ್ದರು. ಅವರೇ ನನಗೆ ಮಾದರಿ. ನಾನು ನನ್ನ ಗುರಿ ಕಡೆ ಗಮನಹರಿಸಿದೆ. ಪೊಲೀಸ್ ಇಲಾಖೆಗೆ ಸೇರಿದೆ ಎಂದು ತಮ್ಮ ಬಾಲ್ಯದ ದಿನಗಳನ್ನು ಸ್ಮರಿಸಿಕೊಂಡರು. ಹುದ್ದೆ ಸೇರಿದ ಮೇಲೆ ಪೋಷಕರನ್ನು ಮರೆಯಬಾರದು. ಸಾರ್ವಜನಿಕ ಸೇವೆಯೆ ನಮ್ಮ ಗುರಿ ಎನ್ನುವ ಅಂಶವನ್ನು ಮರೆಯಬಾರದು ಎಂದು ಹೇಳಿದರು.



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಏರ್ಪಡಿಸಲಾಗಿದ್ದ ಬ್ಯಾಂಕಿಂಗ್ ಹುದ್ದೆಗಳ ನೇಮಕಾತಿ ಪರೀಕ್ಷಾ ತರಬೇತಿ ಶಿಬಿರವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ ಉದ್ಘಾಟಿಸಿದರು.

ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಬೌದ್ಧಿಕ ಸಾಮರ್ಥ್ಯವನ್ನು ಗಟ್ಟಿಗೊಳಿಸಿ ತಮ್ಮ ಕೆಲಸಗಳನ್ನು ಚುರುಕುಗೊಳಿಸಬೇಕು ಎಂದು ಹೇಳಿದರು.


ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ ಮಾತನಾಡಿ, ಬ್ಯಾಂಕಿಂಗ್ ಹುದ್ದೆಗಳ ತರಬೇತಿಗೆ ಬಂದಿರುವ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ವಿದ್ಯಾರ್ಥಿಗಳು ತಮ್ಮ ಗುರಿ ಸ್ಪಷ್ಟಪಡಿಸಿಕೊಂಡು ಆ ಹಾದಿಯತ್ತ ಗಮನ ಹರಿಸಬೇಕು. ನಿರಂತರ ಪರಿಶ್ರಮ ನಿಮ್ಮನ್ನು ಗೆಲುವಿನ ದಡ ಸೇರಿಸಲಿದೆ. ವಿದ್ಯಾರ್ಥಿಗಳಲ್ಲಿ ಛಲ ಮತ್ತು ಗುರಿಯಿರಬೇಕು. ಆ ಗುರಿ ದೊಡ್ಡದಾಗಿರಲಿ ಎಂದರು.

ತರಬೇತಿ ಪಡೆಯಲು ಬಂದಿರುವ ನಿಮಗೆ ವಿವಿಯು ಎಲ್ಲಾ ಸಹಕಾರ ನೀಡಲಿದೆ. ಇಲ್ಲಿರುವ ಗ್ರಂಥಾಲಯ ಹಾಗೂ ವಿವಿಧ ವಿಭಾಗಗಳ ಪ್ರಾಧ್ಯಾಪಕರ ನೆರವು ಪಡೆದುಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಧ್ಯಯನ ಕೇಂದ್ರದ ಡೀನ್ ಪ್ರೊ.ರಾಮನಾಥಂ ನಾಯ್ಡು, ಹಣಕಾಸು ಅಧಿಕಾರಿ ಪ್ರೊ. ನಿರಂಜನ್ ರಾಜ್, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ, ಸಿದ್ದೇಶ್ ಹೊನ್ನೂರ್, ಗಣೇಶ್ ಕೆ.ಜಿ.ಕೊಪ್ಪಲ್ ಇತರರು ಉಪಸ್ಥಿತರಿದ್ದರು.

ದೇಶ - ವಿದೇಶ

ಅಲಸ್ಕಾದಲ್ಲಿ ಅಮೆರಿಕದ ಎಫ್–35 ಯುದ್ಧ ವಿಮಾನ ಪತನ




ಅಲಸ್ಕಾ: ತರಬೇತಿ ವೇಳೆ ಅಮೆರಿಕ ವಾಯುಸೇನೆಯ ಎಫ್–35 ಯುದ್ಧ ವಿಮಾನ ಪತನವಾಗಿದ್ದು, ವಿಮಾನ ಪತನದ ಅಂತಿಮ ಕ್ಷಣದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ವೈರಲ್ ಆಗುತ್ತಿದೆ. ಮಂಗಳವಾರ ಅಮೆರಿಕದ ಅಲಾಸ್ಕಾದ ಐಲ್ಸನ್ ವಾಯುಪಡೆ ನೆಲೆಯಲ್ಲಿ ತರಬೇತಿ ಸಮಯದಲ್ಲಿ ಅಮೆರಿಕ ವಾಯುಪಡೆಯ ಎಫ್–35 ಯುದ್ಧ ವಿಮಾನ ಅಪಘಾತಕ್ಕೀಡಾಗಿದೆ. ಸಿಂಗಲ್ ಸೀಟಿನ ಎಫ್–35 ಯುದ್ಧ ವಿಮಾನವನ್ನು ಹಾರಿಸುತ್ತಿದ್ದ ಪೈಲಟ್ ಎಮರ್ಜೆನ್ಸಿ ಎಕ್ಸಿಟ್ ಮೂಲಕ ವಿಮಾನದಿಂದ ಹೊರಜಿಗಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ವಿಮಾನವು ಆಗಸದಿಂದ ಲಂಬವಾಗಿ ನೆಲಕ್ಕೆ ಅಪ್ಪಳಿಸಿದೆ. ಅಪಘಾತದ ನಂತರ ದೊಡ್ಡ ಸ್ಫೋಟ ಸಂಭವಿಸಿದ್ದು, ಬೆಂಕಿ ಗಾಳಿಯಲ್ಲಿ ಹಲವಾರು ಮೀಟರ್‌ಗಳಷ್ಟು ಮೇಲಕ್ಕೆ ಹಾರಿದೆ. ಸಮಯಕ್ಕೆ ಸರಿಯಾಗಿ ವಿಮಾನದಿಂದ ಹೊರ ಜಿಗಿದ ಪೈಲಟ್ ಪ್ಯಾರಾಚೂಟ್ ಸಹಾಯದಿಂದ ನೆಲದ ಮೇಲೆ ಇಳಿದು ಪ್ರಾಣ ಉಳಿಸಿಕೊಂಡಿದ್ದಾರೆ. ಪ್ರಸ್ತುತ ಅವರನ್ನು ಬ್ಯಾಸೆಟ್ ಸೇನಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಎಫ್–35 ಯುದ್ಧ ವಿಮಾನವು ತರಬೇತಿ ಬಳಿಕ ಲ್ಯಾಂಡ್ ಆಗುತ್ತಿದ್ದ ವೇಳೆ ತಾಂತ್ರಿಕ ದೋಷದಿಂದ ಪತನವಾಗಿದೆ ಎಂದು ಅಧಿಕಾರಿಗಳು ಶಂಕಿಸಿದ್ದಾರೆ.

ಇಂಡಿಗೋ ವಿಮಾನದ ತುರ್ತು ನಿರ್ಗಮನ ಬಾಗಿಲು ತೆರೆದ ವ್ಯಕ್ತಿ ಬಂಧನ



ಜೋಧ್‌ಪುರ: ಜೋಧ್‌ಪುರದಿಂದ ಇಂಡಿಗೋ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ವ್ಯಕ್ತಿಯನ್ನು ಮಂಗಳವಾರ ತುರ್ತು ಬಾಗಿಲು ತೆರೆದಿದ್ದಕ್ಕಾಗಿ ಬಂಧಿಸಲಾಗಿದೆ. ನಿರ್ಗಮನದ ಸಮಯದಲ್ಲಿ ಪ್ರಯಾಣಿಕ ತುರ್ತು ನಿರ್ಗಮನ ಫ್ಲಾಪ್‌ನ್ನು ತೆರೆದಿದ್ದರ ಪರಿಣಾಮ ವಿಮಾನ ಟೇಕ್ ಆಫ್ ಆಗುವುದು 20 ನಿಮಿಷಗಳ ವಿಳಂಬವಾಯಿತು. ಕ್ಯಾಬಿನ್ ಸಿಬ್ಬಂದಿ ಸುರಕ್ಷತಾ ಸೂಚನೆಗಳನ್ನು ನೀಡುತ್ತಿದ್ದಾಗ ಮತ್ತು ವಿಮಾನವು ಟೇಕ್ ಆಫ್ ಆಗಲು ಸಿದ್ಧವಾದಾಗ ಈ ಘಟನೆ ಸಂಭವಿಸಿದೆ. ಬ್ಯಾಂಕ್ ಉದ್ಯೋಗಿ ಸಿರಾಜ್ ಕಿದ್ವಾಯಿ ಬಂಧಿತ ಪ್ರಯಾಣಿಕನಾಗಿದ್ದಾರೆ. ಅವರು ಆಕಸ್ಮಿಕವಾಗಿ ತುರ್ತು ನಿರ್ಗಮನ ಫ್ಲಾಪ್ ಅನ್ನು ತೆರೆದಿದ್ದಾರೆ ಎಂದು ಹೇಳಿಕೊಂಡಿದ್ದಾರೆ. ಆದಾಗ್ಯೂ, ವಿಮಾನ ಸಿಬ್ಬಂದಿ ತ್ವರಿತವಾಗಿ ಕ್ರಮ ಕೈಗೊಂಡರು ಮತ್ತು ಪೈಲಟ್‌ಗೆ ತಕ್ಷಣವೇ ಎಚ್ಚರಿಕೆ ನೀಡಲಾಯಿತು. ಪರಿಸ್ಥಿತಿಯನ್ನು ಗಮನಿಸಿ, ಸಿಬ್ಬಂದಿ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳನ್ನು ಅನುಸರಿಸಿದರು, ಭದ್ರತಾ ಅಧಿಕಾರಿಗಳು ಪ್ರಯಾಣಿಕನನ್ನು ತಕ್ಷಣವೇ ವಿಮಾನದಿಂದ ಕೆಳಗಿಳಿಸಿದ್ದಾರೆ. ನಂತರ ಜೋಧ್‌ಪುರದ ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ CISF ಸಿಬ್ಬಂದಿ ಪ್ರಯಾಣಿಕನನ್ನು ವಿಚಾರಣೆಗೆ ಒಳಪಡಿಸಿದ್ದಾರೆ.

ಅಮೆರಿಕದಲ್ಲಿ ಹಕ್ಕಿ ಜ್ವರದ ಹೊಸ ತಳಿ ಪತ್ತೆ, ಓರ್ವ ಸಾವು



ಕ್ಯಾಲಿಫೋರ್ನಿಯಾ: ಕ್ಯಾಲಿಫೋರ್ನಿಯಾದ ಬಾತುಕೋಳಿ ಫಾರ್ಮ್‌ನಲ್ಲಿ ಹಕ್ಕಿ ಜ್ವರದ ಹೊಸ ತಳಿ ಪತ್ತೆಯಾಗಿದ್ದು, ಓರ್ವ ಸಾವನ್ನಪ್ಪಿದ್ದಾನೆ. ಯುನೈಟೆಡ್ ಸ್ಟೇಟ್ಸ್‌ನಲ್ಲಿ ಬಾತುಕೋಳಿಗಳಲ್ಲಿ ಈ ರೂಪಾಂತರ ಪತ್ತೆಯಾಗಿರುವುದು ಇದೇ ಮೊದಲು ಎಂದು ಅಂತಾರಾಷ್ಟ್ರೀಯ ಸಂಸ್ಥೆ ತಿಳಿಸಿದೆ.

ಜನವರಿ 13ರಂದು ಈ ತಳಿ ಪತ್ತೆಯಾಗಿದ್ದು ಹರಡುವಿಕೆಯ ಮೂಲ ತಿಳಿದಿಲ್ಲ. ಸದ್ಯ ಫಾರ್ಮ್‌ನಲ್ಲಿರುವ ಎಲ್ಲಾ 1,19,000 ಬಾತುಕೋಳಿಗಳನ್ನು ಕೊಲ್ಲಲಾಗಿದೆ ಎಂದು WHO ಹೇಳಿದೆ. ಅಮೆರಿಕದಲ್ಲಿ ಪ್ರಾಣಿಗಳಲ್ಲಿ ವ್ಯಾಪಕವಾಗಿ ಹರಡಿರುವ ಹಕ್ಕಿ ಜ್ವರದ H5N1 ತಳಿಯೂ ಸಹ ಫಾರ್ಮ್‌ನಲ್ಲಿ ಪತ್ತೆಯಾಗಿದೆ ಎಂದು ಸಂಸ್ಥೆ ಹೇಳಿದೆ.

ಅಮೆರಿಕದಲ್ಲಿ ಅರವತ್ತೇಳು ಜನರಿಗೆ ಹಕ್ಕಿ ಜ್ವರ ತಗುಲಿದ್ದು, ಅವರ ಪೈಕಿ ಜನವರಿ ಆರಂಭದಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಅಮೆರಿಕದ ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಸಂಸ್ಥೆ ತಿಳಿಸಿದೆ. ಇನ್ನು ಇಲ್ಲಿಯವರೆಗೆ ಸೋಂಕಿತ ಪ್ರಾಣಿಯಿಂದ ಮನುಷ್ಯರಿಗೆ ಸೋಂಕು ತಗುಲಿದ್ದು, ಜನರಿಂದ ಜನರಿಗೆ ಹರಡಿದ ಪ್ರಕರಣ ಯಾವುದೂ ವರದಿಯಾಗಿಲ್ಲ. ಆದರೆ ಒಬ್ಬ ವ್ಯಕ್ತಿಯು ಹಕ್ಕಿ ಜ್ವರ ಮತ್ತು ಕಾಲೋಚಿತ ಜ್ವರ ಎರಡರಿಂದಲೂ ಸೋಂಕಿಗೆ ಒಳಗಾಗಿದ್ದಾರೆ.

ಪಿಜಿ ವೈದ್ಯಕೀಯ ಕೋರ್ಸ್‌ಗಳಲ್ಲಿ ವಾಸಸ್ಥಳ ಆಧಾರಿತ ಮೀಸಲಾತಿ ಅಸಂವಿಧಾನಿಕ



ನವದೆಹಲಿ: ಸ್ನಾತಕೋತ್ತರ ವೈದ್ಯಕೀಯ ಪದವಿ ಸೀಟುಗಳಲ್ಲಿ ವಾಸಸ್ಥಾನ ಆಧಾರಿತ ಮೀಸಲಾತಿ ಸಂವಿಧಾನದ 14ನೇ ವಿಧಿಯನ್ನು ಉಲ್ಲಂಘಿಸುವುದರಿಂದ ಅದಕ್ಕೆ ಅವಕಾಶವಿಲ್ಲ ಎಂದು ಸುಪ್ರೀಂಕೋರ್ಟ್ ಬುಧವಾರ ತೀರ್ಪು ನೀಡಿದೆ. ರಾಜ್ಯ ಕೋಟಾಗಳ ಅಡಿಯಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶವು ನೀಟ್ ಪರೀಕ್ಷೆಯಲ್ಲಿ ಕೇವಲ ಅರ್ಹತೆಯ ಆಧಾರದ ಮೇಲೆ ಇರಬೇಕು ಎಂದು ತೀರ್ಪು ಎತ್ತಿ ತೋರಿಸಿದೆ. ಸ್ನಾತಕೋತ್ತರ (PG) ವೈದ್ಯಕೀಯ ಕೋರ್ಸ್‌ಗಳಲ್ಲಿ ವಾಸಸ್ಥಳ ಆಧಾರಿತ ಮೀಸಲಾತಿ ಸಂವಿಧಾನದ 14 ನೇ ವಿಧಿಯನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತದೆ ಎಂದು ನ್ಯಾಯಮೂರ್ತಿ ಹೃಷಿಕೇಶ್ ರಾಯ್ ಮತ್ತು ನ್ಯಾಯಮೂರ್ತಿಗಳಾದ ಸುಧಾಂಶು ಧುಲಿಯಾ ಮತ್ತು ಎಸ್‌ವಿಎನ್ ಭಟ್ಟಿ ನೇತೃತ್ವದ ಸುಪ್ರೀಂ ಕೋರ್ಟ್‌ನ ಮೂವರು ನ್ಯಾಯಾಧೀಶರ ಪೀಠ ಹೇಳಿದೆ.

ಭಾರತದಲ್ಲಿ ಎಲ್ಲಿಯಾದರೂ ಬದುಕುವ ಹಕ್ಕು ಮತ್ತು ದೇಶದಲ್ಲಿ ಎಲ್ಲಿಯಾದರೂ ವ್ಯಾಪಾರ ಮತ್ತು ವೃತ್ತಿಯನ್ನು ನಡೆಸುವ ಹಕ್ಕು ಭಾರತೀಯರಿಗಿದೆ ಎಂದು ಒತ್ತಿ ಹೇಳಿದೆ. ಭಾರತದಾದ್ಯಂತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶವನ್ನು ಪಡೆಯುವ ಹಕ್ಕನ್ನು ಸಂವಿಧಾನವು ನಮಗೆ ನೀಡುತ್ತದೆ ಎಂದು ಸುಪ್ರೀಂಕೋರ್ಟ್ ಹೇಳಿದೆ.

169 ಮಂದಿ ಪ್ರಯಾಣಿಕರಿದ್ದ ವಿಮಾನದಲ್ಲಿ ಕಾಣಿಸಿಕೊಂಡ ಬೆಂಕಿ



ದಕ್ಷಿಣ ಕೊರಿಯಾ: ಮಂಗಳವಾರ ರಾತ್ರಿ ದಕ್ಷಿಣ ಕೊರಿಯಾದ ಗಿಮ್ಹೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ವಿಮಾನಕ್ಕೆ ಬೆಂಕಿ ಹೊತ್ತಿಕೊಂಡಿತ್ತು. ವಿಮಾನ ಟೇಕಾಫ್ ಆಗಲು ತಯಾರಾಗುತ್ತಿದ್ದಾಗ ಈ ಬೆಂಕಿ ಕಾಣಿಸಿಕೊಂಡಿದೆ. ವಿಮಾನದಲ್ಲಿ 169 ಪ್ರಯಾಣಿಕರಿದ್ದರು ಎಂದು ಹೇಳಲಾಗಿದೆ. ಈ ಅಪಘಾತದಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಎಲ್ಲಾ ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದಾರೆ. ಈ ಏರ್ ಬುಸಾನ್ ವಿಮಾನ ಎ 321 ಆಗ್ನೇಯ ನಗರವಾದ ಬುಸಾನ್‌ನಿಂದ ಹಾಂಗ್‌ಕಾಂಗ್‌ಗೆ ಟೇಕ್ ಆಫ್ ಮಾಡಲು ತಯಾರಿ ನಡೆಸುತ್ತಿದ್ದಾಗ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡ ಬಗ್ಗೆ ಮೊದಲ ಮಾಹಿತಿ ಸಿಕ್ಕಿತು. ಇದಾದ ನಂತರ 45 ಅಗ್ನಿಶಾಮಕ ದಳದ ವಾಹನಗಳು ತಕ್ಷಣ ಸ್ಥಳಕ್ಕೆ ಆಗಮಿಸಿದವು.

ರಾತ್ರಿ 10.30ರ ಸುಮಾರಿಗೆ ಈ ಘಟನೆ ನಡೆದಿದೆ. ಅಪಘಾತದಲ್ಲಿ ಮೂವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಹೇಳಲಾಗುತ್ತಿದೆ. ಅಗ್ನಿಶಾಮಕ ದಳದವರು ಬೆಂಕಿಯನ್ನು ಸಂಪೂರ್ಣವಾಗಿ ನಿಯಂತ್ರಿಸಿದ್ದಾರೆ. ಮೂವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ನಾಳೆ ಭಾಗಮಂಡಲದ ಮೇಲ್ಸೇತುವೆ ಉದ್ಘಾಟನೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆ ● ಜಿಲ್ಲಾ ಕಾಂಗ್ರೆಸ್ ಮಾಧ್ಯಮ ವಕ್ತಾರ ರಮೇಶ್ ಮಾಹಿತಿ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಮಾಧ್ಯಮ ವಕ್ತಾರ ಟಿ.ಪಿ.ರಮೇಶ್ ಮಾತನಾಡಿದರು.

ಮಡಿಕೇರಿ, ಜ.29–ಕಾವೇರಿ ಕ್ಷೇತ್ರ ಭಾಗಮಂಡಲದಲ್ಲಿ ಸುಮಾರು 30 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಮೇಲ್ಸೇತುವೆಯನ್ನು ಶುಕ್ರವಾರ (ಜ.31) ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಕೊಡಗು ಜಿಲ್ಲಾ ಕಾಂಗ್ರೆಸ್ ಮಾಧ್ಯಮ ವಕ್ತಾರ ಟಿ.ಪಿ.ರಮೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 3 ಗಂಟೆಗೆ ಮೇಲ್ಸೇತುವೆ ಉದ್ಘಾಟನೆ ಸಮಾರಂಭದಲ್ಲಿ ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್, ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ, ಉಪಮುಖ್ಯ ಮಂತ್ರಿ ಹಾಗೂ ಸಚಿವರನ್ನು ಕೊಡಗು ಜಿಲ್ಲಾ ಕಾಂಗ್ರೆಸ್ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಲಿದ್ದಾರೆ ಎಂದು ಹೇಳಿದರು.

ಮುಂಗಾರಿನ ಅವಧಿಯಲ್ಲಿ ಪ್ರತಿವರ್ಷ ಭಾಗಮಂಡಲ ಕ್ಷೇತ್ರ ಕಾವೇರಿ ನದಿ ಪ್ರವಾಹಕ್ಕೆ ಸಿಲುಕಿ, ಅಲ್ಲಿನ ನಿವಾಸಿಗಳು ಹಾಗೂ ಪುಣ್ಯ ಕ್ಷೇತ್ರಕ್ಕೆ ಆಗಮಿಸುವ ಭಕ್ತರು ಸಂಕಷ್ಟಕ್ಕೆ ಸಿಲುಕುತ್ತಿದ್ದರು. ಕಳೆದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ (9 ವರ್ಷಗಳ ಹಿಂದೆ) ಅಂದಿನ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಕೆಜೆಜಾರ್ಜ್ ಸ್ಥಳಕ್ಕೆ ಭೇಟಿ ನೀಡಿ, ಜನರ ಸಮಸ್ಯೆ ಆಲಿಸಿ, ಮೇಲ್ಸೇತುವೆ ನಿರ್ಮಾಣದ ಅಗತ್ಯತೆ ಮನಗಂಡು ಅಂದಿನ ಬೃಹತ್ ನೀರಾವರಿ ಸಚಿವರಾಗಿದ್ದ ಎಂ.ಬಿ.ಪಾಟೀಲ್ ಅವರಿಗೆ ಮಾಹಿತಿ ನೀಡಿದ್ದರು. ಬಳಿಕ ತಜ್ಞರ ತಂಡ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದ ಬಳಿಕ ಸುಮಾರು 30 ಕೋಟಿ ರೂ. ಅನುದಾನವನ್ನು ವಿವಿಧ ಹಂತಗಳಲ್ಲಿ ಮೇಲ್ಸೇತುವೆ ನಿರ್ಮಾಣಕ್ಕೆ ಒದಗಿಸಲಾಗಿದೆ. ನಂತರ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮೇಲ್ಸೇತುವೆ ಕಾಮಗಾರಿ ಮಂದಗತಿಯಲ್ಲಿ ಸಾಗಿತ್ತು. ಇದೀಗ ಮತ್ತೆ ಕಾಂಗ್ರೆಸ್ ಸರ್ಕಾರದಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ಮೇಲ್ಸೇತುವೆ ಪೂರ್ಣಕ್ಕೆ ವಿಶೇಷ ಕಾಳಜಿ ವಹಿಸಿದ ಹಿನ್ನೆಲೆಯಲ್ಲಿ ಪೂರ್ಣಗೊಂಡಿದೆ ಎಂದರು.



ಭಾಗಮಂಡಲದಲ್ಲಿ ನಿರ್ಮಾಣವಾಗಿರುವ ಮೇಲ್ಸೇತುವೆ.

ಎಸ್.ಎಂ.ಕೃಷ್ಣ–ಸಿದ್ದರಾಮಯ್ಯಕೊಡುಗೆ: ಹಿಂದೆ ಮುಖ್ಯಮಂತ್ರಿಯಾಗಿದ್ದ ಎಸ್.ಎಂ. ಕೃಷ್ಣ ಅವರು ಕಾವೇರಿ ಕ್ಷೇತ್ರದ ಅಭಿವೃದ್ಧಿಗೆ ಕಾಳಜಿ ವಹಿಸಿ ಕಾವೇರಿ ನೀರಾವರಿ ನಿಗಮದ ಮೂಲಕ 12 ಕೋಟಿ ರೂ. ಒದಗಿಸಿದ್ದರು. ಇದರ ಬಳಿಕ ಮೂಲಕ ಕ್ಷೇತ್ರ ಅಭಿವೃದ್ಧಿಯನ್ನು ಕಂಡಿದೆ. ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವಧಿಯಲ್ಲಿ ಮೇಲ್ಸೇತುವೆ ಉದ್ಘಾಟನೆಗೊಳ್ಳುತ್ತಿದೆ ಎಂದು ಹೇಳಿದರು.

ಜಿಲ್ಲಾ ಕೇಂದ್ರ ಮಡಿಕೇರಿಯಿಂದ ಭಾಗಮಂಡಲಕ್ಕೆ ತೆರಳುವ ರಸ್ತೆಯ ಅಭಿವೃದ್ಧಿಗೆ ಶಾಸಕ ಎ.ಎಸ್.ಪೊನ್ನಣ್ಣ ವಿಶೇಷ ಕಾಳಜಿ ವಹಿಸಿದ್ದು, ಈಗಾಗಲೇ ರಸ್ತೆ ಅಭಿವೃದ್ಧಿ ವಿಶೇಷ ಕಾರ್ಯಯೋಜನೆಯನ್ನು ಸರ್ಕಾರ ಮುಂದಿರಿಸಿದೆ ಎಂದು ತಿಳಿಸಿದರು.

ವಿದ್ಯುತ್‌ಗೆ 200 ಕೋಟಿ ರೂ.: ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆಗಳಿರುವುದನ್ನು ಮನಗಂಡು, ಈಗಾಗಲೇ ದಕ್ಷಿಣ ಕೊಡಗಿನ ಶ್ರೀಮಂಗಲದಲ್ಲಿ ವಿದ್ಯುತ್ ಉಪಕೇಂದ್ರ ಆರಂಭ ಸೇರಿದಂತೆ ವಿದ್ಯುತ್ ಮಾರ್ಗಗಳ ಬಲವರ್ಧನೆಗೆ ಸುಮಾರು 200 ಕೋಟಿ ರೂ. ವೆಚ್ಚದ ಕಾರ್ಯಯೋಜನೆಗಳನ್ನು ರೂಪಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಸುಜು ತಿಮ್ಮಯ್ಯ, ಪ್ರಧಾನ ಕಾರ್ಯದರ್ಶಿ ಮುನೀರ್ ಅಹಮ್ಮದ್, ಕೊಲ್ಯದ ಗಿರೀಶ್, ಕಾಂಗ್ರೆಸ್ ಸೇವಾ ದಳದ ಜಿಲ್ಲಾಧ್ಯಕ್ಷ ಕಾನೆಹಿತ್ಲು ಮೊಣ್ಣಪ್ಪ ಉಪಸ್ಥಿತರಿದ್ದರು.

ತಲಕಾವೇರಿಗೆ ಮುಖ್ಯಮಂತ್ರಿ ಭೇಟಿ



ಸಿದ್ದರಾಮಯ್ಯ

ಜ.31ರಂದು ಮಧ್ಯಾಹ್ನ 1.30ಕ್ಕೆ ಹೆಲಿಕಾಪ್ಟರ್ ಮೂಲಕ ಕೊಡಗು ಜಿಲ್ಲೆಗೆ ಭೇಟಿ ನೀಡಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗಮಂಡಲದ ಕಾವೇರಿ ಹೈಸ್ಕೂಲ್ ಆವರಣದ ಹೆಲಿಪ್ಯಾಡ್‌ಗೆ ಬಂದಿಳಿಯಲಿದ್ದಾರೆ. ಬಳಿಕ ಭಾಗಮಂಡಲದ ಶ್ರೀ ಭಗಂಡೇಶ್ವರ ದೇವಾಲಯ ಮತ್ತು ಕಾವೇರಿ ಉಗಮ ಸ್ಥಾನ ತಲಕಾವೇರಿ ಕ್ಷೇತ್ರಕ್ಕೂ ಭೇಟಿ ನೀಡಿ ಪೂಜೆ ಸಲ್ಲಿಸಲಿದ್ದಾರೆ. 3 ಗಂಟೆಗೆ ಭಾಗ ಮಂಡಲ–ನಾಪೋಕ್ಲು ಭಾಗಗಳಿಗೆ ಸಂಪರ್ಕ ಕಲ್ಪಿಸುವ ಮೇಲ್ಸೇತುವೆ ಲೋಕಾರ್ಪಣೆ ಮಾಡಲಿದ್ದಾರೆ.

ಮಾಸ್ಟರ್ಸ್ ಮಹಿಳಾ ತಂಡಕ್ಕೆ ಕಂಚು



ಮಾಸ್ಟರ್ಸ್ ಬಾಸ್ಕೆಟ್ ಬಾಲ್ ಟೂರ್ನಿಯಲ್ಲಿ ಕಂಚಿನ ಪದಕ ಗಳಿಸಿದ ಕೊಡಗಿನ ಮಹಿಳಾ ತಂಡ.

ಗೋಣಿಕೊಪ್ಪ: ಬೆಂಗಳೂರು ಮಾಸ್ಟರ್ಸ್ ಬಾಸ್ಕೆಟ್ ಬಾಲ್ ಅಕಾಡೆಮಿ ವತಿಯಿಂದ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ ಆಲ್ ಇಂಡಿಯಾ ಮಾಸ್ಟರ್ಸ್ ಬಾಸ್ಕೆಟ್ ಬಾಲ್ ಟೂರ್ನಿಯ 50 ವರ್ಷದ ವಿಭಾಗದಲ್ಲಿ ಕೊಡಗಿನ ಮಹಿಳಾ ತಂಡ ಕಂಚಿನ ಪದಕ ಗಳಿಸಿದೆ.

ತಂಡದಲ್ಲಿ ಗುಣಶೀಲಾ ಅಮರನಾಥ್ (ನಾಯಕಿ), ಡಾ.ಮಂಡೇಪಂಡ ಪುಷ್ಪಾ ಕುಟ್ಟಣ್ಣ, ಪಳಂಗಂಡ ವಾಣಿ ಚೆಂಗಪ್ಪ, ಕೊಳ್ಳಿಮಾಡ ರಶ್ಮಿ ಅಯ್ಯಪ್ಪ, ಬಲ್ಯಮೀದೇರಿರ ಆಶಾ ಶಂಕರ್, ತಾತಂಡ ಜ್ಯೋತಿ ಪ್ರಕಾಶ್, ತೀತರಮಾಡ ಕಾವೇರಿ ಅಚ್ಚಯ್ಯ, ಡಾ.ಕಲಿಯಂಡ ರೇಷ್ಮಾ ಚೆಂಗಪ್ಪ, ಕಾಡ್ಯಮಾಡ ದಿವ್ಯ ಪೂಣಚ್ಚ, ಪೊನ್ನಚಂಡ ಸಬಿತಾ ಪೂಣಚ್ಚ, ಐನಂಡ ಜಮುನಾ ಚೆಂಗಪ್ಪ, ಚೋವಂಡ ಜಮುನಾ ತಮ್ಮಯ್ಯ, ಕೋಣೇರೀರ ಶಿಲ್ಪ ಪೆಮ್ಮಯ್ಯ, ಕೋದೇಂಗಡ ರೇಷ್ಮಾ ನಂಜಪ್ಪ (ವ್ಯವಸ್ಥಾಪಕಿ) ಭಾಗವಹಿಸಿದರು.

ಮೈಕ್ರೋ ಫೈನಾನ್ಸ್‌ಗಳು ಆರ್‌ಬಿಐ ಮಾರ್ಗಸೂಚಿ ಪಾಲಿಸಬೇಕು



ಸಭೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿದರು. ಎಎಸ್‌ಪಿ ಸುಂದರ್ ರಾಜ್ ಇದ್ದರು.

ಮಡಿಕೇರಿ, ಜ.29–ಮೈಕ್ರೋ ಫೈನಾನ್ಸ್ ಮತ್ತು ಫಾನ್ ಬ್ರೋಕರ್‌ಗಳು ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಮೈಕ್ರೋ ಫೈನಾನ್ಸ್ ಮತ್ತು ಫಾನ್ ಬ್ರೋಕರ್‌ಗಳ ಸಭೆಯಲ್ಲಿ ಮಾತನಾಡಿದ ಅವರು, ಆರ್‌ಬಿಐ ಮಾರ್ಗಸೂಚಿ ಪ್ರಕಾರ 2 ಲಕ್ಷ ರೂ. ವರೆಗೆ ಮಾತ್ರ ಸಾಲ ನೀಡಬಹುದು. ಆದರೆ, ಸಾಲ ನೀಡುವಾಗ ಸಾಲ ಪಡೆಯುವವರು ಮರುಪಾವತಿ ಮಾಡುವ ಸಾಮರ್ಥ್ಯ ಇದೆಯೇ ಎಂದು ಗಮನಿಸಿ ಸಾಲ ನೀಡಬೇಕು. ಅದನ್ನು ಬಿಟ್ಟು ಕಿರುಕುಳ ನೀಡುವುದು ಸರಿಯಲ್ಲ ಎಂದು ಹೇಳಿದರು.


ಸಾರ್ವಜನಿಕರಿಗೆ ತೊಂದರೆಯಾಗದ ನಿಟ್ಟಿನಲ್ಲಿ ಫೈನಾನ್ಸ್ ಕಂಪನಿಗಳು ಕಾನೂನು ನಿಯಮಾನುಸಾರ ನಡೆದುಕೊಳ್ಳಬೇಕು. ಅದುಬಿಟ್ಟು ದೌರ್ಜನ್ಯ ನಡೆಯುವುದು ಕಂಡುಬಂದರೆ ಕ್ರಮ ಜರುಗಿಸಲಾಗುವುದು. ಪ್ರತಿಯೊಬ್ಬರಲ್ಲೂ ಆರ್ಥಿಕ ಶಿಸ್ತು ಇರಬೇಕು. ಅದನ್ನು ಬಿಟ್ಟು ಹೆಚ್ಚುವರಿ ಸಾಲ ನೀಡುವುದು. ಸಂಜೆ 5 ಗಂಟೆ ನಂತರ ಸಾಲ ವಸೂಲಾತಿ ಮಾಡಲು ಹೋಗುವುದು. ಇಂತಹ ಪ್ರಕರಣಗಳು ವರದಿಯಾಗಬಾರದು ಎಂದು ಎಚ್ಚರಿಸಿದರು.

ಸಾರ್ವಜನಿಕರು ಮೈಕ್ರೋ ಫೈನಾನ್ಸ್ ಕಿರುಕುಳ ಸಂಬಂಧ ಪೊಲೀಸ್ ಕಂಟ್ರೋಲ್ ರೂಂ: 08272–228330 ಅಥವಾ ಜಿಲ್ಲಾಧಿಕಾರಿ ಕಚೇರಿಯ ಕಂಟ್ರೋಲ್ ರೂಂ: 08272–221077ಗೆ ದೂರು ನೀಡಬಹುದು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಂದರ್‌ರಾಜ್ ಮಾತನಾಡಿ, ಒಬ್ಬರಿಗೆ 9 ಕಂಪನಿಗಳು ಸಾಲ ನೀಡಿರುವುದು ಕಂಡುಬಂದಿದೆ. ಸಾಲ ನೀಡುವಾಗ ಪರಿಶೀಲಿಸಬೇಕು. ಅದನ್ನು ಬಿಟ್ಟು ದೌರ್ಜನ್ಯ ನಡೆಸಿದರೆ ಕಠಿಣ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.



ಅರ್ಚಕ ವಿಘ್ನೇಶ್ ಭಟ್ ಮೇಲಿನ ಹಲ್ಲೆಗೆ ಬಿಜೆಪಿ ಖಂಡನೆ



ನಾಪಂಡ ರವಿ ಕಾಳಪ್ಪ

ಮಡಿಕೇರಿ, ಜ.29–ಕಟ್ಟೆಮಾಡು ಮಹಾಮೃತ್ಯುಂಜಯ ದೇವಾಲಯ ಪ್ರಧಾನ ಅರ್ಚಕ ವಿಘ್ನೇಶ್ ಭಟ್ ಮೇಲೆ ನಡೆದಿರುವ ಹಲ್ಲೆ ಪ್ರಕರಣವನ್ನು ಕೊಡಗು ಜಿಲ್ಲಾ ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ ಎಂದು ಪಕ್ಷದ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ತಿಳಿಸಿದ್ದಾರೆ.

ಅರ್ಚಕರ ಮೇಲೆ ಹಲ್ಲೆ ಮಾಡಿರುವ ಆರೋಪಿಗಳನ್ನು ತಕ್ಷಣ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಇನ್ನು ಮುಂದೆ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಅರ್ಚಕ ವಿಘ್ನೇಶ್ ಭಟ್ ಮನೆ ಬಳಿ ತೆರಳಿ ಅವರು ಹಾಗೂ ಅವರ ತಾಯಿ ಮೇಲೆ ಹಲ್ಲೆ ಮಾಡಿರುವುದು ಅಮಾನವೀಯ ಕೃತ್ಯ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಿಡಿಗೇಡಿಗಳಿಗೆ ಕಾನೂನಿನ ಭಯವಿಲ್ಲದಾಗಿದೆ. ಹಲ್ಲೆ, ದೌರ್ಜನ್ಯ, ಜನಾಂಗೀಯ ಸಂಘರ್ಷ, ದರೋಡೆ, ಗೋ ಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಗೃಹ ಇಲಾಖೆ ಸಂಪೂರ್ಣವಾಗಿ ವಿಫಲವಾಗಿದೆ. ಜನಸಾಮಾನ್ಯರು ಭಯಮುಕ್ತರಾಗಿ ಜೀವನ ಸಾಗಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದ್ದಾರೆ.

ಫೆ.2ರಿಂದ ಕುಟ್ಟದಿಂದ ಬೃಹತ್ ಪಾದಯಾತ್ರೆ



ವಿರಾಜಪೇಟೆ ಖಾಸಗಿ ಹೋಟೆಲ್‌ನಲ್ಲಿ ಕೊಡವ ಭಾಷಿಕ ಸಮುದಾಯಗಳ ಪ್ರಮುಖರ ಸಭೆ ನಡೆಯಿತು.

ವಿರಾಜಪೇಟೆ: ಕೊಡವ ಭಾಷಿಕ ಸಮುದಾಯಗಳ ಕೂಟ ಹಾಗೂ ಅಖಿಲ ಕೊಡವ ಸಮಾಜದ ನೇತೃತ್ವದಲ್ಲಿ ಫೆ.2 ರಿಂದ 7ರವರೆಗೆ ಜಿಲ್ಲೆಯ ಗಡಿಭಾಗವಾದ ಕುಟ್ಟದಿಂದ ಮಡಿಕೇರಿವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಕೊಡವ ಭಾಷಿಕ ಸಮುದಾಯಗಳ ಕೂಟದ ಅಧ್ಯಕ್ಷ ಡಾ.ಮೇಚಿರ ಸುಭಾಷ್ ನಾಣಯ್ಯ ತಿಳಿಸಿದರು.

ಪಟ್ಟಣದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ನಡೆದ ಕೊಡವ ಭಾಷಿಕ ಸಮುದಾಯಗಳ ಪ್ರಮುಖರ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆ ಹಾಗೂ ಕೊಡವ ಸಂಸ್ಕೃತಿ ಹಿತಕಾಯುವ ನಿಟ್ಟಿನಲ್ಲಿ ಕೊಡವ ಭಾಷಿಕ ಜನಾಂಗಗಳು ಒಂದಾಗಬೇಕು. ಈ ನಿಟ್ಟಿನಲ್ಲಿ ಹಿರಿಯಣ್ಣನ ಸ್ಥಾನದಲ್ಲಿರುವ ಕೊಡವ ಜನಾಂಗ ಇತರ 21 ಕೊಡವ ಭಾಷಿಕ ಮೂಲ ನಿವಾಸಿಗಳನ್ನು ಒಟ್ಟಿಗೆ ಕೊಂಡೊಯ್ಯಬೇಕು. ಸಮಾನ ಮನಸ್ಕ ಕೊಡವ ಸಮುದಾಯ ಹಾಗೂ ಭಾಷಿಕ ಜನಾಂಗದ ಪ್ರಮುಖರು ಒಟ್ಟಾಗಿ ಸೇರಿ ಒಮ್ಮತದ ತೀರ್ಮಾನಕ್ಕೆ ಬರಲಾಗಿದೆ. ಮುಂದಿನ ದಿನಗಳಲ್ಲಿ ಕೊಡವ ಹಾಗೂ ಇತರ ಕೊಡವ ಭಾಷಿಕ ಜನಾಂಗಗಳು ಒಗ್ಗೂಡಲಿವೆ. ಪಾದಯಾತ್ರೆಯಲ್ಲಿ ಎಲ್ಲಾ ಕೊಡವ ಭಾಷಿಕ ಜನಾಂಗಗಳು ಪಾಲ್ಗೊಳ್ಳುವ ಮೂಲಕ ಒಗ್ಗಟ್ಟು ಪ್ರದರ್ಶಿಸಲಿವೆ ಎಂದರು.

ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಮಾತನಾಡಿ, ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಪಾದಯಾತ್ರೆಯಲ್ಲಿ ಭಾಗವಹಿಸಲಾಗುವುದು. ಪಾದಯಾತ್ರೆಗೆ ಕೊಡವ ಭಾಷೆ, ಸಂಸ್ಕೃತಿ ಮೇಲೆ ಅಭಿಮಾನವಿರುವ ಪ್ರತಿಯೊಬ್ಬರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಅಖಿಲ ಕೊಡವ ಸಮಾಜದ ಕಾರ್ಯದರ್ಶಿ ಕೀತಿಯಂಡ ವಿಜಯ ಕುಮಾರ್, ಕೊಡವ ಭಾಷಿಕ ಸಮುದಾಯಗಳ ಕೂಟದ ಕಾರ್ಯದರ್ಶಿ ಕೂಡಂಡ ಸಾಬ ಸುಬ್ರಮಣಿ, ಖಜಾಂಚಿ ಪಡಿಞರಂಡ ಪ್ರಭುಕುಮಾರ್, ವಿರಾಜಪೇಟೆ ಕೊಡವ ಸಮಾಜದ ಗೌರವ ಕಾರ್ಯದರ್ಶಿ ಮಾಳೇಟೀರ ಶ್ರೀನಿವಾಸ್, ಅಖಿಲ ಕೊಡವ ಸಮಾಜ ಯೂತ್‌ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ, ಸಂಘಟನಾ ಕಾರ್ಯದರ್ಶಿ ಹಾಗೂ ಕೊಡವ ರೈಡರ್ಸ್ ಕ್ಲಬ್ ಅಧ್ಯಕ್ಷ ಅಜ್ಜಿಕುಟ್ಟಿರ ಪೃಥ್ವಿ ಸುಬ್ಬಯ್ಯ, ಗೌರವ ಸಲಹೆಗಾರ ಮುಲ್ಲೇಂಗಡ ಮಧೋಶ್ ಪೂವಯ್ಯ, ಕನೆಕ್ಟಿಂಗ್ ಕೊಡವಾಸ್ ಸಂಘಟನೆ ಪ್ರಮುಖರಾದ ಪಾಲೆಂಗಡ ಅಮಿತ್ ಭೀಮಯ್ಯ, ಚೋಕಂಡ ಸೂರಜ್ ಸೋಮಯ್ಯ ಮತ್ತಿತರರು ಉಪಸ್ಥಿತರಿದ್ದರು.

ಕಾಡಂಚಿನ 35 ಕಿಮೀ ರೈಲ್ವೆ ಕಂಬಿ ಅಳವಡಿಕೆಗೆ ಕ್ರಮ



ಗುಂಡ್ಲುಪೇಟೆ ಗುರುಭವನದಲ್ಲಿ ಆಯೋಜಿಸಿದ್ದ ರೈತ ದಿನಾಚರಣೆ ಕಾರ್ಯಕ್ರಮವನ್ನು ಕಣಕ್ಕೆ ಪೂಜೆ ಸಲ್ಲಿಸಿ ಶಾಸಕ ಗಣೇಶ್ ಪ್ರಸಾದ್ ಉದ್ಘಾಟಿಸಿದರು.

ಗುಂಡ್ಲುಪೇಟೆ, ಜ.29–ವನ್ಯಜೀವಿಗಳಿಂದ ರೈತರ ಬೆಳೆ ರಕ್ಷಿಸಲು ಕಾಡಂಚಿನಲ್ಲಿ ಹೊಸದಾಗಿ 35 ಕಿ.ಮೀ. ರೈಲ್ವೆ ಕಂಬಿ ಅಳವಡಿಸಲು ಶೀಘ್ರ ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಹೇಳಿದರು.

ಪಟ್ಟಣದ ಗುರುಭವನದಲ್ಲಿ ಕೃಷಿ ಇಲಾಖೆ ಹಾಗೂ ಕೃಷಿಕ ಸಮಾಜದ ವತಿಯಿಂದ ಆಯೋಜಿಸಿದ್ದ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಓಂಕಾರ್ ಮತ್ತು ಹಂಚೀಪುರ ಕಾಡಂಚಿನ ಭಾಗದಲ್ಲಿ ರೈಲ್ವೆ ಕಂಬಿ ಅಳವಡಿಕೆಗೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ. ಇದಕ್ಕೆ ಅವರು ಒಪ್ಪಿಗೆ ನೀಡಿದ್ದಾರೆ ಎಂದರು.

ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಸಾಕಷ್ಟು ಯೋಜನೆಗಳನ್ನು ಕೈಗೊಂಡಿದೆ. ಬೆಲೆ ಕುಸಿತದಿಂದ ತೊಂದರೆಗೊಳಗಾಗುವ ರೈತರಿಗೆ ಬೆಂಬಲ ಬೆಲೆ ನೀಡುವ ಮೂಲಕ ನೆರವಾಗುತ್ತಿದೆ. ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ, ಟಿಸಿ ಅಳವಡಿಸಲಾಗುವುದು ಎಂದು ಹೇಳಿದರು.

ಇದಕ್ಕೂ ಮೊದಲು ಪ್ರವಾಸಿ ಮಂದಿರದಿಂದ ಜನಪದ ಕಲಾ ತಂಡಗಳು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಗುರುಭವನಕ್ಕೆ ಆಗಮಿಸಿದವು. ಕೃಷಿ, ತೋಟಗಾರಿಕೆ ಹಾಗೂ ಮೀನುಗಾರಿಕೆ ಇಲಾಖೆಗಳು ಆಯೋಜಿಸಿದ್ದ ವಸ್ತು ಪ್ರದರ್ಶನ ಮಳಿಗೆಗಳನ್ನು ಉದ್ಘಾಟಿಸಲಾಯಿತು. ಇದೇ ಸಂದರ್ಭದಲ್ಲಿ ಸಾಧನೆ ಮಾಡಿದ ರೈತರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಡಿ.ಎಸ್.ಸಿದ್ದಪ್ಪ, ನಿರ್ದೇಶಕರಾದ ಚನ್ನಬಸಪ್ಪ, ಕೆ.ಎಲ್.ಮಹದೇವಸ್ವಾಮಿ, ಕುಂದಕೆರೆ ಸಂಪತ್ತು, ಎಪಿಎಂಸಿ ಅಧ್ಯಕ್ಷ ಬಸವರಾಜಪ್ಪ, ರೈತ ಮುಖಂಡರಾದ ಷಣ್ಮುಖಸ್ವಾಮಿ, ಮಹದೇವಪ್ಪ, ಮಹೇಶ್, ತಾಪಂ ಮಾಜಿ ಅಧ್ಯಕ್ಷ ಹೆಚ್.ಎನ್. ಬಸವರಾಜು ಹಲವರು ಇದ್ದರು.

ಚನ್ನಬಸವೇಶ್ವರ ಶಾಲಾ ವಾರ್ಷಿಕೋತ್ಸವ...



ಚಾಮರಾಜನಗರ ತಾಲೂಕಿನ ಹರವೆ ಗ್ರಾಮದ ಚನ್ನಬಸವೇಶ್ವರ ಪ್ರತಿಷ್ಠಾನ ಹಾಗೂ ವಿರಕ್ತಮಠದ ವತಿಯಿಂದ ನಡೆದ ಚನ್ನಬಸವೇಶ್ವರ ಶಾಲಾ ವಾರ್ಷಿಕೋತ್ಸವವನ್ನು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ.ನಿರಂಜನಮೂರ್ತಿ ಉದ್ಘಾಟಿಸಿದರು. ಡಿಡಿಪಿಐ ರಾಮಚಂದ್ರರಾಜೇ ಅರಸ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಎಂ.ಶಿವಮೂರ್ತಿ, ಚಾಮುಲ್ ನಿರ್ದೇಶಕ ಎಂ.ನಂಜುಂಡಸ್ವಾಮಿ, ಹೆಚ್.ಎಸ್.ಬಸವರಾಜು, ಸದಾಶಿವಮೂರ್ತಿ, ವಕೀಲರಾದ ಹೆಚ್.ಪಿ.ಮಹದೇವಪ್ಪ, ಬಿ.ಪ್ರಭುಸ್ವಾಮಿ, ತಾಪಂ ಮಾಜಿ ಸದಸ್ಯ ಬಿ.ಉದಯಕುಮಾರ್, ಬಿಇಓ ಹನುಮಶೆಟ್ಟಿ ಇದ್ದರು.

ಇಂದಿನಿಂದ ಜಿಲ್ಲಾದ್ಯಂತ ಕುಷ್ಠ ರೋಗ ಅರಿವು

● ಫೆ.13ರವರೆಗೆ ಜಾಗೃತಿ ಮೂಡಿಸಿ ● ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚನೆ

ಚಾಮರಾಜನಗರ, ಜ.29– ಸ್ಪರ್ಶ್ ಕುಷ್ಠ ರೋಗ ಅರಿವು ಆಂದೋಲನವನ್ನು ಜ.30ರಿಂದ ಫೆ.13ರವರೆಗೆ ಜಿಲ್ಲಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಈ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ರಾಷ್ಟ್ರೀಯ ಕುಷ್ಠ ರೋಗ ನಿರ್ಮೂಲನಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಕುಷ್ಠ ರೋಗ ಮುಕ್ತ ಭಾರತ ರಾಷ್ಟ್ರಪಿತ ಮಹಾತ್ಮ ಗಾಂಧೀಜೀಯವರ ಕನಸಾಗಿತ್ತು. ಗಾಂಧೀಜಿ ಹುತಾತ್ಮರಾದ ದಿನವಾದ ಜ.30ರಿಂದ 15 ದಿನಗಳ ಕಾಲ ಕುಷ್ಠ ರೋಗ ಅರಿವು ಆಂದೋಲನ ಏರ್ಪಡಿಸಲಾಗಿದೆ. ಕುಷ್ಠ ರೋಗ ಲಿಪ್ರೆ ಬ್ಯಾಕ್ಟೀರಿಯಾದಿಂದ ಬರುವ ಕಾಯಿಲೆಯಾಗಿದ್ದು, ಪ್ರಾಥಮಿಕ ಹಂತದಲ್ಲಿ ಗುಣಲಕ್ಷಣಗಳನ್ನು ಪತ್ತೆಹಚ್ಚಿ ಶೀಘ್ರ ಚಿಕಿತ್ಸೆ ನೀಡಿದರೆ ಗುಣಪಡಿಸಬಹುದು. ಕಾಯಿಲೆ ನಿರ್ಮೂಲನೆಗಾಗಿ ಎಲ್ಲರೂ ಒಂದು ತಂಡವಾಗಿ ಕೆಲಸ ಮಾಡಬೇಕಿದೆ ಎಂದರು.

ಕುಷ್ಠ ರೋಗದ ನಿರ್ಮೂಲನೆ ಕುರಿತು ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಧ್ಯಕ್ಷರು, ಸದಸ್ಯರು ಹಾಗೂ ಸಂಬಂಧಪಟ್ಟ ಅಧಿಕಾರಿಗಳನ್ನೊಳಗೊಂಡ ತಂಡ ಐಇಸಿ ಚಟುವಟಿಕೆಗಳಡಿ ವ್ಯಾಪಕವಾಗಿ ಜನಜಾಗೃತಿ ಮೂಡಿಸಿ ಕುಷ್ಠ ರೋಗದ ಬಗ್ಗೆ ಜನರಲ್ಲಿರುವ ಕೀಳರಿಮೆಯನ್ನು ಹೋಗಲಾಡಿಸಬೇಕು. ಚಿಕಿತ್ಸೆ ಪಡೆದುಕೊಳ್ಳುವಂತೆ ಜನರ ಮನವೊಲಿಸಬೇಕು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕಾರ್ಯೋನ್ಮುಖರಾಗಬೇಕು ಎಂದು ಸೂಚಿಸಿದರು.



ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಶಿಲ್ಪನಾಗ್ ಕುಷ್ಠ ರೋಗ ಅರಿವು ಭಿತ್ತಿಪತ್ರ ಬಿಡುಗಡೆಗೊಳಿಸಿದರು.

ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಬೆಳಗಿನ ಪ್ರಾರ್ಥನಾ ವೇಳೆ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ಕುಷ್ಠ ರೋಗ ನಿಯಂತ್ರಣ ಬಗ್ಗೆ ಅರಿವು ನೀಡಬೇಕು. ಗ್ರಾಮಗಳಲ್ಲಿನ ಆಶಾ ಹಾಗೂ ಅಂಗನವಾಡಿ, ಆರೋಗ್ಯ ಕಾರ್ಯಕರ್ತರು, ಸ್ತ್ರೀ ಶಕ್ತಿ, ಸ್ವಸಹಾಯ ಗುಂಪುಗಳೊಂದಿಗೆ ಸಮನ್ವಯ ಸಾಧಿಸಿ ಅರಿವು ಮೂಡಿಸಬೇಕು. ಆ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಕುಷ್ಠ ರೋಗದ ಗುಣಲಕ್ಷಣ ಹಾಗೂ ಅದರ ನಿಯಂತ್ರಣ ವಿಧಾನಗಳ ಕುರಿತು ಸಂಪೂರ್ಣ ತಿಳುವಳಿಕೆ ನೀಡಬೇಕು ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿ ಕುಷ್ಠ ರೋಗ ನಿರ್ಮೂಲನೆ ಪ್ರತಿಜ್ಞಾವಿಧಿ ಬೋಧಿಸಿ, ಬಳಿಕ ಸ್ಪರ್ಶ್ ಕುಷ್ಠ ರೋಗ ಅರಿವು ಆಂದೋಲನ ಭಿತ್ತಿಪತ್ರ ಬಿಡುಗಡೆ ಮಾಡಿದರು. ನಂತರ ಕುಷ್ಠ ರೋಗಕ್ಕೆ ಚಿಕಿತ್ಸೆ ಪಡೆದು ಗುಣಮುಖರಾಗಿರುವವರನ್ನು ಮಾತನಾಡಿಸಿದ ಡಿಸಿ, ಕಾಯಿಲೆ ವಾಸಿಯಾಗಿದೆಯೇ, ಚಿಕಿತ್ಸೆ ಪಡೆಯುತ್ತಿದ್ದೀರಾ, ಹೆಚ್ಚಿನ ಚಿಕಿತ್ಸೆ ಅಗತ್ಯವಿದೆಯೇ ಎಂಬುದಾಗಿ ವಿಚಾರಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಂತೆ ಸಲಹೆ ನೀಡಿ, ಧೈರ್ಯ ತುಂಬಿದರು. ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕಿ ಎಂ.ವಿ.ಸುಧಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಏಡ್ಸ್ ಪ್ರತಿಬಂಧಕ ಘಟಕದ ಅಧಿಕಾರಿ ಡಾ.ರವಿಕುಮಾರ್, ಕುಟುಂಬ ಕಲ್ಯಾಣಾಧಿಕಾರಿ ಡಾ.ಅಂಕಪ್ಪ, ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ಎಲ್ಲಾ ತಾಲೂಕು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

2024ರ ಏಪ್ರಿಲ್‌ನಿಂದ ಡಿಸೆಂಬರ್‌ವರೆಗೆ ಜಿಲ್ಲೆಯಲ್ಲಿ 38 ಪುರುಷರು ಹಾಗೂ 12 ಮಹಿಳೆಯರು ಸೇರಿದಂತೆ ಒಟ್ಟು 50 ಕುಷ್ಠ ರೋಗಿಗಳನ್ನು ಪತ್ತೆಹಚ್ಚಿ ಚಿಕಿತ್ಸೆ ನೀಡಲಾಗುತ್ತಿದೆ. ದೇಹದ ಯಾವುದೇ ಭಾಗದಲ್ಲಿ ತಿಳಿಬಿಳಿ ತಾಮ್ರ ವರ್ಣದ ಕೆಂಪು ಮಿಶ್ರಿತ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಕುಷ್ಠ ರೋಗದ ಲಕ್ಷಣ. ಅಂತಹವರು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ತಪಾಸಣೆಗೆ ಒಳಗಾಗಬೇಕು. ಅಗತ್ಯವಿದ್ದರೆ ಚಿಕಿತ್ಸೆ ಪಡೆಯಬೇಕು.

–ಡಾ.ಚಂದ್ರಶೇಖರ್, ಜಿಲ್ಲಾ ಕುಷ್ಠ ರೋಗ ನಿರ್ಮೂಲನಾಧಿಕಾರಿ


ಅಂಬೇಡ್ಕರ್ ಪ್ರತಿಮೆ ವಿರೂಪ ಖಂಡಿಸಿ ಪ್ರತಿಭಟನೆ

ಚಾಮರಾಜನಗರ, ಜ.29– ಪಂಜಾಬ್‌ನ ಅಮೃತಸರದಲ್ಲಿ ಅಂಬೇಡ್ಕರ್ ಪ್ರತಿಮೆ ವಿರೂಪಗೊಳಿಸಿರುವುದನ್ನು ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಯಿತು.

ಜಿಲ್ಲಾಡಳಿತ ಭವನ ಮುಂಭಾಗದ ಅಂಬೇಡ್ಕರ್ ಪ್ರತಿಮೆ ಬಳಿ ದಲಿತ ಮಹಾಸಭಾ ರಾಜ್ಯ ಉಪಾಧ್ಯಕ್ಷ ವೆಂಕಟರಮಣಸ್ವಾಮಿ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಕೆಲಕಾಲ ಪ್ರತಿಭಟನೆ ನಡೆಸಿದರು.

ವೆಂಕಟರಮಣಸ್ವಾಮಿ ಮಾತನಾಡಿ, ಅಮೃತಸರದಲ್ಲಿ ಕಿಡಿಗೇಡಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಯನ್ನು ಸುತ್ತಿಗೆಯಿಂದ ಒಡೆದು ವಿರೂಪಗೊಳಿಸಿದ್ದಾನೆ. ಅಂಬೇಡ್ಕರ್ ಅವರನ್ನು ಎಷ್ಟೇ ವಿರೋಧ ಮಾಡಿದರು, ಅವರ ಪ್ರತಿಮೆಗಳನ್ನು ವಿರೂಪಗೊಳಿಸಿದರು ಅಂಬೇಡ್ಕರ್ ಅಭಿಮಾನಿಗಳು ಅವರನ್ನು ಹೆಚ್ಚು ಅಪ್ಪಿಕೊಳ್ಳುವ ಕೆಲಸ ಮಾಡುತ್ತೇವೆ ಎಂದರು.

ಪ್ರತಿಮೆ ವಿರೂಪಗೊಳಿಸಿರುವ ಕಿಡಿಗೇಡಿ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ, ಶಾಶ್ವತವಾಗಿ ಜೈಲಿನಲ್ಲೇ ಇರುವಂತೆ ಮಾಡಬೇಕು. ಅಂಬೇಡ್ಕರ್ ಅವರಿಗೆ ಯಾರೇ ಅವಮಾನ ಮಾಡಿದರು ಸಹಿಸಿಕೊಳ್ಳುವುದಿಲ್ಲ. ಪ್ರಾಣ ಹೋದರು ಅಂಬೇಡ್ಕರ್ ಸಿದ್ಧಾಂತ ಉಳಿಸಿಕೊಳ್ಳಲಾಗುವುದು. ಸಂವಿಧಾನ ವಿರೋಧಿಗಳಿಗೆ ಮುಂದಿನ ದಿನಗಳಲ್ಲಿ ತಕ್ಕಪಾಠ ಕಲಿಸಲಾಗುವುದು ಎಂದು ಎಚ್ಚರಿಸಿದರು. ಪ್ರತಿಭಟನೆಯಲ್ಲಿ ಮುಖಂಡರಾದ ಸಿ.ಎಂ.ಶಿವಣ್ಣ, ಕಂದಹಳ್ಳಿ ನಾರಾಯಣ, ಆಟೋ ಉಮೇಶ್, ಬಸವರಾಜು, ಮಾದಾಪುರ ಸಿದ್ದರಾಜು, ಗಾಯಕ ಶಿವಣ್ಣ ಇತರರು ಭಾಗವಹಿಸಿದ್ದರು.



ಅಂಬೇಡ್ಕರ್ ಪ್ರತಿಮೆ ವಿರೂಪ ಖಂಡಿಸಿ ದಲಿತ ಸಂಘಟನೆಗಳ ಒಕ್ಕೂಟದಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.

ಒಳಮೀಸಲಾತಿ ಜಾರಿಗೆ ಒತ್ತಾಯಿಸಿ ಮನವಿ ಸಲ್ಲಿಕೆ



ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಮಾದಿಗ ಸಮುದಾಯದಿಂದ ಡಿಸಿ ಶಿಲ್ಪನಾಗ್‌ಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರ: ಸುಪ್ರೀಂಕೋರ್ಟ್ ಆದೇಶದಂತೆ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಮಾದಿಗ ಸಮುದಾಯಗಳ ಸ್ವಾಭಿಮಾನ ಒಕ್ಕೂಟ ಹಾಗೂ ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ನ್ಯಾಯಾಲಯ ಆದೇಶದಂತೆ ಸೂಕ್ತ ದತ್ತಾಂಶ ಪರಿಗಣಿಸಿ, ವಿಳಂಬ ನೀತಿ ಅನುಸರಿಸದೆ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿಗೊಳಿಸಬೇಕು. ನ್ಯಾ.ನಾಗಮೋಹನ್‌ದಾಸ್ ಸಮಿತಿಗೆ ಹಿಂದೆ 7 ವರ್ಷ ಅಧ್ಯಯನ ನಡೆಸಿದ ನ್ಯಾಯಮೂರ್ತಿಗಳಾದ ಎ.ಜೆ.ಸದಾಶಿವ ಆಯೋಗದ ದತ್ತಾಂಶಗಳನ್ನು ಬಳಸಿಕೊಂಡು ವರದಿ ತಯಾರಿಸಲು ಸರ್ಕಾರ ಆದೇಶ ನೀಡಬೇಕು ಎಂದು ಆಗ್ರಹಿಸಿದರು.

ಸಚಿವ ಸಂಪುಟ ನಿರ್ಣಯಿಸಿದಂತೆ ಒಳಮೀಸಲಾತಿ ಜಾರಿಯಾಗುವವರೆಗೂ ಸುಮಾರು 37 ಸಾವಿರ ಸರ್ಕಾರಿ ಉದ್ಯೋಗಗಳ ಹುದ್ದೆಗಳ ನೇಮಕಾತಿ ತಡೆಹಿಡಿಯಬೇಕು. ನಿಜವಾದ 49 ಅಲೆಮಾರಿಗಳನ್ನು ಪ್ರತ್ಯೇಕವಾಗಿ ಗುರ್ತಿಸಿ ಶೇ.1ಕ್ಕಿಂತ ಹೆಚ್ಚು ಒಳಮೀಸಲಾತಿ ನೀಡಿ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ಬಜೆಟ್‌ನಲ್ಲಿ ಮತ್ತು ಎಸ್‌ಸಿಎಸ್‌ಪಿ, ಟಿಎಸ್‌ಪಿ ಅನುದಾನದಲ್ಲಿ ಮಾದಿಗ, ಸಮಗಾರ, ಡೋಹರ, ಮಚಗಾರ ಜನಾಂಗಗಳ ಅಧಾರದ ಮೇಲೆ ಪ್ರತ್ಯೇಕ ಅನುದಾನ ಮೀಸಲಿಟ್ಟು ಅದೇ ವರ್ಷ ವೆಚ್ಚ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಪಕ್ಷ ಜಿಲ್ಲಾಧ್ಯಕ್ಷ ರಾಜೇಂದ್ರ ಸಿದ್ಧಾರ್ಥ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಸೀಗನಾಯಕ, ಹೆಚ್.ಹನುಮಂತು, ರಾಜ್ಯ ಕಾರ್ಯದರ್ಶಿ ಶಾಗ್ಯ ಮಹೇಶ್, ಜಿಲ್ಲಾ ಸಂಯೋಜಕ ದೊಡ್ಡಿಂದುವಾಡಿ ಸಿದ್ದರಾಜು, ಉಪಾಧ್ಯಕ್ಷರಾದ ಸಿದ್ದಯ್ಯನಪುರ ಮಂಜು, ಸುಂದರ್, ಕಾರ್ಯದರ್ಶಿ ಮಾದೇಶ್ ಕೋಡಿಪುರ ಇತರರು ಹಾಜರಿದ್ದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಮನೆ ಭೋಗ್ಯಕ್ಕಿದೆ
ಸುಭಾಷ್‌ನಗರ (ಎನ್.ಆರ್.ಮೊಹಲ್ಲಾ ಹತ್ತಿರ) 3 ಬೆಡ್ ರೂಂ, ಎಲ್ಲಾ ರೀತಿಯ ಸೌಕರ್ಯವಿರುವ ಮನೆ ಮೈಸೂರಿನಲ್ಲಿ ಸಂಪರ್ಕಿಸಿ:
7348831599

SITE FOR SALE
40X60 SITE ROOPA NAGAR
9740088990

ಬೈಠಕ್ ಕೆಫೆ
ಕುವೆಂಪುನಗರ
ಪಿಜ್ಜಾ, ಬರ್ಗರ್ ತಯಾರಿಸಲು ಕೆಲಸಗಾರರು ಬೇಕಾಗಿದ್ದಾರೆ. ತರಬೇತಿ ನೀಡಲಾಗುವುದು. ಮಧ್ಯಾಹ್ನ 3 ರಿಂದ ರಾತ್ರಿ 9.30. ಆಕರ್ಷಕ ಸಂಬಳ
Mob: 9449343870

HOME APPLIANCES SERVICE
ಫ್ರಿಡ್ಜ್, ವಾಶಿಂಗ್ ಮಶೀನ್, ಮೈಕ್ರೋವೇವ್, ಎಲ್‌ಸಿಡಿ, ಸೋಲಾರ್, ಯುಪಿಎಸ್, ವಾಟರ್ ಪ್ಯೂರಿಫೈಯರ್, ಸೇಲ್ಸ್ ಅಂಡ್ ಸರ್ವೀಸ್, ನಿಮ್ಮ ಮನೆಯ ಹತ್ತಿರ ದೊರೆಯುತ್ತದೆ.
Contact: Srinivas
9379699229

SITE FOR SALE
@ RING ROAD
ಹೆಬ್ಬಾಳ್ ರಿಂಗ್ ರಸ್ತೆಯಲ್ಲಿ 60'×90' ಕಮರ್ಷಿಯಲ್ ಸೈಟ್.
Mob: 9886048471

ಶ್ರೀರಂಗಪಟ್ಟಣ ರೆಸಾರ್ಟ್ ಕೆಲಸಕ್ಕೆ ಬೇಕಾಗಿದ್ದಾರೆ
Front Office - 2
Stewards - 2
House Keeping - 2
Mob: 9845049899

SITE FOR SALE
ಇಲವಾಲದ ಔಟರ್ ರಿಂಗ್ ರೋಡ್ ಪಕ್ಕದ "LIC ಜೀವನ್ ಪ್ರಕಾಶ್" ಲೇಔಟ್ನಲ್ಲಿ 40'×60' ಕಾರ್ನರ್ ಸೈಟ್.
Mob: 9886048471

ವೆರಿಕೋಸ್‌ವೇನ್ಸ್ ತೊಂದರೆಯೇ? ಸೋರಿಯಾಸಿಸ್ ನಿಂದ ಬಳಲುತ್ತಿದ್ದೀರಾ?
ಯಾವುದೇ ಔಷಧಿ ಸೇವನೆ ಇಲ್ಲದೆ ನುರಿತ ತಜ್ಞರಿಂದ ಸಂಶೋದಿಸಿದ ಔಷಧಿ/ ಮುಲಾಮು/ ತೈಲವನ್ನು ಮೇಲೆ ಮಸಾಜ್ ಮಾಡುವ ಮೂಲಕ ಪರಿಣಾಮಕಾರಿ ಚಿಕಿತ್ಸೆಯನ್ನು ನೀಡಲಾಗುವುದು
ಡಾ॥ ಸಹನಾ.ವಿ
BAMS, PGDAN, PGDAC, Mysore
8861137033

SITE FOR SALE
40X60 SITE FOR SALE IN J P NAGAR
40X55 HOUSE FOR SALE NEAR CHRIST PUBLIC SCHOOL
9900154322

ಬೇಕಾಗಿದ್ದಾರೆ
5 ವರ್ಷ ಅನುಭವವುಳ್ಳ Security Field Officer ಬೇಕಾಗಿದ್ದಾರೆ ಹಾಗೂ ಅನುಭವವುಳ್ಳ ಸೆಕ್ಯೂರಿಟಿ ಗಾರ್ಡುಗಳು ಬೇಕಾಗಿದ್ದಾರೆ. ಮೇಟಗಳ್ಳಿ, ಕೆಆರ್.ಎಸ್., ವರುಣ, ಟೆರಿಷಿಯನ್ ಕಾಲೇಜು ಸುತ್ತಮುತ್ತ ಮತ್ತು ಹೆಬ್ಬಾಳು, ವಿಜಯನಗರ 2ನೇ ಹಂತ ಹಾಗೂ ಮೈಸೂರಿನ ಸುತ್ತ ಮುತ್ತ. ವಿದ್ಯಾರ್ಹತೆ: SSLC pass or fail.
9916772043 | 9538886328

SITES FOR SALE
30X40, 30X50, DTCP Approved Corner Sites for sale. 7 kms from Mysore Srirampur Ring Road Junction, Thalur Circle, Mysore. Rs.1750/-Sqft (Nego.) Ready for Registration
Ph: 9606443551 / 9606724499

ಸುವರ್ಣ ಯಾತ್ರಾ
8 ದಿನಗಳ ಕಾಮಾಕ್ಯ, ಗುವಹಾಟಿ, ಶಿಲ್ಲಾಂಗ್ ಪ್ರವಾಸ 11/2/25.
8 ದಿನಗಳ ಗುಜರಾತ್, ನಾಗೇಶ್ವರ, ಸೋಮನಾಥ, ವಡೋದರ ಪ್ರವಾಸ 12/2/25. 9 ದಿನಗಳ ನೇಪಾಳ ಕಟ್ಮಂಡು, ಪೋಕ್ರ, ಮುಕ್ತಿನಾಥ ಪ್ರವಾಸ 16/2/25.
7 ದಿನಗಳ ಕಾಶಿ, ಗಾಯ, ಅಯೋಧ್ಯಾ ಬಾಬಾ ಬೈದ್ಯನಾಥ ಪ್ರವಾಸ 4/3/25.
9019462508
6360146483

ಬಸವ ಮಾರ್ಗ ವ್ಯಸನ ಮುಕ್ತ ಕೇಂದ್ರ, ಮೈಸೂರು
21 ದಿನಗಳ ಕುಡಿತ ಬಿಡಿಸುವ ಮತ್ತು ಯೋಗ ಶಿಬಿರ
ಫೆ. 9 ರಿಂದ ಪ್ರಾರಂಭ
ಶುಲ್ಕ: 6 + 6 ಸಾವಿರ ರೂ.
9742010101, 9742919191, 8803344999

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಸಂಸ್ಥೆಗೆ ಹೌಸ್‌ಕೀಪಿಂಗ್ ಕೆಲಸಕ್ಕೆ ಪುರುಷ ಅಭ್ಯರ್ಥಿ ಬೇಕಾಗಿದ್ದಾರೆ.
ಸಂಪರ್ಕಿಸಿರಿ:
96067 21223
80505 22890

ತೋಟ ಮಾರಾಟಕ್ಕಿದೆ
1.22 ಗುಂಟೆ ನಂಜನಗೂಡು (ತಾ) ಹುಲ್ಲಹಳ್ಳಿ (ಹೋ) ಶೆಟ್ಟಿಹಳ್ಳಿ (ಗ್ರಾಮ)
8197888028
9663336283

ಅಟ್ಯಾಚ್‌ಮೆಂಟ್‌ಗೆ ವಾಹನ ಲಭ್ಯವಿದೆ
ಡಿಸೈರ್ VXI (5 ಸೀಟ್) ಕಾರು (ಹೊಸದು) ಕಛೇರಿ/ಸಂಸ್ಥೆ/ಖಾಸಗಿಗಾಗಿ ಕರೆ ಮಾಡಿ. ತ್ಯಾಗರಾಜು:
8861712415

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9606838940

ಬೇಕಾಗಿದ್ದಾರೆ ಸೆಕ್ರೆಟರಿ
ಪದವೀಧರ ಉತ್ತಮ ಪರಿಜ್ಞಾನ ವಿರುವ ಪುರುಷ ಪ್ರತಿಷ್ಠಿತ ಸಂಸ್ಥೆಯ ಮಾಲೀಕರೊಂದಿಗೆ ಚಿಕ್ಕ ಮಂಗಳೂರು ಮತ್ತು ಶೃಂಗೇರಿಯ ವ್ಯವಹಾರ ನೋಡಿಕೊಳ್ಳಲು ಅನುಭವವಿರುವ ಕನ್ನಡ ಇಂಗ್ಲಿಷ್ ಟೈಪಿಂಗ್ ಗೊತ್ತಿರುವವರು. ಊಟ ವಸತಿ ಉಚಿತ. ಸಂಪರ್ಕಿಸಿ:
sssfkcci@jirsm.com
9379399998, 9343299998

We are hiring
Qualification: PUC or Degree
Male / Female
Salary: 15K
Mob: 8296982119

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ. ಸ್ಥಳ: ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ
Mob: 6364748485

ದೋಸೆ ಕುಕ್ ಮತ್ತು ಅಡುಗೆ ಭಟ್ಟರು ಬೇಕಾಗಿದ್ದಾರೆ
ಸಂಬಳ 18,000.
ಹೋಟೆಲ್ ಈಜಿ ತಿಂಡಿ, ಅಭಿಷೇಕ್ ಸರ್ಕಲ್, ಹೆಬ್ಬಾಳ, ಮೈಸೂರು
Mob: 8147683310

WANTED
Sales Executive to work in Gas Agency near Sathagalli Ring Road Circle, Mysore two wheler must.
9742934598
9480966998

ಬೇಕಾಗಿದ್ದಾರೆ
ಮೈಸೂರು, ಹೆಬ್ಬಾಳಿನ ಕೈಗಾರಿಕಾ ಪ್ರದೇಶಗಳಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡುಗಳು, ಟೈಲರುಗಳು ಹೆಲ್ಪರುಗಳು ಬೇಕಾಗಿದ್ದಾರೆ.
8105249880
7795285485

ಮೈತ್ರಿ ಟೂರ್ಸ್ & ಟ್ರಾವೆಲ್ಸ್
ಹಿರಿಯ ನಾಗರೀಕರ ವಿಶೇಷ ವಿಮಾನ ಪ್ರವಾಸಗಳು.
21–02–2025 ಪುರಿ–ಕೋನಾರ್ಕ್–ಭುವನೇಶ್ವರ ಪ್ರವಾಸ 3 ದಿನಗಳು.
28–02–2025 ಶಿರಡಿ ಮತ್ತು 3 ಜ್ಯೋತಿರ್ಲಿಂಗ ಪ್ರವಾಸ 3 ದಿನಗಳು.
13–03–2025 ಕಾಶಿ–ಪ್ರಯಾಗ್ ರಾಜ್, ಅಯೋಧ್ಯ ಪ್ರವಾಸ 4 ದಿನಗಳು.
Mob: 6360422209

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ / ಯುವತಿಯರು ಬಂದೇ ಬೇಕಾಗಿದ್ದಾರೆ. ESI / PF ನೊಂದಿಗೆ ಊಟ, ವಸತಿಯಿರುತ್ತದೆ. ಸಂಬಳ - ರೂ. 15200 - 86,000
7337645977, 7892046990

ನೇರ ನೇಮಕಾತಿ
ಯುವತಿಯರು Age (18 - 24) 10th, PUC ಯಾದ Management Trainee ಗಳಾಗಿ Earn (10,500 to 18,500) PM. ಪರಸ್ಥಳದವರಿಗೆ ಮಾತ್ರ ವಸತಿ, ಯಾವುದೇ ಶುಲ್ಕರಹಿತ. ಖುದ್ದಾಗಿ ಸಂಪರ್ಕಿಸಿ. Time (11 am to 3 pm).
Kavya, 9342827788

HOUSE FOR SALE
40x60 ground & first at Ramakrishna Nagar & Banker's Layout, Bogadi. 40x60 site at Kuvempunagar and Saraswathipuram & Dattagalli.
Call: 7353430309

ನಿಮ್ಮ ಮನೆಯಲ್ಲಿ ನಲ್ಲಿ ಮತ್ತು ಸ್ಯಾನಿಟರಿ ಕೆಲಸ, ಟೈಲ್ಸ್ ಕೆಲಸ, ತಾರಸಿ ಸೋರಿಕೆ, ಬಣ್ಣದ ಕೆಲಸ, ಎಲೆಕ್ಟ್ರಿಕಲ್ ಕೆಲಸ, ಇಂಟೀರಿಯರ್ ಕೆಲಸ, ಹಾಗೂ ಸಿವಿಲ್ ಅಲ್ಟ್ರೇಷನ್ ಕೆಲಸದ ತೊಂದರೆ ಇದ್ದರೆ... ಕರೆ ಮಾಡಿ:
VASANTHA BUILDERS
8151035074, 9035012579

ಮಹಿಳಾ ಆಯಾ ಬೇಕಾಗಿದ್ದಾರೆ
ಸಂಪರ್ಕಿಸುವ ವಿಳಾಸ:
St. Marina's High School Rajendra Nagara, Main Road, Rajendra Nagar N.R.Mohalla, Mysore-07
9880057609

ತಕ್ಷಣ ಬೇಕಾಗಿದ್ದಾರೆ
ನಂಜನಗೂಡಿನ ಕಡಕೊಳ ಏರಿಯಾದಲ್ಲಿ TVS Factory ಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC & ಮೇಲ್ಪಟ್ಟು
ವಯೋಮಿತಿ: 45 ವರ್ಷದೊಳಗೆ
ಸಂಬಳ: 17500/–8 hours+ 26Days
ESI, PF ಮತ್ತು ಊಟ ತಿಂಡಿ ವಸತಿ ಸೌಲಭ್ಯವಿರುತ್ತದೆ.
9620777819
9620667819

PRAKRUTHI PROPERTIES
SITES FOR SALE
30x40 @ 20 lakhs Near RT Nagar including Registration
20x30 New Duplex House, As Per your Plan With Interiors @ Just 55 Lakh in Bogadi Including Registration
Limited Sites Only
Upto 75% Bank Loan Available
95386 90359, 90359 90359

ಬೇಕಾಗಿದ್ದಾರೆ
ಮೆಡಿಕಲ್ ಸ್ಟೋರ್‌ನಲ್ಲಿ ಅನುಭವವುಳ್ಳ, D.Pharma ಮಾಡಿರುವ ಹಾಗೂ ಕಂಪ್ಯೂಟರ್ ಜ್ಞಾನವುಳ್ಳ, ಹುಡುಗ/ಹುಡುಗಿಯರು /ಮಹಿಳೆಯರು ಬೇಕಾಗಿದ್ದಾರೆ.
9901080314

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

FOR RENT
2 BHK Flat is Available For Rent @ Ballal Circle
Ph: 99807 70352

ಡ್ರೈವರ್ ಬೇಕಾಗಿದ್ದಾರೆ
ಕನಿಷ್ಠ 5 ವರ್ಷ ಚಾಲನಾ ಅನುಭವವುಳ್ಳ ನುರಿತ ಡ್ರೈವರ್ ಬೇಕಾಗಿದ್ದಾರೆ (ಫಾರ್ಚುನರ್)
ಸಂಪರ್ಕಿಸಿ: **93421 88516**

ಮನೆ ಮಾರಾಟಕ್ಕಿದೆ
13x30 EWS GF & 1st Floor
ಉತ್ತರ ಮುಖದ ಮನೆ ಗಂಗೋತ್ರಿ ಬಡಾವಣೆ 9ನೇ ಕ್ರಾಸ್, ಬೆಲೆ: 30 ಲಕ್ಷ, ಆಸಕ್ತಿಯುಳ್ಳವರು ಮಾತ್ರ ಕರೆಮಾಡಿ.
8088584803

SITE FOR SALE
30X40 Srirampura Ring Road, Mysore
8050345574

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಕೇರಳ ಶ್ರೀ ಆದಿಶಕ್ತಿ ಜ್ಯೋತಿಷ್ಯರು
Famous Astrologer
ಪಂ. ಶಿವಪ್ರಸಾದ್ ತಂತ್ರಿ
Mob: 9686525894
ಪ್ರೀತಿಯಲ್ಲಿ ನಂಬಿ ಮೋಸ, ಹಣಕಾಸಿ, ಶತ್ರು ಕಾಟ, ಸ್ತ್ರೀಪುರುಷ ಪ್ರೇಮ ಗುಪ್ತ ಸಮಸ್ಯೆ ಗಂಡ–ಹೆಂಡತಿ ಕಿರಿಕಿರಿ ಸಾಲಬಾಧೆ. ಅನಾರೋಗ್ಯ ಮದುವೆ, ಸಂತಾನ, ವ್ಯಾಪಾರ, ವಿಸೂ: ಅಘೋರಿ ಕೊಲ್ಕತ್ತಾ, ಕೇರಳ, ಕೊಳ್ಳೇಗಾಲ ಪೂಜಾ ಶಕ್ತಿಯಿಂದ ನಿಮ್ಮ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ. ನಿಮ್ಮ ಯಾವುದೇ ಗುಪ್ತ ಕಠಿಣ ಸಮಸ್ಯೆಗಳಿಗೆ 500 ವರ್ಷಗಳ ತಾಳೆಗರಿ ವಿದ್ಯೆಯಿಂದ 100% ಪರಿಹಾರ. ಸೂಚನೆ ಸರಿಯಾದ ವಿಳಾಸ ತಿಳಿದುಕೊಂಡು ಬನ್ನಿ: 8712, ಬ್ಯಾಂಕ್ ಆಫ್ ಬರೋಡ, ಅಕ್ಷಯ ಭಂಡಾರ್ ಹತ್ತಿರ, ಪಂಚಮಂತ್ರ ರಸ್ತೆ, ಕುವೆಂಪುನಗರ, ಮೈಸೂರು.

FOR SALE
3400 Sq.ft Commercial Building on Madhavachar Road, AGRAHARA
Contact: 95914 08910

ಕೇವಲ 2000 ರೂಪಾಯಿಗೆ
ದಪ್ಪನೆಯ Double ಹಾಸಿಗೆ 2 ದಿಂಬು ಸಹ ಒಂದು ಬೆಡ್‌ಶೀಟ್ ಮತ್ತು 2 ದಿಂಬಿನ ಕವರ್ ಮತ್ತು ಒಂದು ಸೂಟ್‌ಕೇಸ್ ರಗ್ಗು ಸೇರಿ.
8884179981

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

MK-SERVICES.IN
ಕೆಲಸಕ್ಕೆ ಬೇಕಾಗಿದ್ದಾರೆ. ಆಫೀಸ್ ಕೆಲಸಕ್ಕೆ ಮಹಿಳೆಯರು ಹಾಗೂ ಪುರುಷರು ಬೇಕಾಗಿದ್ದಾರೆ. 18 ವರ್ಷ ಮೇಲ್ಪಟ್ಟವರು
8147784353

ತಕ್ಷಣ ಬೇಕಾಗಿದ್ದಾರೆ
ಕಡಕೊಳ TVS Factory ಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC
ಸಂಬಳ: 17000/–8 hours
ವಯೋಮಿತಿ: 45 ವರ್ಷದೊಳಗೆ
ESI, PF ಮತ್ತು ಊಟ ವಸತಿ ಸೌಲಭ್ಯವಿರುತ್ತದೆ.
9620777819
9620667819

PLOT FOR SALE
30x40 plot for sale in Hunsur Road, Doddakadanahalli. E-khatha.
Contact: SRILATHA
Mob: 9886293430

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666



ಸಂಪು ಮತ್ತು ಟ್ಯಾಂಕ್ ಸೋಲಾರ್ ಸರ್ವೀಸ್
8197383645, 9008711654

SITES FOR SALE
MUDA and RERA Approved 70% bank loan available.
20x30, 30x40 & CORNER SITES
Off Bogadi Road
Mob: 9620119858

ಕೆಲಸಕ್ಕೆ ಬೇಕಾಗಿದ್ದಾರೆ
ಸಾಯಿ ಗುರುಕುಲ ಪ್ರೀ ಸ್ಕೂಲ್
ಆಯಾ ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ. – 2 ಹುದ್ದೆ
ಸ್ಥಳ: ಜೆಪಿ ನಗರ, ಮೈಸೂರು
9686862606

ತಕ್ಷಣ ಬೇಕಾಗಿದ್ದಾರೆ
ಹೆಬ್ಬಾಳ ಮತ್ತು ಹೂಟಗಳ್ಳಿ, ಮೇಟಗಳ್ಳಿ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಸೂಪರ್ ವೈಸರ್ ಮತ್ತು ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC ಮತ್ತು ಮೇಲ್ಪಟ್ಟು
ಸಂಬಳ: ಸೂಪರ್‌ವೈಸರ್: 22000+W/o (8hrs)
ಗಾರ್ಡ್: 20000+W/o (8hrs)
ವಯೋಮಿತಿ : 47 ವರ್ಷದೊಳಗಿರಬೇಕು
ಊಟ ತಿಂಡಿ ಸೌಲಭ್ಯವಿರುತ್ತದೆ
9880727819,9620667819

ಶ್ರೀ ಸಂಜೀವಿನಿ ಗೋಲ್ಡ್ ಕಂಪನಿ
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನ ಬಿಡಿಸಿ ಇಂದಿನ ಆನ್‌ಲೈನ್ ಬೆಲೆಗೆ ಕೊಂಡು ಕೊಳ್ಳುತ್ತೇವೆ. ಉಳಿದ ಹಣವನ್ನು ತಕ್ಷಣ ನೀಡುತ್ತೇವೆ.
ಚಿನ್ನದ ದರ: Rs. 7,700 (24 CT)
Mob: 9108146123

HOUSE FOR RENT / LEASE
2 BHK house, fully furnished with car parking space in Belvadi TSK Layout.
For more details contact:
Mob: 9743437726

Old House for Sale
Gokulam 3rd Stage 47x60, #763, East face.
Price: Rs. 3.20 Cr.
Negotiable. Contact:
9019035059, 9901205488

HOUSE FOR LEASE
30x40 ground floor, 2 BHK house for lease & 15x35, 2nd floor 1 BHK for lease near People for Animal Ningarajakatte, Bogadi, Mysuru.
Mob: 9483931131

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕಿನಲ್ಲಿ ಡೇ / ನೈಟ್ ಶಿಫ್ಟ್‌ನಲ್ಲಿ ಗಾಳಿ ಹಾಕಲು ಬೇಕಾಗಿದ್ದಾರೆ.
ಸಂಬಳ: 10,000/–
Mob: 8892258814

ಕಛೇರಿ ಕೆಲಸಕ್ಕೆ ಬೇಕಾಗಿದ್ದಾರೆ
ವಯಸ್ಸು: 22 to 30
ವಿದ್ಯಾಭ್ಯಾಸ: ಯಾವುದೇ ಪದವಿ MBA/M.Com
ಸಂಬಳ: 15000 to 25000
ಸಂಬಳ: ನುರಿತ ಟೆಲಿಕಾಲರ್– 04 (Female)
Data Manager -02 (Male)
Office Incharge - 02
(Male and Female)
ಸ್ಥಳ: ಮೈಸೂರು
7411122619

ಸುವರ್ಣಾವಕಾಶ
PART / FULL TIME
EARN EXTRA INCOME
ನೌಕರರು, ನಿವೃತ್ತರು, ಗೃಹಿಣಿಯರು ಉದ್ಯಮಿಗಳು, ವಿದ್ಯಾರ್ಥಿಗಳು, ವೃತ್ತಿಪರರು
Nandini: 9743781857
Jyothi: 9743717263

WANTED
Part-time job in MADIKERI FOR 10 DAYS
31st Jan. to Feb. 10th
7892560082, 9986300002

ಬೇಕಾಗಿದ್ದಾರೆ
ಟೆಲಿಕಾಲಿಂಗ್ ಮಾಡಲು ಹುಡುಗಿಯರು ಬೇಕಾಗಿದ್ದಾರೆ (ಸಂಬಳ 10,000) Incentive). Field Executives ಬೇಕಾಗಿದ್ದಾರೆ (ಸಂಬಳ 15,000). ಮ್ಯಾನೇಜರ್ ಬೇಕಾಗಿದ್ದಾರೆ (ಸಂಬಳ 20,000). ಸ್ಥಳ: ಚಾಮುಂಡಿಪುರಂ ಮತ್ತು ಎನ್.ಆರ್. ಮೊಹಲ್ಲಾ
Mob: 8150005111

RIVER SIDE PLOTS FOR SALE
Premium location.
Limited plots available.
HURRY !!!
9483358399, 6381779015

SITE FOR SALE
40x40 CORNER Vishwamanava Enclave, Vijayangar 4th Stage.
Mob: 8050821108

ಸೈಟುಗಳು ಮಾರಾಟಕ್ಕಿದೆ
ಮೈಸೂರಿನಿಂದ 12 km. 300 ಸೈಟುಗಳು. EMI ಬ್ಯಾಂಕ್ ಲೋನ್ ಇನ್ಸ್ಟಾಲ್‌ಮೆಂಟ್‌ಗಳಲ್ಲಿ ಮಾರಾಟಕ್ಕಿದ್ದು, ಗೃಹ ನಿರ್ಮಾಣ ಸಹಕಾರ ಸಂಘದವರು, ನಿವೇಶನಗಳು ಬೇಕಾದವರು ಸಂಪರ್ಕಿಸಿ:
7899272101, 9449089231

ತಕ್ಷಣ ಬೇಕಾಗಿದ್ದಾರೆ
ಮೈಸೂರಿನ Infosys/Schneder ಕಂಪನಿಯಲ್ಲಿ Security Gaurd ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ.
ವಯಸ್ಸು 19 ರಿಂದ 50
ವಿದ್ಯಾಭ್ಯಾಸ: SSLC PUC Any Degree Pass or Fail 8HRS/26 Days- 18250/- Gross Salary
9880116412
9741300222

SECURITY MALE GAURD ಬೇಕಾಗಿದ್ದಾರೆ
ವಿದ್ಯಾಭ್ಯಾಸ : SSLC ಮೇಲ್ಪಟ್ಟು
ವಯಸ್ಸು: 23 ರಿಂದ 50ರ ಒಳಗಿರಬೇಕು
ಸಂಬಳ: 19000/– ರೂ.
ಸೌಲಭ್ಯ : ESI/EPF/Bonus/ Gratuity / Free Uniform & Insururance / EL
9538014456
9008794218

ಜಮೀನು ಮಾರಾಟಕ್ಕಿದೆ
6 ಎಕರೆ ನೀರಾವರಿ ಜಮೀನು ಮಾರಾಟಕ್ಕಿದೆ ಬರಗಿ ಗ್ರಾಮ ಗುಂಡ್ಲುಪೇಟೆ ತಾಲ್ಲೂಕು, ಚಾ.ನಗರ ಜಿಲ್ಲೆ. (ಸೋಲಾರ್ ಬೇಲಿ ಅಳವಡಿಸಲಾಗಿದೆ).
Mob: 9036889485

CHANGE OF NAME
I, Ravi Gowda P., residing at No. 2871, 2nd Pampapathi Road, K.G. Koppal, Mysuru-570 009, have changed my name as Ravi Gowdaa P. on my own free will, in front of Notary S.M. Umapathi on 29-1-2025. I declare that I shall at all times hereafter in all my records, deeds and writings and in all proceedings, dealings and transactions, private as well as upon all occasions whatsoever use and sign the name of Ravi Gowdaa P.
Sd/- Ravi Gowdaa P.

50x80 House for Sale
50x80 North facing (MUDA allotted) old house for sale at Ramakrishnanagar 'I' Block, near Canara Bank park 40 feet road. Contact:
MYSORE ESTATES
Vishwanathgowda
Mob: 9590911111

SITE FOR SALE
52x60 S/W Corner site for sale in RMS Layout, near Dr. Rajkumar Road. Good location.
Mob: 9880344263

PART TIME JOB (STUDENTS ONLY)
ಚಿಕ್ಕ ಹೋಟೆಲ್ ಮೆಸ್‌ಗೆ 18 ವರ್ಷ ಮೇಲ್ಪಟ್ಟು ಹುಡುಗ / ಹುಡುಗಿ ಕೆಲಸಕ್ಕೆ ಬೇಕಾಗಿದ್ದಾರೆ.
Mob: 8431416590

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರಿನ MNC ಕಂಪನಿ ಆಫೀಸ್‌ಗಳಿಗೆ ಮತ್ತು ಶೋರೂಂಗಳಿಗೆ 7th 10th puc, ITI. Dipolmo, Anydegree pass & fail ಆದಯುವಕ ಯುವತಿಯರಿಗೆ Packing, Helper, Quality, Maintenance, Data Entry, Computer Operator, Typing, Receptionist ಮುಂತಾದ ಕೆಲಸಗಳಿಗೆ ಬೇಕಾಗಿದ್ದಾರೆ. ಸಂಬಳ: ESI, PF + OT ಯೊಂದಿಗೆ 15000/-40,000
9164052361,6364103418

ಅಭಿವೃದ್ಧಿಹೊಂದಿದ ನಮ್ಮ ಬಡಾವಣೆಗಳಲ್ಲಿ ಸೈಟುಗಳು ಲಭ್ಯವಿದೆ
1) ಬನ್ನೂರು ರಸ್ತೆ – 45 ಲಕ್ಷ
2) ಟಿ.ನರಸೀಪುರ ರಸ್ತೆ – 21.6 ಲಕ್ಷ
3) ಶ್ರೀರಾಂಪುರ ರಿಂಗ್‌ರಸ್ತೆ–55 ಲಕ್ಷ
4) ಬೋಗಾದಿ, ಜಟ್ಟಿಹುಂಡಿ – 31.2 ಲಕ್ಷ
ಮಧ್ಯವರ್ತಿಗಳು ಕ್ಷಮಿಸಿ
8123075038

WANTED IMMEDIATELY IN SIDE
Saraswathipuram, Kuvempunagar, Ramakrishnanagar & good location need 40x60 feet site and old house (No duplex single floor) facing North or East. Please contact:
Mob: 8762018445

ಜಮೀನು ಮಾರಾಟಕ್ಕಿದೆ
1 ಎಕರೆ ಜಮೀನು ಅಥವಾ 10 ಗುಂಟೆ ರಿಂಗ್ ರಸ್ತೆ ಇಂದ 15 ಕಿ.ಮೀ. ದೂರದಲ್ಲಿ 43 ಲಕ್ಷಗಳಿಗೆ ಮಾರಾಟಕ್ಕಿದೆ. ಸಂಪರ್ಕಿಸಿ:
Mob: 7411110087

For Immediate Appointment
We are one of the leading and reputed Security Company urgently looking for a Manpower Sourcing Officer for immediate appointment. Selected candidates will be getting attractive salary. Interested candidates can contact me
@ 6364857750

ಮೈಸೂರು ಮಿತ್ರ – ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಮಳವಳ್ಳಿಯಲ್ಲಿ ಶಿವರಾತ್ರೀಶ್ವರ ಶಿವಯೋಗಿಗಳ ಜಯಂತಿ ಆಚರಣೆ

ಸುತ್ತೂರು ಜಾತ್ರೆಯ ಕೃಷಿ ವಿಚಾರ ಸಂಕಿರಣ ಸಮಾರೋಪದಲ್ಲಿ ಕೇಂದ್ರ ಸಚಿವ ಹೆಚ್‌ಡಿಕೆ ಘೋಷಣೆ

ನಂಜನಗೂಡು, ಜ.29– ಮಳವಳ್ಳಿಯಲ್ಲಿ ಈ ವರ್ಷ ಶಿವರಾತ್ರೀಶ್ವರ ಶಿವಯೋಗಿಗಳವರ 1066ನೇ ಜಯಂತಿ ಮಹೋತ್ಸವವನ್ನು ಆಚರಿಸಲಾಗುವುದು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಘೋಷಿಸಿದರು.

ಬುಧವಾರ ಸುತ್ತೂರು ಜಾತ್ರೆಯ ಮಹೋತ್ಸವದ ಕೃಷಿ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಇದಕ್ಕೆ ಸುತ್ತೂರು ಶ್ರೀಗಳಲ್ಲಿ ತಾವು ಮನವಿ ಮಾಡಿದ್ದು, ಶ್ರೀಗಳು ಸಮ್ಮತಿ ಸೂಚಿಸಿದ್ದಾರೆ ಎಂದರು.

ರೈತರನ್ನು 3ನೇ ದರ್ಜೆಯ ಜನರೆಂದು ಪರಿಗಣಿಸಲಾಗುತ್ತಿರುವುದು ನೋವಿನ ಸಂಗತಿ, ಸರ್ಕಾರಗಳು ರೈತರ ಪರವಾದ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ರೈತರ ಬದುಕನ್ನು ಹಸನುಗೊಳಿಸದಿದ್ದಲ್ಲಿ ಮಹಾತ್ಮ ಗಾಂಧೀಜಿಯವರ ಆಶಯದ ಗುರಿಯನ್ನು ಮುಟ್ಟಲು ಸಾಧ್ಯವಿಲ್ಲ ಎಂದರು. ದೇಶ ತಾಂತ್ರಿಕವಾಗಿ ಹೆಚ್ಚಿನ ಪ್ರಗತಿ ಸಾಧಿಸಿದ್ದು ವಿಶ್ವದ ಇತರೆ ರಾಷ್ಟ್ರಗಳಿಗೆ ಪೈಪೋಟಿ ನೀಡುವ ಮಟ್ಟಕ್ಕೆ ಬೆಳೆದಿದೆ. ಆದರೆ ಸಮಾಜದಲ್ಲಿ ಜನರ ನಡುವೆ ಬಾಂಧವ್ಯದ ಕೊರತೆ ಕಾಡುತ್ತಿರುವುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಆಡಳಿತ ವ್ಯವಸ್ಥೆಯಲ್ಲಿ ರೈತರ ಕಾರ್ಯಕ್ರಮಗಳ ಜಾರಿ ವೈಫಲ್ಯದಿಂದ ಚಾಮರಾಜನಗರದ ಮೂಲಕ



ಸುತ್ತೂರು ಜಾತ್ರಾ ಮಹೋತ್ಸವದ ಕೃಷಿ ವಿಚಾರ ಸಂಕಿರಣ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿದರು.

ಶುರುವಾದ ಮೈಕ್ರೋ ಫೈನಾನ್ಸ್ ಕಿರುಕುಳ ಪ್ರಕರಣಗಳು ರಾಜ್ಯದ ವಿವಿಧೆಡೆ ದಿನನಿತ್ಯ ಕಂಡುಬರುತ್ತಿದ್ದು, ಸಾಮಾನ್ಯ ಜನರು ನೋವಿನಲ್ಲಿದ್ದಾರೆ. ಆನ್ಲೈನ್ ವ್ಯಾಮೋಹದಿಂದಾಗಿ ಜನರು ಲಕ್ಷಾಂತರ ರೂ. ಸಾಲ ಮಾಡಿ ಸಂಕಷ್ಟದಲ್ಲಿದ್ದಾರೆ. ಸಾಲ ವಸೂಲಾತಿಗಾಗಿ ಕಟುವಾಗಿ ನಡೆದುಕೊಳ್ಳುತ್ತಿರುವ ಮೈಕ್ರೋ ಫೈನಾನ್ಸ್‌ಗಳಿಗೆ ಕಡಿವಾಣ ಹಾಕದಿದ್ದಲ್ಲಿ ದೇಶ ಎಷ್ಟೇ ಬೆಳವಣಿಗೆ ಕಂಡರೂ ಸಹ ಜನರ ಸ್ಥಿತಿ ಸುಧಾರಣೆಯಾಗುವುದಿಲ್ಲ. ದೇಶದಲ್ಲಿ ಹಣದ ಕೊರತೆಯಿಲ್ಲ ಆದರೆ ಹಣದ ಬಳಕೆಯಲ್ಲಾಗುತ್ತಿರುವ ವೈಫಲ್ಯಗಳಿಂದ ಇಂತಹ ಸಮಸ್ಯೆ ಉದ್ಭವಿಸಿವೆ, ರಾಜಕಾರಣಿಗಳು ಜನಪ್ರತಿನಿಧಿಗಳು ಕಾರ್ಯಕ್ರಮ ಜಾರಿಯಲ್ಲಿ ಎಲ್ಲಿ ಎಡಹುತ್ತಿದ್ದೇವೆ ಎಂಬುದನ್ನು ಚಿಂತಿಸಿ, ಸರ್ಕಾರದ ಕಾರ್ಯಕ್ರಮಗಳನ್ನು ರೈತರಿಗೆ ಮುಟ್ಟಿಸುವಂತಹ ಕೆಲಸ ಮಾಡಿದಲ್ಲಿ ದೇಶ ದೊಡ್ಡಮಟ್ಟದಲ್ಲಿ ಬೆಳೆಯಲು ಸಾಧ್ಯವಾಗಲಿದೆ ಎಂದರು.

ಸುತ್ತೂರು ಮಠದೊಂದಿಗೆ ನಮ್ಮ ಕುಟುಂಬಕ್ಕೆ ಅವಿನಾಭಾವ ಸಂಬಂಧವಿದೆ. ನನ್ನ ತಂದೆ ದೇವೇಗೌಡರು ಸುತ್ತೂರು ಮಠದ ಜೊತೆಗೆ ಅತ್ಯಂತ ನಿಷ್ಠೆಯಿಂದ ನಡೆದುಕೊಳ್ಳುವಂತೆ ಕುಟುಂಬದ ಎಲ್ಲಾ ಸದಸ್ಯರಿಗೂ ಹಲವಾರು ಬಾರಿ ತಿಳಿ ಹೇಳಿದ್ದಾರೆ. ನಾವು ಬದುಕಿರುವವರೆಗೂ ಸುತ್ತೂರು ಮಠದ ಜೊತೆಗೆ ನಿಷ್ಠೆಯಾಗಿ ಮುಂದುವರಿಯುತ್ತೇವೆ. ಶ್ರೀಮಠದ ಜನಕಲ್ಯಾಣ ಕಾರ್ಯಕ್ರಮಗಳು ಹೀಗೆ ಮುಂದುವರೆಯಲಿ ಎಂದರು.

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ಭಾರತ ಕೃಷಿ ಪ್ರದಾನ ರಾಷ್ಟ್ರವಾಗಿದ್ದು ಕೃಷಿಯೇ ನಮ್ಮೆಲ್ಲರ ಜೀವನಾಧಾರವಾಗಿದೆ ಇತ್ತೀಚೆಗೆ ಜನರು ಕೃಷಿಯಿಂದ ವಿಮುಖರಾದಂತೆ ರೋಗರುಜಿನಗಳ ಪ್ರಮಾಣವೂ ಹೆಚ್ಚಾಗಿದ್ದು ಸ್ವಾತಂತ್ರ್ಯ ಬಂದ ಸಂದರ್ಭ ದೇಶದ ಜನಸಂಖ್ಯೆ 33 ಕೋಟಿಗೆ ಆಹಾರ ಸ್ವಾವಲಂಭನೆ ಸಾದಿಸಲು ಸಾಧ್ಯವಾಗಿರಲಿಲ್ಲ ಆದರೆ ಈಗ ಕೃಷಿಯಲ್ಲಾಗಿರುವ ಆವಿಷ್ಕಾರದಿಂದಾಗಿ ದೇಶ ಆಹಾರೋತ್ಪನ್ನಗಳ ಬೆಳೆಯಲ್ಲಿ ಸ್ವಾವಲಂಭನೆ ಸಾದಿಸಿದೆ. ಇನ್ನು ಸುತ್ತೂರು ಜಾತ್ರಾ ಮಹೋತ್ಸವದಲ್ಲಿ ಕೃಷಿಗೆ ಪ್ರೋತ್ಸಾಹಕರ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿ ಗ್ರಾಮೀಣ ಜನರ ಜೀವನ ಹಾಗೂ ಬದುಕಿನ ಸುಧಾರಣೆಗೆ ಮುಂದಾಗಿರುವುದು ಪ್ರಶಂಸಾರ್ಹ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವರುಗಳಾದ ಸಿ.ಎಸ್. ಪುಟ್ಟರಾಜು, ಸಾ.ರಾ.ಮಹೇಶ್, ಶಾಸಕರುಗಳಾದ ಜಿ.ಡಿ.ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಶಾಸಕರು ಗಳಾದ ಡಾ.ಕೆ.ಅನ್ನದಾನಿ, ಅಶ್ವಿನ್ ಕುಮಾರ್, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಸಾಮಾಜಿಕ ಕಾರ್ಯಕರ್ತ ವಾದಿರಾಜ್ ಸಾಮರಸ್ಯ, ವಕೀಲ ಬೊಮ್ಮಾಯಿ ನಂಜುಂಡಸ್ವಾಮಿ ಮೊದಲಾದವರು ಭಾಗವಹಿಸಿದ್ದರು.

ಗ್ಯಾಸ್ ಸಿಲಿಂಡರ್ ಲಾರಿ ಡಿಕ್ಕಿ: ಬೈಕ್ ಸವಾರ ಸಾವು

ಹುಣಸೂರು, ಜ.29– ಗ್ಯಾಸ್ ಸಿಲಿಂಡರ್ ತುಂಬಿದ್ದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಪಿರಿಯಾಪಟ್ಟಣ ತಾಲೂಕಿನ ಕಿರನಹಳ್ಳಿ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 275ರಲ್ಲಿ ನಿನ್ನೆ ರಾತ್ರಿ ಸಂಭವಿಸಿದೆ.



ನಗರದ ದಾವಣಿ ಬೀದಿ ವಾಸಿ ಲೇ.ಸಣ್ಣ ಮರೀಗೌಡರ ಪುತ್ರ ದಿನೇಶ್ (48) ಅಪಘಾತದಲ್ಲಿ ಮೃತಪಟ್ಟ ನತದೃಷ್ಟ, ದಿನೇಶ್ ತನ್ನ ಟಿವಿಎಸ್ ವಿಕ್ಟರ್ (ಕೆಎ50 ಇ–0105) ಬೈಕ್‌ನಲ್ಲಿ ಅಡಕೆ ಕೊಯ್ಯುವ ಮಿಷಿನ್ ರಿಪೇರಿಗೆಂದು ಪಿರಿಯಾಪಟ್ಟಣಕ್ಕೆ ತೆರಳಿ ವಾಪಸ್ ರಾತ್ರಿ 10.30ರಲ್ಲಿ ಮನೆಗೆ ಹಿಂತಿರುಗುತ್ತಿದ್ದಾಗ ಪಿರಿಯಾಪಟ್ಟಣ ತಾಲೂಕಿನ ಕಿರನಹಳ್ಳಿ ಗ್ರಾಮದ ಗೇಟ್ ಬಳಿ ಎದುರಿನಿಂದ ಬಂದ ಗ್ಯಾಸ್ ಸಿಲಿಂಡರ್ ತುಂಬಿದ್ದ ಲಾರಿ (ಕೆಎ10 ಎ–1445) ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ದಿನೇಶ್ ತಲೆಗೆ ತೀವ್ರ ಪೆಟ್ಟು ಬಿದ್ದು ಸ್ಥಳದಲ್ಲೇ ಮೃತಪಟ್ಟರು.

ವಿಷಯ ತಿಳಿದ ಪಿರಿಯಾಪಟ್ಟಣ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಗೋವಿಂದರಾಜು, ಮುಖ್ಯಪೇದೆ ಮಧು, ಲಿಂಗರಾಜಪ್ಪ, ಹಾಗೂ ರಾಜೇಗೌಡ ಅವರು ಸ್ಥಳಕ್ಕೆ ಭೇಟಿ ನೀಡಿ ಮೃತದೇಹವನ್ನು ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿ, ಎರಡು ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ದಿನೇಶ್ ಪತ್ನಿ, ಓರ್ವ ಪುತ್ರ ಹಾಗೂ ಅಪಾರ ಬಂಧು–ಬಳಗ ಮತ್ತು ಸ್ನೇಹಿತರನ್ನು ಅಗಲಿದ್ದಾರೆ. ಮೃತನ ಅಂತ್ಯಕ್ರಿಯೆ ನಗರದ ಪಂಪ್‌ಹೌಸ್ ಬಳಿ ಇರುವ ರುದ್ರಭೂಮಿಯಲ್ಲಿ ಇಂದು ಸಂಜೆ ನೆರವೇರಿತು.

ಮರ ಕಡಿದು ಮಾರಾಟ ಮಾಡುವ ವಿಚಾರಕ್ಕೆ ಅಣ್ಣನ ಮೇಲೆ ಗುಂಡು ಹಾರಿಸಿದ ತಮ್ಮ


ಗಾಯಾಳು ಚಲುವರಾಜು ಚಿಕಿತ್ಸೆ ಪಡೆಯುತ್ತಿರುವುದು.

ಹೆಚ್.ಡಿ.ಕೋಟೆ, ಜ.29– ಜಮೀನಿನಲ್ಲಿ ಮರ ಕಡಿದು ಮಾರಾಟ ಮಾಡುವ ವಿಚಾರಕ್ಕೆ ಸಹೋದರರ ನಡುವೆ ನಡೆದ ಜಗಳದಲ್ಲಿ ಅಣ್ಣನ ಮೇಲೆ ತಮ್ಮನೇ ಗುಂಡು ಹಾರಿಸಿ ಗಾಯಗೊಳಿಸಿರುವ ಘಟನೆ ತಾಲೂಕಿನ ಗುಂಡತ್ತೂರು ಗ್ರಾಮದಲ್ಲಿ ನಡೆದಿದೆ.

ಗುಂಡತ್ತೂರು ಗ್ರಾಮದ ಚಲುವರಾಜು (33) ಗಾಯಗೊಂಡಿದ್ದು, ಸಹೋದರ ಅಭಿಷೇಕ್ ಗುಂಡು ಹಾರಿಸಿದ ಆರೋಪಿ.

ನರಸೇಗೌಡರ ಪುತ್ರನಾದ ಗಾಯಾಳು ಚಲುವರಾಜು ಕಳೆದ ಐದು ವರ್ಷಗಳ ಹಿಂದಿನಿಂದ ಪೋಷಕರನ್ನು ಬಿಟ್ಟು ಪ್ರತ್ಯೇಕವಾಗಿ ತನ್ನ ಸಂಸಾರದೊಡನೆ ವಾಸವಾಗಿದ್ದರು ಎನ್ನಲಾಗಿದೆ.

ಚಲುವರಾಜು ಅವರ ತಂದೆ ಹೆಸರಿನಲ್ಲಿ ನಾಲ್ಕು ಎಕರೆ ಜಮೀನಿದ್ದು, ಹ್ಯಾಂಡ್‌ಪೋಸ್ಟ್‌ನಲ್ಲಿದ್ದ ಎರಡು ಸೈಟ್‌ಗಳನ್ನು ಮಾರಾಟ ಮಾಡಿದ ತಂದೆ ಚಲುವರಾಜುಗೆ ಹಣ ಕೊಟ್ಟಿರಲಿಲ್ಲ ಎಂದು ಹೇಳಲಾಗಿದೆ. ಜಮೀನಿನಲ್ಲಿ ಬೆಳೆದಿದ್ದ ಮರಗಳನ್ನು ಕಡಿದು ಮಾರಾಟ ಮಾಡುವುದನ್ನು ನೋಡಿದ ಚಲುವರಾಜು ಮರಗಳನ್ನು ಮಾರಾಟ ಮಾಡದಂತೆ ಹೇಳಿದಾಗ ಮಾತಿಗೆ ಮಾತು ಬೆಳೆಯುತ್ತಿದ್ದಂತೆಯೇ ತಾಯಿ ಮಹದೇವಮ್ಮ ದೊಡ್ಡಮಗನಾದ ಚಲುವರಾಜು ಮೇಲೆ ಗುಂಡು ಹಾರಿಸುವಂತೆ ಚಿಕ್ಕಮಗ ಅಭಿಷೇಕ್‌ಗೆ ಸೂಚನೆ ನೀಡಿದರಂತೆ. ಇದರಿಂದ ಪ್ರಚೋದನೆಗೊಳಗಾದ ಆತ ಗುಂಡು ಹಾರಿಸಿದ್ದು, ಗುಂಡುಗಳು ಚಲುವರಾಜು ಬಲಭಾಗದ ಕಾಲಿಗೆ ಹೊಕ್ಕಿವೆ. ಈ ಘಟನೆ ವೇಳೆ ಆತನ ರಕ್ಷಣೆಗೆ ಬಂದವರ ಮೇಲೂ ಗುಂಡು ಹಾರಿಸುವ ಬೆದರಿ ಹಾಕಿದರೆಂದು ದೂರಲಾಗಿದೆ.


ಅಭಿಷೇಕ್

ಗಾಯಾಳುವನ್ನು ಹೆಚ್.ಡಿ. ಕೋಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿದ ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗೆ ಗಾಯಾಳುವನ್ನು ಜಿಲ್ಲಾಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ವಿಚಾರ ತಿಳಿದ ಕೂಡಲೆ ಅಂತರಸಂತೆ ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಹಾಸ್ ನಾಯಕ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿ ಘಟನೆ ನಡೆದ ಕೆಲವೇ ಗಂಟೆಗಳಲ್ಲಿ ಅಪರಾದಿ ಅಭಿಷೇಕ್ ಎಂಬವನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ರಸ್ತೆ ಅಪಘಾತದಲ್ಲಿ ಕೂದಲೆಳೆ ಅಂತರದಲ್ಲಿ ಪಾರಾದ ವೃದ್ಧೆ, ಯುವಕ


ಬಸ್ ಅಪಘಾತದಿಂದ ಪಾರಾದ ವೃದ್ಧೆ.

ಹೆಚ್.ಡಿ.ಕೋಟೆ, ಜ.29– ರಸ್ತೆ ಅಪಘಾತದಲ್ಲಿ ಕೂದಲೆಳೆ ಅಂತರದಲ್ಲಿ ವೃದ್ಧೆ ಹಾಗೂ ಯುವಕ ಪಾರಾದ ಘಟನೆ ತಾಲೂಕಿನ ಹ್ಯಾಂಡ್ ಪೋಸ್ಟ್ ಸರ್ಕಲ್‌ನಲ್ಲಿ ಸಂಭವಿಸಿದ್ದು, ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಹ್ಯಾಂಡ್‌ಪೋಸ್ಟ್ ಸರ್ಕಲ್‌ನಲ್ಲಿ ಸರಗೂರುನಿಂದ ಮೈಸೂರು ಕಡೆಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್, ಸರ್ಕಲ್‌ನಲ್ಲಿ ತಿರುಗುವಾಗ ನಡೆದುಕೊಂಡು ಹೋಗುತ್ತಿದ್ದ ಓರ್ವ ವೃದ್ಧೆಗೆ ಇನ್ನೇನು ಡಿಕ್ಕಿ ಹೊಡೆದೇ ಬಿಡ್ತು ಎನ್ನುವ ಸಂದರ್ಭದಲ್ಲಿ ಕೂದಲೆಳೆ ಅಂತರದಲ್ಲಿ ವೃದ್ಧೆ ಪಾರಾಗಿದ್ದಾರೆ. ಮತ್ತೆ ಸರಗೂರು ಕಡೆಯಿಂದ ಮೈಸೂರಿಗೆ ತೆರಳುತ್ತಿದ್ದ ಇನ್ನೊಂದು ಕೆಎಸ್‌ಆರ್‌ಟಿಸಿ ಬಸ್, ಓರ್ವ ಯುವಕ ಸರ್ಕಲ್‌ನಲ್ಲಿ ನಡೆದು ಹೋಗುತ್ತಿದ್ದ ಸಂದರ್ಭದಲ್ಲಿ ದಿಢೀರ್ ಡಿಕ್ಕಿ ಹೊಡೆಯುವಾಗ ಕೂದಲೆಳೆ ಅಂತರದಲ್ಲಿ ಯುವಕ ಪಾರಾಗಿದ್ದಾರೆ. ಕೆಳಗೆ ಬಿದ್ದ ಯುವಕ ತಕ್ಷಣ ಬಲಕ್ಕೆ ತಿರುಗಿ ಜೀವ ಉಳಿಸಿಕೊಂಡಿದ್ದಾನೆ.

ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಅಪಘಾತಗಳು: ಹ್ಯಾಂಡ್‌ಪೋಸ್ಟ್ ಸರ್ಕಲ್‌ನಲ್ಲಿ ಹೆಚ್.ಡಿ.ಕೋಟೆ, ಸರಗೂರು, ಮೈಸೂರು, ಮಾನಂದವಾಡಿಗೆ ಪ್ರತಿದಿನ ನಾಲ್ಕು ದಿಕ್ಕುಗಳಿಂದ ನೂರಾರು ವಾಹನಗಳು ಸಂಚರಿಸುತ್ತವೆ. ಕೆಎಸ್‌ಆರ್‌ಟಿಸಿ ಬಸ್‌ಗಳು, ಅತಿ ಹೆಚ್ಚಾಗಿ ಸಂಚರಿಸುತ್ತವೆ. ಈ ವೃತ್ತದಲ್ಲಿ ವಾಹನಗಳು ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಸಂಪೂರ್ಣ ಟ್ರಾಫಿಕ್ ಜಾಮ್ ಆಗುವ ಸಂಭವಗಳು ಪ್ರತಿದಿನ ಇದೆ. ಆದರೆ ಕೆಎಸ್‌ಆರ್‌ಟಿಸಿ ಚಾಲಕರು ಅಜಾಗರೂಕತೆ ಯಿಂದ ಬಸ್‌ಗಳನ್ನು ಓಡಿಸುತ್ತಾರೆ. ಇದರಿಂದ ಸಾಕಷ್ಟು ದುರಂತಗಳು ಸಂಭವಿಸುತ್ತಿವೆ.

ಸರ್ಕಾರದ ಸೌಲಭ್ಯಗಳನ್ನು ಬಡವರಿಗೆ ತಲುಪಿಸಿ, ಸಾಮಾಜಿಕ ನ್ಯಾಯ ಕಾಪಾಡಿ


ತಿ.ನರಸೀಪುರ ಬ್ಲಾಕ್ ಕಾಂಗ್ರೆಸ್‌ನ ಮೀನುಗಾರರ ಘಟಕದ ನೂತನ ಅಧ್ಯಕ್ಷರಾಗಿ ನೇಮಕಗೊಂಡ ತಾಲ್ಲೂಕಿನ ಕೊಳತ್ತೂರು ಡೈರಿ ಅಧ್ಯಕ್ಷ ಕೆ.ಎನ್. ಕುಮಾರ್ ಅವರಿಗೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ನೇಮಕಾತಿ ಪತ್ರವನ್ನು ವಿತರಿಸಿದರು.

ತಿ.ನರಸೀಪುರ, ಜ.29– ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಡವರಿಗೆ ತಲುಪಿಸುವ ಮೂಲಕ ಸಾಮಾಜಿಕ ನ್ಯಾಯ ಕಾಪಾಡಬೇಕು ಎಂದು ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಹೇಳಿದರು.

ತಿ.ನರಸೀಪುರ ಬ್ಲಾಕ್ ಕಾಂಗ್ರೆಸ್‌ನ ಮೀನುಗಾರರ ಘಟಕದ ನೂತನ ಅಧ್ಯಕ್ಷರಾಗಿ ನೇಮಕಗೊಂಡ ತಾಲ್ಲೂಕಿನ ಕೊಳತ್ತೂರು ಡೈರಿ ಅಧ್ಯಕ್ಷ ಕೆಎನ್. ಕುಮಾರ್ ಅವರಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪನವರ ನೇತೃತ್ವದ ಸರ್ಕಾರದಲ್ಲಿ ಹಿಂದುಳಿದ– ವರ್ಗ, ದೀನದಲಿತರು ಮತ್ತು ಅಲ್ಪಸಂಖ್ಯಾತರಿಗೆ ಹೆಚ್ಚಿನ ಅನುಕೂಲ ವಾಗುವ ರೀತಿ ಯೋಜನೆ ರೂಪಿಸಿದೆ ಎಂದರು.

ಗ್ರಾಪಂ ಮಾಜಿ ಅಧ್ಯಕ್ಷ ಆರ್. ಸೋಮಣ್ಣ, ಮಾಜಿ ಸದಸ್ಯ ಬಸವರಾಜಪ್ಪ, ಮುಖಂಡರಾದ ಮಹದೇವಯ್ಯ, ಕಿರಣ ಹಾಜರಿದ್ದರು.

ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ವ್ಯಕ್ತಿ ಆತ್ಮಹತ್ಯೆ: ನಾಲ್ವರ ಬಂಧನ

ಮಲ್ಕುಂಡಿ, ಜ.29– ಮೈಕ್ರೋ ಫೈನಾನ್ಸ್ ಕಿರುಕುಳ ತಾಳಲಾರದೆ ಮಲ್ಕುಂಡಿ ಗ್ರಾಮದ ಕೃಷ್ಣಮೂರ್ತಿ ಆತ್ಮಹತ್ಯೆಗೆ ಶರಣಾಗಿದ್ದು, ಈ ಸಂಬಂಧ ಹುಲ್ಲಹಳ್ಳಿ ಪೊಲೀಸರು ಫೈನಾನ್ಸ್ ಕಂಪನಿಯ ನಾಲ್ವರನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಬಿಎಸ್‌ಎಸ್ ಕಂಪನಿಯ ಆಕಾಶ್, ಗ್ರಾಮೀಣ ಒಕ್ಕೂಟದ ಕಂಪನಿಯ ಸಿದ್ದರಾಜು, ಐಡಿಎಫ್‌ಸಿ ಕಂಪನಿಯ ಮ್ಯಾನೇಜರ್ ಸಿದ್ದರಾಜು, ಉಜ್ಜೀವನ್ ಕಂಪನಿಯ ಲೋಕೇಶ್ ಬಂಧಿತ ಆರೋಪಿಗಳು.

ಕೃಷ್ಣಮೂರ್ತಿ ಮೈಕ್ರೋ ಫೈನಾನ್ಸ್‌ನಿಂದ ಸಾಲ ಪಡೆದಿದ್ದು, ಸಾಲ ವಸೂಲಾತಿಗಾಗಿ ಕಿರುಕುಳ ನೀಡುತ್ತಿದ್ದ ಹಿನ್ನೆಲೆಯಲ್ಲಿ ನೇಣಿಗೆ ಶರಣಾದ ಹಿನ್ನೆಲೆಯಲ್ಲಿ ಪತ್ನಿ ಹುಲ್ಲಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಹುಲ್ಲಹಳ್ಳಿ ಪೊಲೀಸರು ಫೈನಾನ್ಸ್ ಕಂಪನಿಯವರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಭಾಗದಲ್ಲಿ ನೂರಾರು ಜನರು ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಪಡೆದಿದ್ದಾರೆ ಇವರಿಗೆ ಸಾಲ ಮರುಪಾವತಿ ಶಕ್ತಿ ಇದೆಯೋ, ಇಲ್ಲವೋ ಎಂಬುದನ್ನು ಪರಿಶೀಲಿಸದೆ ಮೈಕ್ರೋ ಫೈನಾನ್ಸ್ ಕಂಪನಿಯವರು ಅತೀ ದೊಡ್ಡ ಮಟ್ಟದಲ್ಲಿ ಸಾಲ ನೀಡಿ ಸಮಸ್ಯೆಗೆ ಸಿಲುಕಿಸಿದ್ದಾರೆ ಎನ್ನಲಾಗಿದೆ.

ಬಳಿಕ ಒಂದೇ ಒಂದು ಕಂತು ಕಟ್ಟುವುದು ವಿಳಂಬವಾದರೆ ಮನೆ ಹತ್ತಿರವೇ ಬಂದು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ನಿಂದಿಸುವ ಮೂಲಕ ಕಿರುಕುಳ ನೀಡುವುದು ಎಲ್ಲಾ ಕಡೆ ಸರ್ವೇ ಸಾಮಾನ್ಯವಾಗಿದೆ. ಹೀಗಾಗಿ ಈ ಭಾಗದಲ್ಲಿ ಹಲವು ಗ್ರಾಮವನ್ನೇ ತೊರೆದಿದ್ದಾರೆ. ಈ ನಡುವೆ ಮಲ್ಕುಂಡಿ ಕೃಷ್ಣಮೂರ್ತಿ ಹಾಗೂ ಅಂಬಳೆ ಗ್ರಾಮದ ಜಯಶೀಲಾ ಇಬ್ಬರೂ ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಿರುಕುಳ ನೀಡಿದ ಮೈಕ್ರೋ ಫೈನಾನ್ಸ್ ಕಂಪನಿಯವರನ್ನು ಬಂಧಿಸಲಾಗಿದೆ.

ಫೆ.2 ಚೌಡೇಶ್ವರಿ ಪೂಜಾ ಮಹೋತ್ಸವ

ಕಂಪಲಾಪುರ, ಜ.29– ಗ್ರಾಮದ ಶ್ರೀ ರಾಮಲಿಂಗ ಚೌಡೇಶ್ವರಿ ದೇವಸ್ಥಾನದ 17ನೇ ವರ್ಷದ ಪೂಜಾ ಮಹೋತ್ಸವ ಫೆ.2ರಂದು ನಡೆಯಲಿದೆ.

ಅಂದು ಬೆಳಗ್ಗೆ 6 ಗಂಟೆಗೆ ಕಳಸ ತರುವುದು, 8ಕ್ಕೆ ಗಣಪತಿ ಹೋಮ, ನವಗ್ರಹ ಹೋಮ, 11ಕ್ಕೆ ದುರ್ಗಾಹೋಮ, 12.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 1 ಗಂಟೆಯಿಂದ ಶ್ರೀ ನಾಗಾ ವಿದ್ಯಾಸಂಸ್ಥೆ ಆವರಣದಲ್ಲಿ ಅನ್ನಸಂತರ್ಪಣೆ, ಸಂಜೆ 6 ಗಂಟೆಯಿಂದ ವಿದ್ಯುತ್ ದೀಪಾಲಂಕಾರದ ಭವ್ಯ ಮಂಟಪದಲ್ಲಿ ಮಂಗಳವಾದ್ಯ, ಚಂಡೆ, ಕರಡಿ ವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿಯ ಮೆರವಣಿಗೆ ನಡೆಯಲಿದೆ.

ಸೇವಾ ಕಾರ್ಯಗಳ ಮೂಲಕ ನಾಳೆ ಶಾಸಕ ಜಿ.ಡಿ.ಹರೀಶ್‌ಗೌಡರ ಹುಟ್ಟುಹಬ್ಬ ಆಚರಣೆ

ಹುಣಸೂರು, ಜ.29– ಶಾಸಕ ಜಿ.ಡಿ.ಹರೀಶ್ ಗೌಡರ 38ನೇ ವರ್ಷದ ಹುಟ್ಟುಹಬ್ಬವನ್ನು ಜ.31ರಂದು ಅವರ ಅಭಿಮಾನಿ ಬಳಗ ಹಾಗೂ ಜೆಡಿಎಸ್ ಕಾರ್ಯಕರ್ತರು ಸಾಮಾಜಿಕ ಸೇವಾ ಕಾರ್ಯಕ್ರಮಗಳ ಮೂಲಕ ಸರಳವಾಗಿ ಆಚರಿಸಲು ನಿರ್ಧರಿಸಿದ್ದಾರೆ.


ಜಿ.ಡಿ.ಹರೀಶ್‌ಗೌಡ

ನಗರಸಭಾ ಸದಸ್ಯ ಹೆಚ್.ಪಿ.ಸತೀಶ್ ಕುಮಾರ್ ಹಾಗೂ ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಬಸವಲಿಂಗಯ್ಯ ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಜಂಟಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ತಾಲೂಕಿನ ಸಾರ್ವಜನಿಕರಿಗೆ ವಿವಿಧ ಸವಲತ್ತುಗಳನ್ನು ವಿತರಿಸುವ ಮೂಲಕ ಸರಳವಾಗಿ ಮತ್ತು ಅರ್ಥಪೂರ್ಣವಾಗಿ ಹುಟ್ಟುಹಬ್ಬ ಆಚರಿಸಲಾಗುತ್ತದೆ ಹಾಗೂ ನಾಗಪುರ ಹಾಡಿಯಲ್ಲಿ ಉಚಿತ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿದೆ ಎಂದರು.

ಶಾಸಕರು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ವಿದ್ದರೂ ಸರ್ಕಾರದಿಂದ ವಿಶೇಷ ಅನುದಾನ ತರುವ ಮೂಲಕ ತಾಲೂಕಿನ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ವೈಯಕ್ತಿಕವಾಗಿ ಶಿಕ್ಷಣ, ಕ್ರೀಡೆ ಸೇರಿದಂತೆ ಸಂಕಷ್ಟದಲ್ಲಿರುವವರಿಗೆ ನೆರವು ನೀಡುವ ಮೂಲಕ ಸೇವಾ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದಾರೆ. ಅಲ್ಲದೇ ಹೋಬಳಿ ಮಟ್ಟದಲ್ಲಿ ತಮ್ಮ ಪ್ರತಿನಿಧಿಗಳನ್ನು ನಿಯೋಜಿಸುವ ಮೂಲಕ ಸ್ಥಳೀಯ ಮಟ್ಟದಲ್ಲಿ ಜನರ ಸಮಸ್ಯೆಗಳನ್ನು ಬಗೆಹರಿಸುವ ಮೂಲಕ ರಾಜ್ಯಕ್ಕೆ ಮಾದರಿಯಾಗಿದ್ದಾರೆ ಎಂದು ಅವರು ವಿವರಿಸಿದರು.


ಪತ್ರಿಕಾಗೋಷ್ಠಿಯಲ್ಲಿ ಹೆಚ್.ಪಿ. ಸತೀಶ್, ಬಸವಲಿಂಗಯ್ಯ, ತಟ್ಟೆಕೆರೆ ಶ್ರೀನಿವಾಸ್, ಬಿಳಿಕೆರೆ ಗೌರಿಶಂಕರ್, ಆಸ್ವಾಳ್ ಕೆಂಪೇಗೌಡ, ನಾಗರಾಜ್ ಉಪಸ್ಥಿತರಿದ್ದಾರೆ.

ಶಾಸಕರು ನನ್ನ ಹುಟ್ಟುಹಬ್ಬಕ್ಕೆ ಯಾರು ಹಾರ ತುರಾಯಿಗಳಿಗೆ ದುಂದು ವೆಚ್ಚ ಮಾಡಿ ಸಂಭ್ರಮಿಸುವ ಬದಲು ಆ ಹಣವನ್ನು ತಾಲೂಕಿನಲ್ಲಿ ಸಂಕಷ್ಟದಲ್ಲಿರುವ ಸಾರ್ವಜನಿಕರ ಸೇವೆಗಾಗಿ ಮುಡುಪಿಡಿ ಎಂಬ ಸಂದೇಶ ನೀಡಿದ್ದಾರೆ ಎಂದರು.

ವಿಶೇಷ ಕಾರ್ಯಕ್ರಮಗಳು: ಜ.31ರಂದು ಮಧ್ಯಾಹ್ನ 12 ಗಂಟೆಗೆ ಶಾಸಕರ ಮನೆ ಬಳಿಯ ನಿವೇಶನದಲ್ಲಿ ವಿವಿಧ ಸೇವಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಶಾಸಕರ ಅಭಿಮಾನಿ ಬಳಗದ ಸದಸ್ಯರಾದ ಹರವೆ ಶ್ರೀಧರ್ ಮತ್ತು ಸತೀಶ್ ಪಾಪಣ್ಣ ಅವರು ಹುಣಸೂರು ಸಾರ್ವಜನಿಕ ಆಸ್ಪತ್ರೆಗೆ 7.5ಲಕ್ಷ ರೂ. ವೆಚ್ಚದ ಉಚಿತ ಆಂಬ್ಯುಲೆನ್ಸ್ ಸೇವೆ ಒದಗಿಸಲಿದ್ದಾರೆ. ಅನಾಥ ಶವಗಳ ಮುಕ್ತಿದಾತ ಬಿಳಿಕೆರೆ ಮಂಜು ಅವರಿಗೆ ಬಿಳಿಕೆರೆ ಮಧುರವರು 3.5 ಲಕ್ಷ ರೂ ವೆಚ್ಚದ ಆಟೋ ರಿಕ್ಷಾ ಕೊಡುಗೆ ನೀಡಲಿದ್ದಾರೆ. ತಾಲೂಕಿನ 4500 ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ತಜ್ಞರಿಂದ ಸಂಗ್ರಹಿಸಿದ 100 ಪುಟಗಳ 6 ಭಾಷೆಗಳ ಪರೀಕ್ಷಾ ಕೈಪಿಡಿ ವಿತರಿಸಲಾಗುತ್ತದೆ ಎಂದು ಅವರು ಹೇಳಿದರು.

ಬೀದಿ ಬದಿ ವ್ಯಾಪಾರಿಗಳಿಗೆ, ಅಸಂಘಟಿತ ಮಹಿಳೆಯರಿಗೆ ಟೈಲರಿಂಗ್ ಮಿಷನ್‌ಗಳು, ಅಂಗವೈಕಲ್ಯ ಇರುವ ವಿದ್ಯಾರ್ಥಿಗಳಿಗೆ ಮತ್ತು ಇತರರಿಗೆ ಸಲಕರಣೆಗಳು ವಿತರಣೆ, ಬಡ ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ ಹಾಗೂ ಸಹಾಯಹಸ್ತ ನೀಡುವುದರೊಂದಿಗೆ 250 ಮಂದಿಗೆ ವಿವಿಧ ರೀತಿಯ ಪಿಂಚಣಿ, ರೈತರಿಗೆ ಸಲಕರಣೆಗಳು, ಉಚಿತ ಕಣ್ಣಿನ ತಪಾಸಣೆ ನಡೆಸಿ ಕನ್ನಡಕ ವಿತರಣೆ ಕಾರ್ಯಕ್ರಮಗಳು ಸೇರಿದಂತೆ ಅನೇಕ ಸಾಮಾಜಿಕ ಸೇವಾ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸದುಪಯೋಗ ಪಡಿಸಿಕೊಳ್ಳಿ ಎಂದರು.

ಸುದ್ದಿಗೋಷ್ಠಿಯಲ್ಲಿ ತಟ್ಟೆಕೆರೆ ಶ್ರೀನಿವಾಸ್, ಬಿಳಿಕೆರೆ ಗೌರಿಶಂಕರ್, ಆಸ್ವಾಳ್ ಕೆಂಪೇಗೌಡ, ನಾಗರಾಜ್ ಇದ್ದರು.

ಮೈಸೂರು ನಗರದ ಸಮಗ್ರ ಅಭಿವೃದ್ಧಿಗೆ ಕಾರ್ಯತಂತ್ರ

ಮುಡಾದಿಂದ 1688 ಕೋಟಿ ಅಂದಾಜು ವೆಚ್ಚದ ಯೋಜನೆ ರೂಪಿಸಲು ಸೂಚನೆ

ಪ್ರಸ್ತಾವನೆ ಸಲ್ಲಿಸುವಂತೆ ಮೈಸೂರು ಜಿಲ್ಲಾಧಿಕಾರಿಗಳಿಗೆ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಪತ್ರ



ಮೈಸೂರು, ಜ.29(ಆರ್‌ಕೆ)– ಮೈಸೂರು ನಗರದ ಸಮಗ್ರ ಅಭಿವೃದ್ಧಿಗೆ ವಿಸ್ತೃತ ಯೋಜನೆಯೊಂದಿಗೆ ಪ್ರಸ್ತಾವನೆ ಸಲ್ಲಿಸುವಂತೆ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್ ಮೈಸೂರು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸದಸ್ಯರಾದ ಎಸ್.ಮೋಹನ್‌ದಾಸ್ ಹೆಗಡೆ ಅವರು ಸರ್ಕಾರಕ್ಕೆ ಮಾಡಿದ ಮನವಿ ಹಿನ್ನೆಲೆಯಲ್ಲಿ 2025ರ ಜನವರಿ 24ರಂದು ಮೈಸೂರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿರುವ ಕಾರ್ಯದರ್ಶಿಗಳು, ಮೈಸೂರು ನಗರದ ಸರ್ವಾಂಗೀಣ ಅಭಿವೃದ್ಧಿ ಕುರಿತಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯತಂತ್ರ ರೂಪಿಸಿ, ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದ್ದಾರೆ. 2024ರ ಡಿಸೆಂಬರ್ 19ರಂದು ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್ ಅವರಿಗೆ ಮೋಹನ್‌ದಾಸ್ ಹೆಗಡೆ ಸಲ್ಲಿಸಿದ ಮನವಿ ಪತ್ರದಲ್ಲಿ ಮುಡಾದಿಂದ 1688 ಕೋಟಿ ರೂ. ಯೋಜನಾ ವೆಚ್ಚದಲ್ಲಿ ಕಾರ್ಯತಂತ್ರ ರೂಪಿಸಿ ಅನುಷ್ಠಾನಗೊಳಿಸುವಂತೆ ಕೋರಿ ಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಸರ್ಕಾರದ ಕಾರ್ಯದರ್ಶಿಗಳು ಮೈಸೂರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ.

ಯೋಜನೆ ಕುರಿತಂತೆ ಎಸ್.ಮೋಹನ್ ದಾಸ್ ಹೆಗಡೆ ಅವರು ಸುಸ್ಥಿರ ಮೈಸೂರು ನಗರ, ಸ್ಮಾರ್ಟ್ ನಗರ ಹಾಗೂ ಅರ್ಬನ್ ಹಬ್ ಆಗಿ ಪರಿವರ್ತಿಸಲು 1087 ಕೋಟಿಯಿಂದ 1688 ಕೋಟಿ ರೂ.ವರೆಗೆ ವಿವಿಧ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕೆಂದು ತಮ್ಮ ಪತ್ರದಲ್ಲಿ ಪ್ರಸ್ತಾಪಿಸಿದ್ದರು. ಮೈಸೂರಿನ ಸುಸ್ಥಿರತೆ, ಸಾಂಸ್ಕೃತಿಕ ಸಂರಕ್ಷಣೆ ಮತ್ತು ಆರ್ಥಿಕ ಅಭಿವೃದ್ಧಿಯ ಮೇಲೆ ಹೆಚ್ಚು ಒತ್ತು ನೀಡಿ ಪ್ರಸ್ತಾವನೆ ಸಿದ್ಧಪಡಿಸುವಂತೆ ಕೋರಿ ಕೊಂಡಿದ್ದರು.

ಅಭಿವೃದ್ಧಿ ದೃಷ್ಟಿಕೋನ: ಮೈಸೂರು ನಗರವನ್ನು ಮಾದರಿ ನಗರ ಕೇಂದ್ರವನ್ನಾಗಿ ಮಾಡಲು ಹಾಗೂ ಅಲ್ಲಿನ ಸಾಂಸ್ಕೃತಿಕ ಗುರುತನ್ನು ಉಳಿಸಿಕೊಳ್ಳುವ ಸಲುವಾಗಿ ಸಾಂಪ್ರದಾಯಿಕ ಮತ್ತು ಪ್ರಗತಿದಾಯಕ ಕಾರ್ಯಗಳನ್ನು ಕೈಗೊಂಡು ಇಡೀ ರಾಜ್ಯ ಮತ್ತು ದೇಶದಲ್ಲಿ ಅಭಿವೃದ್ಧಿ ಪಥದಲ್ಲಿ ಸಾಗುವ ನಗರವನ್ನಾಗಿ ಮಾಡುವ ಉದ್ದೇಶದಿಂದ ಯೋಜನೆಯನ್ನು ರೂಪಿಸಬೇಕೆಂದು ಕೋರಿದ್ದರು.

ಅನುದಾನದ ಕಾರ್ಯತಂತ್ರ

ಮೈಸೂರಿನ ಅಭಿವೃದ್ಧಿಗೆ ಅಗತ್ಯವಿರುವ 1688 ಕೋಟಿ ರೂ.ಗಳ ಸಂಪನ್ಮೂಲ ಕ್ರೋಢೀಕರಿಸಲು ಪಬ್ಲಿಕ್–ಪ್ರೈವೇಟ್ ಪಾರ್ಟನರ್‌ಶಿಪ್(ಪಿಪಿಪಿ) ಪ್ರಮುಖ ಪಾತ್ರ ವಹಿಸಲಿದೆ. ಅದರಿಂದ ಅಭಿವೃದ್ಧಿ ಯೋಜನೆಗೆ ಅಗತ್ಯವಿರುವ ಹಣದ ಶೇ.30ರಷ್ಟು ಅನುದಾನ ಸೃಜನವಾಗಲಿದೆ. ಅಲ್ಲದೆ, ಈ ವ್ಯವಸ್ಥೆಯಿಂದ ಸಾರ್ವಜನಿಕ ಹಣ ತೊಡಗಿಸುವ ವ್ಯವಸ್ಥೆಯ ಒತ್ತಡ ಕಡಿಮೆಯಾಗಲಿದೆ. ಅಟಲ್ ಮಿಷನ್ ಫಾರ್ ರೀಜುವಿನೇಷನ್ ಅಂಡ್ ಅರ್ಬನ್ ಟ್ರಾನ್ಸ್‌ಫರ್‌ಮೇಷನ್ (ಎಎಂಆರ್‌ಯುಟಿ), ಸ್ಮಾರ್ಟ್ ಸಿಟಿ ಮತ್ತು ಸ್ವಚ್ಛ ಭಾರತ್‌ನಂತಹ ಯೋಜನೆಗಳು ಈ ಅಭಿವೃದ್ಧಿಗೆ ಸಹಕಾರಿಯಾಗಲಿವೆ. ಅಗತ್ಯ ಮೂಲಸೌಕರ್ಯ ಮತ್ತು ಸ್ಮಾರ್ಟ್ ಅರ್ಬನ್ ಸಿಸ್ಟಂ ವ್ಯವಸ್ಥೆಗೂ ಈ ಯೋಜನೆಗಳು ನೆರವಾಗಲಿವೆ. ಮೈಸೂರಿನಲ್ಲಿ ರುವ ಪ್ರವಾಸೋದ್ಯಮ, ರಿಯಲ್ ಎಸ್ಟೇಟ್ ಅವಕಾಶಗಳು ಸಹ ನಗರದ ಅಭಿವೃದ್ಧಿಗೆ ಆರ್ಥಿಕ ಸಂಪನ್ಮೂಲ ಕ್ರೋಢೀಕರಿಸಲು ಸಹಕಾರಿಯಾಗಲಿವೆ. ನಗರದ ಸಾಂಸ್ಕೃತಿಕ ಮತ್ತು ಆರ್ಥಿಕ ಆಕರ್ಷಣೆಗಳನ್ನು ಬಳಸಿಕೊಳ್ಳುವ ಮೂಲಕ ಅಗತ್ಯವಿರುವ ಒಟ್ಟು ಅನುದಾನದ ಶೇ.10ರಿಂದ 15ರಷ್ಟನ್ನು ಸೃಜಿಸಬಹುದು. ಇದರಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಉದ್ದೇಶವಾಗಿರುವ ನಗರದ ಅಭಿವೃದ್ಧಿಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ.

ನಗರ ಮೂಲಸೌಕರ್ಯ: ನಗರ ಮೂಲಸೌಕರ್ಯ, ಮೊಬಿಲಿಟಿ ಸಿಸ್ಟಂ, ರಸ್ತೆಗಳ ಅಗಲೀಕರಣ, ಸಾರ್ವಜನಿಕ ಸಾರಿಗೆ ಸಂಪರ್ಕ ಜಾಲ ವಿಸ್ತರಿಸುವುದು ಹಾಗೂ ಸ್ಮಾರ್ಟ್ ಟ್ರಾಫಿಕ್ ನಿರ್ವಹಣಾ ವ್ಯವಸ್ಥೆಯನ್ನು ಸೇರಿಸಿಕೊಂಡು ಪಾದಚಾರಿ ಸ್ನೇಹಿ ಸೌಲಭ್ಯ ಕಲ್ಪಿಸಿ ಉತ್ತಮ ಸಂಚಾರ ವ್ಯವಸ್ಥೆ ಕಲ್ಪಿಸಬೇಕೆಂದು ಅವರು ತಿಳಿಸಿದರು.

ನೀರು ನಿರ್ವಹಣೆ: ಸಂಪರ್ಕ ಜಾಲವನ್ನು ಬಲಪಡಿಸಿ ಕುಡಿಯುವ ನೀರಿನ ಸರಬರಾಜು ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಮಾಡಲು, ಪರಿಸರ ಸಂರಕ್ಷಿಸಿ ನೀರಿನ ಮರುಬಳಕೆ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವುದು, ಹಸಿರು ವಲಯ ವಿಸ್ತರಣೆ, ನಗರ ಅರಣ್ಯ ಮತ್ತು ಉದ್ಯಾನವನ ಅಭಿವೃದ್ಧಿ, ರೂಫ್ ಟಾಪ್ ಸೋಲಾರ್ ಅಳವಡಿಕೆ, ಎಲೆಕ್ಟ್ರಿಕ್ ವಾಹನಗಳ ಚಾರ್ಜಿಂಗ್ ಸ್ಟೇಷನ್ ಸ್ಥಾಪನೆಯಂತಹ ಅಂಶಗಳನ್ನು ಯೋಜನೆಗೆ ಸೇರಿಸುವಂತೆಯೂ ಹೆಗಡೆ ಅವರು ಸಲಹೆ ನೀಡಿದ್ದರು.

ಡಿಜಿಟಲ್ ಗವರ್ನೆನ್ಸ್: ಆಡಳಿತ ಸಾಮರ್ಥ್ಯವನ್ನು ವೃದ್ಧಿಸಿ ನಾಗರಿಕರಿಗೆ ಉತ್ತಮ ಸೇವೆ ಒದಗಿಸುವ ಸಲುವಾಗಿ ಸ್ಮಾರ್ಟ್ ಸಿಟಿ ತಂತ್ರಜ್ಞಾನವನ್ನು ಬಳಸಿಕೊಳ್ಳುವುದು, ನಗರಾದ್ಯಂತ ಡಿಜಿಟಲ್ ಸಂಪರ್ಕ, ಇಂಟರ್‌ನೆಟ್ ಮೂಲದ ನಿರ್ವಹಣಾ ವ್ಯವಸ್ಥೆ, ಇ–ಗವರ್ನೆನ್ಸ್‌ಗಳನ್ನು ಅಭಿವೃದ್ಧಿಪಡಿಸಲು ಹಾಗೂ ನಗರ ನಿವಾಸಿಗಳಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಪ್ರಸ್ತಾವನೆಯನ್ನು ಸಿದ್ಧಪಡಿಸುವುದು.

ಸಂಸ್ಕೃತಿ ಸಂರಕ್ಷಣೆ, ಪ್ರವಾಸೋದ್ಯಮ ಅಭಿವೃದ್ಧಿ: ಸಾಂಸ್ಕೃತಿಕ ಪರಂಪರೆ ಮತ್ತು ಪ್ರವಾಸೋದ್ಯಮಕ್ಕೆ ಅವಕಾಶವಿರುವ ಮೈಸೂರು ನಗರದಲ್ಲಿ ಇಲ್ಲಿನ ಪರಂಪರೆ ಸಂರಕ್ಷಿಸುವ ಕೆಲಸದಲ್ಲಿ ಹೆಚ್ಚು ಹಣ ತೊಡಗಿಸಬೇಕು. ಪ್ರವಾಸೀ ಕೇಂದ್ರಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಿ ಪ್ರವಾಸೋದ್ಯಮ ಅಭಿವೃದ್ಧಿಗೆ ಕಾರ್ಯತಂತ್ರ ರೂಪಿಸಬೇಕು. ದೇಶ–ವಿದೇಶಗಳ ಪ್ರವಾಸಿಗರಿಗೆ ಸೌಲಭ್ಯ ಕಲ್ಪಿಸಬೇಕು.

ಆರ್ಥಿಕ ಅಭಿವೃದ್ಧಿ, ಉದ್ಯೋಗ ಸೃಷ್ಟಿ: ಸ್ಥಳೀಯ ಕೈಗಾರಿಕೆಗಳನ್ನು ಆರ್ಥಿಕವಾಗಿ ಅಭಿವೃದ್ಧಿಪಡಿಸಿ, ಆ ಮೂಲಕ ಉದ್ಯೋಗಾವಕಾಶಗಳನ್ನು ಹೆಚ್ಚಿಸಬೇಕು ಹಾಗೂ ಕೈಗಾರಿಕೆ ವಲಯ, ಕೌಶಲ ಅಭಿವೃದ್ಧಿ ಕೇಂದ್ರ ಹಾಗೂ ಸ್ಟಾರ್ಟ್‌ಅಪ್‌ಗಳನ್ನು ಪ್ರೋತ್ಸಾಹಿಸಲು ಮತ್ತು ಸಣ್ಣ ಸಣ್ಣ ವ್ಯಾಪಾರ ವಹಿವಾಟುಗಳಿಗೆ ಪ್ರೇರಣೆ ನೀಡುವುದನ್ನು ಗಮನದಲ್ಲಿರಿಸಿಕೊಂಡು ಯೋಜನೆ ರೂಪಿಸಬೇಕಿದೆ. ಒಟ್ಟಾರೆ ಇಲ್ಲಿನ ಜನರಿಗೆ ಉದ್ಯೋಗಾವಕಾಶ ಸೃಷ್ಟಿಸಿ ಅವರ ಆರ್ಥಿಕ ಅಭಿವೃದ್ಧಿ ಮೇಲೆ ಗಮನಹರಿಸಬೇಕಿದೆ.

ಸಮುದಾಯದ ಭಾಗವಹಿಸುವಿಕೆ: ಮೈಸೂರಿನ ಅಭಿವೃದ್ಧಿ ಕುರಿತಂತೆ ಸಮುದಾಯವನ್ನು ಒಳಗೊಂಡಿಸಿಕೊಂಡು ಸಾರ್ವಜನಿಕರಿಂದ ಸಲಹೆ, ಅಭಿಪ್ರಾಯ, ಮಾರ್ಗದರ್ಶನಗಳನ್ನು ಪಡೆದು ಮೈಸೂರಿನ ಭವಿಷ್ಯದ ದೃಷ್ಟಿಯಿಂದ ಯೋಜನೆ ರೂಪಿಸಬೇಕಾಗಿದೆ. ಆ ಮೂಲಕ ಮೈಸೂರು ನಗರದ ಸಮಗ್ರ ಅಭಿವೃದ್ಧಿ ಹಾಗೂ ಸುಸ್ಥಿರತೆಗೆ ಒತ್ತು ನೀಡಬೇಕಾಗಿದೆ ಎಂದು ಮೋಹನ್ ದಾಸ್ ಹೆಗಡೆ ತಮ್ಮ ಪತ್ರದಲ್ಲಿ ಪ್ರಸ್ತಾಪಿಸಿದ್ದರು.

ಮೈಸೂರು–ನಂಜನಗೂಡು ರಾಷ್ಟ್ರೀಯ ಹೆದ್ದಾರಿಯಲ್ಲಿ 8 ಬ್ಲಾಕ್ ಸ್ಪಾಟ್

ಪುನರಾವರ್ತಿತ ಅಪಘಾತ ವಲಯಗಳಲ್ಲಿ ಕೆಳಸೇತುವೆ–ಮೇಲ್ಸೇತುವೆ ನಿರ್ಮಾಣ

127.01 ಕೋಟಿ ವೆಚ್ಚದ ಕಾಮಗಾರಿಗೆ ಮಾಸ್ಟರ್‌ಪ್ಲಾನ್



ಮೈಸೂರು–ನಂಜನಗೂಡು ರಾಷ್ಟ್ರೀಯ ಹೆದ್ದಾರಿ

ಮೈಸೂರು,ಜ.29(ಪಿಎಂ)– ಮೈಸೂರು–ನಂಜನಗೂಡು ರಾಷ್ಟ್ರೀಯ ಹೆದ್ದಾರಿಯನ್ನು (ಎನ್‌ಹೆಚ್–766, ಈ ಮೊದಲು 212) ಅಪಘಾತಮುಕ್ತವಾಗಿಸಲು ಮಾಸ್ಟರ್‌ಪ್ಲಾನ್ ಸಿದ್ಧಗೊಂಡಿದೆ. ಈ ಹೆದ್ದಾರಿಯಲ್ಲಿ 8 ಬ್ಲಾಕ್‌ಸ್ಪಾಟ್‌ಗಳನ್ನು (ಪದೇ ಪದೆ ಅಪಘಾತ ಸಂಭವಿಸುವ ಸ್ಥಳ) ಗುರುತಿಸಿರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, 127.01 ಕೋಟಿ ರೂ. ವೆಚ್ಚದಲ್ಲಿ ಅಪಘಾತಮುಕ್ತ ವಲಯವನ್ನಾಗಿಸಲು ಯೋಜನೆ ರೂಪಿಸಿದೆ.

ಕೆಳಸೇತುವೆ ಮತ್ತು ಮೇಲ್ಸೇತುವೆಗಳ ನಿರ್ಮಾಣದ ಮೂಲಕ ಬ್ಲಾಕ್‌ಸ್ಪಾಟ್‌ಗಳನ್ನು ಅಪಘಾತಮುಕ್ತ ವಲಯವನ್ನಾಗಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಯೋಜನೆ ರೂಪಿಸಿದೆ. ಕರ್ನಾಟಕ–ಕೇರಳ ಮತ್ತು ತಮಿಳುನಾಡಿಗೆ ಸಂಪರ್ಕ ಕಲ್ಪಿಸುವ ಈ ರಾಷ್ಟ್ರೀಯ ಹೆದ್ದಾರಿಯು ಮೈಸೂರು–ಗುಂಡ್ಲುಪೇಟೆ ಮೂಲಕ ಹಾದು ಹೋಗಲಿದ್ದು, ಇದರಿಂದ ಅಂತರರಾಜ್ಯ ವಾಹನಗಳ ಸಂಖ್ಯೆಯೂ ಹೆಚ್ಚಿನ ಪ್ರಮಾಣದಲ್ಲಿ ಸಂಚಾರ ಮಾಡುತ್ತವೆ. ನಂಜನಗೂಡು, ಬಂಡೀಪುರ, ಊಟಿ, ಕೇರಳದ ವಯನಾಡು ಭಾಗಕ್ಕೆ ತೆರಳುವವರು ಸಹ ಈ ಹೆದ್ದಾರಿ ಆಶ್ರಯಿಸಿದ್ದಾರೆ.

ಸದರಿ ಹೆದ್ದಾರಿಯಲ್ಲಿ ರಸ್ತೆ ಅಪಘಾತಗಳು ಹೆಚ್ಚುತ್ತಿದ್ದು, ಮಂಗಳವಾರ ರಾತ್ರಿಯೂ ಇದೇ ಹೆದ್ದಾರಿಯ ಹಿರೀಕಾಟಿ ಗೇಟ್ ಬಳಿ ನಡೆದ ಅಪಘಾತದಲ್ಲಿ ಒಂದೇ ಕುಟುಂಬದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅತಿವೇಗದ ಚಾಲನೆಯಿಂದಲೂ ಅನೇಕ ಅಪಘಾತಗಳು ಪುನರಾವರ್ತನೆಯಾಗುವ ಮೂಲಕ ಸಾವು–ನೋವುಗಳು ಹೆಚ್ಚಿನ ಪ್ರಮಾಣದಲ್ಲಿ ಆಗುತ್ತಿವೆ. ಇದಕ್ಕೆ ಪರಿಹಾರ ಕಂಡುಕೊಳ್ಳಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇದೀಗ ಮುಂದಾಗಿದೆ.

ಬ್ಲಾಕ್‌ಸ್ಪಾಟ್ ಎಂದು ಗುರುತಿಸಲಾದ ಜಾಗಗಳಲ್ಲಿ ಹೈಮಾಸ್ಟ್ ದೀಪ, ಸ್ಪೀಡ್ ಬ್ರೇಕರ್‌ಗಳು, ಜೀಬ್ರಾ ಲೈನ್ ಹಂಪ್ಸ್‌ಗಳು, ಕ್ಯಾಟ್–ಐ, ಮಿಣುಕು ದೀಪಗಳನ್ನು ಅಳವಡಿಸುವುದು ಸೇರಿದಂತೆ ವಿವಿಧ ಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ. ತಿರುವುಗಳ ವಿಸ್ತರಣೆ, ರಸ್ತೆ ವಿಭಜಕಗಳು ಹಾಗೂ ವಾಹನಗಳ ಚಕ್ರಗಳು ರಸ್ತೆಯಿಂದ ಜಾರದಂತಹ ವ್ಯವಸ್ಥೆ ಮಾಡಲಾಗಿದೆ. ಆದರೂ ಅಪಘಾತಗಳು ನಿಯಂತ್ರಣಕ್ಕೆ ಬರುತ್ತಿಲ್ಲ. ಹೀಗಾಗಿ ತುರ್ತು ಅಗತ್ಯ ಇರುವ ಕೆಳಸೇತುವೆ ಹಾಗೂ ಮೇಲ್ಸೇತುವೆ ನಿರ್ಮಿಸಲಾಗುತ್ತಿದೆ.

ಕಾಮಗಾರಿಗೆ ಚಾಲನೆ: ಅಪಘಾತಗಳನ್ನು ನಿಯಂತ್ರಿಸಲು ಬ್ಲಾಕ್‌ಸ್ಪಾಟ್‌ಗಳಲ್ಲಿ ನಾನಾ ಕಾಮಗಾರಿ ಕೈಗೊಳ್ಳಲಾಗಿದೆ. ಈಗಾಗಲೇ ಟೆಂಡರ್ ಕರೆದು ಗುತ್ತಿಗೆದಾರರಿಗೆ ಕೆಲಸವನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ ಒಂದು ಕಾಮಗಾರಿ ಶುರುವಾಗಿದ್ದು, ಉಳಿದ ಕೆಲಸಗಳು ಶೀಘ್ರದಲ್ಲೇ ಚಾಲನೆ ಪಡೆದುಕೊಳ್ಳಲಿವೆ ಎನ್ನುತ್ತಾರೆ ಪ್ರಾಧಿಕಾರದ ಅಧಿಕಾರಿಗಳು. ಮೈಸೂರು–ನಂಜನಗೂಡು ಹೆದ್ದಾರಿಯಲ್ಲಿ ಕಳೆದ 3 ವರ್ಷಗಳಲ್ಲಿ ಹೆಚ್ಚು ಅಪಘಾತಗಳು ಸಂಭವಿಸಿರುವ ಸ್ಥಳಗಳನ್ನು ಗುರುತಿಸಲಾಗಿದೆ. ಅಂತಹ ಸ್ಥಳಗಳಲ್ಲಿ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲು ಕೆಳಸೇತುವೆ, ಮೇಲ್ಸೇತುವೆ, ಪಾದಚಾರಿ ಮಾರ್ಗ ನಿರ್ಮಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಎಲ್ಲೆಲ್ಲಿ ಕಾಮಗಾರಿ: ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸಮೀಕ್ಷೆ ನಡೆಸಿ ಪುರಾವರ್ತಿತ ಅಪಘಾತ ವಲಯಗಳನ್ನು ಗುರುತಿಸಿದ್ದರು. ಈ ಹಿನ್ನೆಲೆಯಲ್ಲಿ ಸದರಿ ಯೋಜನೆ ರೂಪಿಸಲಾಗಿದೆ. ನಂಜನಗೂಡು ಹೆದ್ದಾರಿ ಮತ್ತು ರಿಂಗ್ ರಸ್ತೆ ಸಂಪರ್ಕಿಸುವ ಬಂಡಿಪಾಳ್ಯದ ಎಪಿಎಂಸಿ ಬಳಿ ಎರಡು ಕೆಳಸೇತುವೆ ನಿರ್ಮಿಸಲು ಯೋಜನೆ ಸಿದ್ಧಪಡಿಸಲಾಗಿದೆ. ಇದರಿಂದ ಎಪಿಎಂಸಿಗೆ ಸರಕು ಸಾಗಾಟ ಸಂಬಂಧ ಲಾರಿಗಳು ಸೇರಿದಂತೆ ಇನ್ನಿತರ ಗೂಡ್ಸ್ ವಾಹನಗಳಿಗೆ ಅನುಕೂಲವಾಗಲಿದೆ.

ಅಂತೆಯೇ ನಂಜನಗೂಡು ತಾಲೂಕು ಯಲಚಗೇರಿಯಲ್ಲಿ ಮೇಲ್ಸೇತುವೆ, ಕಳಲೆ ಗೇಟ್ ಬಳಿ ಕೆಳಸೇತುವೆ, ಹೊಸಹಳ್ಳಿ ಬಳಿ ಲಘು ವಾಹನಗಳ ಸಂಚಾರಕ್ಕಾಗಿ ಕೆಳಸೇತುವೆ, ಕಡಕೊಳದ ಬಳಿ ಲಘು ವಾಹನ ಸಂಚಾರ ಮತ್ತು ಪಾದಚಾರಿಗಳ ಓಡಾಟಕ್ಕಾಗಿ ಪ್ರತ್ಯೇಕ ಕೆಳಸೇತುವೆ, ಶ್ರೀಗಣಪತಿ ಸಚ್ಚಿದಾನಂದ ಆಶ್ರಮದ ಬಳಿ ಕೆಳಸೇತುವೆ, ಕೆಂಪಯ್ಯನಹುಂಡಿ ಬಳಿ ವಾಹನಗಳಿಗೆ ಮತ್ತು ಪಾದಚಾರಿಗಳಿಗೆ ಪ್ರತ್ಯೇಕವಾಗಿ ಕೆಳಸೇತುವೆ ನಿರ್ಮಿಸಲಾಗುತ್ತಿದೆ. ಅಲ್ಲದೆ, ಮೈಸೂರು–ಬೆಂಗಳೂರು ನಡುವಿನ ರಾಷ್ಟ್ರೀಯ ಹೆದ್ದಾರಿಯಲ್ಲಿ (275) ಹಾದು ಹೋಗುವ ಬನ್ನಿಕುಪ್ಪೆಯಲ್ಲಿ ಲಘು ವಾಹನಗಳಿಗೆ ಮತ್ತು ಭಾರಿ ವಾಹನಗಳಿಗೆ ಪ್ರತ್ಯೇಕ ಕೆಳಸೇತುವೆ ನಿರ್ಮಿಸಲಾಗುತ್ತಿದೆ.

ಇಂದು ಸಂಪುಟ ಸಭೆಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ತಡೆ ಸುಗ್ರೀವಾಜ್ಞೆಗೆ

ಅನುಮೋದನೆ

ಬೆಂಗಳೂರು, ಜ.29(ಕೆಎಂಶಿ)–



ಪರಮೇಶ್ವರ್

ಮೈಕ್ರೋ ಫೈನಾನ್ಸ್ ಕಂಪನಿಗಳಿಂದ ಸಾಲ ಪಡೆಯುವವರ ಹಿತಾಸಕ್ತಿ ರಕ್ಷಣೆ ಸುಗ್ರೀವಾಜ್ಞೆಯನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ, ಶೀಘ್ರದಲ್ಲೇ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಂಗೀಕಾರಕ್ಕೆ ಕಳುಹಿಸಲಾಗುವುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಇಂದಿಲ್ಲಿ ತಿಳಿಸಿದ್ದಾರೆ. ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಕರಡು ಸುಗ್ರೀವಾಜ್ಞೆಗೆ ಅನುಮೋದನೆ ಪಡೆಯಲಾಗುವುದು ಎಂದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನು ಸಚಿವ ಎಚ್.ಕೆ. ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರೊಂದಿಗೆ ಸಭೆಯಲ್ಲಿ ಕರಡು ಸುಗ್ರೀವಾಜ್ಞೆ ಕುರಿತು ಚರ್ಚಿಸಿ ಅಂತಿಮಗೊಳಿಸಲಾಗುವುದು ಎಂದರು.

ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿ ತಡೆಗೆ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ, ಸಾಲ ವಸೂಲಿಯಿಂದ ಕಿರುಕುಳಕ್ಕೆ ಒಳಗಾದವರಿಗಾಗಿ ಸಹಾಯವಾಣಿ ಸಂಖ್ಯೆ ಒದಗಿಸಲಾಗುವುದು. ಸುಗ್ರೀವಾಜ್ಞೆ ಮೂಲಕ ಜಿಲ್ಲಾಧಿಕಾರಿಗಳಿಗೆ ಹೆಚ್ಚಿನ ಅಧಿಕಾರ ನೀಡಲಿದ್ದು, ಇದಕ್ಕಾಗಿ ಪ್ರತ್ಯೇಕ ವಿಭಾಗ ರಚಿಸಲಾಗುತ್ತದೆ. ಮೈಕ್ರೋಫೈನಾನ್ಸ್ ಕಂಪನಿಗಳು ಸಾಲ ವಸೂಲಿಗೆ ಹೊರಗುತ್ತಿಗೆ ನೀಡುತ್ತಿದ್ದು, ಇಂತಹ ಸಂಸ್ಥೆಗಳು ಸಾಲ ವಸೂಲಾತಿಗೆ ರೌಡಿಗಳಂತೆ ವರ್ತಿಸುತ್ತಿವೆ. ಇಂತಹ ಕೃತ್ಯಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

ಪರಿಣತರ ಬದಲು ಉದ್ಯಮಿಗಳು ಶಾಸನ ಸಭೆಗೆ ಆಯ್ಕೆ: ಭವಿಷ್ಯದ ಹತ್ತು ವರ್ಷದಲ್ಲಿ ಏನಾಗುವುದೋ ನಾ ಕಾಣೆ!

● ರಾಜಕೀಯ ಪಕ್ಷಗಳಿಗೆ ಗೆಲುವು ಮಾತ್ರ ಮಾನದಂಡ ● ಒಳ್ಳೆಯ ವ್ಯಕ್ತಿಗಳಿಗೆ ಟಿಕೆಟ್ ಸಿಗಲ್ಲ
● ಗಂಭೀರ ಚರ್ಚೆ ವೇಳೆ ಶಾಸನ ಸಭೆ ಖಾಲಿ ಖಾಲಿ ● ಪೇಪರ್‌ಲೆಸ್ ಸಾಧಕ–ಬಾಧಕದ ಬಗ್ಗೆ ಚರ್ಚೆ

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಆತಂಕ

ಮೈಸೂರು, ಜ.29(ಬಿಎಲ್‌ಯು)– ವಿವಿಧ ಕ್ಷೇತ್ರದಲ್ಲಿ ಪರಿಣಿತಿ ಹೊಂದಿದ ವ್ಯಕ್ತಿಗಳನ್ನು ಈ ಹಿಂದೆ ಶಾಸನ ಸಭೆಗೆ ಆಯ್ಕೆ ಮಾಡಲಾಗುತ್ತಿತ್ತು. ಆದರೆ ಈಗ ಉದ್ಯಮಿಗಳು ಶಾಸನ ಸಭೆ ಪ್ರವೇಶಿಸಿದ್ದು, ಮುಂದಿನ 10 ವರ್ಷದಲ್ಲಿ ಏನಾಗುವುದೋ ಗೊತ್ತಿಲ್ಲ ಎಂದು ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಆತಂಕ ವ್ಯಕ್ತಪಡಿಸಿದರು.

ಮೈಸೂರಿನ ಪತ್ರಕರ್ತರ ಭವನದಲ್ಲಿ ಇಂದು ಜಿಲ್ಲಾ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ಸಂವಾದದಲ್ಲಿ ಮಾತನಾಡಿದ ಅವರು, ಇತ್ತೀಚಿನ ಚುನಾವಣೆಗಳಲ್ಲಿ ಗೆಲುವಿನ ಮಾನದಂಡ ಆಧರಿಸಿ ಟಿಕೆಟ್ ನೀಡಲಾಗುತ್ತಿದೆ. ಇದರಿಂದ ಜನರೊಂದಿಗೆ ಉತ್ತಮ ಒಡನಾಟವಿರುವ ಒಳ್ಳೆಯ ವ್ಯಕ್ತಿಗಳಿಗೆ ಟಿಕೆಟ್ ಸಿಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೇವಲ ಗೆಲ್ಲುವ ಕುದುರೆಗೆ ಮಾತ್ರ ಟಿಕೆಟ್ ನೀಡಲಾಗುತ್ತದೆ. ಆದರೆ ಇದಕ್ಕೆ ಕಡಿವಾಣ ಹಾಕುವುದು ಸ್ಪೀಕರ್ ಆಗಿರುವ ನನ್ನ ವ್ಯಾಪ್ತಿಗೆ ಬರುವುದಿಲ್ಲ ಎಂದು ಖಾದರ್ ಸ್ಪಷ್ಟಪಡಿಸಿದರು.

ಸದನ ಖಾಲಿ... ಖಾಲಿ...: ಬೆಂಗಳೂರು ಹಾಗೂ ಬೆಳಗಾವಿಯಲ್ಲಿ ನಡೆದ ವಿಧಾನ ಮಂಡಲ ಅಧಿವೇಶನದಲ್ಲಿ ಹೆಚ್ಚು ಶಾಸಕರು ಭಾಗವಹಿಸಲಿಲ್ಲ. ಗಂಭೀರ ಚರ್ಚೆ ನಡೆಯುವ ಸಂದರ್ಭದಲ್ಲಿ ಸದನ ಖಾಲಿಯಾಗಿರುತ್ತದೆ. ಹಾಗಾದರೆ ಕೋಟ್ಯಾಂತರ ರೂ. ವೆಚ್ಚ ಮಾಡಿ ನಡೆಸುವ ಅಧಿವೇಶನ ಏಕೆ ಬೇಕು ಎಂಬ ಪ್ರಶ್ನೆ ಎದುರಾಗುತ್ತದೆ. ಇಂತಹ ಸಂದರ್ಭದಲ್ಲಿ ಶಾಸನ ಸಭೆಗೆ ಗೈರಾಗುವ ಶಾಸಕನನ್ನು ಆ ಕ್ಷೇತ್ರದ ಜನರು ಪ್ರಶ್ನೆ ಮಾಡಬೇಕು ಎಂದು ಸಲಹೆ ನೀಡಿದರು. ವಿಧಾನಮಂಡಲದ ಅಧಿವೇಶನದಲ್ಲಿ ಗುಣಮಟ್ಟದ ಚರ್ಚೆ ನಡೆಯುವ ಅಗತ್ಯವಿದೆ. ಈ ಮೂಲಕ ವಿಷಯಾಧಾರಿತ ಚರ್ಚೆಗೆ ಹೆಚ್ಚಿನ ಆದ್ಯತೆ ನೀಡಬೇಕು. ವೈಯಕ್ತಿಕ ವಿಚಾರಗಳ ಬಗ್ಗೆ ಚರ್ಚೆ ನಡೆಯಬಾರದು. ಇದನ್ನು ನಮ್ಮ ಜನಪ್ರತಿನಿಧಿಗಳು ಅರಿತುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.



ಸಹಕರಿಸಬೇಕು: ಶಾಸನ ಸಭೆಯಲ್ಲಿ ಅನಗತ್ಯ ಹಾಗೂ ವೈಯಕ್ತಿಕ ವಿಚಾರಗಳ ಬಗ್ಗೆ ನಡೆಯುವ ಚರ್ಚೆಯನ್ನು ಮಾಧ್ಯಮದವರು ಪ್ರಕಟಿಸಬಾರದು. ವಿಷಯಾಧಾರಿತ ಗಂಭೀರ ಚರ್ಚೆಗೆ ಸಂಬಂಧಿಸಿದ ಸುದ್ದಿಗಳನ್ನು ಮಾತ್ರವೇ ಪ್ರಕಟಿಸಬೇಕು. ಒಂದು ವಾರ ಇಂತಹ ಪ್ರಯೋಗ ಮಾಡಿದಾಗ ಯಾರೂ ಕೂಡ ಅನಗತ್ಯ ಚರ್ಚೆ ಮಾಡುವುದಿಲ್ಲ. ಈ

ಅನಗತ್ಯ ಚರ್ಚೆ ತಡೆಗೆ ಮಾಧ್ಯಮ ವಿಚಾರದಲ್ಲಿ ಮಾಧ್ಯಮದವರ ಪಾತ್ರ ಬಹುಮುಖ್ಯವಾಗಿದೆ ಎಂದು ಖಾದರ್ ಅಭಿಪ್ರಾಯಪಟ್ಟರು. ಇತ್ತೀಚೆಗೆ ನಡೆದ ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಸಿ.ಟಿ. ರವಿ ಆಕ್ಷೇಪಾರ್ಹ ಪದ ಬಳಸಿರುವ ಪ್ರಕರಣ ಸಂಬಂಧ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೆಗೆದುಕೊಳ್ಳುವ ತೀರ್ಮಾನಕ್ಕೆ ನಾನು ಬದ್ಧ. ಈ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟನೆ ನೀಡಿದರು.

ಅಧಿವೇಶನ ನಡೆಯುವ ಸಂದರ್ಭದಲ್ಲಿ ಶಾಸನ ಸಭೆಗೆ ಪೊಲೀಸರಿಗೆ ಅವಕಾಶ ಇಲ್ಲ. ಇದನ್ನು ಈಗಲೂ ಕಾಪಾಡಿಕೊಂಡು ಬರಲಾಗುತ್ತಿದೆ. ಆದರೆ ಭವಿಷ್ಯದ ದಿನದಲ್ಲಿ ಪೊಲೀಸರು ಶಾಸನ ಸಭೆಗೆ ಪ್ರವೇಶ ಪಡೆದ ಸಂದರ್ಭದಲ್ಲಿ ಏನು ಕ್ರಮ ಕೈಗೊಳ್ಳಬೇಕೊ ಅದನ್ನು ಅಂದು ಮಾಡೋಣ ಎಂದು ಹೇಳಿದರು.

ವಿಧಾನಸಭೆಯ ಕಾರ್ಯ ಕಲಾಪಗಳ ಪ್ರಕ್ರಿಯೆಯನ್ನು ಪೇಪರ್‌ಲೆಸ್ ಮಾಡಿ ಡಿಜಿಟಲೀಕರಣ ಮಾಡುವ ಬಗ್ಗೆ ಚರ್ಚೆ ನಡೆಯುತ್ತಿದೆ. ಈ ಹಿನ್ನೆಲೆ ಸಂಸತ್ ಅಧಿವೇಶನ ಪ್ರಸಾರ ಮಾಡಲು ಕೇಂದ್ರ ಸರ್ಕಾರದ ಪ್ರತ್ಯೇಕ ಅಪ್ಲಿಕೇಷನ್ ಮಾದರಿಯನ್ನು ಇಲ್ಲೂ ಜಾರಿಗೆ ತರಬೇಕೇ ಎಂಬ ಬಗ್ಗೆ ಚರ್ಚಿಸಲಾಗುತ್ತಿದೆ. ಒಟ್ಟಾರೆ ಸಾಧಕ–ಬಾಧಕಗಳ ಬಗ್ಗೆ ಚರ್ಚೆ ಮಾಡಿ ಅಂತಿಮ ತೀರ್ಮಾನ ಮಾಡಲಾಗುವುದು ಎಂದು ಹೇಳಿದರು. ನನಗೆ ಮಂತ್ರಿಯಾಗುವ ಅವಕಾಶ ಇತ್ತು. ಆದರೂ ಸ್ಪೀಕರ್ ಹುದ್ದೆ ದೊರಕಿರುವುದು ಸಂತಸ ತಂದಿದೆ. ಮಂತ್ರಿ ಸ್ಥಾನ ಯಾವಾಗ ಬೇಕಾದರೂ ಸಿಗುತ್ತದೆ. ಆದರೆ ಸ್ಪೀಕರ್ ಹುದ್ದೆ ನಾವು ಬಯಸಿದಾಗ ಸಿಗುವುದಿಲ್ಲ. ಇದರಿಂದ ಸಂತೃಪ್ತಿಯಿಂದ ನಾನು ಕಾರ್ಯ ನಿರ್ವಹಿಸುತ್ತಿದ್ದೇನೆ. ಜೊತೆಗೆ ಆಡಳಿತ ಹಾಗೂ ವಿರೋಧ ಪಕ್ಷವನ್ನು ಸಮಾನವಾಗಿ ನೋಡುತ್ತಿದ್ದು, ತಾರತಮ್ಯ ಮಾಡುತ್ತಿಲ್ಲ ಎಂದು ಹೇಳಿದರು. ಪತ್ರಿಕಾ ಸಂವಾದದಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ದೀಪಕ್, ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ, ಉಪಾಧ್ಯಕ್ಷ ರವಿ ಪಾಂಡವಪುರ, ಕಾರ್ಯದರ್ಶಿ ಕೃಷ್ಣೋಜಿರಾವ್ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಸಂಕ್ರಾಂತಿಕಿ ವಸ್ತುನ್ನಾಂ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರುದ್ರ ಗರುಡ ಪುರಾಣ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಮಾರ್ಕೊ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಫಾರೆಸ್ಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಫಾರೆಸ್ಟ್ (ಕ)	5 ಪ್ರದರ್ಶನಗಳು
ರಾಜಕಮಲ್	
ಡಾಕು ಮಹಾರಾಜ್ (ತೆ)	4 ಪ್ರದರ್ಶನಗಳು
ಸಂಗಂ	
ರಾಯಲ್ (ಕ)	4 ಪ್ರದರ್ಶನಗಳು
ಲಿಡೋ	
ಭೂ ಮಂತರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ಕೈ ಫೋರ್ಸ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಮ್ಯಾಕ್ಸ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರಾಯಲ್ (ಕ): ಬೆ.10.15ಕ್ಕೆ, ಮ.1.15ಕ್ಕೆ, ರಾ.7.15ಕ್ಕೆ, ಎಮರ್ಜೆನ್ಸಿ (ಹಿಂ): ಸಂ.4.15ಕ್ಕೆ, ಭೂ ಮಂತರ್ (ಕ): ರಾ.10.10ಕ್ಕೆ.
ಸ್ಕ್ರೀನ್ 2	ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಬೆ.10.35ಕ್ಕೆ, ಕುಟುಂಬಸ್ಥನ್ (ತ): ಮ.1ಕ್ಕೆ, ಸಂಕ್ರಾಂತಿಕಿ ವಸ್ತುನಾಂ (ತೆ): ಸಂ.4.05ಕ್ಕೆ, ಭೂ ಮಂತರ್ (ಕ): ರಾ.7.05ಕ್ಕೆ, ಟ್ವೈಲೈಟ್ ಆಫ್ ದಿ ವಾರಿಯರ್ಸ್ ವಾಲ್ಡ್ ಇನ್ (ಇಂ): ರಾ.10.10ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.10.25ಕ್ಕೆ, ಮಿ. ಹೌಸ್‌ಕೀಪಿಂಗ್ (ತ): ಮ.1.05ಕ್ಕೆ, ರಾಮಾಯಣ ದಿ ಲೆಜೆಂಡ್ ಆಫ್ ಪ್ರಿನ್ಸ್ ರಾಮ (ಹಿಂ): ಸಂ.4.10ಕ್ಕೆ, ರುದ್ರ ಗರುಡ ಪುರಾಣ (ಕ): ರಾ.7.05ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ರಾ.10ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.20ಕ್ಕೆ, ಮ್ಯಾಕ್ಸ್ (ಕ): ಮ.1.20ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ, ರಾ.7ಕ್ಕೆ, ರಾ.9.50ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಭೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಇಸ್ರೋದಿಂದ ಚಾರಿತ್ರಿಕ 100ನೇ ಉಡ್ಡಯನ; ನಭಕ್ಕೆ ಚಿಮ್ಮಿದ ಉಪಗ್ರಹ




ಶ್ರೀಹರಿಕೋಟಾ, ಜ.29– ಆಂಧ್ರ ಪ್ರದೇಶದ ಶ್ರೀಹರಿಕೋಟಾ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ನ್ಯಾವಿಗೇಷನ್ ಉಪಗ್ರಹ ಎನ್‌ವಿಎಸ್–02 ಹೊತ್ತ ಜಿಎಸ್‌ಎಲ್‌ವಿ ಎಫ್–15 ರಾಕೆಟ್ ಇಂದು ಮುಂಜಾನೆ ನಭಕ್ಕೆ ಚಿಮ್ಮಿತು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೊ) ಪ್ರಕಟಿಸಿದೆ.

ಇದು ಶ್ರೀಹರಿಕೋಟಾದಿಂದ ಇಸ್ರೋದ ಐತಿಹಾಸಿಕ 100ನೇ ಉಡ್ಡಯನ ಆಗಿದೆ. ಆ ಮೂಲಕ ಬಾಹ್ಯಾಕಾಶ ಕ್ಷೇತ್ರದಲ್ಲಿ ನೂತನ ಮೈಲಿಗಲ್ಲು ಸಾಧಿಸಿದೆ. ಉಪಗ್ರಹ ನಿಗದಿತ ಕಕ್ಷೆಯನ್ನು ಸೇರಿತು ಎಂದು ಇಸ್ರೋ ಖಚಿತಪಡಿಸಿದೆ. ಈ ವರ್ಷದ ಮೊದಲ ಯೋಜನೆ ಇದಾಗಿದೆ.

ಈ ಉಡ್ಡಯನವು ಜ.13ರಂದು ಇಸ್ರೋದ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿರುವ ವಿ. ನಾರಾಯಣನ್ ಅವರಿಗೂ ಮೊದಲ ಬಾಹ್ಯಾಕಾಶ ಕಾರ್ಯಕ್ರಮವಾಗಿದೆ. 27 ತಾಸಿನ ಕ್ಷಣಗಣನೆಯ ಬಳಿಕ ಇಂದು (ಬುಧವಾರ) ಮುಂಜಾನೆ 6.23ಕ್ಕೆ ಸರಿಯಾಗಿ ಎರಡನೇ ಲಾಂಚ್ ಪ್ಯಾಡ್‌ನಿಂದ ರಾಕೆಟ್ ನಭಕ್ಕೆ ಚಿಮ್ಮಿತು ಎಂದು ಇಸ್ರೋ ತಿಳಿಸಿದೆ.

ಈ ಸರಣಿಯ ಎರಡನೇ ಉಪಗ್ರಹ ಇದಾಗಿದೆ. 2023ರ ಮೇ 29ರಂದು ಎರಡನೇ ತಲೆಮಾರಿನ ಎನ್‌ವಿಎಸ್–01 ನ್ಯಾವಿಗೇಷನ್ ಉಪಗ್ರಹವನ್ನು ಉಡ್ಡಯನ ಮಾಡಲಾಗಿತ್ತು. ಭೂ, ವಾಯುಪ್ರದೇಶ, ಕಡಲಯಾನ, ಕೃಷಿಗೆ ಸಂಬಂಧಿಸಿದ ನಿಖರ ಮಾಹಿತಿ ಒದಗಿಸಲು ಈ ಯೋಜನೆಯಿಂದ ಸಾಧ್ಯವಾಗಲಿದೆ. ಮೊಬೈಲ್ ಸಾಧನಗಳಲ್ಲಿ ಲೊಕೇಷನ್ ಆಧಾರಿತ ಸೇವೆ, ಉಪಗ್ರಹಗಳ ಕಕ್ಷೆಯ ನಿರ್ಣಯ, ಇಂಟರ್‌ನೆಟ್ ಆಫ್ ಥಿಂಗ್ಸ್ (ಐಒಟಿ) ಮತ್ತು ತುರ್ತು ಸೇವೆಗಳಿಗೆ ನೆರವಾಗಲಿದೆ ಎಂದು ಇಸ್ರೊ ಮಾಹಿತಿ ನೀಡಿದೆ.

ಯಶಸ್ವಿ ಎಸ್.ಸೋಮಶೇಖರ್ ರೋಟರಿ ಜಿಲ್ಲಾ ಗವರ್ನರ್



ಯಶಸ್ವಿ ಎಸ್.ಸೋಮಶೇಖರ್

ಮೈಸೂರು, ಜ.29(ಎಂಕೆ)– ರೋಟರಿ ಜಿಲ್ಲೆ 3181ನ 2027–28ರ ಅವಧಿಯ ಜಿಲ್ಲಾ ಗವರ್ನರ್ ಆಗಿ ಮುಡಾ ಮಾಜಿ ಅಧ್ಯಕ್ಷ ಹಾಗೂ ಮೇಜರ್ ಡೋನರ್ ಯಶಸ್ವಿ ಎಸ್.ಸೋಮಶೇಖರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಾಂಸ್ಕೃತಿಕ, ಶೈಕ್ಷಣಿಕ, ಸಮಾಜ ಸೇವೆ ಹಾಗೂ ರಾಜಕೀಯವಾಗಿ ಗುರುತಿಸಿಕೊಂಡಿರುವ ಯಶಸ್ವಿ ಎಸ್. ಸೋಮಶೇಖರ್, ರೋಟರಿ ಸಂಸ್ಥೆಯ ಗೌರವಯುತ 3181 ಜಿಲ್ಲೆಯ ಗವರ್ನರ್ ಆಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

1963 ಮೇ 18ರಂದು ಮೈಸೂರಿನ ರೈತ ಕುಟುಂಬದಲ್ಲಿ ಜನಿಸಿದ ಅವರು, ಮೈಸೂರಿನ ವಾಣಿ ವಿದ್ಯಾಮಂದಿರ, ಜೆಎಸ್‌ಎಸ್‌ನಲ್ಲಿ ಪ್ರಾಥಮಿಕ, ಮಾಧ್ಯಮಿಕ ಶಿಕ್ಷಣ ಮುಗಿಸಿ ಜೆಎಸ್‌ಎಸ್ ಪದವಿ ಕಾಲೇಜಿನಲ್ಲಿ ಬಿಎ ಪದವೀಧರರಾಗಿದ್ದಾರೆ. ಕನ್ನಡದ ಮೇರುನಟ ಡಾ.ರಾಜ್‌ಕುಮಾರ್ ಕಟ್ಟಾಭಿಮಾನಿಯಾಗಿ ಕೆಲ ನಾಟಕಗಳಲ್ಲಿಯೂ ಅಭಿನಯಿಸಿದ್ದು, ಕರ್ನಾಟಕ ಸಾಂಸ್ಕೃತಿಕ ವೇದಿಕೆ ಸ್ಥಾಪಿಸಿ, ಹರಿಕಥೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಹಾಸ್ಯೋತ್ಸವ ಹಾಗೂ ಕಿಶೋರ್ ಕುಮಾರ್ ಗಾಯನ ಕಾರ್ಯಕ್ರಮಗಳನ್ನು ಆಯೋಜಿಸಿದ್ದಾರೆ.

ಬಿಜೆಪಿ ಕಾರ್ಯಕರ್ತರಾಗಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಕೆಲಸ ಮಾಡಿ, 2005ರಲ್ಲಿ ರೋಟರಿ ಮೈಸೂರು ಉತ್ತರ ಸೇರಿ, ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಸಹಾಯಕ ಗವರ್ನರ್ ಆಗಿ, ಜಿಲ್ಲಾ ರೋಟರಾಕ್ಟ್ ಸಮಿತಿ ಅಧ್ಯಕ್ಷರಾಗಿ, ಜಿಲ್ಲಾ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸಮಿತಿ ಅಧ್ಯಕ್ಷರಾಗಿ ಹಲವು ಶಿಬಿರಗಳಲ್ಲಿ ಭಾಗವಹಿಸಿರುವ ಯಶಸ್ವಿ ಎಸ್.ಸೋಮಶೇಖರ್, ರೋಟರಿ ಜಿಲ್ಲೆ 3181ನ 2027–28ನೇ ಸಾಲಿನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

STAR OF MYSORE SPECIAL ISSUE

Star of Mysore is completing 47 years of service on **16th February 2025** and entering **48th** year of publication. As in the past, this year too we will be publishing a Special Issue.

We request our advertisers and patrons to release their advertisements before **5th February** to facilitate printing as per schedule.

HEAD OFFICE

0821-2496520 (5-LINES)
Ad Dept. - 0821-2496522 / 23
Email : ad@starofmysore.com

Maria G. Fernandes
Advt. Manager: **94485-25060**

Joy Anthony Dove
Sr. Executive-Ad Sales
89516-68960

Prema
Sr. Executive Advertising
98805-49879

K.R. Circle Office: 0821-2431774
D.D. Urs Road Office: 0821-2428695
Kodagu Office: 97314-69871
Mandya Office: 87629-60325
Chamarajanagar: 92422-65657
Nanjangud: 98805-09200 / 99016-02226
T.N. Pura: 94483-05750
Bengaluru: 98440-46761

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಮೊದಲನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ನಿಮ್ಮ ಸವಿನೆನಪು ನಮ್ಮ ಹೃದಯದಲ್ಲಿ ಸದಾ ನೆಲೆಸಿದೆ. ನಿಮ್ಮ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಬಯಸುವವರು

ದುಃಖತಪ್ತರು: ಮಕ್ಕಳು, ಅಳಿಯಂದಿರು ಹಾಗೂ ಮೊಮ್ಮಕ್ಕಳು.

ಶ್ರೀಮತಿ ಸುಶೀಲಮ್ಮ

ನಂಜನಗೂಡು ತಾಲ್ಲೂಕು ಉಪಾಧ್ಯಾಯರುಗಳ ಸಹಕಾರ ಸಂಘ ನಿಯಮಿತ

ಮಹದೇಶ್ವರ ಲೇಔಟ್, ಹುಲ್ಲಹಳ್ಳಿ ರಸ್ತೆ, ನಂಜನಗೂಡು -571301
ರಿ.ನಂ ಎ.ಆರ್.ಎಂ.1020/ ದಿನಾಂಕ: 20-10-1952

ಕ್ರ.ಸಂ. /2024-25 ದಿನಾಂಕ: 27-01-2025

ರಿಟರ್ನಿಂಗ್ ಆಫೀಸರ್
ನಂಜನಗೂಡು ತಾಲ್ಲೂಕು ಉಪಾಧ್ಯಾಯರುಗಳ ಸಹಕಾರ ಸಂಘ (ನಿ)
ಮಹದೇಶ್ವರ ಲೇಔಟ್, ಹುಲ್ಲಹಳ್ಳಿ ರಸ್ತೆ, ನಂಜನಗೂಡು

ಪ್ರಕಟಣೆ

ಮೇಲ್ಕಂಡ ಸಹಕಾರ ಸಂಘದ ಚುನಾವಣಾ ದಿನಾಂಕದಿಂದ ಮುಂದಿನ ಐದು ವರ್ಷಗಳ ಅವಧಿಗೆ ಆಡಳಿತ ಮಂಡಳಿಯ ಚುನಾವಣೆಯನ್ನು ದಿನಾಂಕ: 15/02/2025ನೇ ಶನಿವಾರ ಬೆಳಗ್ಗೆ 9:00 ಗಂಟೆಯಿಂದ 4:00ಗಂಟೆಯವರೆಗೆ ನಂಜನಗೂಡು ಟೌನ್ ಆರ್.ಪಿ.ರಸ್ತೆಯಲ್ಲಿರುವ ನಾಗಮ್ಮ ಸ.ಹಿ.ಪ್ರಾ.ಶಾಲೆ ಆವರಣ ನಂಜನಗೂಡು ಇಲ್ಲಿ ನಡೆಯುತ್ತಿದ್ದು ಈ ಪ್ರಯುಕ್ತ ದಿನಾಂಕ: 31/01/2025 ರಿಂದ 07/02/2025ರ ಬೆಳಗ್ಗೆ 11:00 ಗಂಟೆಯಿಂದ ಅಪರಾಹ್ನ 2:00 ಗಂಟೆಯವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ದಿನಾಂಕ: 08/02/2025ರ ಬೆಳಗ್ಗೆ 11:00ಕ್ಕೆ ನಾಮಪತ್ರ ಪರಿಶೀಲನೆ ನಡೆಯಲಿದ್ದು, ದಿನಾಂಕ: 09/02/2025 ರಂದು ಮದ್ಯಾಹ್ನ 3:00 ಒಳಗೆ ನಾಮಪತ್ರ ವಾಪಸ್ ಪಡೆಯಬಹುದಾಗಿದೆ. ಈಗಾಗಲೇ ಅರ್ಹ ಸದಸ್ಯರುಗಳಿಗೆ ಚುನಾವಣಾ ವೇಳಾಪಟ್ಟಿ ಹಾಗೂ ಆಹ್ವಾನ ಪತ್ರಿಕೆಯನ್ನು ಅಂಚೆ ಮೂಲಕ ಕಳುಹಿಸಲಾಗಿದ್ದು, ಕಾರಣಾಂತರಗಳಿಂದ ತಲುಪದೇ ಇದ್ದಲ್ಲಿ ಇದನ್ನೇ ಚುನಾವಣಾ ವೇಳಾಪಟ್ಟಿ ಎಂದು ಪರಿಗಣಿಸಿ ಚುನಾವಣೆ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕಾಗಿ ಈ ಮೂಲಕ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಘದ ಕಾರ್ಯದರ್ಶಿಯವರನ್ನು ಸಂಪರ್ಕಿಸಬೇಕಾಗಿ ಕೋರಿದೆ.

ಸಹಿ/– (ಜೆ.ಎಂ.ಜಯಲಕ್ಷ್ಮೀ)
ದಿನಾಂಕ: 27-01-2025 ರಿಟರ್ನಿಂಗ್ ಆಫೀಸರ್, ನಂಜನಗೂಡು ತಾಲ್ಲೂಕು
ಸ್ಥಳ: ನಂಜನಗೂಡು ಉಪಾಧ್ಯಾಯರುಗಳ ಸಹಕಾರ ಸಂಘ (ನಿ) ನಂಜನಗೂಡು